# ಮತ್ತಾಯನು ಬರೆದ ಶುಭಸಂದೇಶ
## ಮುನ್ನುಡಿ

ಲೋಕೋದ್ಧಾರಕನೊಬ್ಬನನ್ನು ಧರೆಗೆ ಕಳುಹಿಸುವುದಾಗಿ ದೇವರು ಆದಿಯಲ್ಲೇ ವಾಗ್ದಾನ ಮಾಡಿದ್ದರು. ಯೇಸುಸ್ವಾಮಿಯೇ ಆ ಉದ್ಧಾರಕ, ಜಗದ್‍ರಕ್ಷಕ. 'ಬೈಬಲ್' ಪವಿತ್ರ ಗ್ರಂಥದ 'ಹಳೆಯ ಒಡಂಬಡಿಕೆ' ಎಂಬ ಪೂರ್ವಭಾಗದಲ್ಲಿ ಅಡಗಿರುವ ದೇವದತ್ತ ವಾಗ್ದಾನಗಳನ್ನೆಲ್ಲ ಈ ಯೇಸುಸ್ವಾಮಿಯ ಮುಖಾಂತರವೇ ಈಡೇರಿಸಲಾಗಿದೆ. ಸಂತಸದಾಯಕವಾದ ಈ ಸುದ್ದಿಯನ್ನು ಶ್ರೀ ಮತ್ತಾಯನು ತನ್ನ ಈ ಶುಭಸಂದೇಶದಲ್ಲಿ ಒತ್ತಿ ಹೇಳುತ್ತಾನೆ. ಈ ಶುಭಸಂದೇಶವು ಸ್ವಾಮಿಯ ಸ್ವಜನರಾದ ಯೆಹೂದ್ಯರಿಗೆ ಮಾತ್ರವಲ್ಲ, ಇಡೀ ಜಗತ್ತಿಗೆ ಎಂದು ಕೂಡ ಸಾರಿಹೇಳುತ್ತಾನೆ.

ಯೇಸುವಿನ ಜನನದಿಂದ ಪ್ರಾರಂಭವಾಗುವ ಈ ಕೃತಿ, ಅವರು ಸ್ವೀಕರಿಸಿದ ಸ್ನಾನದೀಕ್ಷೆ, ಜಯಿಸಿದ ಪೈಶಾಚಿಕ ಪ್ರಲೋಭನೆಗಳು, ಮಾಡಿದ ಮಧುರ ಬೋಧನೆ, ಗಲಿಲೇಯದಲ್ಲಿ ಸಾಧಿಸಿದ ಕಾಯಿಲೆ-ಕಷ್ಟಗಳ ನಿವಾರಣೆ – ಇವುಗಳನ್ನು ಸುವ್ಯವಸ್ಥಿತವಾಗಿ ವರ್ಣಿಸುತ್ತದೆ. ತದನಂತರ ಗಲಿಲೇಯದಿಂದ ಜೆರುಸಲೇಮಿಗೆ ಯೇಸು ಕೈಗೊಂಡ ಯಾತ್ರೆಯ ವಿವರಣೆಯಿದೆ. ಜೀವನದ ಕಡೆಯ ವಾರದಲ್ಲಿ ಅವರು ಅನುಭವಿಸಿದ ಭೀಕರ ಶಿಲುಬೆಮರಣ, ಬಳಿಕ ಸಿದ್ಧಿಸಿದ ಪುನರುತ್ಥಾನ ಇವುಗಳೊಂದಿಗೆ ಈ ಶುಭಸಂದೇಶ ಮುಕ್ತಾಯವಾಗುತ್ತದೆ.

ಪ್ರಭು ಯೇಸು ಅಪ್ರತಿಮ ಬೋಧಕ, ಧಾರ್ಮಿಕ ನಿಯಮಗಳ ಅಧಿಕೃತ ವಿಮರ್ಶಕ ಹಾಗೂ ದೈವೀಸಾಮ್ರಾಜ್ಯದ ಸಂಸ್ಥಾಪಕ ಎಂದು ಬಣ್ಣಿಸಿದ್ದಾನೆ, ಮತ್ತಾಯನು. ಅವರ ಬೋಧನಾ ವಿಷಯಗಳನ್ನು ಐದು ಭಾಗಗಳಾಗಿ ವಿಂಗಡಿಸಲಾಗಿದೆ. – ೧. ಬೆಟ್ಟದ ಮೇಲಿನ ಬೋಧೆ; ದೈವೀಸಾಮ್ರಾಜ್ಯದ ಪ್ರಜೆಗಳಲ್ಲಿರಬೇಕಾದ ಗುಣಲಕ್ಷಣಗಳು ಹಾಗೂ ಗುರಿಧ್ಯೇಯಗಳು, ಅವರ ಕರ್ತವ್ಯಗಳು ಹಾಗೂ ಹಕ್ಕುಬಾಧ್ಯತೆಗಳು (ಅಧ್ಯಾಯ 5-7); ೨. ಪ್ರೇಷಿತರಾದ ಶಿಷ್ಯರು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪಾಲಿಸಬೇಕಾದ ನೀತಿನಿಯಮಗಳು (ಅಧ್ಯಾಯ 10); ೩. ದೇವರ ಸಾಮ್ರಾಜ್ಯವನ್ನು ಕುರಿತಾದ ಸಾಮತಿಗಳು (ಅಧ್ಯಾಯ 13); ೪. ಶಿಷ್ಯತ್ವದ ನೈಜಾರ್ಥ (ಅಧ್ಯಾಯ 18); ೫. ಪ್ರಸ್ತುತ ಯುಗದ ಅಂತ್ಯ ಮತ್ತು ಸ್ವರ್ಗಸಾಮ್ರಾಜ್ಯದ ಆಗಮನ (ಅಧ್ಯಾಯ 24-25).

ಮತ್ತಾಯನು ಯೆಹೂದ್ಯ ಓದುಗರನ್ನು ಮುಂದಿಟ್ಟುಕೊಂಡು ಈ ಸಂದೇಶವನ್ನು ಬರೆದಿದ್ದಾನೆ. ಈ ಕಾರಣದಿಂದಲೇ ಯೆಹೂದ್ಯ ವಾಚಕರಿಗೆ ಸುಪರಿಚಿತವಾದ ಹಳೆಯ ಒಡಂಬಡಿಕೆಯ ಹೇಳಿಕೆಗಳನ್ನೂ ಪ್ರವಾದನೆಗಳನ್ನೂ ಉದಾಹರಿಸುತ್ತಾನೆ. ಅವು ಕ್ರಿಸ್ತಯೇಸುವಿನಲ್ಲಿ ಸಂಪೂರ್ಣವಾಗಿ ಈಡೇರಿವೆ ಎಂದು ವಾದಿಸುತ್ತಾನೆ. ಆದುದರಿಂದ ಹಳೆಯ ಒಡಂಬಡಿಕೆಯ ಪರಿಚಯವಿಲ್ಲದ ಹಾಗೂ ಯೆಹೂದ್ಯ ಸಂಸ್ಕೃತಿಯನ್ನು ಅರಿಯದ ಕನ್ನಡ ಓದುಗರಿಗೆ ಈ ಕೃತಿಯನ್ನು ಸರಾಗವಾಗಿ ಓದಲು ಅಡ್ಡಿಯಾಗಬಹುದು. ಆದರೆ ಅನಂತರ ಬರುವ ಭಾಗಗಳಲ್ಲಿ ಈ ಸಮಸ್ಯೆ ಹಗುರವಾಗುತ್ತದೆ.

ಪರಿವಿಡಿ


| | |
|---|---|
| ಯೇಸುಸ್ವಾಮಿಯ ವಂಶಾವಳಿ ಮತ್ತು ಜನನ | – 1.1 – 2.23 |
| ಸ್ನಾನಿಕ ಯೊವಾನ್ನನ ಪ್ರಕರಣ | – 3.1 – 3.12 |
| ಯೇಸು ಸ್ವೀಕರಿಸಿದ ಸ್ನಾನದೀಕ್ಷೆ ಮತ್ತು ಜಯಿಸಿದ ಪ್ರಲೋಭನೆಗಳು | – 3.13 – 4.11 |
| ಗಲಿಲೇಯದಲ್ಲಿ ಯೇಸುವಿನ ಬಹಿರಂಗ ಸೇವಾವೃತ್ತಿ | – 4.12 – 18.53 |
| ಗಲಿಲೇಯದಿಂದ ಜೆರುಸಲೇಮಿಗೆ ಯಾತ್ರೆ | – 19.1 – 20.34 |
| ಜೆರುಸಲೇಮ್ ಮತ್ತು ಪರಿಸರದಲ್ಲಿ ಅಂತಿಮ ದಿನಗಳು | – 21.1 – 27.66 |
| ಸ್ವಾಮಿಯ ಪುನರುತ್ಥಾನ ಮತ್ತು ದಿವ್ಯದರ್ಶನ | – 28.1 – 28.20 |

## ಯೇಸುಸ್ವಾಮಿಯ ವಂಶಾವಳಿ
(ಲೂಕ 3.23–38)

**1** ಅಬ್ರಹಾಮನ ಮನೆತನಕ್ಕೆ ಸೇರಿದ ದಾವೀದ ಕುಲದ ಯೇಸುಕ್ರಿಸ್ತರ ವಂಶಾವಳಿ:

2 ಅಬ್ರಹಾಮನಿಗೆ ಇಸಾಕನು, ಇಸಾಕನಿಗೆ ಯಕೋಬನು, ಯಕೋಬನಿಗೆ ಯೂದ ಹಾಗೂ ಆತನ
ಸಹೋದರರು ಹುಟ್ಟಿದರು. 3ಯೂದನಿಗೆ ತಾಮರ ಎಂಬವಳಿಂದ ಪೆರಸ್ ಹಾಗೂ ಜೆರಹನ್ ಹುಟ್ಟಿದರು.
4ಪೆರಸನಿಗೆ ಹೆಸ್ರೋನ್, ಹೆಸ್ರೋನನಿಗೆ ರಾಮ್, ರಾಮನಿಗೆ ಅಮ್ಮಿನದಾಬ್, ಅಮ್ಮಿನದಾಬನಿಗೆ ನಹಸ್ಸೋನ್,
ನಸ್ಸೋನನಿಗೆ ಸಲ್ಮೋನ್, 5ಸಲ್ಮೋನನಿಗೆ ರಹಾಬ್ ಎಂಬವಳಿಂದ ಬೋವಜ್, ಬೋವಜನಿಗೆ ರೂತ್
ಎಂಬವಳಿಂದ ಓಬೇದ್, ಓಬೇದನಿಗೆ ಜೆಸ್ಸೆಯ, 6ಜೆಸ್ಸೆಯನಿಗೆ ದಾವೀದರಸನು ಹುಟ್ಟಿದರು. ದಾವೀದನಿಗೆ
ಊರಿಯನ ಹೆಂಡತಿಯಿಂದ ಸೊಲೊಮೋನ್, 7ಸೊಲೊಮೋನನಿಗೆ ರೆಹಬ್ಬಾಮ, ರೆಹಬ್ಬಾಮನಿಗೆ
ಅಬೀಯ, ಅಬೀಯನಿಗೆ ಆಸನ್ ಹುಟ್ಟಿದರು. 8ಆಸನನಿಗೆ ಯೋಸೆಫಾತ್, ಯೋಸೆಫಾತನಿಗೆ
ಯೆಹೋರಾಮ್, ಯೆಹೋರಾಮನಿಗೆ ಉಜ್ಜೀಯ ಹುಟ್ಟಿದರು. 9ಉಜ್ಜೀಯನಿಗೆ ಯೋತಾಮ್,
ಯೋತಾಮನಿಗೆ ಅಹಾಜ್, ಅಹಾಜನಿಗೆ ಹಿಜ್ಕೀಯನು ಹುಟ್ಟಿದರು. 10ಹಿಜ್ಕೀಯನಿಗೆ ಮನಸ್ಸೆ, ಮನಸ್ಸೆಗೆ
ಆಮೋನ್, 11ಆಮೋನನಿಗೆ ಯೋಷಿಯ ಹುಟ್ಟಿದರು. ಯೋಷೀಯನಿಗೆ ಯೆಕೊನ್ಯ ಮತ್ತು ಅವನ
ಸಹೋದರರು ಹುಟ್ಟಿದರು. ಈ ಸಮಯದಲ್ಲೇ ಇಸ್ರಯೇಲರನ್ನು ಬಾಬಿಲೋನಿಗೆ ಸೆರೆ ಒಯ್ದದ್ದು.

12 ಬಾಬಿಲೋನಿಗೆ ಸೆರೆಹೋದ ದಾಸ್ಯದಿನಗಳು ಮುಗಿದ ಮೇಲೆ ಯೆಕೊನ್ಯನಿಗೆ ಸಲಥಿಯೇಲ್,
ಸಲಥಿಯೇಲನಿಗೆ ಜೆರುಬಾಬೆಲ್, 13ಜೆರುಬಾಬೆಲನಿಗೆ ಅಬೀಹೂದ್, ಅಬೀಹೂದನಿಗೆ ಎಲ್ಯಕೀಮ್,
ಎಲ್ಯಕೀಮನಿಗೆ ಅಜೋರ್ ಹುಟ್ಟಿದರು. 14ಅಜೋರನಿಗೆ ಸದೋಕ್, ಸದೋಕನಿಗೆ ಅಖೀಮ್, ಅಖೀಮನಿಗೆ
ಎಲಿಹೂದ್, 15ಎಲಿಹೂದನಿಗೆ ಎಲಿಯಾಜರ್, ಎಲಿಯಾಜರನಿಗೆ ಮತ್ತಾನ್, ಮತ್ತಾನನಿಗೆ ಯಕೋಬ್
ಹುಟ್ಟಿದರು. ಯಕೋಬನಿಗೆ ಮರಿಯಳ ಪತಿಯಾದ ಜೋಸೆಫನು ಹುಟ್ಟಿದನು. 16ಈ ಮರಿಯಳಿಂದಲೇ
"ಕ್ರಿಸ್ತ" ಎಂದು ಕರೆಯಲಾಗುವ ಯೇಸುಸ್ವಾಮಿ ಹುಟ್ಟಿದ್ದು;

17 ಹೀಗೆ ಒಟ್ಟು, ಅಬ್ರಹಾಮನಿಂದ ದಾವೀದನವರೆಗೆ ಹದಿನಾಲ್ಕು, ದಾವೀದನಿಂದ ಬಾಬಿಲೋನಿನ
ದಾಸ್ಯದಿನಗಳವರೆಗೆ ಹದಿನಾಲ್ಕು, ಬಾಬಿಲೋನಿನ ದಾಸ್ಯ ದಿನಗಳಿಂದ ಕ್ರಿಸ್ತರವರೆಗೆ ಹದಿನಾಲ್ಕು
ತಲೆಮಾರುಗಳು.

### ಪ್ರಭು ಯೇಸುವಿನ ಜನನ (ಲೂಕ 2.1–7)

18 ಕ್ರಿಸ್ತಯೇಸುವಿನ ಜನನದ ಪ್ರಕರಣ: ಯೇಸುವಿನ ತಾಯಿ ಮರಿಯಳಿಗೂ ಜೋಸೆಫನಿಗೂ
ನಿಶ್ಚಿತಾರ್ಥವಾಗಿತ್ತು. ಅವರಿಬ್ಬರೂ ಕೂಡಿ ಬಾಳುವುದಕ್ಕೆ ಮುಂಚೆಯೇ ಮರಿಯಳು
ಗರ್ಭವತಿಯಾಗಿರುವುದು ತಿಳಿದುಬಂತು. ಆಕೆ ಗರ್ಭಧರಿಸಿದ್ದು ಪವಿತ್ರಾತ್ಮ ಪ್ರಭಾವದಿಂದ. 19ಆಕೆಯ ಪತಿ
ಜೋಸೆಫನು ನೀತಿವಂತನು. ಮರಿಯಳನ್ನು ಅವಮಾನಕ್ಕೆ ಗುರಿಮಾಡುವ ಉದ್ದೇಶ ಅವನದಲ್ಲವಾದ್ದರಿಂದ
ಯಾರಿಗೂ ತಿಳಿಯದ ಹಾಗೆ ನಿಶ್ಚಿತಾರ್ಥವನ್ನು ಮುರಿದುಬಿಡಬೇಕೆಂದಿದ್ದನು. 20ಆತನು ಈ ಕುರಿತು
ಆಲೋಚಿಸುತ್ತಿದ್ದಂತೆ, ದೇವದೂತನು ಕನಸಿನಲ್ಲಿ ಕಾಣಿಸಿಕೊಂಡು, "ದಾವೀದ ವಂಶದ ಜೋಸೆಫನೇ,
ಮರಿಯಳನ್ನು ನಿನ್ನ ಪತ್ನಿಯನ್ನಾಗಿ ಸ್ವೀಕರಿಸಲು ಅಂಜಬೇಡ. ಆಕೆ ಗರ್ಭಧರಿಸಿರುವುದು ಪವಿತ್ರಾತ್ಮ
ಪ್ರಭಾವದಿಂದಲೇ. 21ಆಕೆ ಒಬ್ಬ ಮಗನನ್ನು ಹೆರುವಳು. ಆತನಿಗೆ ನೀನು 'ಯೇಸು' ಎಂಬ ಹೆಸರಿಡಬೇಕು.
ಏಕೆಂದರೆ ತನ್ನ ಜನರನ್ನು ಅವರ ಪಾಪಗಳಿಂದ ರಕ್ಷಿಸಿ ಉದ್ಧಾರಮಾಡುವವನು ಆತನೇ," ಎಂದನು.

22 "ಇಗೋ, ಕನ್ಯೆಯೊಬ್ಬಳು ಗರ್ಭತಳೆದು
ಪುತ್ರನೊಬ್ಬನನ್ನು ಪ್ರಸವಿಸುವಳು
"ಇಮ್ಮಾನುವೇಲ್" ಎಂದು ಆತನಿಗೆ
ಹೆಸರಿಡುವರು"

ಎಂಬುದಾಗಿ ಪ್ರವಾದಿಯ ಮುಖಾಂತರ ಸರ್ವೇಶ್ವರ ಹೇಳಿದ ಪ್ರವಚನ ನೆರವೇರುವಂತೆ ಇದೆಲ್ಲಾ
ಸಂಭವಿಸಿತು. 23"ಇಮ್ಮಾನುವೇಲ್" ಎಂದರೆ "ದೇವರು ನಮ್ಮೊಡನೆ ಇದ್ದಾರೆ" ಎಂದು ಅರ್ಥ. 24ಆಗ
ಜೋಸೆಫನು ಎಚ್ಚೆತ್ತು ದೇವದೂತನ ಆಜ್ಞೆಯ ಪ್ರಕಾರ ಮರಿಯಳನ್ನು ವಿವಾಹ ಮಾಡಿಕೊಂಡನು. 25ಆದರೆ
ಆಕೆಯೊಡನೆ ಲೈಂಗಿಕ ಸಂಬಂಧವಿಲ್ಲದೆ ಇದ್ದನು. ಆಕೆ ಗಂಡು ಮಗುವಿಗೆ ಜನ್ಮವಿತ್ತಳು. ಜೋಸೆಫನು ಆ
ಮಗುವಿಗೆ 'ಯೇಸು' ಎಂದು ನಾಮಕರಣ ಮಾಡಿದನು.

## ಜ್ಯೋತಿಶ್ಯಾಸ್ತ್ರಜ್ಞರಿತ್ತ ಭೇಟಿ

**2** ಯೇಸುಸ್ವಾಮಿ ಜನಿಸಿದ್ದು ಹೆರೋದರಸನ ಕಾಲದಲ್ಲಿ; ಜುದೇಯ ನಾಡಿನ ಬೆತ್ಲೆಹೇಂ ಎಂಬ ಊರಿನಲ್ಲಿ.
ಕೆಲವು ಜ್ಯೋತಿಷಿಗಳು ಪೂರ್ವದಿಕ್ಕಿನಿಂದ ಹೊರಟು ಜೆರುಸಲೇಮಿಗೆ ಬಂದರು. 2"ಯೆಹೂದ್ಯರ ಅರಸ
ಹುಟ್ಟಿದ್ದಾರಲ್ಲವೇ, ಅವರೆಲ್ಲಿ?" ಎಂದು ವಿಚಾರಿಸಿದರು; "ಅವರನ್ನು ಸೂಚಿಸುವ ನಕ್ಷತ್ರ ಪೂರ್ವದಲ್ಲಿ
ಉದಯಿಸಿದ್ದನ್ನು ಕಂಡು ಅವರನ್ನು ಆರಾಧಿಸಲು ಇಲ್ಲಿಗೆ ಬಂದಿದ್ದೇವೆ," ಎಂದರು. 3ಇದನ್ನು ಕೇಳಿದ್ದೇ
ಹೆರೋದರಸನು ಬಹಳ ತಳಮಳಗೊಂಡನು; ಅಂತೆಯೇ ಜೆರುಸಲೇಮ್ ಆದ್ಯಂತವೂ ಗಲಿಬಿಲಿಗೊಂಡಿತು.
4ಯೆಹೂದ್ಯರ ಎಲ್ಲ ಮುಖ್ಯ ಯಾಜಕರನ್ನೂ ಧರ್ಮಶಾಸ್ತ್ರಿಗಳನ್ನೂ ಅವನು ಸಭೆ ಸೇರಿಸಿದನು. "ಕ್ರಿಸ್ತ
ಹುಟ್ಟಬೇಕಾದುದು ಎಲ್ಲಿ?" ಎಂದು ಅವರನ್ನು ವಿಚಾರಿಸಿದನು. 5ಅದಕ್ಕೆ ಅವರು "ಜುದೇಯದಲ್ಲಿರುವ
ಬೆತ್ಲೆಹೇಮಿನಲ್ಲೇ ಹುಟ್ಟುವನು; ಏಕೆಂದರೆ:
6 'ಜುದೇಯ ನಾಡಿನ ಬೆತ್ಲೆಹೇಮೇ,
ಜುದೇಯದ ಪ್ರಮುಖ ಪಟ್ಟಣಗಳಲ್ಲಿ
ನೀನು ಅಲ್ಪಳೇನೂ ಅಲ್ಲ.
ಕಾರಣ ನನ್ನ ಪ್ರಜೆ ಇಸ್ರಯೇಲನ್ನು
ಪರಿಪಾಲಿಸುವವನು ನಿನ್ನಿಂದಲೇ
ಉದಯಿಸಲಿರುವನು",
ಎಂದು ಪ್ರವಾದಿ ಬರೆದಿದ್ದಾನೆ" ಎಂದು ಉತ್ತರವಿತ್ತರು.
7 ಆಗ ಹೆರೋದನು ಆ ಜ್ಯೋತಿಷಿಗಳನ್ನು ಗೋಪ್ಯವಾಗಿ ಬರಮಾಡಿಕೊಂಡು ಅವರಿಗೆ ನಕ್ಷತ್ರ
ಕಾಣಿಸಿಕೊಂಡ ಕಾಲವನ್ನು ಸ್ಪಷ್ಟವಾಗಿ ಕೇಳಿ ತಿಳಿದುಕೊಂಡನು. 8ಅನಂತರ ಅವರನ್ನು ಬೆತ್ಲೆಹೇಮಿಗೆ
ಕಳುಹಿಸಿಕೊಡುತ್ತಾ, "ನೀವು ಹೋಗಿ ಆ ಮಗುವನ್ನು ಚೆನ್ನಾಗಿ ಹುಡುಕಿರಿ; ಕಂಡಕೂಡಲೇ ನನಗೆ ಬಂದು
ತಿಳಿಸಿರಿ. ನಾನೂ ಹೋಗಿ ಆ ಮಗುವನ್ನು ಆರಾಧಿಸಬೇಕು", ಎಂದು ಹೇಳಿದನು. 9ಜ್ಯೋತಿಷಿಗಳು ಅರಸನ
ಮಾತಿಗೆ ತಲೆಬಾಗಿ ಹೊರಟರು. 10ಪೂರ್ವದಿಕ್ಕಿನಲ್ಲಿ ಮೊದಲೇ ಅವರಿಗೆ ಕಾಣಿಸಿಕೊಂಡಿದ್ದ ನಕ್ಷತ್ರ ಪುನಃ
ಕಾಣಿಸಿಕೊಂಡಿತು. ಅವರು ಪರಮಾನಂದಭರಿತರಾದರು. ಆ ನಕ್ಷತ್ರ ಅವರ ಮುಂದೆ ಮುಂದೆ ಸಾಗುತ್ತಾ
ಮಗು ಇದ್ದ ಸ್ಥಳದ ಮೇಲೆ ಬಂದು ನಿಂತುಬಿಟ್ಟಿತು. 11ಜ್ಯೋತಿಷಿಗಳು ಆ ಮನೆಯನ್ನು ಪ್ರವೇಶಿಸಿ ಮಗುವನ್ನು
ತಾಯಿ ಮರಿಯಳ ಬಳಿ ಕಂಡು ಅದಕ್ಕೆ ಸಾಷ್ಟಾಂಗವೆರಗಿ ಆರಾಧಿಸಿದರು. ತಮ್ಮ ತಮ್ಮ ಬೊಕ್ಕಸಗಳನ್ನು ಬಿಚ್ಚಿ
ಚಿನ್ನ, ಪರಿಮಳದ್ರವ್ಯ ಮತ್ತು ರಕ್ತಬೋಳ ಇವುಗಳನ್ನು ಮಗುವಿಗೆ ಪಾದಕಾಣಿಕೆಯಾಗಿ ಸಮರ್ಪಿಸಿದರು.
12ಹೆರೋದನ ಬಳಿಗೆ ಹಿಂದಿರುಗಬಾರದೆಂದು ಕನಸಿನಲ್ಲಿ ದೈವಾಜ್ಞೆಯಾದ್ದರಿಂದ ಅವರು ಬೇರೆ ಮಾರ್ಗವಾಗಿ
ತಮ್ಮ ದೇಶಕ್ಕೆ ಮರಳಿದರು.

## ಈಜಿಪ್ಟಿಗೆ ಪಲಾಯನ

13 ಜ್ಯೋತಿಷಿಗಳು ಹೊರಟು ಹೋದಮೇಲೆ ದೇವದೂತನು ಜೋಸೆಫನಿಗೆ ಕನಸಿನಲ್ಲಿ
ಕಾಣಿಸಿಕೊಂಡು, "ಏಳು, ಹೆರೋದನು ಮಗುವನ್ನು ಕೊಂದುಹಾಕಲು ಹವಣಿಸುತ್ತಿದ್ದಾನೆ. ಮಗುವನ್ನೂ
ತಾಯಿಯನ್ನೂ ಕರೆದುಕೊಂಡು ಈಜಿಪ್ಟ್ ದೇಶಕ್ಕೆ ಓಡಿಹೋಗು. ನಾನು ಪುನಃ ಹೇಳುವ ತನಕ ಅಲ್ಲೇ

ಇರು," ಎಂದನು. [14]ಅದರಂತೆ ಜೋಸೆಫನು ಕೂಡಲೇ ಎದ್ದು ಮಗುವನ್ನೂ ತಾಯಿಯನ್ನೂ
ರಾತ್ರೋರಾತ್ರಿಯಲ್ಲೇ ಕರೆದುಕೊಂಡು ಈಜಿಪ್ಟಿಗೆ ತೆರಳಿದನು. [15]ಹೆರೋದನು ಸಾಯುವ ತನಕ ಅಲ್ಲೇ
ಇದ್ದನು. ಈ ಪ್ರಕಾರ,

"ಈಜಿಪ್ಟ್ ದೇಶದಿಂದ ನನ್ನ ಕುಮಾರನನ್ನು
ಕರೆದನು"

ಎಂದು ಪ್ರವಾದಿಯ ಮುಖಾಂತರ ಸರ್ವೇಶ್ವರನು ಹೇಳಿದ್ದ ಪ್ರವಚನ ಈಡೇರಿತು.

### ಕೂಸುಗಳ ಕಗ್ಗೊಲೆ

16 ಜ್ಯೋತಿಷಿಗಳಿಂದ ತಾನು ವಂಚಿತನಾದೆ ಎಂದು ಅರಿತ ಹೆರೋದನು ರೋಷಾವೇಶಗೊಂಡನು. ಬೆತ್ಲೆಹೇಮಿಗೂ ಅದರ ಸುತ್ತಮುತ್ತಲಿಗೂ ಆಳುಗಳನ್ನು ಕಳುಹಿಸಿದನು. ತಾನು ಜ್ಯೋತಿಷಿಗಳಿಂದ ತಿಳಿದುಕೊಂಡಿದ್ದ ಕಾಲದ ಆಧಾರದ ಮೇಲೆ ಅಲ್ಲಿದ್ದ, ಎರಡು ವರ್ಷಗಳಿಗೆ ಮೀರದ, ಎಲ್ಲಾ ಗಂಡುಮಕ್ಕಳನ್ನು ಕೊಂದು ಹಾಕಿಸಿದನು.

17 "ಕೇಳಿಬರುತಿದೆ ರಮಾ ಊರಿನೊಳು
ರೋದನ,
ಗೋಳಾಟ, ಅಘೋರ ಆಕ್ರಂದನ;
ಕಳೆದುಕೊಂಡ ಮಕ್ಕಳಿಗಾಗಿ
ಗೋಳಿಡುತಿಹಳು ರಾಖೇಲಳು
ಇನ್ನಿಲ್ಲದವುಗಳಿಗಾಗಿ ಉಪಶಮನ
ಒಲ್ಲೆನೆನುತಿಹಳು,"

18 ಪ್ರವಾದಿ ಯೆರೆಮೀಯನ ಈ ಪ್ರವಚನ ಅಂದು ಸತ್ಯವಾಯಿತು.

### ನಜರೇತಿನಲ್ಲಿ ನಿವಾಸ

19 ಹೆರೋದನು ಸತ್ತುಹೋದನು. ಆಗ ಈಜಿಪ್ಟಿನಲ್ಲಿದ್ದ ಜೋಸೆಫನಿಗೆ ದೇವದೂತನು ಕನಸಿನಲ್ಲಿ
ಕಾಣಿಸಿಕೊಂಡು, [20]"ಏಳು, ಮಗುವನ್ನೂ ತಾಯಿಯನ್ನೂ ಕರೆದುಕೊಂಡು ಇಸ್ರಯೇಲ್ ದೇಶಕ್ಕೆ
ಹಿಂದಿರುಗು; ಮಗುವನ್ನು ಕೊಲ್ಲಬೇಕೆಂದಿದ್ದವರು ಸತ್ತುಹೋದರು," ಎಂದು ತಿಳಿಸಿದನು. [21]ಜೋಸೆಫನು
ಎದ್ದು ತಾಯಿಯನ್ನೂ ಮಗುವನ್ನೂ ಕರೆದುಕೊಂಡು ಇಸ್ರಯೇಲ್ ದೇಶಕ್ಕೆ ಬಂದನು. [22]ಆದರೆ ಹೆರೋದನ
ಮಗ ಅರ್ಖೆಲಾಯನು ತಂದೆಯ ಬದಲಿಗೆ ಜುದೇಯ ಪ್ರಾಂತ್ಯವನ್ನು ಆಳುತ್ತಿದ್ದಾನೆಂದು ಕೇಳಿ ಜೋಸೆಫನು
ಅಲ್ಲಿಗೆ ಹೋಗಲು ಅಂಜಿದನು. ಕನಸಿನಲ್ಲಿ ತಾನು ಪಡೆದ ಆದೇಶದ ಪ್ರಕಾರ ಗಲಿಲೇಯ ಪ್ರಾಂತ್ಯಕ್ಕೆ
ತೆರಳಿದನು. [23]ಅಲ್ಲಿರುವ ನಜರೇತ್ ಊರನ್ನು ಸೇರಿ ವಾಸಮಾಡಿದನು. ಹೀಗೆ, "ಆತನನ್ನು
ನಜರೇತಿನವನೆಂದು ಕರೆಯುವರು" ಎಂಬ ಪ್ರವಚನ ನೆರವೇರಿತು.

### ಸ್ನಾನಿಕ ಯೊವಾನ್ನನ ಬೋಧನೆ

(ಮಾರ್ಕ 1.1–8; ಲೂಕ 3.1–18; ಯೊವಾ. 1.19–28)

**3** ಆ ಕಾಲದಲ್ಲಿ ಸ್ನಾನಿಕ ಯೊವಾನ್ನನು ಜುದೇಯ ಪ್ರಾಂತ್ಯದ ಬೆಂಗಾಡಿಗೆ ಹೋಗಿ ಬೋಧನೆ ಮಾಡಲು
ಪ್ರಾರಂಭಿಸಿದನು. [2]"ಪಶ್ಚಾತ್ತಾಪಪಟ್ಟು ಪಾಪಕ್ಕೆ ವಿಮುಖರಾಗಿರಿ, ದೇವರಿಗೆ ಅಭಿಮುಖರಾಗಿರಿ,
ಸ್ವರ್ಗಸಾಮ್ರಾಜ್ಯವು ಸಮೀಪಿಸಿತು," ಎಂದು ಸಾರಿಹೇಳುತ್ತಾ ಬಂದನು.

[3] "ಸರ್ವೇಶ್ವರನಿಗೆ ಮಾರ್ಗವನ್ನು

ನೇರಪಡಿಸಿರಿ,
ಆತನ ಆಗಮನಕ್ಕಾಗಿ ಹಾದಿಯನ್ನು
ಸರಾಗಮಾಡಿರಿ,
ಎಂದು ಬೆಂಗಾಡಿನಲ್ಲೊಬ್ಬನು
ಘೋಷಿಸುತ್ತಿದ್ದಾನೆ,"
ಎಂದು ಪ್ರವಾದಿ ಯೆಶಾಯನು ಸೂಚಿಸಿದ ವ್ಯಕ್ತಿ ಈತನೇ. 4ಒಂಟೆ ತುಪ್ಪಟದ ಹೊದಿಕೆ, ಸೊಂಟದಲ್ಲಿ
ತೊಗಲಿನ ನಡುಕಟ್ಟು – ಇವೇ ಈತನ ಉಡುಗೆ. ಮಿಡತೆ ಮತ್ತು ಕಾಡುಜೇನು ಇವೇ ಈತನ ಆಹಾರ.
5ಜನರು ಜೆರುಸಲೇಮಿನಿಂದಲೂ ಇಡೀ ಜುದೇಯ ಪ್ರಾಂತ್ಯದಿಂದಲೂ ಜೋರ್ಡನ್ ನದಿಯ
ಸುತ್ತಮುತ್ತಲಿನ ಪ್ರದೇಶಗಳಿಂದಲೂ ಈತನ ಬಳಿಗೆ ಬರುತ್ತಿದ್ದರು; 6ತಮ್ಮ ತಮ್ಮ ಪಾಪಗಳನ್ನು ಒಪ್ಪಿಕೊಳ್ಳುತ್ತಾ
ಜೋರ್ಡನ್ ನದಿಯಲ್ಲಿ ಈತನಿಂದ ಸ್ನಾನದೀಕ್ಷೆಯನ್ನು ಪಡೆಯುತ್ತಿದ್ದರು.
7 ಫರಿಸಾಯರಲ್ಲೂ ಸದ್ದುಕಾಯರಲ್ಲೂ ಅನೇಕರು ತನ್ನಿಂದ ಸ್ನಾನದೀಕ್ಷೆ ಪಡೆಯಲು ಬರುವುದನ್ನು
ಯೊವಾನ್ನನು ನೋಡಿದನು. ಅವರನ್ನು ಉದ್ದೇಶಿಸಿ, "ಎಲೈ ವಿಷಸರ್ಪಗಳ ಪೀಳಿಗೆಯೇ, ಬರಲಿರುವ
ದೈವಕೋಪದಿಂದ ತಪ್ಪಿಸಿಕೊಳ್ಳಬಹುದೆಂದು ನಿಮಗೆ ಎಚ್ಚರಿಕೆ ಕೊಟ್ಟವರಾರು? 8ನೀವು ಪಾಪಕ್ಕೆ
ವಿಮುಖರಾಗಿದ್ದೀರಿ ಎಂಬುದನ್ನು ಸತ್ಕಾರ್ಯಗಳಿಂದ ವ್ಯಕ್ತಪಡಿಸಿರಿ. 9'ಅಬ್ರಹಾಮನೇ ನಮ್ಮ ಪಿತಾಮಹ'
ಎಂದು ನಿಮ್ಮಲ್ಲೇ ಕೊಚ್ಚಿಕೊಳ್ಳಬೇಡಿ. ಈ ಕಲ್ಲುಗಳಿಂದಲೂ ದೇವರು ಅಬ್ರಹಾಮನಿಗೆ ಸಂತಾನ
ಪ್ರಾಪ್ತವಾಗುವಂತೆ ಮಾಡಬಲ್ಲರೆಂದು ನಾನು ನಿಮಗೆ ಹೇಳುತ್ತೇನೆ. 10ಈಗಾಗಲೇ ಮರದ ಬುಡಕ್ಕೆ ಕೊಡಲಿ
ಬಿದ್ದಿದೆ; ಒಳ್ಳೆಯ ಫಲವನ್ನು ಕೊಡದ ಪ್ರತಿಯೊಂದು ಮರವನ್ನು ಕಡಿದು ಬೆಂಕಿಗೆ ಹಾಕಲಾಗುವುದು.
11ಹೃದಯ ಪರಿವರ್ತನೆಯ ಗುರುತಾಗಿ ನಾನು ನಿಮಗೆ ನೀರಿನಿಂದ ಸ್ನಾನದೀಕ್ಷೆ ಕೊಡುತ್ತಿದ್ದೇನೆ. ಆದರೆ ನನ್ನ
ನಂತರ ಬರುವ ಒಬ್ಬರು ನಿಮಗೆ ಪವಿತ್ರಾತ್ಮ ಹಾಗೂ ಅಗ್ನಿಯಿಂದ ದೀಕ್ಷಾಸ್ನಾನ ಕೊಡುವರು. ಅವರು
ನನಗಿಂತಲೂ ಶಕ್ತರು. ಅವರ ಪಾದರಕ್ಷೆಗಳನ್ನು ಹೊರಲು ಸಹ ನಾನು ಅರ್ಹನಲ್ಲ. 12ಅವರ ಕೈಯಲ್ಲಿ
ಮೊರವಿದೆ; ತಮ್ಮ ಕಣದಲ್ಲಿಯ ರಾಶಿಯನ್ನು ತೂರುವರು. ಗಟ್ಟಿ ಕಾಳನ್ನು ಮಾತ್ರ ಕಣಜಕ್ಕೆ ತುಂಬುವರು;
ಹೊಟ್ಟನ್ನು ಆರಿಸಲಾಗದ ಬೆಂಕಿಯಲ್ಲಿ ಸುಟ್ಟು ಹಾಕುವರು," ಎಂದು ಎಚ್ಚರಿಸಿದನು.

## ಸ್ವಾಮಿಗೂ ಸ್ನಾನದೀಕ್ಷೆಯೇ?

(ಮಾರ್ಕ 1.9–11; 3:21–22)

13 ಯೊವಾನ್ನನಿಂದ ಸ್ನಾನದೀಕ್ಷೆ ಪಡೆಯಲು ಯೇಸುಸ್ವಾಮಿ ಗಲಿಲೇಯದಿಂದ ಹೊರಟು
ಜೋರ್ಡನ್ ನದಿಯ ಬಳಿಗೆ ಬಂದರು. ಯೊವಾನ್ನನು ಅವರನ್ನು ತಡೆಯಲೆತ್ನಿಸಿದನು. 14"ನಾನೇ ನಿಮ್ಮಿಂದ
ದೀಕ್ಷಾಸ್ನಾನ ಪಡೆಯಬೇಕಾಗಿರುವಲ್ಲಿ ನೀವು ನನ್ನ ಬಳಿಗೆ ಬರುವುದೇ?" ಎಂದನು. 15ಆದರೆ ಯೇಸು,
"ಸದ್ಯಕ್ಕೆ ತಡೆಯದಿರು; ನಾವು ದೈವನಿಯಮಕ್ಕೆ ತಲೆಬಾಗುವುದು ಒಳಿತು," ಎಂದರು. ಯೊವಾನ್ನನು ಅದಕ್ಕೆ
ಸಮ್ಮತಿಸಿದನು.
16 ಯೇಸು ದೀಕ್ಷಾಸ್ನಾನ ಪಡೆದು ನೀರಿನಿಂದ ಮೇಲಕ್ಕೆ ಬಂದದ್ದೇ ಆಕಾಶವು ಫಕ್ಕನೆ ತೆರೆಯಿತು;
ದೇವರಾತ್ಮ ಪಾರಿವಾಳದ ರೂಪದಲ್ಲಿ ತಮ್ಮ ಮೇಲೆ ಇಳಿದು ಬಂದು ನೆಲಸುವುದನ್ನು ಕಂಡರು. 17ಆಗ
ಆಕಾಶದಿಂದ, "ಇವನೇ ನನ್ನ ಪುತ್ರ; ನನಗೆ ಪರಮಪ್ರಿಯನು, ನನ್ನ ಅಪಾರ ಮೆಚ್ಚುಗೆಗೆ ಪಾತ್ರನು," ಎಂಬ
ದೈವವಾಣಿ ಕೇಳಿಸಿತು.

## ಪಿಶಾಚಿಯಿಂದ ಪ್ರಲೋಭನೆ

(ಮಾರ್ಕ 1:12–13, ಲೂಕ 4:1–13)

**4** ಯೇಸುಸ್ವಾಮಿ ಪಿಶಾಚಿಯಿಂದ ಪರಿಶೋಧಿತರಾಗಲೆಂದು ಪವಿತ್ರಾತ್ಮ ಅವರನ್ನು ಬೆಂಗಾಡಿಗೆ
ಕರೆದೊಯ್ದರು.

2 ಅಲ್ಲಿ ಯೇಸು ನಲವತ್ತು ದಿನ ಹಗಲಿರುಳೂ ಉಪವಾಸವಿದ್ದರು. ಅನಂತರ ಅವರಿಗೆ ಬಹಳ
ಹಸಿವಾಯಿತು. 3ಆಗ ಶೋಧಕನು ಬಂದು, "ನೀನು ದೇವರ ಪುತ್ರನೆಂಬುದು ಸತ್ಯವಾದರೆ, ಈ ಕಲ್ಲುಗಳು
ರೊಟ್ಟಿಗಳಾಗಲೆಂದು ಆಜ್ಞೆಮಾಡು," ಎಂದನು. 4ಅದಕ್ಕೆ ಯೇಸುಸ್ವಾಮಿ, "ಪವಿತ್ರ ಗ್ರಂಥದಲ್ಲಿ ಹೇಳಿರುವ
ಪ್ರಕಾರ, "ಮಾನವನು ಜೀವಿಸುವುದು ಆಹಾರದಿಂದ ಮಾತ್ರವಲ್ಲ; ದೇವರಾಡುವ ಪ್ರತಿಯೊಂದು
ನುಡಿಯಿಂದ", ಎಂದರು.

5 ಬಳಿಕ ಪಿಶಾಚಿ ಅವರನ್ನು ಪವಿತ್ರ ನಗರಕ್ಕೆ ಅಂದರೆ ಜೆರುಸಲೇಮಿಗೆ ಕರೆದೊಯ್ದು
ಮಹಾದೇವಾಲಯದ ಗೋಪುರದ ತುದಿಯ ಮೇಲೆ ನಿಲ್ಲಿಸಿ, 6"ನೀನು ದೇವರ ಪುತ್ರನೆಂಬುದು ಸತ್ಯವಾದರೆ
ಕಳಕ್ಕೆ ಧುಮುಕು. ಏಕೆಂದರೆ, ಪವಿತ್ರ ಗ್ರಂಥದಲ್ಲಿ ಬರೆದಿರುವ ಪ್ರಕಾರ, 'ದೇವರೇ ತಮ್ಮ ದೂತರಿಗೆ ಆಜ್ಞೆ
ಮಾಡುವರು' ಮತ್ತು 'ಇವರು ನಿನ್ನ ಕಾಲುಗಳು ಕಲ್ಲುಗಳಿಗೆ ತಾಕದಂತೆ ನಿನ್ನನ್ನು ಕೈಗಳಲ್ಲಿ ಆತುಗೊಳ್ಳುವರು,'
ಎಂದಿತು. 7ಅದಕ್ಕೆ ಯೇಸು, " 'ನಿನ್ನ ದೇವರು ಸರ್ವೇಶ್ವರ; ನೀನು ಅವರನ್ನು ಪರೀಕ್ಷಿಸಬಾರದು', ಎಂದೂ
ಸಹ ಪವಿತ್ರ ಗ್ರಂಥದಲ್ಲಿ ಬರೆದಿದೆ," ಎಂದರು.

8 ಅನಂತರ ಪಿಶಾಚಿ ಯೇಸುವನ್ನು ಬಹಳ ಎತ್ತರವಾದ ಬೆಟ್ಟಕ್ಕೆ ಕೊಂಡೊಯ್ದು, ಪ್ರಪಂಚದ ಎಲ್ಲಾ
ರಾಜ್ಯಗಳನ್ನೂ ಅವುಗಳ ವೈಭವವನ್ನೂ ತೋರಿಸಿತು. 9"ನೀನು ನನಗೆ ಅಡ್ಡಬಿದ್ದು ಆರಾಧಿಸುವೆಯಾದರೆ
ಇವೆಲ್ಲವನ್ನು ನಿನಗೆ ಕೊಡಬಲ್ಲೆ," ಎಂದಿತು. 10ಅದಕ್ಕೆ ಪ್ರತ್ಯುತ್ತರವಾಗಿ ಯೇಸು, "ಸೈತಾನನೇ, ತೊಲಗು, 'ನಿನ್ನ
ದೇವರಾದ ಸರ್ವೇಶ್ವರನನ್ನು ಆರಾಧಿಸು. ಅವರೊಬ್ಬರಿಗೇ ಸೇವೆಸಲ್ಲಿಸು,' ಎಂದೂ ಪವಿತ್ರಗ್ರಂಥದಲ್ಲಿ
ಬರೆದಿದೆ," ಎಂದರು. 11ಆಗ ಪಿಶಾಚಿ ಯೇಸುವನ್ನು ಬಿಟ್ಟು ತೊಲಗಿತು. ದೇವದೂತರು ಬಂದು ಅವರನ್ನು
ಉಪಚರಿಸಿದರು.

## ಗಲಿಲೇಯದಲ್ಲಿ ಸೇವಾಜೀವನ

(ಮಾರ್ಕ 1:14–15; ಲೂಕ 4:14–15)

12 ಯೊವಾನ್ನನು ಬಂಧಿತನಾದನೆಂದು ಯೇಸುಸ್ವಾಮಿ ಕೇಳಿ, ಆ ಪ್ರಾಂತ್ಯವನ್ನು ಬಿಟ್ಟು ಗಲಿಲೇಯಕ್ಕೆ
ಹೊರಟುಹೋದರು. 13ನಜರೇತ್ ಊರಿನಲ್ಲಿ ತಂಗದೆ ಗಲಿಲೇಯ ಸರೋವರದ ಸಮೀಪದಲ್ಲಿರುವ
ಕಫೆರ್ನವುಮ್ ಎಂಬ ಊರಿನಲ್ಲಿ ವಾಸಮಾಡಿದರು. 14ಇದು ಜೆಬುಲೋನ್ ಹಾಗೂ ನೆಫ್ತಲೀಮ್ ನಾಡುಗಳ
ಸರಹದ್ದಿನಲ್ಲಿದೆ. 15ಹೀಗೆ:

"ಜೆಬುಲೋನ್ ನಾಡೇ, ನೆಫ್ತಲೀಮ್ ನಾಡೇ,
ಸರೋವರದ ಹತ್ತಿರವಿರುವ ಹಾದಿಬೀದಿಯೇ,
ಜೋರ್ಡನಿನ ಹೊರವಲಯವೇ,
16 ಕಾರ್ಗತ್ತಲಲ್ಲಿ ವಾಸಿಸುವವರಿಗೆ
ದಿವ್ಯ ಜ್ಯೋತಿಯೊಂದು ಕಾಣಿಸಿತು.
ಮರಣಛಾಯೆ ಕವಿದ ನಾಡಿಗರಿಗೆ
ಅರುಣೋದಯವಾಯಿತು,"

ಎಂದು ನುಡಿದ ಪ್ರವಾದಿ ಯೆಶಾಯನ ವಚನಗಳು ಈಡೇರಿದವು.

17 ಅಂದಿನಿಂದ ಯೇಸು, "ಪಶ್ಚಾತ್ತಾಪಪಟ್ಟು ಪಾಪಕ್ಕೆ ವಿಮುಖರಾಗಿರಿ, ದೇವರಿಗೆ ಅಭಿಮುಖರಾಗಿರಿ,
ಸ್ವರ್ಗಸಾಮ್ರಾಜ್ಯ ಸಮೀಪಿಸಿತು," ಎಂಬ ಸಂದೇಶವನ್ನು ಬೋಧಿಸತೊಡಗಿದರು.

## ಪ್ರಥಮ ಶಿಷ್ಯರ ಆಯ್ಕೆ

(ಮಾರ್ಕ 1:16–20; ಲೂಕ 5:1–11)

18 ಯೇಸುಸ್ವಾಮಿ ಗಲಿಲೇಯ ಸರೋವರದ ತೀರದಲ್ಲಿ ನಡೆದು ಹೋಗುತ್ತಿದ್ದರು. ಆಗ ಇಬ್ಬರು
ಸಹೋದರರನ್ನು ಕಂಡರು. ಇವರೇ 'ಪೇತ್ರ' ಎನಿಸಿಕೊಂಡ ಸಿಮೋನ ಮತ್ತು ಅವನ ಸಹೋದರ ಅಂದ್ರೆಯ.
ಬೆಸ್ತರಾದ ಇವರು ಸರೋವರದಲ್ಲಿ ಬಲೆ ಬೀಸುತ್ತಾ ಇದ್ದರು. 19"ನನ್ನನ್ನು ಹಿಂಬಾಲಿಸಿ ಬನ್ನಿ. ನಿಮ್ಮನ್ನು
ಮನುಷ್ಯರನ್ನೇ ಹಿಡಿಯುವವರನ್ನಾಗಿ ಮಾಡುವೆನು," ಎಂದು ಹೇಳಿ ಯೇಸು ಅವರನ್ನು ಕರೆದರು.
20ತಕ್ಷಣವೇ, ಅವರು ತಮ್ಮ ಬಲೆಗಳನ್ನು ಬಿಟ್ಟು ಯೇಸುವನ್ನು ಹಿಂಬಾಲಿಸಿದರು.

21 ಅಲ್ಲಿಂದ ಮುಂದಕ್ಕೆ ಹೋಗುತ್ತಿದ್ದಾಗ ಯೇಸು ಜೆಬೆದಾಯನ ಮಕ್ಕಳಾದ ಯಕೋಬ ಮತ್ತು
ಯೊವಾನ್ನ ಎಂಬ ಇನ್ನಿಬ್ಬರು ಸಹೋದರರನ್ನು ಕಂಡರು. ಇವರು ತಮ್ಮ ತಂದೆ ಜೆಬೆದಾಯನೊಡನೆ
ದೋಣಿಯಲ್ಲಿ ಬಲೆಗಳನ್ನು ಸರಿಪಡಿಸುತ್ತಿದ್ದರು. ಯೇಸು ಇವರನ್ನೂ ಕರೆದರು. 22ಕೂಡಲೇ ಅವರು
ದೋಣಿಯನ್ನೂ ತಮ್ಮ ತಂದೆಯನ್ನೂ ಬಿಟ್ಟು ಯೇಸುವನ್ನು ಹಿಂಬಾಲಿಸಿದರು.

## ಬೋಧನೆ ಮತ್ತು ಸಾಧನೆ

(ಲೂಕ 6:17–19)

23 ಯೇಸುಸ್ವಾಮಿ ಗಲಿಲೇಯ ಪ್ರಾಂತ್ಯದಲ್ಲೆಲ್ಲಾ ಸಂಚರಿಸಿ ಅಲ್ಲಿನ ಪ್ರಾರ್ಥನಾ ಮಂದಿರಗಳಲ್ಲಿ
ಉಪದೇಶ ಮಾಡುತ್ತಿದ್ದರು. ದೈವರಾಜ್ಯದ ಸಂದೇಶವನ್ನು ಪ್ರಬೋಧಿಸುತ್ತಿದ್ದರು. ಜನರ ಎಲ್ಲಾ ತರಹದ
ರೋಗರುಜಿನಗಳನ್ನೂ ಬೇನೆ ಬವಣೆಗಳನ್ನೂ ಗುಣಪಡಿಸುತ್ತಿದ್ದರು. 24ಅವರ ಕೀರ್ತಿ ಸಿರಿಯಾ ದೇಶದಲ್ಲೆಲ್ಲಾ
ಹಬ್ಬಿತು. ದೆವ್ವ ಹಿಡಿದವರನ್ನೂ ಮೂರ್ಛಾರೋಗಿಗಳನ್ನೂ ಪಾರ್ಶ್ವವಾಯು ಪೀಡಿತರನ್ನೂ ನಾನಾ ತರಹದ
ವ್ಯಾಧಿ ಹಾಗೂ ವೇದನೆಯಿಂದ ನರಳುತ್ತಿದ್ದ ಎಲ್ಲ ರೋಗಿಗಳನ್ನೂ ಅವರ ಬಳಿಗೆ ಕರೆ ತಂದರು. ಯೇಸು
ಅವರೆಲ್ಲರನ್ನು ಸ್ವಸ್ಥಪಡಿಸಿದರು. 25ಗಲಿಲೇಯ, ದೆಕಪೊಲಿ, ಜೆರುಸಲೇಮ್, ಜುದೇಯ ಎಂಬ
ಸ್ಥಳಗಳಿಂದಲೂ ಜೋರ್ಡನ್ ನದಿಯ ಆಚೆಕಡೆಯಿಂದಲೂ ಜನರು ತಂಡೋಪ ತಂಡವಾಗಿ ಬಂದು
ಯೇಸುವನ್ನು ಹಿಂಬಾಲಿಸಿದರು.

## ಬೆಟ್ಟದ ಮೇಲೆ ಬೋಧೆ

**5** ಜನರ ದೊಡ್ಡ ಗುಂಪನ್ನು ಕಂಡು ಯೇಸುಸ್ವಾಮಿ ಒಂದು ಬೆಟ್ಟವನ್ನು ಹತ್ತಿ ಕುಳಿತುಕೊಂಡರು. ಅವರ
ಶಿಷ್ಯರು ಸುತ್ತಲೂ ನೆರೆದರು. 2ಆಗ ಯೇಸು ಇಂತೆಂದು ಪ್ರಬೋಧಿಸಿದರು :

## ಅಷ್ಟ ಭಾಗ್ಯಗಳು

(ಲೂಕ 6:20–23)

3 "ಪಾರಮಾರ್ಥಿಕವಾಗಿ ಬಡವರು
ಭಾಗ್ಯವಂತರು;
ಸ್ವರ್ಗಸಾಮ್ರಾಜ್ಯ ಅವರದು.
4 ದುಃಖಿಗಳು ಭಾಗ್ಯವಂತರು;
ದೇವರು ಅವರನ್ನು ಸಂತೈಸುವರು.
5 ವಿನಯಶೀಲರು ಭಾಗ್ಯವಂತರು;
ದೇವರ ವಾಗ್ದತ್ತ ನಾಡಿಗೆ

ಬಾಧ್ಯಸ್ಥರು ಅವರು.
6 ನ್ಯಾಯನೀತಿಗಾಗಿ ಹಸಿದು ಹಾತೊರೆಯು
ವವರು ಭಾಗ್ಯವಂತರು;
ದೇವರು ಅವರಿಗೆ ತೃಪ್ತಿಯನ್ನೀಯುವರು.
7 ದಯಾವಂತರು ಭಾಗ್ಯವಂತರು;
ದೇವರ ದಯೆ ಅವರಿಗೆ ದೊರಕುವುದು.
8 ನಿರ್ಮಲ ಹೃದಯಿಗಳು ಭಾಗ್ಯವಂತರು;
ಅವರು ದೇವರನ್ನು ಕಾಣುವರು.
9 ಶಾಂತಿಗಾಗಿ ಶ್ರಮಿಸುವವರು ಭಾಗ್ಯವಂತರು;
ಅವರು ದೇವರ ಮಕ್ಕಳೆನಿಸಿಕೊಳ್ಳುವರು.
10 ನ್ಯಾಯನೀತಿಯ ನಿಮಿತ್ತ ಹಿಂಸೆಯನ್ನು
ತಾಳುವವರು ಭಾಗ್ಯವಂತರು;
ಸ್ವರ್ಗಸಾಮ್ರಾಜ್ಯ ಅವರದು."

11 "ನನ್ನ ಶಿಷ್ಯರು ನೀವಾದ್ದರಿಂದ ಜನರು ನಿಮ್ಮನ್ನು ಧಿಕ್ಕರಿಸುವರು, ಹಿಂಸಿಸುವರು, ಅನ್ಯಾಯವಾಗಿ
ಇಲ್ಲಸಲ್ಲದ್ದನ್ನು ನಿಮ್ಮ ಮೇಲೆ ಹೊರಿಸುವರು; ಆಗ ನೀವು ಭಾಗ್ಯವಂತರು.
12 ಅದಕ್ಕಾಗಿ ಹರ್ಷಿಸಿ
ಆನಂದಪಡಿ; ಏಕೆಂದರೆ ಸ್ವರ್ಗದಲ್ಲಿ ನಿಮಗೆ ಸಿಗುವ ಪ್ರತಿಫಲ ಹಿರಿದು. ನಿಮಗಿಂತ ಮೊದಲಿದ್ದ
ಪ್ರವಾದಿಗಳನ್ನೂ ಜನರು ಹೀಗೆಯೇ ಚಿತ್ರಹಿಂಸೆಗೆ ಒಳಪಡಿಸಿದರು."

## ಧರೆಗೆ ಉಪ್ಪು – ಜಗಕ್ಕೆ ಬೆಳಕು

(ಮಾರ್ಕ 9:50; ಲೂಕ 14:34–35)

13 "ಈ ಧರೆಗೆ ನೀವೇ ಉಪ್ಪು; ಉಪ್ಪೇ ಸಪ್ಪೆಯಾಗಿಬಿಟ್ಟರೆ ಅದಕ್ಕೆ ಇನ್ನಾವುದರಿಂದ ಪುನಃ
ರುಚಿಬಂದೀತು? ಇನ್ನು ಅದು ಕೆಲಸಕ್ಕೆ ಬಾರದ ವಸ್ತು. ಜನರು ಅದನ್ನು ಆಚೆ ಬಿಸಾಡುತ್ತಾರೆ. ದಾರಿಗರು
ಅದನ್ನು ತುಳಿದುಬಿಡುತ್ತಾರಷ್ಟೆ."

14 "ಜಗತ್ತಿಗೆ ನೀವೇ ಜ್ಯೋತಿ. ಬೆಟ್ಟದ ಮೇಲಿನ ಪಟ್ಟಣವನ್ನು ಮುಚ್ಚಿಡಲಾಗದು.
15 ಅಂತೆಯೇ
ಯಾರೂ ದೀಪವನ್ನು ಹಚ್ಚಿ ಬಟ್ಟಲ ಕೆಳಗೆ ಬಚ್ಚಿಡುವುದಿಲ್ಲ; ದೀಪಸ್ತಂಭದ ಮೇಲೆ ಇಡುತ್ತಾರೆ. ಆಗ ಅದು
ಮನೆಯಲ್ಲಿರುವ ಎಲ್ಲರಿಗೆ ಬೆಳಕನ್ನು ಕೊಡುತ್ತದೆ.
16 ಅದೇ ರೀತಿ ನಿಮ್ಮ ಜ್ಯೋತಿ ಜನರ ಮುಂದೆ ಬೆಳಗಲಿ;
ಹೀಗೆ ಅವರು ನಿಮ್ಮ ಸತ್ಕಾರ್ಯಗಳನ್ನು ಕಂಡು ಸ್ವರ್ಗದಲ್ಲಿರುವ ನಿಮ್ಮ ತಂದೆಯನ್ನು ಕೊಂಡಾಡಲಿ."

## ನಿಮ್ಮ ಸನಾತನಧರ್ಮ ರದ್ದಾಗದು

17 "ಮೋಶೆಯ ಧರ್ಮಶಾಸ್ತ್ರವನ್ನಾಗಲಿ, ಪ್ರವಾದಿಗಳ ಪ್ರವಚನಗಳನ್ನಾಗಲಿ ರದ್ದು ಮಾಡಲು ನಾನು
ಬಂದೆನೆಂದು ತಿಳಿಯಬೇಡಿ. ರದ್ದು ಮಾಡಲು ಅಲ್ಲ, ಅವುಗಳನ್ನು ಸಿದ್ಧಿಗೆ ತರಲು ಬಂದಿದ್ದೇನೆ.
18 ಭೂಮ್ಯಾಕಾಶಗಳು ಉಳಿದಿರುವ ತನಕ ಧರ್ಮಶಾಸ್ತ್ರವೆಲ್ಲ ನೆರವೇರುವುದೇ ಹೊರತು ಅದರಲ್ಲಿ ಒಂದು
ಚಿಕ್ಕ ಅಕ್ಷರವಾಗಲಿ, ಚುಕ್ಕೆಯಾಗಲಿ ನಿರರ್ಥಕವಾಗದೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ.
19 ಹೀಗಿರುವಲ್ಲಿ,
ಅದರ ಆಜ್ಞೆಗಳಲ್ಲಿ ಅತಿ ಚಿಕ್ಕದೊಂದನ್ನು ಮೀರುವವನು, ಮೀರುವಂತೆ ಜನರಿಗೆ ಬೋಧಿಸುವವನು,
ಸ್ವರ್ಗಸಾಮ್ರಾಜ್ಯದಲ್ಲಿ ಅತ್ಯಲ್ಪನೆಂದು ಪರಿಗಣಿತನಾಗುವನು; ಧರ್ಮಶಾಸ್ತ್ರವನ್ನು ಪಾಲಿಸುವವನು,
ಪಾಲಿಸುವಂತೆ ಜನರಿಗೆ ಬೋಧಿಸುವವನು, ಸ್ವರ್ಗಸಾಮ್ರಾಜ್ಯದಲ್ಲಿ ಮಹಾತ್ಮನೆಂದು ಪರಿಗಣಿತನಾಗುವನು.
20 ಧರ್ಮಶಾಸ್ತ್ರಿಗಳ ಹಾಗೂ ಫರಿಸಾಯರ ಧರ್ಮನಿಷ್ಠೆಗಿಂತ ನಿಮ್ಮ ಧರ್ಮನಿಷ್ಠೆ ಉತ್ತಮವಾಗದ ಹೊರತು
ನೀವು ಸ್ವರ್ಗಸಾಮ್ರಾಜ್ಯವನ್ನು ಪ್ರವೇಶಿಸಲಾರಿರಿ ಎಂಬುದು ನಿಶ್ಚಯ."

## ಕೋಪ ಕೊಲೆಗೆ ಮೂಲ

21 " 'ನರಹತ್ಯೆ ಮಾಡಬೇಡ; ನರಹತ್ಯೆ ಮಾಡುವವನು ನ್ಯಾಯತೀರ್ಪಿಗೆ ಗುರಿಯಾಗುವನು'
ಎಂದು ಪೂರ್ವಿಕರಿಗೆ ಹೇಳಿದ್ದನ್ನು ನೀವು ಕೇಳಿದ್ದೀರಿ. 22ಆದರೆ ನಾನೀಗ ನಿಮಗೆ ಹೇಳುತ್ತೇನೆ, ಕೇಳಿ: ತನ್ನ
ಸೋದರನ ಮೇಲೆ (ನಿಷ್ಕಾರಣವಾಗಿ) ಕೋಪಗೊಳ್ಳುವ ಪ್ರತಿಯೊಬ್ಬನೂ ನ್ಯಾಯತೀರ್ಪಿಗೆ ಈಡಾಗುವನು;
ತನ್ನ ಸೋದರನನ್ನು ತುಚ್ಛೀಕರಿಸುವವನು ನ್ಯಾಯಸಭೆಯ ವಿಚಾರಣೆಗೆ ಒಳಗಾಗುವನು; 'ಮೂರ್ಖ'
ಎಂದು ಮೂದಲಿಸುವವನು ನರಕಾಗ್ನಿಗೆ ಗುರಿಯಾಗುವನು. 23ಆದಕಾರಣ, ಬಲಿಪೀಠದ ಮುಂದೆ ದೇವರಿಗೆ
ಕಾಣಿಕೆಯನ್ನು ಅರ್ಪಿಸಲಿರುವಾಗ, ನಿನ್ನ ಸೋದರನಿಗೆ ನಿನ್ನ ಮೇಲೆ ಏನೋ ಮನಸ್ತಾಪವಿದೆ ಎಂಬುದು
ನಿನ್ನ ನೆನಪಿಗೆ ಬಂದರೆ, 24ನಿನ್ನ ಕಾಣಿಕೆಯನ್ನು ಆ ಬಲಿಪೀಠದ ಮುಂದೆಯೇ ಇಟ್ಟುಬಿಡು. ಮೊದಲು
ಹೋಗಿ ನಿನ್ನ ಸೋದರನೊಡನೆ ಸಮಾಧಾನಮಾಡಿಕೊ, ಅನಂತರ ಬಂದು ನಿನ್ನ ಕಾಣಿಕೆಯನ್ನು ಒಪ್ಪಿಸು."

25 "ನಿನ್ನ ಎದುರಾಳಿ ನಿನ್ನನ್ನು ನ್ಯಾಯಸ್ಥಾನಕ್ಕೆ ಎಳೆಯುವಾಗ ಮಾರ್ಗಮಧ್ಯದಲ್ಲೇ ಅವನೊಡನೆ
ಬೇಗ ಸಂಧಾನಮಾಡಿಕೊ. ಇಲ್ಲದಿದ್ದರೆ, ಅವನು ನಿನ್ನನ್ನು ನ್ಯಾಯಾಧಿಪತಿಗೆ ಒಪ್ಪಿಸಬಹುದು. ನ್ಯಾಯಾಧಿಪತಿ
ನಿನ್ನನ್ನು ಪೋಲೀಸರ ವಶಕ್ಕೆ ಬಿಡಬಹುದು. ಅನಂತರ ನಿನಗೆ ಸೆರೆವಾಸ ಪ್ರಾಪ್ತವಾದೀತು! 26ಅಲ್ಲಿಂದ ನೀನು
ಹೊರಗೆ ಬರಬೇಕಾದರೆ ಬಿಡಿಕಾಸನ್ನೂ ಬಿಡದೆ ಎಲ್ಲವನ್ನೂ ತೆರಬೇಕಾಗುವುದು. ಇದನ್ನು ನೆನಪಿನಲ್ಲಿಡು."

## ಕಾಮುಕತನಕ್ಕೆ ಕೊಡಲಿಪೆಟ್ಟು

27 "ವ್ಯಭಿಚಾರ ಮಾಡಕೂಡದು ಎಂಬ ನಿಯಮವನ್ನು ನೀವು ಕೇಳಿದ್ದೀರಿ; 28ಆದರೆ ನಾನು
ಹೇಳುತ್ತೇನೆ, ಕೇಳಿ: ಪರಸ್ತ್ರೀಯನ್ನು ಕಾಮದೃಷ್ಟಿಯಿಂದ ನೋಡುವ ಪ್ರತಿಯೊಬ್ಬನೂ ತನ್ನ ಹೃದಯದಲ್ಲಿ
ಆಕೆಯೊಡನೆ ಆಗಲೇ ವ್ಯಭಿಚಾರ ಮಾಡಿದವನೇ ಆಗುತ್ತಾನೆ. 29ನಿನ್ನ ಬಲಗಣ್ಣು ನಿನಗೆ ಪಾಪಕ್ಕೆ
ಕಾರಣವಾದರೆ ಅದನ್ನು ಕಿತ್ತೆಸೆದುಬಿಡು; ನಿನ್ನ ಇಡೀ ದೇಹ ನರಕಕ್ಕೆ ತುತ್ತಾಗುವುದಕ್ಕಿಂತ ನಿನ್ನ ಒಂದು ಅಂಗ
ನಾಶವಾಗುವುದೇ ಲೇಸು. 30ನಿನ್ನ ಬಲಗೈ ನಿನಗೆ ಪಾಪಕ್ಕೆ ಕಾರಣವಾದರೆ ಅದನ್ನು ಕತ್ತರಿಸಿ ಬಿಸಾಡಿಬಿಡು;
ನಿನ್ನ ಇಡೀ ದೇಹ ನರಕದ ಪಾಲಾಗುವುದಕ್ಕಿಂತ ಒಂದು ಅವಯವ ನಾಶವಾಗುವುದು ಎಷ್ಟೋ ಮೇಲು."

## ವಿವಾಹ ವಿಚ್ಛೇದನದ ಬಗ್ಗೆ ಎಚ್ಚರಿಕೆ !

(ಮತ್ತಾ 19:9; ಮಾರ್ಕ 10:11–12; ಲೂಕ 16:18)

31 "ಇದಲ್ಲದೆ, 'ತನ್ನ ಹೆಂಡತಿಯನ್ನು ಬಿಟ್ಟುಬಿಡುವವನು ವಿವಾಹ ವಿಚ್ಛೇದನ ಪತ್ರವನ್ನು ಅವಳಿಗೆ
ಕೊಡಲಿ,' ಎಂದು ವಿಧಿಸಲಾಗಿದೆ. 32ಆದರೆ ನಾನೀಗ ನಿಮಗೆ ಹೇಳುತ್ತೇನೆ, ಕೇಳಿ: ತನ್ನ ಹೆಂಡತಿಯ
ದುರ್ನಡತೆಯ ಕಾರಣದಿಂದಲ್ಲದೆ, ಅವಳನ್ನು ಬಿಟ್ಟುಬಿಡುವವನು ಅವಳು ವ್ಯಭಿಚಾರಿಣಿಯಾಗುವುದಕ್ಕೆ
ಕಾರಣನಾಗುತ್ತಾನೆ; ಅಲ್ಲದೆ ಗಂಡ ಬಿಟ್ಟವಳನ್ನು ಮದುವೆಯಾಗುವವನು ಕೂಡ ವ್ಯಭಿಚಾರಿಯಾಗುತ್ತಾನೆ."

## ಆಣೆಯಿಡುವುದು ಬೇಡ

33 " 'ಸುಳ್ಳಾಣೆಯಿಡಬೇಡ; ದೇವರಿಗೆ ಆಣೆಯಿಟ್ಟು ವಾಗ್ದಾನಮಾಡಿದಂತೆ ನಡೆದುಕೊಳ್ಳಲೇ ಬೇಕು'
ಎಂದು ಪೂರ್ವಿಕರಿಗೆ ಹೇಳಿದ್ದು ನಿಮಗೆ ತಿಳಿದೇ ಇದೆ. 34ಈಗ ನಾನು ಹೇಳುವುದನ್ನು ಕೇಳಿ: ನೀವು
ಆಣೆಯಿಡಲೇಬೇಡಿ. ಆಕಾಶದ ಮೇಲೆ ಆಣೆಯಿಡಬೇಡಿ, ಅದು ದೇವರ ಸಿಂಹಾಸನ; 35ಭೂಮಿಯ ಮೇಲೆ
ಆಣೆಯಿಡಬೇಡಿ, ಅದು ದೇವರ ಪಾದಪೀಠ; ಜೆರುಸಲೇಮಿನ ಮೇಲೆ ಆಣೆಯಿಡಬೇಡಿ, ಅದು
ರಾಜಾಧಿರಾಜನ ಪಟ್ಟಣ; 36ನಿಮ್ಮ ತಲೆಯ ಮೇಲೂ ಆಣೆಯಿಡಬೇಡಿ; ಹಾಗೆ ಆಣೆಯನ್ನಿಟ್ಟು ಅದರ ಒಂದು
ಕೂದಲನ್ನಾದರೂ ಬೆಳ್ಳಗೆ ಅಥವಾ ಕಪ್ಪಗೆ ಮಾಡಲು ನಿಮ್ಮಿಂದಾಗದು. 37ಹೌದಾದರೆ ಹೌದೆನ್ನಿ, ಅಲ್ಲವಾದರೆ
ಅಲವೆನ್ನಿ; ಇದಕ್ಕಿಂತ ಮಿಗಿಲಾದುದು ಪಿಶಾಚಿಯಿಂದ ಪ್ರೇರಿತವಾದುದು."

### ಅಪಕಾರಕ್ಕೆ ಉಪಕಾರ

(ಲೂಕ 6:29–30)

38 "ಕಣ್ಣಿಗೆ ಪ್ರತಿಯಾಗಿ ಕಣ್ಣು, ಹಲ್ಲಿಗೆ ಬದಲಾಗಿ ಹಲ್ಲು" ಎಂಬುದನ್ನು ನೀವು ಕೇಳಿದ್ದೀರಿ. 39ಆದರೆ
ನನ್ನ ಬೋಧೆ ಇದು: ನಿನಗೆ ಅಪಕಾರ ಮಾಡಿದವನಿಗೆ ಪ್ರತೀಕಾರ ಮಾಡಬೇಡ. ನಿನ್ನ ಬಲಗೆನ್ನೆಗೆ ಒಬ್ಬನು
ಹೊಡೆದರೆ ಇನ್ನೊಂದು ಕೆನ್ನೆಯನ್ನೂ ಒಡ್ಡು. 40ನಿನ್ನೊಡನೆ ವ್ಯಾಜ್ಯಮಾಡಿ ನಿನ್ನ ಒಳ ಅಂಗಿಯನ್ನು
ಕಿತ್ತುಕೊಳ್ಳುವವನಿಗೆ ಹೊರ ಅಂಗಿಯನ್ನೂ ಕೊಟ್ಟುಬಿಡು. 41ಯಾರಾದರೂ ಒಂದು ಕಿಲೊಮೀಟರ್ ದೂರ
ಬಾ ಎಂದು ನಿನ್ನನ್ನು ಒತ್ತಾಯಪಡಿಸಿದರೆ ಅವನೊಡನೆ ಎರಡು ಕಿಲೊಮೀಟರ್ ಹೋಗು;
42ಬೇಡಿಕೊಳ್ಳುವವನಿಗೆ ಕೊಡು. ಸಾಲ ಕೇಳಬಂದವನಿಂದ ಮುಖ ತಿರುಗಿಸಿಕೊಳ್ಳಬೇಡ."

### ಶತ್ರುಪ್ರೇಮ

(ಲೂಕ 6:27–28, 32–36)

43 "ಮಿತ್ರರನ್ನು ಪ್ರೀತಿಸು, ಶತ್ರುವನ್ನು ದ್ವೇಷಿಸು" ಎಂದು ಹೇಳಿರುವುದು ನಿಮಗೆ ತಿಳಿದೇ ಇದೆ.
44ನಾನು ಹೇಳುವುದನ್ನು ಗಮನಿಸಿರಿ: ನಿಮ್ಮ ಶತ್ರುಗಳನ್ನು ಪ್ರೀತಿಸಿರಿ; ನಿಮ್ಮನ್ನು ಪೀಡಿಸುವವರಿಗಾಗಿ
ಪ್ರಾರ್ಥಿಸಿರಿ. 45ಇದರಿಂದ ಸ್ವರ್ಗದಲ್ಲಿರುವ ನಿಮ್ಮ ತಂದೆಗೆ ನೀವು ಮಕ್ಕಳಾಗುವಿರಿ. ಅವರು ಸಜ್ಜನರ ಮೇಲೂ
ದುರ್ಜನರ ಮೇಲೂ ತಮ್ಮ ಸೂರ್ಯನು ಉದಯಿಸುವಂತೆ ಮಾಡುತ್ತಾರೆ; ನೀತಿವಂತರ ಮೇಲೂ
ಅನೀತಿವಂತರ ಮೇಲೂ ಮಳೆಗರೆಯುತ್ತಾರೆ. 46ನಿಮ್ಮನ್ನು ಪ್ರೀತಿಸುವವರನ್ನು ಮಾತ್ರ ನೀವು ಪ್ರೀತಿಸಿದರೆ
ಅದರಿಂದೇನು ಫಲ? ಸುಂಕ ವಸೂಲಿ ಮಾಡುವವರೂ ಹಾಗೆ ಮಾಡುವುದಿಲ್ಲವೇ? 47ನಿಮ್ಮ ಮಿತ್ರರನ್ನು
ಮಾತ್ರ ನೀವು ಗೌರವಿಸಿದರೆ ಅದರಲ್ಲೇನು ವಿಶೇಷ? ಅನ್ಯಜನರೂ ಹಾಗೆ ಮಾಡುತ್ತಾರಲ್ಲವೇ?
48ಆದುದರಿಂದ ಸ್ವರ್ಗದಲ್ಲಿರುವ ನಿಮ್ಮ ತಂದೆ ಪರಿಪೂರ್ಣರಾಗಿರುವಂತೆ ನೀವೂ ಪರಿಪೂರ್ಣರಾಗಿರಿ."

### ದಾನಧರ್ಮದ ನವ್ಯ ವಿಧಾನ

**6** "ಜನರಿಗೆ ತೋರಿಸಿಕೊಳ್ಳುವುದಕ್ಕಾಗಿ ನಿಮ್ಮ ಧಾರ್ಮಿಕ ಕಾರ್ಯಗಳನ್ನು ಅವರ ಎದುರಿಗೆ ಪ್ರದರ್ಶಿಸದಂತೆ
ಎಚ್ಚರಿಕೆಯಿಂದಿರಿ. ಹಾಗೆ ಮಾಡಿದರೆ, ಸ್ವರ್ಗದಲ್ಲಿರುವ ನಿಮ್ಮ ತಂದೆಯಿಂದ ನಿಮಗೆ ಪ್ರತಿಫಲ ದೊರಕದು.
2ಅಂತೆಯೇ, ನೀನು ದಾನಧರ್ಮ ಮಾಡುವಾಗ ತುತೂರಿಯನ್ನು ಊದಿಸಬೇಡ. ಜನರ ಹೊಗಳಿಕೆಗಾಗಿ
ಕಪಟಿಗಳು ಪ್ರಾರ್ಥನಾಮಂದಿರಗಳಲ್ಲೂ ಹಾದಿಬೀದಿಗಳಲ್ಲೂ ಹೀಗೆ ಪ್ರದರ್ಶನ ಮಾಡುತ್ತಾರೆ. ಅವರಿಗೆ
ಬರಬೇಕಾದ ಫಲ ಪೂರ್ತಿಯಾಗಿ ದೊರಕಿದ್ದಾಯಿತೆಂದು ನಿಮಗೆ ಖಚಿತವಾಗಿ ಹೇಳುತ್ತೇನೆ. 3ಆದರೆ ನೀನು
ದಾನಧರ್ಮ ಮಾಡುವಾಗ ನಿನ್ನ ಬಲಗೈ ಕೊಡುವುದು ನಿನ್ನ ಎಡಗೈಗೂ ತಿಳಿಯದ ಹಾಗೆ ಗೋಪ್ಯವಾಗಿರಲಿ.
4ಅಂತರಂಗದಲ್ಲಿ ನಡೆಯುವುದನ್ನು ನೋಡುವ ನಿನ್ನ ತಂದೆ ನಿನಗೆ ಪ್ರತಿಫಲವನ್ನು ಕೊಡುವರು."

### ಜಪತಪದ ಹೊಸ ವಿಧಾನ

(ಲೂಕ 11:2–4)

5 "ಪ್ರಾರ್ಥನೆ ಮಾಡುವಾಗ ಕಪಟಿಗಳಂತೆ ಮಾಡಬೇಡಿ. ಜನರು ತಮ್ಮನ್ನು ನೋಡಲೆಂದು
ಪ್ರಾರ್ಥನಾ ಮಂದಿರಗಳಲ್ಲೂ ಬೀದಿಯ ಚೌಕಗಳಲ್ಲೂ ನಿಂತು ಪ್ರಾರ್ಥನೆ ಮಾಡಲು ಇಚ್ಛಿಸುತ್ತಾರೆ. ಅವರಿಗೆ
ಬರಬೇಕಾದ ಪೂರ್ತಿಫಲ ಆಗಲೇ ಬಂದಾಯಿತೆಂಬುದು ನಿಮಗೆ ಚೆನ್ನಾಗಿ ತಿಳಿದಿರಲಿ. 6ನೀನು ಪ್ರಾರ್ಥನೆ
ಮಾಡುವಾಗ ನಿನ್ನ ಕೊಠಡಿಗೆ ಹೋಗು; ಬಾಗಿಲನ್ನು ಮುಚ್ಚು; ಅಂತರಂಗದಲ್ಲಿರುವ ನಿನ್ನ ತಂದೆಗೆ ಪ್ರಾರ್ಥನೆ
ಮಾಡು. ಅಂತರಂಗದಲ್ಲಿ ನಡೆಯುವುದನ್ನು ನೋಡುವ ನಿನ್ನ ತಂದೆ ನಿನಗೆ ಪ್ರತಿಫಲವನ್ನು ಕೊಡುವರು."

7 "ಪ್ರಾರ್ಥನೆ ಮಾಡುವಾಗ ಪರಕೀಯರಂತೆ ನಿರರ್ಥಕ ಪದಗಳನ್ನು ಪಿಸುಗುಟ್ಟಬೇಡ. ತಮ್ಮ
ಪ್ರಾರ್ಥನೆ ದೀರ್ಘವಾದಷ್ಟೂ ದೇವರು ಆಲಿಸುತ್ತಾರೆಂದು ಅವರು ಭಾವಿಸುತ್ತಾರೆ. 8ನೀವು ಅವರಂತೆ

ಆಗಬೇಡಿ. ನಿಮ್ಮ ಅಗತ್ಯಗಳೇನೆಂದು ನೀವು ಕೇಳುವುದಕ್ಕೆ ಮೊದಲೇ ನಿಮ್ಮ ತಂದೆಗೆ ಗೊತ್ತಿದೆ. [9]ಆದುದರಿಂದ
ಹೀಗೆಂದು ಪ್ರಾರ್ಥನೆ ಮಾಡಿ:

10 "ಸ್ವರ್ಗದಲ್ಲಿರುವ ಓ ನಮ್ಮ ತಂದೆಯೇ,
ನಿಮ್ಮ ಪವಿತ್ರ ನಾಮ ಪೂಜಿತವಾಗಲಿ;
ನಿಮ್ಮ ಸಾಮ್ರಾಜ್ಯ ಬರಲಿ;
ನಿಮ್ಮ ಚಿತ್ತ ಸ್ವರ್ಗದಲ್ಲಿ ನೆರವೇರುವ ಪ್ರಕಾರ
ಜಗತ್ತಿನಲ್ಲಿಯೂ ನೆರವೇರಲಿ.
11 ನಮ್ಮ ಅನುದಿನದ ಆಹಾರವನ್ನು
ನಮಗಿಂದು ಕೊಡಿ.
12 ನಮಗೆ ತಪ್ಪು ಮಾಡಿದವರನ್ನು ನಾವು
ಕ್ಷಮಿಸುವ ಪ್ರಕಾರ
ನಾವು ಮಾಡಿದ ತಪ್ಪುಗಳನ್ನು ಕ್ಷಮಿಸಿ.
13 ನಮ್ಮನ್ನು ಶೋಧನೆಗೆ ಒಳಪಡಿಸಬೇಡಿ;
ಕೇಡಿನಿಂದ ನಮ್ಮನ್ನು ರಕ್ಷಿಸಿರಿ.

14 "ಜನರ ತಪ್ಪುಗಳನ್ನು ನೀವು ಕ್ಷಮಿಸಿದರೆ ಸ್ವರ್ಗದಲ್ಲಿರುವ ನಿಮ್ಮ ತಂದೆ ನಿಮ್ಮನ್ನು ಕ್ಷಮಿಸುವರು.
[15]ಜನರನ್ನು ನೀವು ಕ್ಷಮಿಸದಿದ್ದರೆ, ನಿಮ್ಮ ತಂದೆಯೂ ನಿಮ್ಮ ತಪ್ಪುಗಳನ್ನು ಕ್ಷಮಿಸರು."

16 "ಉಪವಾಸ ಮಾಡುವಾಗ ಕಪಟಿಗಳಂತೆ ಮುಖ ಸಪ್ಪೆಮಾಡಬೇಡಿ. ಜನರ ಕಣ್ಣಿಗೆ ತಾವು
ಉಪವಾಸಿಗಳೆಂದು ತೋರ್ಪಡಿಸಿಕೊಳ್ಳುವುದಕ್ಕಾಗಿ ಅವರು ಮುಖವನ್ನು ಬಾಡಿಸಿಕೊಳ್ಳುತ್ತಾರೆ. ಅವರಿಗೆ
ಬರಬೇಕಾದ ಫಲ ಪೂರ್ತಿಯಾಗಿ ದೊರಕಿಯಾಯಿತೆಂದು ನಿಮಗೆ ಖಚಿತವಾಗಿ ಹೇಳುತ್ತೇನೆ. [17]ಆದರೆ
ನೀನು ಉಪವಾಸ ಕೈಗೊಂಡಾಗ ಮುಖ ತೊಳೆದುಕೊ, ತಲೆಬಾಚಿಕೊ. [18]ಆಗ ಉಪವಾಸ ಮಾಡುವವನಂತೆ
ನೀನು ಜನರಿಗೆ ಕಾಣಿಸಿಕೊಳ್ಳುವುದಿಲ್ಲ; ಅಂತರಂಗದಲ್ಲಿ ಇರುವ ನಿನ್ನ ತಂದೆಗೆ ಮಾತ್ರ ಕಾಣಿಸಿಕೊಳ್ಳುವೆ.
ಅಂತರಂಗದಲ್ಲಿ ನಡೆಯುವುದನ್ನು ನೋಡುವ ನಿನ್ನ ತಂದೆ ಅದಕ್ಕೆಲ್ಲ ಪ್ರತಿಫಲ ಕೊಡುವರು."

### ಅಳಿಯದ ಆಸ್ತಿ

(ಲೂಕ 12:33-34)

19 "ಇಹಲೋಕದಲ್ಲಿ ಆಸ್ತಿಪಾಸ್ತಿಯನ್ನು ಶೇಖರಿಸಿಡಬೇಡಿ. ಇಲ್ಲಿ ತುಕ್ಕು ಹಿಡಿದೀತು; ನುಸಿ
ಹೊಡೆದೀತು; ಕಳ್ಳರು ಕನ್ನ ಕೊರೆದು ಕದ್ದಾರು. [20]ನಿಮ್ಮ ಆಸ್ತಿಯನ್ನು ಸ್ವರ್ಗದಲ್ಲಿ ಕೂಡಿಸಿಡಿ. ಅಲ್ಲಿ ತುಕ್ಕು
ಹಿಡಿಯದು, ನುಸಿ ಹೊಡೆಯದು, ಕಳ್ಳರು ಕನ್ನ ಕೊರೆದು ಕದಿಯರು. [21]ನಿನ್ನ ನಿಧಿ ಎಲ್ಲಿದೆಯೋ ಅಲ್ಲೇ
ಇರುವುದು ನಿನ್ನ ಹೃದಯ."

### ಮಂಕಾಗದ ಮನಸ್ಸಾಕ್ಷಿ

(ಲೂಕ 11:34-36)

22 "ಕಣ್ಣೇ ದೇಹಕ್ಕೆ ದೀಪ. ನಿನ್ನ ಕಣ್ಣು ಸರಿಯಿದ್ದರೆ ದೇಹವೆಲ್ಲ ಕಾಂತಿಮಯವಾಗುವುದು. ಅದು
ಕೆಟ್ಟಿದ್ದರೆ ನಿನ್ನ ದೇಹವೆಲ್ಲ ಕತ್ತಲೆಮಯವಾಗುವುದು. [23]ನಿನ್ನೊಳಗಿರುವ ಬೆಳಕೇ ಕತ್ತಲೆಯಾದಲ್ಲಿ ಅದೆಂತಹ
ಕರಾಳ ಕತ್ತಲೆಯಾಗಿರಬಹುದು!"

**ದೇವರಿಗೂ ಧನಪಿಶಾಚಿಗೂ ಸೇವೆ ಮಾಡಲಾಗದು**

(ಲೂಕ 16:13, 12:22–31)

24 "ಯಾರೂ ಇಬ್ಬರು ಯಜಮಾನರಿಗೆ ಜೀತಮಾಡಲಾಗದು. ಅವನು ಒಬ್ಬನನ್ನು ದ್ವೇಷಿಸಿ
ಇನ್ನೊಬ್ಬನನ್ನು ಪ್ರೀತಿಸುತ್ತಾನೆ; ಅಥವಾ, ಒಬ್ಬನೊಡನೆ ಹೊಂದಿಕೊಂಡು ಇನ್ನೊಬ್ಬನನ್ನು ತಾತ್ಸಾರ
ಮಾಡುತ್ತಾನೆ. ದೇವರಿಗೂ ದ್ರವ್ಯಕ್ಕೂ ಒಟ್ಟಿಗೆ ಸೇವೆ ಮಾಡಲು ನಿಮ್ಮಿಂದಾಗದು."

**ಹಾಳು ಹೊಟ್ಟೆಗಾಗಿ ಗೇಣು ಬಟ್ಟೆಗಾಗಿ ಚಿಂತೆ ಏಕೆ?**

25 "ನಾನು ಹೇಳುವುದನ್ನು ಕೇಳಿ; 'ಪ್ರಾಣಧಾರಣೆಗೆ ಏನು ಉಣ್ಣುವುದು, ಏನು ಕುಡಿಯುವುದು;
ದೇಹರಕ್ಷಣೆಗೆ ಏನು ಹೊದೆಯುವುದು' ಎಂದು ಚಿಂತೆಮಾಡಬೇಡಿ. ಊಟಕ್ಕಿಂತ ಪ್ರಾಣ, ಉಡುಪಿಗಿಂತ
ದೇಹ ಮೇಲಾದುದಲ್ಲವೇ? 26ಆಕಾಶದಲ್ಲಿ ಹಾರಾಡುವ ಹಕ್ಕಿಗಳನ್ನು ಗಮನಿಸಿ; ಅವು ಬಿತ್ತುವುದಿಲ್ಲ,
ಕೊಯ್ಯುವುದಿಲ್ಲ, ಕಣಜಗಳಲ್ಲಿ ಕೂಡಿಡುವುದೂ ಇಲ್ಲ. ಆದರೂ ಸ್ವರ್ಗದಲ್ಲಿರುವ ನಿಮ್ಮ ತಂದೆ ಅವುಗಳನ್ನು
ಪೋಷಿಸುತ್ತಾರೆ. ಹಕ್ಕಿಗಳಿಗಿಂತ ನೀವು ಎಷ್ಟೋ ಮೇಲಾದವರಲ್ಲವೇ? 27ಚಿಂತಿಸಿ, ಚಿಂತಿಸಿ ನಿಮ್ಮ
ಜೀವನಾವಧಿಯನ್ನು ಕೊಂಚಕಾಲವಾದರೂ ದೀರ್ಘಮಾಡಲು ನಿಮ್ಮಲ್ಲಿ ಯಾರಿಂದಾದೀತು?
28ಉಡುಗೆತೊಡುಗೆಗಳ ಚಿಂತೆ ನಿಮಗೇಕೆ? ವನಕುಸುಮಗಳು ಬೆಳೆಯುವ ರೀತಿಯನ್ನು ಗಮನಿಸಿ ನೋಡಿ:
ಅವು ದುಡಿಯುವುದಿಲ್ಲ, ನೂಲುವುದಿಲ್ಲ. 29ಆದರೂ ಅರಸ ಸೊಲೊಮೋನನು ತನ್ನ ಸರ್ವವೈಭವದಲ್ಲಿ
ಇದ್ದಾಗಲೂ ಈ ಕುಸುಮಗಳಲ್ಲಿ ಒಂದರಷ್ಟೂ ಸುಂದರವಾದ ಉಡುಪನ್ನು ಧರಿಸಿರಲಿಲ್ಲ. 30ಅಲ್ಪ
ವಿಶ್ವಾಸಿಗಳೇ, ಇಂದಿದ್ದು ನಾಳೆ ಒಲೆಪಾಲಾಗುವ ಬಯಲಿನ ಹುಲ್ಲಿಗೆ ದೇವರು ಹೀಗೆ ಉಡಿಸಿದರೆ, ನಿಮಗೆ
ಮತ್ತಷ್ಟೂ ಮಾಡಲಾರರೇ? 31ಆದುದರಿಂದ ತಿನ್ನಲು ಏನು? ಕುಡಿಯಲು ಏನು? ಉಡಲು ಏನು? ಎಂದು
ಪೇಚಾಡಬೇಡಿ. 32ಇವೆಲ್ಲವುಗಳಿಗಾಗಿ ಪರಕೀಯರೂ ಪರದಾಡುತ್ತಾರೆ; ಇವೆಲ್ಲಾ ನಿಮಗೆ ಅವಶ್ಯ ಎಂದು
ಸ್ವರ್ಗದಲ್ಲಿರುವ ನಿಮ್ಮ ತಂದೆಗೆ ತಿಳಿದಿದೆ. 33ನೀವಾದರೋ ಮೊದಲು ದೇವರ ಸಾಮ್ರಾಜ್ಯಕ್ಕಾಗಿ, ಅವರ
ಸತ್ಸಂಬಂಧಕ್ಕಾಗಿ ತವಕಪಡಿ. ಇದರೊಂದಿಗೆ ಅವೆಲ್ಲವೂ ನಿಮಗೆ ನೀಡಲಾಗುವುದು. 34ಆದುದರಿಂದ
ನಾಳೆಯ ಚಿಂತೆ ನಿಮಗೆ ಬೇಡ. ನಾಳೆಯ ಚಿಂತೆ ನಾಳೆಗೇ ಇರಲಿ. ಇಂದಿನ ಪಾಡೇ ಇಂದಿಗೆ ಸಾಕು."

**"ಲೋಕದ ಡೊಂಕ ನೀವೇಕೆ ತಿದ್ದುವಿರಿ?"**

(ಲೂಕ 6:37–38, 41–42)

**7** "ನೀವು ಇತರರ ಬಗ್ಗೆ ತೀರ್ಪುಕೊಡಬೇಡಿ; ಆಗ ದೇವರು ನಿಮ್ಮ ಬಗ್ಗೆ ತೀರ್ಪುಕೊಡುವುದಿಲ್ಲ. 2ನೀವು
ಇತರರ ಬಗ್ಗೆ ಕೊಡುವ ತೀರ್ಪಿಗೆ ಅನುಗುಣವಾಗಿಯೇ ದೇವರು ನಿಮಗೂ ತೀರ್ಪುಕೊಡುವರು. ಇತರರಿಗೆ
ನೀವು ಕೊಟ್ಟ ಅಳತೆಯಲ್ಲೇ ದೇವರು ನಿಮಗೂ ಅಳೆದು ಕೊಡುವರು. 3ನಿನ್ನ ಕಣ್ಣಿನಲ್ಲಿರುವ ದಿಮ್ಮಿಯನ್ನು
ನೋಡದೆ ನಿನ್ನ ಸೋದರನ ಕಣ್ಣಿನಲ್ಲಿರುವ ಅಣುವನ್ನು ನೀನು ಗಮನಿಸುವುದೇಕೆ? 4ನಿನ್ನ ಕಣ್ಣಿನಲ್ಲಿ ಒಂದು
ದಿಮ್ಮಿಯೇ ಇರುವಾಗ, "ತಾಳು, ನಿನ್ನ ಕಣ್ಣಿನಲ್ಲಿರುವ ಅಣುವನ್ನು ತೆಗೆದು ಬಿಡುತ್ತೇನೆ," ಎಂದು ನಿನ್ನ
ಸೋದರನಿಗೆ ಹೇಗೆ ಹೇಳಬಲ್ಲೆ? 5ಎಲೈ ಕಪಟಿಯೇ, ಮೊದಲು ನಿನ್ನ ಕಣ್ಣಿನಲ್ಲಿರುವ ದಿಮ್ಮಿಯನ್ನು
ತೆಗೆದುಹಾಕು. ಅನಂತರ ನಿನ್ನ ಸೋದರನ ಕಣ್ಣಿನಿಂದ ಅಣುವನ್ನು ತೆಗೆಯಲು ನಿನ್ನ ಕಣ್ಣು ನಿಚ್ಚಳವಾಗಿ
ಕಾಣಿಸುವುದು."

6 "ಪವಿತ್ರವಾದುದನ್ನು ನಾಯಿಗಳಿಗೆ ಹಾಕಬೇಡಿ – ಅವು ನಿಮ್ಮ ಮೇಲೆ ತಿರುಗಿಬಿದ್ದು ನಿಮ್ಮನ್ನು
ಸೀಳಿಬಿಟ್ಟಾವು; ಮುತ್ತುಗಳನ್ನು ಹಂದಿಗಳ ಮುಂದೆ ಚೆಲ್ಲಬೇಡಿ – ಅವು ಆ ಮುತ್ತುಗಳನ್ನು ಕಾಲಿನಿಂದ
ತುಳಿದು ಹಾಕಿಯಾವು."

### ಫಲದಾಯಕ ಪ್ರಾರ್ಥನೆ

(ಲೂಕ 11:9–13)

7 "ಕೇಳಿರಿ, ನಿಮಗೆ ಕೊಡಲಾಗುವುದು; ಹುಡುಕಿರಿ, ನಿಮಗೆ ಸಿಗುವುದು; ತಟ್ಟಿರಿ, ನಿಮಗೆ ಬಾಗಿಲು
ತೆರೆಯಲಾಗುವುದು. 8ಏಕೆಂದರೆ ಕೇಳಿಕೊಳ್ಳುವ ಪ್ರತಿಯೊಬ್ಬನಿಗೂ ಕೊಡಲಾಗುವುದು, ಹುಡುಕುವವನಿಗೆ
ಸಿಗುವುದು, ತಟ್ಟುವವನಿಗೆ ಬಾಗಿಲು ತೆರೆಯಲಾಗುವುದು. 9ನಿಮ್ಮಲ್ಲಿ ಯಾವನು ತಾನೇ ತನ್ನ ಮಗ
ರೊಟ್ಟಿಯನ್ನು ಕೇಳಿದರೆ ಕಲ್ಲನ್ನು ಕೊಟ್ಟಾನು? 10ಮೀನನ್ನು ಕೇಳಿದರೆ ಹಾವನ್ನು ಕೊಟ್ಟಾನು? 11ಕೆಟ್ಟವರಾದ
ನೀವೇ ನಿಮ್ಮ ಮಕ್ಕಳಿಗೆ ಒಳ್ಳೆಯ ಪದಾರ್ಥಗಳನ್ನು ಕೊಡಬಲ್ಲವರಾದರೆ, ಅದಕ್ಕಿಂತಲೂ ಎಷ್ಟೋ ಹೆಚ್ಚಾಗಿ
ಸ್ವರ್ಗದಲ್ಲಿರುವ ನಿಮ್ಮ ತಂದೆ ತಮ್ಮನ್ನು ಕೇಳಿಕೊಳ್ಳುವವರಿಗೆ ಒಳ್ಳೆಯ ಕೊಡುಗೆಗಳನ್ನು ಕೊಡಬಲ್ಲರು!"

### ಸುವರ್ಣ ಸೂತ್ರ

12 "ಜನರು ನಿಮಗೆ ಏನೇನು ಮಾಡಬೇಕೆಂದು ನೀವು ಅಪೇಕ್ಷಿಸುತ್ತೀರೋ, ಅದನ್ನೇ ನೀವು ಅವರಿಗೆ
ಮಾಡಿ. ಧರ್ಮಶಾಸ್ತ್ರದ ಹಾಗೂ ಪ್ರವಾದನೆಗಳ ಸಾರ ಇದೇ."

### ವಿನಾಶಕ್ಕೆ ಒಯ್ಯುವ ವೀದಿ ವಿಶಾಲ

(ಲೂಕ 13:24)

13 "ಕಿರಿದಾದ ಬಾಗಿಲಿನಿಂದಲೇ ಒಳಕ್ಕೆ ಹೋಗಿರಿ. ಏಕೆಂದರೆ ವಿನಾಶಕ್ಕೆ ಒಯ್ಯುವ ಬಾಗಿಲು ಹಿರಿದು;
ಅದರ ಮಾರ್ಗ ಸರಾಗ; ಅದನ್ನು ಹಿಡಿಯುವವರು ಅನೇಕರು. 14ಅಮರ ಜೀವಕ್ಕೆ ಕೊಂಡೊಯ್ಯುವ
ಮಾರ್ಗ ದುರ್ಭರ; ಅದರ ಬಾಗಿಲು ಕಿರಿದು; ಅದನ್ನು ಗುರುತಿಸುವವರೋ ಕೆಲವರು."

### ಸುಳ್ಳು ಪ್ರವಾದಿಗಳಿದ್ದಾರೆ, ಜಾಗ್ರತೆ!

(ಲೂಕ 6:43–44)

15 "ಸುಳ್ಳು ಪ್ರವಾದಿಗಳ ಬಗ್ಗೆ ಎಚ್ಚರಿಕೆಯಿಂದಿರಿ. ಹೊರಗೆ ಕುರಿಯ ವೇಷದಲ್ಲಿ ಬಂದರೂ ಒಳಗೆ
ಅವರು ಕಿತ್ತುತಿನ್ನುವ ತೋಳಗಳು. 16ಅವರ ವರ್ತನೆಯಿಂದ ನೀವು ಅವರನ್ನು ಗುರುತು ಹಚ್ಚುವಿರಿ.
ಮುಳ್ಳುಕಳ್ಳಿಯಲ್ಲಿ ದ್ರಾಕ್ಷಿ ಕೊಯ್ಯುವುದುಂಟೇ? ಮದ್ದುಗುಣಿಕೆಯಲ್ಲಿ ಅಂಜೂರ ಕೀಳುವುದುಂಟೇ?
17ಅದರಂತೆಯೇ ಒಳ್ಳೆಯ ಮರ ಒಳ್ಳೆಯ ಹಣ್ಣನ್ನೂ ಕೆಟ್ಟ ಮರವು ಕೆಟ್ಟ ಹಣ್ಣನ್ನೂ ಕೊಡುತ್ತದೆ. 18ಒಳ್ಳೆಯ
ಮರ ಕೆಟ್ಟ ಹಣ್ಣನ್ನು ಕೊಡಲಾರದು, ಹಾಗೆಯೇ ಕೆಟ್ಟ ಮರ ಒಳ್ಳೆಯ ಹಣ್ಣನ್ನು ಕೊಡಲಾರದು. 19ಒಳ್ಳೆಯ
ಫಲವನ್ನು ಕೊಡದ ಪ್ರತಿಯೊಂದು ಮರವನ್ನೂ ಕಡಿದು ಬೆಂಕಿಯಲ್ಲಿ ಹಾಕಲಾಗುವುದು. 20ಆದ್ದರಿಂದ ಸುಳ್ಳು
ಪ್ರವಾದಿಗಳನ್ನು ಅವರ ನಡತೆಯಿಂದ ಗುರುತುಹಚ್ಚುವಿರಿ."

### ನುಡಿದಂತೆ ನಡೆ

(ಲೂಕ 13:25–27)

21 "ನನ್ನನ್ನು "ಸ್ವಾಮಿ, ಸ್ವಾಮಿ," ಎನ್ನುವ ಪ್ರತಿಯೊಬ್ಬನೂ ಸ್ವರ್ಗಸಾಮ್ರಾಜ್ಯವನ್ನು ಪ್ರವೇಶಿಸನು.
ಸ್ವರ್ಗದಲ್ಲಿರುವ ನನ್ನ ತಂದೆಯ ಚಿತ್ತಾನುಸಾರ ನಡೆಯುವವನು ಮಾತ್ರ ಅದನ್ನು ಪ್ರವೇಶಿಸುವನು.
22ತೀರ್ಪಿನ ದಿನದಂದು, "ಸ್ವಾಮಿ, ಸ್ವಾಮಿ, ನಿಮ್ಮ ಹೆಸರಿನಲ್ಲಿ ನಾವು ಪ್ರವಾದನೆ ಮಾಡಲಿಲ್ಲವೇ? ನಿಮ್ಮ
ಹೆಸರಿನಲ್ಲಿ ದೆವ್ವಗಳನ್ನು ಬಿಡಿಸಲಿಲ್ಲವೇ? ನಿಮ್ಮ ಹೆಸರಿನಲ್ಲಿ ಹಲವಾರು ಮಹತ್ಕಾರ್ಯಗಳನ್ನು
ಮಾಡಲಿಲ್ಲವೇ?" ಎಂದು ಅನೇಕರು ನನಗೆ ಹೇಳುವರು. 23ಆಗ ನಾನು ಅವರಿಗೆ 'ಇಂದಿಗೂ ನಿಮ್ಮ ಗುರುತೇ
ನನಗಿಲ್ಲ. ಅಧರ್ಮಿಗಳೇ, ನನ್ನಿಂದ ತೊಲಗಿರಿ,' ಎಂದು ಬಹಿರಂಗವಾಗಿ ಹೇಳಿಬಿಡುವೆನು."

## ಉಸುಬು ಮೇಲಿನ ಮನೆ ಕುಸಿದು ಬಿತ್ತು

(ಲೂಕ 6:47–49)

24 "ನನ್ನ ಈ ಮಾತನ್ನು ಕೇಳಿ ಅದರಂತೆ ನಡೆಯುವ ಪ್ರತಿಯೊಬ್ಬನೂ ಬಂಡೆಯ ಮೇಲೆ ಮನೆ
ಕಟ್ಟಿಕೊಂಡ ಬುದ್ದಿವಂತನನ್ನು ಹೋಲುತ್ತಾನೆ. 25ಮಳೆ ಬಿತ್ತು, ನೆರೆ ಬಂತು, ಗಾಳಿ ಬೀಸಿ ಆ ಮನೆಗೆ
ಅಪ್ಪಳಿಸಿತು. ಆದರೂ ಅದು ಬೀಳಲಿಲ್ಲ. ಕಾರಣ ಅದರ ಅಡಿಗಟ್ಟು ಬಂಡೆಯ ಮೇಲಿತ್ತು. 26ನನ್ನ ಈ
ಮಾತುಗಳನ್ನು ಕೇಳಿಯೂ ಅದರಂತೆ ನಡೆಯದ ಪ್ರತಿಯೊಬ್ಬನೂ ಮರಳಿನ ಮೇಲೆ ಮನೆ ಕಟ್ಟಿಕೊಂಡ
ಬುದ್ದಿಹೀನನನ್ನು ಹೋಲುತ್ತಾನೆ. 27ಮಳೆ ಬಿತ್ತು, ನೆರೆ ಬಂತು, ಗಾಳಿ ಬೀಸಿ ಆ ಮನೆಗೆ ಅಪ್ಪಳಿಸಿತು; ಅದು
ಕುಸಿದು ಬಿತ್ತು. ಅದಕ್ಕಾದ ಪತನವೋ ಅಗಾಧ!"

## ಬೋಧನೆಯ ಪ್ರಭಾವ

28 ಯೇಸುಸ್ವಾಮಿ ಇದೆಲ್ಲವನ್ನು ಹೇಳಿ ಮುಗಿಸಿದರು. ಅವರ ಬೋಧನೆ ಜನರಲ್ಲಿ ಅಮೋಘ
ಪ್ರಭಾವವನ್ನು ಬೀರಿತು. 29ಏಕೆಂದರೆ, ಅವರ ಧರ್ಮಶಾಸ್ತ್ರಿಗಳಂತೆ ಬೋಧಿಸದೆ ಯೇಸು ಅಧಿಕಾರ
ವಾಣಿಯಿಂದ ಪ್ರಬೋಧಿಸುತ್ತಿದ್ದರು.

## ಕುಷ್ಠರೋಗಿಯ ಮೇಲೆ ಕೃಪೆ

(ಮಾರ್ಕ 1:40–45; ಲೂಕ 5:12–16)

**8** ಯೇಸುಸ್ವಾಮಿ ಬೆಟ್ಟದಿಂದ ಇಳಿದು ಬಂದಾಗ ಜನರು ಗುಂಪುಗುಂಪಾಗಿ ಅವರನ್ನು ಹಿಂಬಾಲಿಸಿದರು.
2ಆಗ ಒಬ್ಬ ಕುಷ್ಠರೋಗಿ ಯೇಸುವಿನ ಮುಂದೆ ಬಂದು, ತಲೆಬಾಗಿ, "ಸ್ವಾಮಿ, ತಾವು ಮನಸ್ಸುಮಾಡಿದರೆ
ನನ್ನನ್ನು ಗುಣ ಮಾಡಬಲ್ಲಿರಿ," ಎಂದು ಬೇಡಿದನು. 3ಯೇಸು ಕೈಚಾಚಿ ಅವನನ್ನು ಮುಟ್ಟಿ,
"ಖಂಡಿತವಾಗಿಯೂ ನನಗೆ ಮನಸ್ಸಿದೆ, ಗುಣಹೊಂದು," ಎಂದರು. ತಕ್ಷಣವೇ ಅವನ ಕುಷ್ಠವು
ಮಾಯವಾಯಿತು. 4ಯೇಸು ಅವನಿಗೆ, "ಎಚ್ಚರಿಕೆ, ನೀನು ಗುಣಹೊಂದಿರುವುದನ್ನು ಯಾರಿಗೂ
ಹೇಳಕೂಡದು. ಆದರೆ ನೆಟ್ಟಗೆ ಯಾಜಕನ ಬಳಿಗೆ ಹೋಗು; ಅವನು ನಿನ್ನನ್ನು ಪರೀಕ್ಷಿಸಿ ನೋಡಲಿ.
ಅನಂತರ ಮೋಶೆ ನಿಯಮಿಸಿರುವ ಪ್ರಕಾರ ಶುದ್ಧೀಕರಣವಿಧಿಯನ್ನು ಅನುಸರಿಸು. ಇದು ಜನರಿಗೆ
ಸಾಕ್ಷಿಯಾಗಿರಲಿ," ಎಂದರು.

## ಅನ್ಯಧರ್ಮೀಯನಲ್ಲೂ ಅತಿಶಯ ವಿಶ್ವಾಸ!

(ಲೂಕ 7.1–10)

5 ಯೇಸುಸ್ವಾಮಿ ಕಫೆರ್ನವುಮ್ ಊರಿಗೆ ಬಂದಾಗ ಶತಾಧಿಪತಿಯೊಬ್ಬನು ಅವರನ್ನು
ಎದುರುಗೊಂಡನು. 6"ಪ್ರಭೂ, ನನ್ನ ಸೇವಕ ಮನೆಯಲ್ಲಿ ಪಾರ್ಶ್ವವಾಯು ರೋಗದಿಂದ ಹಾಸಿಗೆ
ಹಿಡಿದಿದ್ದಾನೆ. ಬಹಳವಾಗಿ ನರಳುತ್ತಿದ್ದಾನೆ," ಎಂದು ವಿನಂತಿಸಿದನು. 7ಯೇಸು, "ನಾನೇ ಬಂದು ಅವನನ್ನು
ಗುಣಪಡಿಸುತ್ತೇನೆ," ಎಂದರು. 8ಅದಕ್ಕೆ ಆ ಶತಾಧಿಪತಿ, "ಪ್ರಭುವೇ, ತಾವು ನನ್ನ ಮನೆಗೆ ಬರುವಷ್ಟು
ಯೋಗ್ಯತೆ ನನಗಿಲ್ಲ. ತಾವು ಒಂದೇ ಒಂದು ಮಾತು ಹೇಳಿದರೆ ಸಾಕು, ನನ್ನ ಸೇವಕ ಸ್ವಸ್ಥನಾಗುವನು.
9ಏಕೆಂದರೆ, ನಾನೂ ಮತ್ತೊಬ್ಬರ ಕೈಕೆಳಗಿರುವವನು. ನನ್ನ ಅಧೀನದಲ್ಲೂ ಸೈನಿಕರಿದ್ದಾರೆ. ಅವರಲ್ಲಿ ಒಬ್ಬನಿಗೆ
ನಾನು, 'ಬಾ' ಎಂದರೆ ಬರುತ್ತಾನೆ. ಇನ್ನೊಬ್ಬನಿಗೆ, 'ಹೋಗು' ಎಂದರೆ ಹೋಗುತ್ತಾನೆ. ಸೇವಕನಿಗೆ,
'ಇಂಥದ್ದನ್ನು ಮಾಡು' ಎಂದರೆ ಮಾಡುತ್ತಾನೆ," ಎಂದನು. 10ಈ ಮಾತನ್ನು ಕೇಳಿದ್ದೇ ಯೇಸುವಿಗೆ
ಅತ್ಯಾಶ್ಚರ್ಯವಾಯಿತು. ತಮ್ಮನ್ನು ಹಿಂಬಾಲಿಸಿ ಬರುತ್ತಿದ್ದ ಜನರನ್ನು ನೋಡಿ ಹೀಗೆಂದರು: "ಇಂಥ ಗಾಢ
ವಿಶ್ವಾಸವನ್ನು ನಾನು ಇಸ್ರಯೇಲ್ ಜನರಲ್ಲಿ ಕೂಡ ಕಾಣಲಿಲ್ಲವೆಂದು ನಿಮಗೆ ನಿಶ್ಚಯವಾಗಿ ಹೇಳುತ್ತೇನೆ.

[11]ಪೂರ್ವ ಪಶ್ಚಿಮ ದಿಕ್ಕುಗಳಿಂದ ಅನೇಕ ಜನರು ಬಂದು ಅಬ್ರಹಾಮ, ಇಸಾಕ, ಯಕೋಬರ ಸಮೇತ ಸ್ವರ್ಗಸಾಮ್ರಾಜ್ಯದ ಹಬ್ಬದೂಟದಲ್ಲಿ ಭಾಗಿಗಳಾಗುವರು. [12]ಆದರೆ ಯಾರು ಈ ಸಾಮ್ರಾಜ್ಯಕ್ಕೆ ಬಾಧ್ಯಸ್ಥರೋ ಅವರನ್ನೇ ಹೊರಗೆ ದಬ್ಬಲಾಗುವುದು; ಅಲ್ಲಿ, ಆ ಕಾರ್ಗತ್ತಲಲ್ಲಿ, ಅವರ ಗೋಳಾಟವೇನು! ಹಲ್ಲು ಕಡಿತವೇನು!"

13 ಅನಂತರ ಯೇಸು ಆ ಶತಾಧಿಪತಿಗೆ, "ಇನ್ನು ಮನೆಗೆ ಹೋಗು, ನೀನು ವಿಶ್ವಾಸಿಸಿದಂತೆಯೇ ಆಗುವುದು," ಎಂದರು. ಅದೇ ಕ್ಷಣದಲ್ಲಿ ಅವನ ಸೇವಕನು ಸ್ವಸ್ಥನಾದನು.

### ಕಾಯಿಲೆ ಕಷ್ಟಗಳ ನಿವಾರಣೆ

(ಮಾರ್ಕ 1:29–34; ಲೂಕ 4:38–41)

14 ತರುವಾಯ ಯೇಸುಸ್ವಾಮಿ ಪೇತ್ರನ ಮನೆಗೆ ಬಂದರು. ಅಲ್ಲಿ ಪೇತ್ರನ ಅತ್ತೆ ಜ್ವರದಿಂದ ಮಲಗಿರುವುದನ್ನು ಕಂಡರು. [15]ಯೇಸು ಆಕೆಯ ಕೈ ಮುಟ್ಟಿದುದೇ ಜ್ವರ ಬಿಟ್ಟುಹೋಯಿತು, ಆಕೆ ಎದ್ದು ಅವರನ್ನು ಸತ್ಕರಿಸಿದಳು.

16 ಸಂಜೆಯಾಯಿತು. ದೆವ್ವ ಹಿಡಿದಿದ್ದ ಅನೇಕರನ್ನು ಯೇಸುವಿನ ಬಳಿಗೆ ಕರೆತರಲಾಯಿತು. ಯೇಸು ತಮ್ಮ ಒಂದು ಮಾತಿನಿಂದಲೇ ದೆವ್ವಗಳನ್ನು ಬಿಡಿಸಿದರು. ಮಾತ್ರವಲ್ಲ, ರೋಗಪೀಡಿತರೆಲ್ಲರನ್ನೂ ಗುಣಪಡಿಸಿದರು. [17]ಹೀಗೆ,

"ನಮ್ಮ ದುರ್ಬಲತೆಗಳನ್ನು ವಹಿಸಿಕೊಂಡನು;
ನಮ್ಮ ರೋಗರುಜಿನಗಳನ್ನು
ಆತನೇ ಪರಿಹರಿಸಿದನು,"

ಎಂಬ ಯೆಶಾಯನ ಪ್ರವಾದನೆ ಈಡೇರಿತು.

### ಶಿಷ್ಯರಲ್ಲಿರಬೇಕಾದ ವೈರಾಗ್ಯ

(ಲೂಕ 9:57–62)

18 ದೊಡ್ಡ ಜನಸಮೂಹ ತಮ್ಮ ಸುತ್ತಲೂ ನಿಂತಿರುವುದನ್ನು ಯೇಸುಸ್ವಾಮಿ ನೋಡಿದರು. ಸರೋವರದ ಆಚೆಯ ದಡಕ್ಕೆ ಹೋಗಲು ತಮ್ಮ ಶಿಷ್ಯರಿಗೆ ಅಪ್ಪಣೆ ಮಾಡಿದರು. [19]ಆಗ ಒಬ್ಬ ಧರ್ಮಶಾಸ್ತ್ರಿ ಬಂದು, "ಗುರುವೇ, ನೀವು ಎಲ್ಲಿಗೆ ಹೋದರೂ ನಿಮ್ಮನ್ನು ಹಿಂಬಾಲಿಸಿ ಬರುತ್ತೇನೆ," ಎಂದನು. [20]ಅದಕ್ಕೆ ಯೇಸು, "ನರಿಗಳಿಗೆ ಗುಹೆಗಳುಂಟು; ಆಕಾಶದ ಪಕ್ಷಿಗಳಿಗೆ ಗೂಡುಗಳುಂಟು; ಆದರೆ ನರಪುತ್ರನಿಗೆ ತಲೆಯಿಟ್ಟು ಮಲಗಲೂ ಸ್ಥಳ ಇಲ್ಲ," ಎಂದರು. [21]ಶಿಷ್ಯರಲ್ಲಿ ಮತ್ತೊಬ್ಬನು ಮುಂದೆ ಬಂದು, "ಸ್ವಾಮಿ, ಮೊದಲು ನನ್ನ ತಂದೆಯ ಉತ್ತರಕ್ರಿಯೆಗಳನ್ನು ಮುಗಿಸಲು ಸಮಯ ಕೊಡಿ," ಎಂದು ಕೇಳಿದನು. [22]ಅವನಿಗೆ ಯೇಸು, "ಸತ್ತವರೇ ತಮ್ಮ ಸತ್ತವರನ್ನು ಸಮಾಧಿ ಮಾಡಿಕೊಳ್ಳಲಿ; ನೀನು ನನ್ನನ್ನು ಹಿಂಬಾಲಿಸು," ಎಂದರು.

### ಯೇಸು ಕಡಲಿಗೂ ಒಡೆಯ

(ಮಾರ್ಕ 4:35–41; ಲೂಕ 8:22–25)

23 ಆಮೇಲೆ ಯೇಸುಸ್ವಾಮಿ ದೋಣಿಯನ್ನು ಹತ್ತಿದರು. ಶಿಷ್ಯರೂ ಹತ್ತಿ ಅವರ ಸಂಗಡ ಹೋದರು. [24]ಇದ್ದಕ್ಕಿಂತ ಹಾಗೆ ಸರೋವರದಲ್ಲಿ ರಭಸವಾದ ಬಿರುಗಾಳಿ ಎದ್ದಿತು. ದೋಣಿ ಅಲೆಗಳಿಂದ ಮುಳುಗಿ ಹೋಗುವುದರಲ್ಲಿತ್ತು. ಯೇಸುವಾದರೋ ನಿದ್ರಾವಶರಾಗಿದ್ದರು. [25]ಶಿಷ್ಯರು ಹತ್ತಿರಕ್ಕೆ ಬಂದು ಅವರನ್ನು ಎಬ್ಬಿಸಿ, "ಸ್ವಾಮಿ, ಕಾಪಾಡಿ. ನಾವು ನೀರುಪಾಲಾಗುತ್ತಿದ್ದೇವೆ," ಎಂದರು. [26]ಅದಕ್ಕೆ ಯೇಸು, "ಅಲ್ಪ ವಿಶ್ವಾಸಿಗಳೇ, ನಿಮಗೇಕೆ ಇಷ್ಟು ಭಯ?" ಎಂದರು. ಅನಂತರ ಎದ್ದು ನಿಂತು ಸುಂಟರಗಾಳಿಯನ್ನೂ ಸರೋವರವನ್ನೂ ಗದರಿಸಿದರು. [27]ಆಗ ವಾತಾವರಣ ಪ್ರಶಾಂತವಾಯಿತು. ಶಿಷ್ಯರು ನಿಬ್ಬೆರಗಾದರು.

"ಗಾಳಿಯೂ ಸರೋವರವೂ ಇವರು ಹೇಳಿದ್ದಂತೆ ಕೇಳಬೇಕಾದರೆ ಇವರೆಂತಹ ವ್ಯಕ್ತಿಯಾಗಿರಬೇಕು!" ಎಂದುಕೊಂಡರು.

### ದೆವ್ವ ಹಿಡಿದಿದ್ದ ಮತ್ತಿಬ್ಬರಿಗೆ ವಿಮೋಚನೆ

(ಮಾರ್ಕ 5:1–20; ಲೂಕ 8:26–39)

28 ಯೇಸುಸ್ವಾಮಿ ಗಲಿಲೇಯ ಸರೋವರವನ್ನು ದಾಟಿ, ಆಚೆಯ ಕಡೆಯಿದ್ದ ಗದರೇನ ಎಂಬ ಪ್ರಾಂತ್ಯಕ್ಕೆ ಬಂದರು. ದೆವ್ವ ಹಿಡಿದಿದ್ದ ಇಬ್ಬರು ಸಮಾಧಿಯ ಗುಹೆಗಳಿಂದ ಹೊರಬಂದು ಅವರಿಗೆ ಎದುರಾದರು. ಅವರಿಬ್ಬರೂ ಮಹಾಕ್ರೂರಿಗಳು. ಈ ಕಾರಣ ಯಾರೂ ಆ ಮಾರ್ಗವಾಗಿ ಹೋಗಲಾಗುತ್ತಿರಲಿಲ್ಲ. 29ಅವರು ಯೇಸುವನ್ನು ನೋಡಿದೊಡನೆಯೇ "ಓ ದೇವರ ಪುತ್ರನೇ, ನಿಮಗೇಕೆ ನಮ್ಮ ಗೊಡವೆ? ನಿಯಮಿತಕಾಲಕ್ಕೆ ಮುಂಚೆಯೇ ನಮ್ಮನ್ನು ಪೀಡಿಸಲು ಬಂದಿರಾ?" ಎಂದು ಕೂಗಿಕೊಂಡರು.

30 ಹಂದಿಗಳ ದೊಡ್ಡ ಹಿಂಡೊಂದು ಅಲ್ಲಿಂದ ಸ್ವಲ್ಪ ದೂರದಲ್ಲೇ ಮೇಯುತ್ತಿತ್ತು. 31"ನೀವು ನಮ್ಮನ್ನು ಹೊರದೂಡಿದ್ದೇ ಆದರೆ ಆ ಹಂದಿಗಳ ಹಿಂಡಿಗೆ ನಮ್ಮನ್ನು ಕಳುಹಿಸಿಕೊಡಿ," ಎಂದು ಆ ದೆವ್ವಗಳು ಯೇಸುವನ್ನು ಬೇಡಿಕೊಂಡವು. 32ಯೇಸು, "ಹೋಗಿ" ಎಂದು ಅಪ್ಪಣೆಯಿತ್ತರು. ದೆವ್ವಗಳು ಹೊರಗೆ ಬಂದು ಹಂದಿಗಳ ಹಿಂಡನ್ನು ಹೊಕ್ಕವು. ಆಕ್ಷಣವೇ ಆ ಹಿಂಡೆಲ್ಲಾ ಬೆಟ್ಟದ ಕಡಿದಾದ ಬದಿಯಿಂದ ಧಾವಿಸಿ, ಸರೋವರಕ್ಕೆ ಬಿದ್ದು, ನೀರುಪಾಲಾಗಿ ಹೋಯಿತು. 33ಹಂದಿ ಮೇಯಿಸುತ್ತಿದ್ದವರು ಅಲ್ಲಿಂದ ಪಲಾಯನ ಮಾಡಿ ಊರಿಗೆ ಓಡಿಹೋಗಿ ನಡೆದದ್ದೆಲ್ಲವನ್ನೂ ಮತ್ತು ದೆವ್ವ ಮೆಟ್ಟಿದ್ದವರಿಗೆ ಸಂಭವಿಸಿದ್ದನ್ನೂ ವರದಿಮಾಡಿದರು. 34ಆಗ ಊರಿಗೆ ಊರೇ ಯೇಸುವನ್ನು ನೋಡಲು ಬಂದಿತು. ಅವರನ್ನು ಕಂಡು ತಮ್ಮ ಆಸುಪಾಸನ್ನು ಬಿಟ್ಟುಹೋಗಬೇಕೆಂದು ಮನವಿಮಾಡಿಕೊಂಡಿತು.

### ಪಾಪವಿಮೋಚನೆ ಯಾರಿಂದ ಸಾಧ್ಯ?

(ಮಾರ್ಕ 2:1–12; ಲೂಕ 5:17–26)

**9** ಯೇಸುಸ್ವಾಮಿ ದೋಣಿ ಹತ್ತಿ ಮರಳಿ ಸರೋವರವನ್ನು ದಾಟಿ ತಮ್ಮ ಸ್ವಂತ ಊರಿಗೆ ಬಂದರು. 2ಆಗ ಜನರು ಒಬ್ಬ ಪಾರ್ಶ್ವವಾಯು ರೋಗಿಯನ್ನು ಹಾಸಿಗೆಯ ಸಮೇತ ಹೊತ್ತುಕೊಂಡು ಅವರ ಬಳಿಗೆ ತಂದರು. ಯೇಸು ಅವರ ವಿಶ್ವಾಸವನ್ನು ಮೆಚ್ಚಿ, ಆ ಪಾರ್ಶ್ವವಾಯು ರೋಗಿಗೆ, "ಮಗು ಧೈರ್ಯದಿಂದಿರು. ನಿನ್ನ ಪಾಪಗಳನ್ನು ಕ್ಷಮಿಸಲಾಗಿದೆ," ಎಂದರು. 3ಆಗ ಅಲ್ಲಿದ್ದ ಧರ್ಮಶಾಸ್ತ್ರಿಗಳಲ್ಲಿ ಕೆಲವರು, "ಇವನು ದೇವದೂಷಣೆ ಮಾಡುತ್ತಿದ್ದಾನೆ," ಎಂದುಕೊಂಡರು. 4ಯೇಸು ಅವರ ಆಲೋಚನೆಗಳನ್ನು ಅರಿತುಕೊಂಡು, "ನೀವು ಮನಸ್ಸಿನಲ್ಲೇಕೆ ದುರಾಲೋಚನೆ ಮಾಡುತ್ತಿದ್ದೀರಿ? 5"ನಿನ್ನ ಪಾಪಗಳನ್ನು ಕ್ಷಮಿಸಲಾಗಿದೆ" ಎನ್ನುವುದು ಸುಲಭವೋ ಅಥವಾ 'ಎದ್ದು ನಡೆ' ಎನ್ನುವುದು ಸುಲಭವೋ? 6ಭೂಲೋಕದಲ್ಲಿ ಪಾಪಗಳನ್ನು ಕ್ಷಮಿಸಲು ನರಪುತ್ರನಿಗೆ ಅಧಿಕಾರ ಉಂಟೆಂದು ಈ ಮೂಲಕ ನಿಮಗೆ ಖಚಿತವಾಗಬೇಕು," ಎಂದು ಹೇಳಿ, ಆ ಪಾರ್ಶ್ವವಾಯು ರೋಗಿಯನ್ನು ನೋಡಿ, "ಎದ್ದೇಳು, ನಿನ್ನ ಹಾಸಿಗೆಯನ್ನು ಎತ್ತಿಕೊಂಡು ಮನೆಗೆ ಹೋಗು" ಎಂದರು. 7ಅದರಂತೆಯೇ, ಆ ರೋಗಿ ಎದ್ದು ಮನೆಗೆ ಹೊರಟುಹೋದನು. 8ಇದನ್ನು ಕಂಡ ಜನರು ತಲ್ಲಣಗೊಂಡರು. ಮಾನವನಿಗೆ ಇಂಥ ಅಧಿಕಾರ ಕೊಟ್ಟ ದೇವರನ್ನು ಕೊಂಡಾಡಿದರು.

## ಸಮಾಜದಿಂದ ಬಹಿಷ್ಕೃತ – ಯೇಸುವಿನಿಂದ ಸ್ವೀಕೃತ

(ಮಾರ್ಕ 2:13–17; ಲೂಕ 5:27–32)

9 ಯೇಸುಸ್ವಾಮಿ ಆ ಸ್ಥಳವನ್ನು ಬಿಟ್ಟು ಮುಂದಕ್ಕೆ ಹೋಗುತ್ತಿದ್ದಾಗ ಮತ್ತಾಯ ಎಂಬುವನನ್ನು
ಕಂಡರು. ಅವನು ಸುಂಕ ವಸೂಲಿಗಾಗಿ ಉಕ್ಕಡದಲ್ಲಿ ಕುಳಿತಿದ್ದನು. "ನನ್ನನ್ನು ಹಿಂಬಾಲಿಸು," ಎಂದು ಹೇಳಿ
ಯೇಸು ಅವನನ್ನು ಕರೆದರು. ಮತ್ತಾಯನು ಎದ್ದು ಅವರನ್ನು ಹಿಂಬಾಲಿಸಿದನು.

10 ಇದಾದ ಮೇಲೆ ಯೇಸುಸ್ವಾಮಿ ಮತ್ತಾಯನ ಮನೆಯಲ್ಲಿ ಊಟಕ್ಕೆ ಕುಳಿತಿದ್ದರು. ಬಹುಮಂದಿ
**'ಸುಂಕದವರೂ'**, **'ಪಾಪಿಷ್ಠರೂ'** ಅಲ್ಲಿಗೆ ಬಂದರು. ಯೇಸು ಮತ್ತು ಅವರ ಶಿಷ್ಯರು ಕುಳಿತಿದ್ದ ಪಂಕ್ತಿಯಲ್ಲೇ
ಇವರೂ ಊಟಕ್ಕೆ ಕುಳಿತರು. [11]ಫರಿಸಾಯರು ಇದನ್ನು ಕಂಡದ್ದೇ ಯೇಸುವಿನ ಶಿಷ್ಯರನ್ನು ಉದ್ದೇಶಿಸಿ, "ನಿಮ್ಮ
ಗುರು ಇಂತಹ ಬಹಿಷ್ಕೃತ ಜನರ ಜೊತೆಯಲ್ಲಿ ಊಟ ಮಾಡುವುದೇ?" ಎಂದು ಆಕ್ಷೇಪಿಸಿದರು. [12]ಇದನ್ನು
ಕೇಳಿಸಿಕೊಂಡ ಯೇಸು, "ವೈದ್ಯನ ಅವಶ್ಯಕತೆ ಇರುವುದು ರೋಗಿಗಳಿಗೆ; ಆರೋಗ್ಯವಂತರಿಗಲ್ಲ. [13]ನೀವು
ಹೋಗಿ, "ನನಗೆ ಬೇಕಾದುದು ದಯೆ, ಯಜ್ಞಬಲಿಯಲ್ಲ" ಎಂದು ಪವಿತ್ರ ಗ್ರಂಥದಲ್ಲಿ ಬರೆದಿರುವ ವಾಕ್ಯದ
ಅರ್ಥವನ್ನು ಕಲಿತುಕೊಳ್ಳಿ. ನಾನು ಕರೆಯಲು ಬಂದಿರುವುದು ಧರ್ಮಿಷ್ಠರನ್ನಲ್ಲ, ಪಾಪಿಷ್ಠರನ್ನು" ಎಂದರು.

## ಹಳೆ ಬಟ್ಟೆಗೆ ಹೊಸ ತೇಪೆಯೇ?

(ಮಾರ್ಕ 2:18–22, ಲೂಕ 5:33–39)

14 ಬಳಿಕ ಯೊವಾನ್ನನ ಶಿಷ್ಯರು ಯೇಸುಸ್ವಾಮಿಯ ಬಳಿಗೆ ಬಂದರು. "ನಾವೂ ಫರಿಸಾಯರೂ
ಉಪವಾಸ ವ್ರತವನ್ನು ಕೈಗೊಳ್ಳುತ್ತೇವೆ. ಆದರೆ ನಿಮ್ಮ ಶಿಷ್ಯರು ಏಕೆ ಹಾಗೆ ಮಾಡುವುದಿಲ್ಲ?" ಎಂದು ಪ್ರಶ್ನೆ
ಹಾಕಿದರು. [15]ಅದಕ್ಕೆ ಯೇಸು, "ಮದುವಣಿಗನು ಜೊತೆಯಲ್ಲಿ ಇರುವಷ್ಟು ಕಾಲ ಅವನ ಆಪ್ತರು
ದುಃಖಪಡುವುದುಂಟೇ? ಮದುವಣಿಗನು ಅವರಿಂದ ಅಗಲಬೇಕಾಗುವ ಕಾಲವು ಬರುವುದು; ಆಗ ಅವರು
ಉಪವಾಸ ಮಾಡುವರು.

16 "ಹಳೆಯ ಅಂಗಿಗೆ ಹೊಸ ಬಟ್ಟೆಯ ತೇಪೆಯನ್ನು ಯಾರೂ ಹಾಕುವುದಿಲ್ಲ. ಏಕೆಂದರೆ ಹೊಸ
ತೇಪೆಯು ಹಳೆಯ ಅಂಗಿಯನ್ನು ಹಿಂಜುವುದರಿಂದ ಹರಕು ಹೆಚ್ಚಾಗುತ್ತದೆ. [17]ಅಂತೆಯೇ ಹಳೆಯ
ಬುದ್ದಲಿಗಳಲ್ಲಿ ಹೊಸ ಮದ್ಯವನ್ನು ತುಂಬಿಡುವುದಿಲ್ಲ. ತುಂಬಿಟ್ಟರೆ ಬುದ್ದಲಿಗಳು ಬಿರಿಯುತ್ತವೆ, ಮದ್ಯವು
ಚೆಲ್ಲಿ ಹೋಗುತ್ತದೆ; ಬುದ್ದಲಿಗಳೂ ಹಾಳಾಗುತ್ತವೆ. ಹೊಸ ಮದ್ಯವನ್ನು ಹೊಸ ಬುದ್ದಲಿಗಳಲ್ಲೇ
ತುಂಬಿಡುತ್ತಾರೆ. ಆಗ ಎರಡೂ ಉಳಿಯುತ್ತವೆ," ಎಂದರು.

## ಸಾವು ನೋವುಗಳ ನಿವಾರಕ

(ಮಾರ್ಕ 5:21–43; ಲೂಕ 8:40–56)

18 ಯೇಸುಸ್ವಾಮಿ ಹೀಗೆ ಬೋಧಿಸುತ್ತಿರುವಾಗಲೇ ಯೆಹೂದ್ಯ ಅಧಿಕಾರಿಯೊಬ್ಬನು ಅಲ್ಲಿಗೆ
ಬಂದನು. ಅವನು ಯೇಸುವಿನ ಮುಂದೆ ಮೊಣಕಾಲೂರಿ, "ನನ್ನ ಮಗಳು ಈಗ ತಾನೆ ಸತ್ತುಹೋದಳು.
ಆದರೂ ತಾವು ದಯಮಾಡಿಸಿ ತಮ್ಮ ಹಸ್ತವನ್ನು ಆಕೆಯ ಮೇಲಿಡಬೇಕು. ಅವಳು ಮರಳಿ ಬದುಕುವಳು,"
ಎಂದು ಬೇಡಿಕೊಂಡನು. [19]ಯೇಸು ಎದ್ದು ಅವನ ಹಿಂದೆ ಹೊರಟರು. ಶಿಷ್ಯರೂ ಹಿಂಬಾಲಿಸಿ ಹೋದರು.

20 ಹೋಗುತ್ತಿದ್ದಾಗ, ಹನ್ನೆರಡು ವರ್ಷಗಳಿಂದ ರಕ್ತಸ್ರಾವ ರೋಗದಿಂದ ಬಹಳವಾಗಿ ನರಳುತ್ತಿದ್ದ
ಒಬ್ಬ ಮಹಿಳೆ ಹಿಂಬದಿಯಿಂದ ಬಂದು ಯೇಸುಸ್ವಾಮಿಯ ಉಡುಪಿನ ಅಂಚನ್ನು ಮುಟ್ಟಿದಳು. [21]"ನಾನು
ಅವರ ಉಡುಪನ್ನು ಮುಟ್ಟಿದರೂ ಸಾಕು, ಗುಣಹೊಂದುವೆನು" ಎಂದುಕೊಂಡಿದ್ದಳು ಆಕೆ. [22]ಯೇಸು
ಹಿಂದಿರುಗಿ ಆಕೆಯನ್ನು ನೋಡಿ, "ಮಗಳೇ, ಹೆದರಬೇಡ; ನಿನ್ನ ವಿಶ್ವಾಸ ನಿನ್ನನ್ನು ಗುಣಪಡಿಸಿದೆ," ಎಂದರು.
ಆ ಕ್ಷಣದಲ್ಲೇ ಆಕೆ ವ್ಯಾಧಿಯಿಂದ ಮುಕ್ತಳಾದಳು.

23 ಯೇಸು ಆ ಅಧಿಕಾರಿಯ ಮನೆಯನ್ನು ತಲುಪಿದರು. ಅಲ್ಲಿ ವಾದ್ಯಗಾರರನ್ನೂ ಗದ್ದಲ
ಮಾಡುತ್ತಿದ್ದ ಜನಜಂಗುಳಿಯನ್ನೂ ಕಂಡು, [24]"ಎಲ್ಲರೂ ಇಲ್ಲಿಂದ ಹೊರಡಿರಿ, ಬಾಲಕಿ ಸತ್ತಿಲ್ಲ;
ನಿದ್ರಿಸುತ್ತಿದ್ದಾಳೆ" ಎಂದರು. ಜನರು ನಕ್ಕು ಅವರನ್ನು ಪರಿಹಾಸ್ಯ ಮಾಡಿದರು. [25]ಆದರೂ ಜನರ ಗುಂಪನ್ನು

ಹೊರಗೆ ಕಳುಹಿಸಿ, ಯೇಸು ಕೊಠಡಿಯೊಳಕ್ಕೆ ಹೋಗಿ, ಬಾಲಕಿಯ ಕೈಹಿಡಿದು ಎಬ್ಬಿಸಿದರು. ಆಕೆ ಎದ್ದಳು.
26ಈ ಸಮಾಚಾರ ಆ ನಾಡಿನಲ್ಲೆಲ್ಲಾ ಹಬ್ಬಿ ಹರಡಿತು.

## ಅಂಧರಿಗೆ ದೃಷ್ಟಿದಾನ

27 ಯೇಸುಸ್ವಾಮಿ ಅಲ್ಲಿಂದ ಹೋಗುತ್ತಿರುವಾಗ ಇಬ್ಬರು ಕುರುಡರು, "ಸ್ವಾಮಿ, ದಾವೀದ ಕುಲಪುತ್ರರೇ, ನಮಗೆ ದಯೆತೋರಿ," ಎಂದು ದನಿಯೆತ್ತಿ ಕೂಗಿಕೊಳ್ಳುತ್ತಾ ಅವರ ಹಿಂದೆ ಹೋದರು.
28ಯೇಸು ಮನೆ ಸೇರಿದಾಗ ಆ ಕುರುಡರು ಸಮೀಪಕ್ಕೆ ಬಂದರು. "ನಾನು ನಿಮ್ಮನ್ನು ಗುಣಪಡಿಸಬಲ್ಲೆನೆಂದು ನೀವು ವಿಶ್ವಾಸವಿಡುತ್ತೀರೋ?" ಎಂದು ಯೇಸು ಪ್ರಶ್ನಿಸಿದರು. "ಹೌದು ಸ್ವಾಮಿ, ಹೌದು," ಎಂದು ಅವರು ಉತ್ತರವಿತ್ತರು.
29ಆಗ ಯೇಸು ಅವರ ಕಣ್ಣುಗಳನ್ನು ಮುಟ್ಟಿ, "ನೀವು ವಿಶ್ವಾಸವಿಟ್ಟ ಪ್ರಕಾರವೇ ನಿಮಗೆ ಗುಣವಾಗಲಿ," ಎಂದರು.
30ಅವರಿಗೆ ದೃಷ್ಟಿ ಬಂದಿತು. "ಈ ವಿಷಯ ಯಾರಿಗೂ ತಿಳಿಯಬಾರದು, ಎಚ್ಚರಿಕೆ!" ಎಂದು ಯೇಸು ಅವರಿಗೆ ಕಟ್ಟಪ್ಪಣೆ ಮಾಡಿದರು.
31ಆದರೂ ಅವರು ಹೋಗಿ ಆ ಪ್ರಾಂತ್ಯದಲ್ಲೆಲ್ಲಾ ಸ್ವಾಮಿಯ ಕೀರ್ತಿಯನ್ನು ಹರಡಿದರು.

## ಮೂಕನಿಗೆ ವಾಕ್‌ಶಕ್ತಿಯ ದಾನ

32 ಕುರುಡರು ಹೊರಟುಹೋಗುತ್ತಿದ್ದ ಹಾಗೆ, ದೆವ್ವ ಹಿಡಿದಿದ್ದ ಒಬ್ಬ ಮೂಕನನ್ನು ಕೆಲವರು ಯೇಸುಸ್ವಾಮಿಯ ಬಳಿಗೆ ಕರೆತಂದರು.
33ದೆವ್ವ ಬಿಡಿಸಿದ ಮೇಲೆ ಆ ಮೂಕನಿಗೆ ಮಾತು ಬಂದಿತು. ಜನರೆಲ್ಲರೂ ಆಶ್ಚರ್ಯಚಕಿತರಾದರು. "ಇಂತಹ ಕಾರ್ಯವನ್ನು ನಾವು ಇಸ್ರಯೇಲಿನಲ್ಲಿ ಕಂಡದ್ದೇ ಇಲ್ಲ!" ಎಂದುಕೊಂಡರು.
34ಆದರೆ ಫರಿಸಾಯರು, "ಇವನು ದೆವ್ವಗಳೊಡೆಯನ ಶಕ್ತಿಯಿಂದಲೇ ದೆವ್ವಗಳನ್ನು ಬಿಡಿಸುತ್ತಾನೆ," ಎಂದರು.

## ದಯಾಮಯ ಯೇಸು

35 ಯೇಸುಸ್ವಾಮಿ, ಊರೂರುಗಳಲ್ಲೂ ಹಳ್ಳಿಹಳ್ಳಿಗಳಲ್ಲೂ ಸಂಚಾರ ಮಾಡುತ್ತಾ ಅಲ್ಲಿಯ ಪ್ರಾರ್ಥನಾಮಂದಿರಗಳಲ್ಲಿ ಬೋಧಿಸಿದರು. ಶ್ರೀ ಸಾಮ್ರಾಜ್ಯದ ಶುಭಸಂದೇಶವನ್ನು ಸಾರಿದರು. ಎಲ್ಲಾ ತರಹದ ರೋಗರುಜಿನಗಳನ್ನು ಗುಣಪಡಿಸಿದರು.
36ಆ ಜನಸಮೂಹವನ್ನು ಕಂಡಾಗ ಅವರ ಮನ ಕರಗಿತು.
37ಏಕೆಂದರೆ, ಕುರುಬನಿಲ್ಲದ ಕುರಿಗಳಂತೆ ಅವರು ತೊಳಲಿದ್ದರು ಹಾಗೂ ಬಳಲಿದ್ದರು.
38ಆದುದರಿಂದ ಯೇಸು ತಮ್ಮ ಶಿಷ್ಯರಿಗೆ, "ಬೆಳೆಯೇನೋ ಹೇರಳ; ಕೊಯಿಲಿಗಾರರೋ ವಿರಳ; ಈ ಕಾರಣ ತನ್ನ ಕೊಯಿಲಿಗೆ ಆಳುಗಳನ್ನು ಕಳುಹಿಸುವಂತೆ ಬೆಳೆಯ ಯಜಮಾನನನ್ನು ಪ್ರಾರ್ಥಿಸಿರಿ," ಎಂದರು.

## ಪ್ರೇಷಿತರ ಪಟ್ಟಿ

(ಮಾರ್ಕ 3:13–19; ಲೂಕ 6:12–16)

**10** ಯೇಸುಸ್ವಾಮಿ ತಮ್ಮ ಹನ್ನೆರಡು ಮಂದಿ ಶಿಷ್ಯರನ್ನು ಒಟ್ಟಿಗೆ ಕರೆದು, ಎಲ್ಲ ರೋಗರುಜಿನಗಳನ್ನು ಗುಣಪಡಿಸುವುದಕ್ಕೂ ದೆವ್ವಗಳನ್ನು ಬಿಡಿಸುವುದಕ್ಕೂ ಅವರಿಗೆ ಅಧಿಕಾರವನ್ನು ಕೊಟ್ಟರು.
2ಆ ಹನ್ನೆರಡು ಮಂದಿ ಪ್ರೇಷಿತರ ಹೆಸರುಗಳು ಇವು; ಮೊದಲನೆಯವನು ಪೇತ್ರ ಎನಿಸಿಕೊಂಡ ಸಿಮೋನ ಮತ್ತು ಅವನ ಸಹೋದರ ಅಂದ್ರೆಯ; ಜೆಬೆದಾಯನ ಮಗ ಯಕೋಬ ಮತ್ತು ಅವನ ಸಹೋದರ ಯೊವಾನ್ನ;
3ಫಿಲಿಪ್ಪ ಮತ್ತು ಬಾರ್ತೊಲೊಮಾಯ; ತೋಮ ಮತ್ತು ಸುಂಕ ವಸೂಲಿಗಾರ ಮತ್ತಾಯ; ಅಲ್ಫಾಯನ ಮಗ

ಯಕೋಬ ಮತ್ತು ತದ್ದಾಯ; [4]ದೇಶಾಭಿಮಾನಿ ಎಂದು ಕರೆಯಲಾದ ಸಿಮೋನ ಮತ್ತು ಗುರುದ್ರೋಹಿ
ಆಗಲಿದ್ದ ಯೂದ ಇಸ್ಕರಿಯೋತ.

### ಶಿಷ್ಯರಿಗಿತ್ತ ಆದೇಶ

(ಮಾರ್ಕ 6:7–13; ಲೂಕ 9:1–6)

5 ಆ ಹನ್ನೆರಡು ಮಂದಿಯ ನಿಯೋಗವನ್ನು ಕಳುಹಿಸುವಾಗ ಯೇಸುಸ್ವಾಮಿ ಅವರಿಗೆ ಕೊಟ್ಟ
ಆದೇಶ ಇದು: "ಪರಕೀಯರತ್ತ ಹೋಗಲೇಬೇಡಿ; ಸಮಾರಿಯದವರ ಯಾವ ಊರಿಗೂ ಕಾಲಿಡಬೇಡಿ.
[6]ಅದಕ್ಕೆ ಬದಲು ತಪ್ಪಿಹೋದ ಕುರಿಗಳಂತೆ ಇರುವ ಇಸ್ರಯೇಲ್ ಜನರ ಬಳಿಗೆ ಹೋಗಿರಿ; [7]ಹೋಗುತ್ತಾ,
'ಸ್ವರ್ಗಸಾಮ್ರಾಜ್ಯವು ಸಮೀಪಿಸಿದೆ' ಎಂದು ಬೋಧನೆ ಮಾಡಿರಿ. [8]ರೋಗಿಗಳನ್ನು ಗುಣಪಡಿಸಿರಿ, ಸತ್ತವರನ್ನು
ಮತ್ತೆ ಬದುಕಿಸಿರಿ, ಕುಷ್ಠರೋಗಿಗಳನ್ನು ಸ್ವಸ್ಥಮಾಡಿರಿ, ದೆವ್ವಗಳನ್ನು ಬಿಡಿಸಿರಿ. ಉಚಿತವಾಗಿ ಪಡೆದಿರುವಿರಿ,
ಉಚಿತವಾಗಿ ಕೊಡಿ. [9]ಜೇಬಿನಲ್ಲಿ ಚಿನ್ನ, ಬೆಳ್ಳಿ, ತಾಮ್ರವನ್ನಾಗಲಿ, [10]ಪ್ರಯಾಣಕ್ಕೆಂದು ಜೋಳಿಗೆಯನ್ನಾಗಲಿ,
ಎರಡು ಅಂಗಿಗಳನ್ನಾಗಲಿ, ಕಾಲಿಗೆ ಕೆರವನ್ನಾಗಲಿ, ಕೈಗೆ ದಂಡವನ್ನಾಗಲಿ ತೆಗೆದುಕೊಳ್ಳಬೇಡಿ. ಏಕೆಂದರೆ,
ದುಡಿಮೆಗಾರನು ಜೀವನಾಧಾರಕ್ಕೆ ಬಾಧ್ಯನು.

11 "ನೀವು ಒಂದು ಪಟ್ಟಣಕ್ಕಾಗಲಿ, ಹಳ್ಳಿಗಾಗಲಿ ಹೋದಾಗ, ಅಲ್ಲಿ ನಿಮ್ಮನ್ನು ಬರಮಾಡಿಕೊಳ್ಳಲು
ಯೋಗ್ಯನು ಯಾರೆಂದು ಕಂಡುಹಿಡಿಯಿರಿ. ಅಲ್ಲಿಂದ ಮುಂದಕ್ಕೆ ಸಾಗುವವರೆಗೂ ಅವನಲ್ಲೇ ತಂಗಿರಿ.
[12]ನೀವು ಒಂದು ಮನೆಗೆ ಹೋದಾಗ, "ಈ ಮನೆಗೆ ಶುಭವಾಗಲಿ!" ಎಂದು ಹರಸಿರಿ. [13]ಆ ಮನೆಯವರು
ನಿಮ್ಮನ್ನು ಸ್ವಾಗತಿಸಿದರೆ, ನಿಮ್ಮ ಆಶೀರ್ವಾದ ಅವರ ಮೇಲೆ ನೆಲಸಲಿ. ನಿಮ್ಮನ್ನು ಸ್ವಾಗತಿಸದೆ ಹೋದರೆ,
ನಿಮ್ಮ ಆಶೀರ್ವಾದ ನಿಮಗೇ ಹಿಂದಿರುಗಲಿ. [14]ಒಂದು ಮನೆಯೇ ಆಗಲಿ, ಊರೇ ಆಗಲಿ, ನಿಮ್ಮನ್ನು
ಸ್ವಾಗತಿಸದೆ ಅಥವಾ ನಿಮಗೆ ಕಿವಿಗೊಡದೆ ಹೋದರೆ, ಆ ಮನೆಯನ್ನು ಅಥವಾ ಊರನ್ನು ಬಿಟ್ಟು ಮುಂದಕ್ಕೆ
ಹೋಗಿರಿ. ಹೋಗುವಾಗ ನಿಮ್ಮ ಪಾದಗಳಿಗೆ ಅಂಟಿರುವ ಧೂಳನ್ನೂ ಝಾಡಿಸಿಬಿಡಿ. [15]ತೀರ್ಪಿನ ದಿನ ಆ
ಊರಿನ ಗತಿ ಸೊದೋಮ್ ಮತ್ತು ಗೊಮೋರ ಊರುಗಳ ಗತಿಗಿಂತ ಕಠಿಣವಾಗಿರುವುದೆಂದು ನಾನು
ನಿಮಗೆ ಒತ್ತಿ ಹೇಳುತ್ತೇನೆ.

### ಶಿಷ್ಯರು ಸಹಿಸಬೇಕಾದ ಸಂಕಷ್ಟಗಳು

(ಮಾರ್ಕ 13:9–13; ಲೂಕ 21:12–17)

16 "ಗಮನಿಸಿರಿ, ತೋಳಗಳ ನಡುವೆ ಕುರಿಗಳನ್ನು ಬಿಟ್ಟಂತೆ ನಾನು ನಿಮ್ಮನ್ನು ಕಳುಹಿಸುತ್ತಿದ್ದೇನೆ.
ಆದುದರಿಂದ ಸರ್ಪಗಳಂತೆ ಸೂಕ್ಷ್ಮ ಬುದ್ಧಿಯುಳ್ಳವರೂ ಪಾರಿವಾಳಗಳಂತೆ ಸರಳ ಜೀವಿಗಳೂ ಆಗಿರಿ.
[17]ಜನರ ಬಗ್ಗೆ ಜಾಗರೂಕರಾಗಿರಿ! ಅವರು ನಿಮ್ಮನ್ನು ನ್ಯಾಯಸ್ಥಾನಗಳಿಗೆ ಹಿಡಿದೊಪ್ಪಿಸುವರು.
ಪ್ರಾರ್ಥನಾಮಂದಿರಗಳಲ್ಲಿ ಕೊರಡೆಗಳಿಂದ ಹೊಡೆಯುವರು. [18]ನನ್ನ ನಿಮಿತ್ತ ನಿಮ್ಮನ್ನು ಅಧಿಕಾರಿಗಳ ಮತ್ತು
ಅರಸರುಗಳ ಮುಮದೆ ಎಳೆದೊಯ್ಯುವರು. ಅವರ ಹಾಗೂ ಪರಕೀಯರ ಮುಂದೆ ನೀವು ನನಗೆ
ಸಾಕ್ಷಿಗಳಾಗುವಿರಿ. [19]ನಿಮ್ಮನ್ನು ಹಿಡಿದೊಪ್ಪಿಸುವಾಗ ಹೇಗೆ ವಾದಿಸುವುದು, ಏನು ಹೇಳುವುದು ಎಂದು
ಚಿಂತಾಕ್ರಾಂತರಾಗಬೇಡಿ. ಏಕೆಂದರೆ ನೀವು ಹೇಳಬೇಕಾದುದ್ದನ್ನು ಅದೇ ಗಳಿಗೆಯಲ್ಲಿ ನಿಮಗೆ
ಕಲಿಸಿಕೊಡಲಾಗುವುದು. [20]ಆಗ ಮಾತನಾಡುವವರು ನೀವಲ್ಲ, ನಿಮ್ಮ ತಂದೆಯ ಆತ್ಮವೇ ನಿಮ್ಮ
ಮುಖಾಂತರ ಮಾತನಾಡುವುದು. [21]ಸಹೋದರನು ಸಹೋದರನನ್ನೇ ತಂದೆಯು ಮಗನನ್ನೇ ಮರಣಕ್ಕೆ
ಗುರಿಮಾಡುವರು. ಮಕ್ಕಳು ಹೆತ್ತವರ ಮೇಲೆ ತಿರುಗಿ ಬಿದ್ದು ಅವರನ್ನು ಕೊಲ್ಲಿಸುವರು. [22]ನೀವು ನನ್ನವರು;
ಆದುದರಿಂದಲೇ ನಿಮ್ಮನ್ನು ಎಲ್ಲರೂ ದ್ವೇಷಿಸುವರು. ಆದರೆ ಕೊನೆಯವರೆಗೂ ಸ್ಥೈರಣೆಯಿಂದಿರುವವನು
ಜೀವೋದ್ಧಾರವನ್ನು ಹೊಂದುವನು. [23]ಒಂದು ಊರಿನಲ್ಲಿ ನಿಮ್ಮನ್ನು ಹಿಂಸೆ ಪಡಿಸಿದರೆ, ಮತ್ತೊಂದು
ಊರಿನಲ್ಲಿ ಆಶ್ರಯ ಪಡೆಯಿರಿ. ನರಪುತ್ರನು ಬರುವಷ್ಟರಲ್ಲಿ ನೀವು ಇಸ್ರಯೇಲ್ ಜನರ ಊರುಗಳನ್ನೆಲ್ಲಾ
ಸುತ್ತಿ ಮುಗಿಸಿರಲಾರಿರಿ; ಇದು ನಿಶ್ಚಯ. [24]ಗುರುವಿಗಿಂತ ಶಿಷ್ಯನು ಶ್ರೇಷ್ಠನಲ್ಲ; ದಾಸನು ದಣಿಗಿಂತ

ದೊಡ್ಡವನಲ್ಲ. [25]ಗುರುವಿನಂತೆ ಶಿಷ್ಯನೂ ದಣಿಯಂತೆ ದಾಸನೂ ಆದರೆ ಸಾಕು. ಮನೆಯ ಯಜಮಾನನನ್ನೇ
'ಬೆಲ್ಜಬೂಲ್' ಎಂದು ಕರೆದಿರುವಾಗ ಅವನ ಮನೆಯವರನ್ನು ಇನ್ನೆಷ್ಟು ಅವಹೇಳನ ಮಾಡಲಾರರು?"

### ಶಿಷ್ಯರು ನಿರ್ಭೀತರಾಗಿರಬೇಕು

(ಲೂಕ 12:2–7)

26 "ಜನರಿಗೆ ಭಯಪಡಬೇಡಿ. ಮುಚ್ಚುಮರೆ ಆಗಿರುವುದೆಲ್ಲ ಬಟ್ಟಬಯಲಾಗುವುದು. ಗುಟ್ಟಾಗಿ
ಇರುವುದೆಲ್ಲ ರಟ್ಟಾಗುವುದು. [27]ನಾನು ಕತ್ತಲಲ್ಲಿ ಹೇಳುವುದನ್ನು ನೀವು ಬೆಳಕಿನಲ್ಲಿ ಪ್ರಚುರ ಪಡಿಸಿರಿ.
ಕಿವಿಮಾತಾಗಿ ಕೇಳಿದ್ದನ್ನು ಮನೆ ಮಾಳಿಗೆಯ ಮೇಲೆ ನಿಂತು ಸಾರಿರಿ. [28]ದೇಹವನ್ನು ಕೊಂದು ಹಾಕುವವರಿಗೆ
ಭಯಪಡಬೇಡಿ; ಏಕೆಂದರೆ, ಅವರಿಂದ ಆತ್ಮವನ್ನು ಕೊಲ್ಲಲು ಆಗದು. ಆದರೆ ದೇಹಾತ್ಮಗಳೆರಡನ್ನೂ
ನರಕದಲ್ಲಿ ನಾಶಮಾಡಬಲ್ಲ ದೇವರಿಗೆ ಭಯಪಡಿ. [29]ಒಂದು ಕಾಸಿಗೆ ಎರಡು ಗುಬ್ಬಚ್ಚಿಗಳನ್ನು
ಮಾರುವುದಿಲ್ಲವೆ? ಆದರೂ ಅವುಗಳಲ್ಲಿ ಒಂದಾದರೂ ನಿಮ್ಮ ತಂದೆಯ ಅನುಮತಿಯಿಲ್ಲದೆ ನೆಲಕ್ಕೆ
ಬೀಳುವುದಿಲ್ಲ. [30]ಅಲ್ಲದೆ ನಿಮ್ಮ ತಲೆಗೂದಲುಗಳು ಸಹ ಎಲ್ಲವೂ ಎಣಿಕೆಯಾಗಿವೆ. [31]ಆದುದರಿಂದ
ಭಯಪಡಬೇಡಿ; ಅನೇಕ ಗುಬ್ಬಚ್ಚಿಗಳಿಗಿಂತ ನೀವು ಎಷ್ಟೋ ಮೌಲ್ಯವುಳ್ಳವರು.

### ಬಹಿರಂಗ ಸಾಕ್ಷ್ಯ

(ಲೂಕ 12:8–9)

32 "ಜನರ ಮುಂದೆ, ತಾನು ನನ್ನವನೆಂದು ಬಹಿರಂಗವಾಗಿ ಒಪ್ಪಿಕೊಳ್ಳುವ ಪ್ರತಿಯೊಬ್ಬನನ್ನು ನಾನು
ಸಹ ಸ್ವರ್ಗದಲ್ಲಿರುವ ನನ್ನ ಪಿತನ ಮುಂದೆ ನನ್ನವನೆಂದು ಒಪ್ಪಿಕೊಳ್ಳುತ್ತೇನೆ. [33]ಆದರೆ ಯಾವನಾದರೂ
ತಾನು ನನ್ನವನಲ್ಲ ಎಂದು ಜನರ ಮುಂದೆ ಬಹಿರಂಗವಾಗಿ ನಿರಾಕರಿಸಿದರೆ, ಅಂಥವನನ್ನು ನಾನು ಸಹ
ಸ್ವರ್ಗದಲ್ಲಿರುವ ನನ್ನ ಪಿತನ ಮುಂದೆ ನನ್ನವನಲ್ಲವೆಂದು ನಿರಾಕರಿಸುತ್ತೇನೆ.

### ಬಂಧು ಭೇದ

(ಲೂಕ 12:51–53, 14:26–27)

34 "ನಾನು ಲೋಕಕ್ಕೆ ಸಮಾಧಾನವನ್ನು ತರಲು ಬಂದೆನೆಂದು ಭಾವಿಸಬೇಡಿ; ಸಮಾಧಾನವನ್ನಲ್ಲ,
ಭೇದಿಸುವ ಖಡ್ಗವನ್ನು ತರಲು ಬಂದೆನು. [35]ತಂದೆಗೆ ವಿರುದ್ಧ ಮಗನಿಗೂ, ತಾಯಿಗೆ ವಿರುದ್ಧ ಮಗಳಿಗೂ,
ಅತ್ತೆಗೆ ವಿರುದ್ಧ ಸೊಸೆಗೂ ಭೇದ ಹುಟ್ಟಿಸಲು ಬಂದೆನು; [36]ಒಡಹುಟ್ಟಿದವರೇ ಒಬ್ಬನ ಕಡುವೈರಿಗಳಾಗುವರು.
37 "ನನ್ನನ್ನು ಪ್ರೀತಿಸುವುದಕ್ಕಿಂತ ಹೆಚ್ಚಾಗಿ ತನ್ನ ತಂದೆಯನ್ನು ಅಥವಾ ತಾಯಿಯನ್ನು
ಪ್ರೀತಿಸುವವನು ನನ್ನವನಾಗಲು ಯೋಗ್ಯನಲ್ಲ. ನನ್ನನ್ನು ಪ್ರೀತಿಸುವುದಕ್ಕಿಂತ ಹೆಚ್ಚಾಗಿ ತನ್ನ ಮಗನನ್ನು
ಅಥವಾ ಮಗಳನ್ನು ಪ್ರೀತಿಸುವವನು ನನ್ನವನಾಗಲು ಯೋಗ್ಯನಲ್ಲ. [38]ತನ್ನ ಶಿಲುಬೆಯನ್ನು ಹೊತ್ತು ನನ್ನನ್ನು
ಹಿಂಬಾಲಿಸದವನು ನನ್ನವನಾಗಲು ಯೋಗ್ಯನಲ್ಲ. [39]ತನ್ನ ಪ್ರಾಣವನ್ನು ಕಾಪಾಡಿಕೊಳ್ಳುವವನು ಅದನ್ನು
ಕಳೆದುಕೊಳ್ಳುತ್ತಾನೆ. ನನಗೋಸ್ಕರವಾಗಿ ತನ್ನ ಪ್ರಾಣವನ್ನು ಕಳೆದುಕೊಳ್ಳುವವನು ಅದನ್ನು
ಕಾಪಾಡಿಕೊಳ್ಳುತ್ತಾನೆ.

### ಸತ್ಕಾರಕ್ಕೆ ತಕ್ಕ ಸಂಭಾವನೆ

(ಮಾರ್ಕ 9:41)

40 "ನಿಮ್ಮನ್ನು ಸ್ವಾಗತಿಸುವವನು ನನ್ನನ್ನು ಸ್ವಾಗತಿಸುತ್ತಾನೆ; ನನ್ನನ್ನು ಸ್ವಾಗತಿಸುವವನು ನನ್ನನ್ನು
ಕಳುಹಿಸಿಕೊಟ್ಟಾತನನ್ನೇ ಸ್ವಾಗತಿಸುತ್ತಾನೆ. [41]ಪ್ರವಾದಿಯನ್ನು ಪ್ರವಾದಿಯೆಂದು ಸ್ವಾಗತಿಸುವವನು ಪ್ರವಾದಿಗೆ
ಸಿಗುವ ಪ್ರತಿಫಲವನ್ನು ಪಡೆಯುತ್ತಾನೆ. ಸತ್ಪುರುಷನನ್ನು ಸತ್ಪುರುಷನೆಂದು ಸ್ವಾಗತಿಸುವವನು ಸತ್ಪುರುಷನಿಗೆ
ಸಿಗುವ ಪ್ರತಿಫಲವನ್ನು ಪಡೆಯುತ್ತಾನೆ. [42]ಯಾರಾದರೂ ಈ ಚಿಕ್ಕವರಲ್ಲಿ ಒಬ್ಬನಿಗೆ ಅವನು ನನ್ನ ಶಿಷ್ಯನೆಂದು

ಕುಡಿಯಲು ಒಂದು ಲೋಟ ತಣ್ಣೀರನ್ನು ಕೊಟ್ಟರೂ ಅದಕ್ಕೆ ತಕ್ಕ ಪ್ರತಿಫಲವನ್ನು ಪಡೆಯದೆ ಹೋಗನೆಂದು
ನಿಮಗೆ ನಿಶ್ಚಯವಾಗಿ ಹೇಳುತ್ತೇನೆ."

**ಪರುಷೋತ್ತಮನಾದ ಸ್ನಾನಿಕ ಯೊವಾನ್ನ**

(ಲೂಕ 7:18–35)

**11** ಯೇಸುಸ್ವಾಮಿ ತಮ್ಮ ಹನ್ನೆರಡು ಮಂದಿ ಶಿಷ್ಯರಿಗೆ ಆದೇಶವನ್ನು ಕೊಟ್ಟಾದ ಮೇಲೆ ಅಲ್ಲಿಂದ ಹೊರಟು
ಉಪದೇಶ ಮಾಡುವುದಕ್ಕೂ ಬೋಧಿಸುವುದಕ್ಕೂ ಹತ್ತಿರದ ಊರುಗಳಿಗೆ ಹೋದರು.

2 ಸ್ವಾಮಿಯ ಕಾರ್ಯಕಲಾಪಗಳ ಸುದ್ದಿ ಸೆರೆಯಲ್ಲಿದ್ದ ಸ್ನಾನಿಕ ಯೊವಾನ್ನನ ಕಿವಿಗೆ ಬಿದ್ದಿತು.
ಆತನು ತನ್ನ ಶಿಷ್ಯರಲ್ಲಿ ಕೆಲವರನ್ನು ಅವರ ಬಳಿಗೆ ಕಳುಹಿಸಿದನು. 3ಇವರು ಬಂದು, "ಯೊವಾನ್ನನು
ತಿಳಿಯಪಡಿಸಿದ ಪ್ರಕಾರ ಬರಬೇಕಾದವರು ನೀವೋ? ಅಥವಾ ಬೇರೊಬ್ಬನನ್ನು ನಾವು ಎದುರು
ನೋಡಬೇಕೋ?" ಎಂದು ಯೇಸುವನ್ನು ಕೇಳಿದರು. 4ಅದಕ್ಕೆ ಯೇಸು, "ನೀವು ಕೇಳುವುದನ್ನೂ
ಕಾಣುವುದನ್ನೂ ಯೊವಾನ್ನನಿಗೆ ಹೋಗಿ ತಿಳಿಸಿರಿ. 5ಕುರುಡರು ನೋಡುತ್ತಾರೆ, ಕುಂಟರು ನಡೆಯುತ್ತಾರೆ,
ಕುಷ್ಠರೋಗಿಗಳು ಸ್ವಸ್ಥರಾಗುತ್ತಾರೆ, ಕಿವುಡರು ಕೇಳುತ್ತಾರೆ, ಸತ್ತವರು ಮತ್ತೆ ಜೀವ ಪಡೆಯುತ್ತಾರೆ.
ದೀನದಲಿತರಿಗೆ ಶುಭಸಂದೇಶವನ್ನು ಪ್ರಕಟಿಸಲಾಗುತ್ತಿದೆ. 6ನನ್ನಲ್ಲಿ ವಿಶ್ವಾಸ ಕಳೆದುಕೊಳ್ಳದವನು
ಭಾಗ್ಯವಂತನು!" ಎಂದು ಹೇಳಿ ಕಳುಹಿಸಿದರು.

7 ಯೊವಾನ್ನನಿಂದ ಬಂದಿದ್ದ ಶಿಷ್ಯರು ಹೊರಟುಹೋದಾಗ, ಯೇಸುಸ್ವಾಮಿ ಜನಸಮೂಹಕ್ಕೆ
ಯೊವಾನನನ್ನು ಕುರಿತು ಮಾತನಾಡಿದರು: "ಬೆಂಗಾಡಿನಲ್ಲಿ ನೀವು ಏನನ್ನು ನೋಡಲೆಂದು ಹೋದಿರಿ?
ಗಾಳಿಗೆ ಓಲಾಡುವ ಜೊಂಡನ್ನೆ? 8ಇಲ್ಲವಾದರೆ, ಏಕೆ ಹೋದಿರಿ? ನಯವಾದ ರೇಷ್ಮೆ ಉಡುಪನ್ನು ಧರಿಸಿದ್ದ
ವ್ಯಕ್ತಿಯನ್ನು ನೋಡಲು ಹೋದಿರೇನು? ಅಂತಹ ಉಡುಗೆ ತೊಡುಗೆ ಧರಿಸುವವರು ಅರಮನೆಗಳಲ್ಲಿ
ಇರುತ್ತಾರಷ್ಟೇ. 9ಹಾಗಾದರೆ ಯಾವ ಉದ್ದೇಶದಿಂದ ಹೋದಿರಿ? ಪ್ರವಾದಿಯನ್ನು ನೋಡಲೆಂದೋ? ಹೌದು
ಪ್ರವಾದಿಗಿಂತಲೂ ಶ್ರೇಷ್ಠನಾದವನನ್ನು ನೋಡಿದಿರಿ ಎಂಬುದು ನಿಜ.

10 'ಇಗೋ, ನನ್ನ ದೂತನನ್ನು ನಿನಗೆ ಮುಂದಾಗಿ ಕಳುಹಿಸುವೆನು. ಆತನು ನಿನ್ನ ಮಾರ್ಗವನ್ನು
ಮುಂಚಿತವಾಗಿ ಸಿದ್ಧಗೊಳಿಸುವನು' ಎಂದು ಪವಿತ್ರಗ್ರಂಥದಲ್ಲಿ ಉಲ್ಲೇಖಿಸಿರುವುದು ಈ ಯೊವಾನ್ನನನ್ನು
ಕುರಿತೇ. 11ಮಾನವನಾಗಿ ಜನಿಸಿದ್ದವರಲ್ಲಿ ಸ್ನಾನಿಕ ಯೊವಾನ್ನನಿಗಿಂತ ಶ್ರೇಷ್ಠನಾರೂ ಹುಟ್ಟಿಲ್ಲ! ಎಂದು ನಿಮಗೆ
ಸ್ಪಷ್ಟವಾಗಿ ಹೇಳುತ್ತೇನೆ. ಆದರೂ ಸ್ವರ್ಗಸಾಮ್ರಾಜ್ಯದಲ್ಲಿ ಕನಿಷ್ಠನಾದವನು ಕೂಡ ಅವನಿಗಿಂತ ಶ್ರೇಷ್ಟನೇ ಸರಿ.
12ಯೊವಾನ್ನನು ತನ್ನ ಸಂದೇಶವನ್ನು ಸಾರಿದಂದಿನಿಂದ ಇಂದಿನವರೆಗೆ ಸ್ವರ್ಗಸಾಮ್ರಾಜ್ಯವು ನೂಕುನುಗ್ಗಲಿಗೆ
ಗುರಿಯಾಗಿದೆ. ಬಲಪ್ರಯೋಗ ಮಾಡುವವರು ಅದನ್ನು ಸ್ವಾಧೀನಪಡಿಸಿಕೊಳ್ಳಲು ಯತ್ನಿಸುತ್ತಿದ್ದಾರೆ.
13ಯೊವಾನ್ನನ ಕಾಲದ ತನಕ ಧರ್ಮಶಾಸ್ತ್ರ ಹಾಗೂ ಎಲ್ಲ ಪ್ರವಾದಿಗಳು ದೇವರ ಸಾಮ್ರಾಜ್ಯವನ್ನು ಕುರಿತು
ಪ್ರವಾದನೆ ಮಾಡಿದರು. 14ಅವರ ಹೇಳಿಕೆಯನ್ನು ನಂಬಲು ನಿಮಗಿಷ್ಟವಿದ್ದರೆ, ಇಗೋ, ಬರತಕ್ಕ ಎಲೀಯನು
ಈ ಯೊವಾನ್ನನೇ. 15ಕೇಳುವುದಕ್ಕೆ ಕಿವಿಯುಳ್ಳವನು ಕೇಳಿಸಿಕೊಳ್ಳಲಿ.

16 "ಈ ಪೀಳಿಗೆಯನ್ನು ನಾನು ಯಾರಿಗೆ
  ಹೋಲಿಸಲಿ?
17 ನಾವು ಕೊಳಲನೂದಲು
  ನೀವು ಕುಣಿದಾಡಲಿಲ್ಲ;
 ನಾವು ಶೋಕಗೀತೆಗಳ ಹಾಡಲು
  ನೀವು ಕಣ್ಣೀರಿಡಲಿಲ್ಲ,"

ಎಂದು ಪೇಟೆಬೀದಿಯಲ್ಲಿ ಕುಳಿತು, ಒಬ್ಬರಿಗೊಬ್ಬರು ಕೂಗಾಡುವ ಮಕ್ಕಳನ್ನು ಇವರು ಹೋಲುತ್ತಾರೆ.
18ಏಕೆಂದರೆ, ಯೊವಾನ್ನನು ಬಂದನು; ಅವನು ಅನ್ನಪಾನೀಯವನ್ನು ಸೇವಿಸಲಿಲ್ಲ. ಅದಕ್ಕೆ 'ಇವನಿಗೆ ದೆವ್ವ

ಹಿಡಿದಿದೆ’ ಎಂದರು. [19]ನರಪುತ್ರನು ಬಂದನು; ಅನ್ನಪಾನೀಯಗಳನ್ನು ಸೇವಿಸಿದನು. ಇವನೊಬ್ಬ ಹೊಟ್ಟೆಬಾಕ, ಕುಡುಕ, ಸುಂಕದವರ ಹಾಗೂ ಪಾಪಿಷ್ಠರ ಗೆಳೆಯ ಎನ್ನುತ್ತಾರೆ. ಆದರೆ ದೈವಜ್ಞಾನವೇ ನಿಜವಾದ ಜ್ಞಾನವೆಂದು ಅದರ ಕಾರ್ಯಗಳಿಂದಲೇ ಸಮರ್ಥಿಸಲಾಗುತ್ತದೆ," ಎಂದರು.

### ಪಾಪಕ್ಕೆ ವಿಮುಖವಾಗದ ಪಟ್ಟಣಗಳಿಗೆ ಶಾಪ

(ಲೂಕ 10:13–15)

20 ಯಾವ ಪಟ್ಟಣಗಳಲ್ಲಿ ಯೇಸುಸ್ವಾಮಿ ಅದ್ಭುತ ಕಾರ್ಯಗಳನ್ನು ಹೇರಳವಾಗಿ ಮಾಡಿದ್ದರೋ ಆ ಪಟ್ಟಣಗಳ ಜನರೇ ಪಾಪಕ್ಕೆ ವಿಮುಖರಾಗಲಿಲ್ಲ. ಆದ್ದರಿಂದ ಆ ಪಟ್ಟಣಗಳನ್ನು ಯೇಸು ಖಂಡಿಸಿದರು;

21 "ಕೊರಾಜ್ಜಿನ್ ಪಟ್ಟಣವೇ, ನಿನಗೇ ಧಿಕ್ಕಾರ! ಬೆತ್ಸಾಯಿದ ಪಟ್ಟಣವೇ, ನಿನಗೆ ಧಿಕ್ಕಾರ! ನಿಮ್ಮಲ್ಲಿ ಮಾಡಿದ ಅದ್ಭುತಕಾರ್ಯಗಳನ್ನು ಟೈರ್ ಮತ್ತು ಸಿದೋನ್ ಪಟ್ಟಣಗಳಲ್ಲಿ ಮಾಡಿದ್ದರೆ, ಅಲ್ಲಿಯವರು ಎಂದೋ ಗೋಣೀತಟ್ಟನ್ನು ಉಟ್ಟುಕೊಂಡು ಬೂದಿಯನ್ನು ಬಳಿದುಕೊಂಡು, ಪಾಪಕ್ಕೆ ವಿಮುಖರಾಗುತ್ತಿದ್ದರು. [22]ಆದುದರಿಂದ ತೀರ್ಪಿನ ದಿನ ಟೈರ್ ಮತ್ತು ಸಿದೋನಿನ ಗತಿಯು ನಿಮಗಿಂತಲೂ ಮೇಲಾಗಿರುವುದೆಂದು ಒತ್ತಿ ಹೇಳುತ್ತೇನೆ. [23]ಎಲೈ ಕಫೆರ್ನವುಮ್ ಪಟ್ಟಣವೇ, ನೀನು ಸ್ವರ್ಗಕ್ಕೇರುವೆ ಎಂದು ನೆನೆಸುತ್ತೀಯೋ? ಇಲ್ಲ, ಪಾತಾಳಕ್ಕೆ ಇಳಿಯುವೆ. ನಿನ್ನಲ್ಲಿ ಮಾಡಿದ ಅದ್ಭುತ ಕಾರ್ಯಗಳನ್ನು ಸೊದೋಮಿನಲ್ಲಿ ಮಾಡಿದ್ದರೆ, ಅದು ಇಂದಿನವರೆಗೂ ಅಳಿಯದೆ ಉಳಿಯುತ್ತಿತ್ತು. [24]ಆದುದರಿಂದ ತೀರ್ಪಿನ ದಿನ ಸೊದೋಮಿನ ಗತಿ ನಿನಗಿಂತ ಸಹನೀಯವಾಗಿರುವುದು ಎಂಬುದು ನಿನಗೆ ತಿಳಿದಿರಲಿ," ಎಂದರು.

### ಸುಪ್ರೀತ ಸಂಕಲ್ಪ

(ಲೂಕ 10:21–22)

25 ಆ ಸಮಯದಲ್ಲಿ ಯೇಸುಸ್ವಾಮಿ, "ಪಿತನೇ, ಪರಲೋಕ ಭೂಲೋಕಗಳ ಒಡೆಯನೇ, ಜ್ಞಾನಿಗಳಿಗೂ ಮೇಧಾವಿಗಳಿಗೂ ಈ ವಿಷಯಗಳನ್ನು ಮರೆಮಾಡಿ ಮಕ್ಕಳಂಥವರಿಗೆ ನೀವು ಶ್ರುತಪಡಿಸಿದ್ದೀರಿ; ಇದಕ್ಕಾಗಿ ನಿಮ್ಮನ್ನು ವಂದಿಸುತ್ತೇನೆ. [26]ಹೌದು, ಪಿತನೇ, ಇದೇ ನಿಮ್ಮ ಸುಪ್ರೀತ ಸಂಕಲ್ಪ.

27 "ನನ್ನ ಪಿತ ಸಮಸ್ತವನ್ನೂ ನನ್ನ ವಶಕ್ಕೆ ಒಪ್ಪಿಸಿದ್ದಾರೆ; ಪುತ್ರನು ಯಾರೆಂಬುದನ್ನು ಪಿತನೇ ಹೊರತು ಬೇರಾರೂ ಅರಿಯರು. ಪಿತನು ಯಾರು ಎಂಬುದನ್ನು ಪುತ್ರನು ಮತ್ತು ಯಾವನಿಗೆ ಪುತ್ರನು ಅವರನ್ನು ಶ್ರುತಪಡಿಸಲು ಇಚ್ಛಿಸುತ್ತಾನೋ, ಅವರೇ ಹೊರತು ಮತ್ತಾರೂ ಅರಿಯರು.

### ಶ್ರಮಜೀವಿಗಳಿಗೆ ವಿಶ್ರಾಂತಿದಾತ

28 "ದುಡಿದು, ಭಾರಹೊತ್ತು, ಬಳಲಿ ಬೆಂಡಾಗಿರುವ ಸರ್ವಜನರೇ, ನೀವೆಲ್ಲರೂ ನನ್ನ ಬಳಿಗೆ ಬನ್ನಿರಿ; ನಾನು ನಿಮಗೆ ವಿಶ್ರಾಂತಿಕೊಡುತ್ತೇನೆ. [29]ನಾನು ವಿನಯಶೀಲನು, ದೀನಹೃದಯನು; ನನ್ನ ನೊಗಕ್ಕೆ ಹೆಗಲುಕೊಟ್ಟು ನನ್ನಿಂದ ಕಲಿತುಕೊಳ್ಳಿ. ಆಗ ನಿಮಗೆ ವಿಶ್ರಾಂತಿ ಸಿಗುವುದು. ನನ್ನ ನೊಗ ಹಗುರ, ನನ್ನ ಹೊರೆ ಸುಗಮ," ಎಂದರು.

### ದಯೆಯೇ ಧರ್ಮದ ಮೂಲ

(ಮಾರ್ಕ 2:23–28; ಲೂಕ 6:1–5)

**12** ಒಂದು ಸಬ್ಬತ್ ದಿನ ಯೇಸುಸ್ವಾಮಿ ಗೋದಿಯ ಹೊಲಗಳನ್ನು ಹಾದು ಹೋಗುತ್ತಿದ್ದರು. ಅವರ
ಸಂಗಡವಿದ್ದ ಶಿಷ್ಯರಿಗೆ ಹಸಿವಾಯಿತು. ಅವರು ಗೋದಿಯ ತೆನೆಗಳನ್ನು ಕಿತ್ತು ತಿನ್ನಲಾರಂಭಿಸಿದರು. [2]ಇದನ್ನು
ಕಂಡ ಫರಿಸಾಯರು, "ನೋಡು, ನೋಡು, ನಿನ್ನ ಶಿಷ್ಯರು ಸಬ್ಬತ್ ದಿನದಲ್ಲಿ ನಿಷಿದ್ಧವಾದುದನ್ನು
ಮಾಡುತ್ತಿದ್ದಾರೆ," ಎಂದರು. [3]ಅದಕ್ಕೆ ಯೇಸು, "ಹಿಂದೆ ಅರಸ ದಾವೀದನು ಮತ್ತು ಅವನ ಸಂಗಡಿಗರು

ಹಸಿದಿದ್ದಾಗ ಏನು ಮಾಡಿದರೆಂದು ನೀವು ಓದಿರಬೇಕಲ್ಲವೆ? [4]ಅವನು ದೇವಮಂದಿರದೊಳಕ್ಕೆ ಹೋಗಿ
ಯಾಜಕರ ಹೊರತು ತಾನೇ ಆಗಲಿ, ಸಂಗಡಿಗರೇ ಆಗಲಿ, ತಿನ್ನಬಾರದಾಗಿದ್ದ ನೈವೇದ್ಯದ ರೊಟ್ಟಿಗಳನ್ನೇ
ತಿನ್ನಲಿಲ್ಲವೆ? [5]ಇದಲ್ಲದೆ, ಪ್ರತಿಯೊಂದು ಸಬ್ಬತ್ ದಿನವೂ ಯಾಜಕರು ದೇವಾಲಯದಲ್ಲಿ ಸಬ್ಬತ್ ದಿನದ
ನಿಯಮಗಳನ್ನು ಉಲ್ಲಂಘಿಸಿಯೂ ನಿರ್ದೋಷಿಗಳಾಗಿದ್ದಾರೆ. ಇದನ್ನು ನೀವು ಮೋಶೆಯ ಧರ್ಮಶಾಸ್ತ್ರದಲ್ಲಿ
ಓದಿಲ್ಲವೆ? [6]ದೇವಾಲಯಕ್ಕಿಂತಲೂ ಶ್ರೇಷ್ಠವಾದವನು ಇಲ್ಲಿದ್ದಾನೆಂಬುದು ನಿಮಗೆ ತಿಳಿದಿರಲಿ. [7]'ನನಗೆ
ಬೇಕಾದುದು ದಯೆ, ಯಜ್ಞ ಬಲಿಯಲ್ಲ' ಎಂಬ ವಾಕ್ಯದ ಅರ್ಥ ನಿಮಗೆ ತಿಳಿದಿದ್ದರೆ, ನಿರ್ದೋಷಿಗಳನ್ನು
ನೀವು ಖಂಡಿಸುತ್ತಿರಲಿಲ್ಲ. [8]ಏಕೆಂದರೆ ನರಪುತ್ರನು ಸಬ್ಬತ್ತಿಗೆ ಒಡೆಯ," ಎಂದರು.

## ಸುಕ್ರಿಯೆಗಳಿಗೆ ಸಮಯ-ಸಂದರ್ಭಗಳ ತಡೆಯಿಲ್ಲ

(ಮಾರ್ಕ 3:1-6; ಲೂಕ 6:6-11)

9 ಯೇಸುಸ್ವಾಮಿ ಅಲ್ಲಿಂದ ಹೊರಟು ಪ್ರಾರ್ಥನಾಮಂದಿರಕ್ಕೆ ಬಂದರು. [10]ಬತ್ತಿದ ಕೈಯುಳ್ಳ ಒಬ್ಬ
ವ್ಯಕ್ತಿ ಅಲ್ಲಿದ್ದನು. ಯೇಸುವಿನ ಮೇಲೆ ತಪ್ಪು ಹೊರಿಸುವ ಉದ್ದೇಶದಿಂದ ಕೆಲವರು, "ಸಬ್ಬತ್ ದಿನ
ಸ್ವಸ್ಥಗೊಳಿಸುವುದು ಶಾಸ್ತ್ರಬದ್ಧವೇ?" ಎಂದು ಯೇಸುವನ್ನು ಕೇಳಿದರು. [11]ಅದಕ್ಕೆ ಯೇಸು, "ನಿಮ್ಮಲ್ಲಿ ಒಬ್ಬನಿಗೆ
ಒಂದೇ ಒಂದು ಕುರಿಯಿದೆ ಎನ್ನೋಣ. ಸಬ್ಬತ್ ದಿನ ಅದು ಗುಣಿಯಲ್ಲಿ ಬಿದ್ದು ಹೋಯಿತು ಎನ್ನೋಣ;
ಆ ದಿನ ಅವನು ಅದನ್ನು ಮೇಲಕ್ಕೆ ಎತ್ತದೆ ಇರುವನೇ? [12]ಕುರಿಗಿಂತ ನರಮಾನವ ಎಷ್ಟೋ
ಮೌಲ್ಯವುಳ್ಳವನಲ್ಲವೇ? ಆದುದರಿಂದ ಸಬ್ಬತ್ ದಿನ ಸತ್ಕಾರ್ಯಮಾಡುವುದು ಶಾಸ್ತ್ರಬದ್ಧವಾದುದು,"
ಎಂದರು. [13]ಅನಂತರ ಬತ್ತಿದ ಕೈಯುಳ್ಳವನನ್ನು ನೋಡಿ, "ಕೈ ಚಾಚು" ಎಂದರು. ಅವನು ಚಾಚಿದನು.
ಅದು ಪುನಶ್ಚೇತನಗೊಂಡು ಇನ್ನೊಂದು ಕೈಯ ಹಾಗೆ ಸಂಪೂರ್ಣ ಸ್ವಸ್ಥವಾಯಿತು. [14]ಫರಿಸಾಯರಾದರೋ
ಅಲ್ಲಿಂದ ಹೊರಗೆ ಹೋಗಿ ಯೇಸುವನ್ನು ಕೊಲೆ ಮಾಡಲು ಒಳಸಂಚು ಹೂಡಿದರು.

## ಪ್ರವಾದನೆ ಪೂರೈಸಿತು

15 ತಮಗೆ ವಿರುದ್ಧ ಒಳಸಂಚು ನಡೆಯುತ್ತಿದೆ ಎಂದು ಯೇಸುಸ್ವಾಮಿ ಅರಿತುಕೊಂಡು ಅಲ್ಲಿಂದ
ಹೊರಟುಹೋದರು. [16]ಅನೇಕ ಜನರು ಅವರ ಹಿಂದೆಯೇ ಹೋದರು. ಯೇಸು ಅಸ್ವಸ್ಥರಾಗಿದ್ದ ಎಲ್ಲರನ್ನು
ಗುಣಪಡಿಸಿದರು ಮತ್ತು ತಮ್ಮ ವಿಷಯವನ್ನು ಯಾರಿಗೂ ತಿಳಿಸಬಾರದೆಂದು ಆಜ್ಞೆಮಾಡಿದರು. [17]ಹೀಗೆ
ದೇವರು ಪ್ರವಾದಿ ಯೆಶಾಯನ ಮುಖಾಂತರ ಹೇಳಿದ ಈ ವಚನ ನೆರವೇರಿತು:

[18] "ಇದಿಗೋ, ನನ್ನ ದಾಸನು,
ನನ್ನಿಂದಾಯ್ಕೆಯಾದವನು,
ನನಗೆ ಪರಮಪ್ರಿಯನು,
ನನ್ನ ಅಪಾರ ಮೆಚ್ಚುಗೆಗೆ ಪಾತ್ರನು.
ನೆಲೆಗೊಳಿಸುವೆ ಇವನಲಿ ಎನ್ನಾತ್ಮವನು;
ಸಾರುವನಿವನು ಜಗದಲಿ ನನ್ನ ಧರ್ಮವನು.
[19] ವಾದಿಸುವವನಲ್ಲ, ದನಿಯೆತ್ತಿ
ಕೂಗುವವನಲ್ಲ,
ಹಾದಿ ಬೀದಿಯಲ್ಲಿವನ ಕಂಠ
ಮೊರೆಯುವುದಿಲ್ಲ.
[20] ಮುರಿದ ಜೊಂಡಿನಂತಹ ದುರ್ಬಲರಿಗೀತ
ದೀನಬಂಧು
ನಂದಿಹೋಗುತಿಹ ದೀನದಲಿತರಿಗೆ
ಕೃಪಾಸಿಂಧು
ನ್ಯಾಯನೀತಿಗೆ ಜಯದೊರಕಿಸದೆ

ಬಿಡನಿವನು.
21 ನೆಮ್ಮುವರು ಅನ್ಯಜನರೆಲ್ಲರು ಇವನ
ನಾಮವನು."

## ದೆವ್ವಗಳ ಉಚ್ಚಾಟನೆ – ದೈವೀರಾಜ್ಯದ ಉದ್ಘಾಟನೆ

(ಮಾರ್ಕ 3:20–30; ಲೂಕ 11:14–23)

22 ಬಳಿಕ, ದೆವ್ವಹಿಡಿದು ಕುರುಡನೂ ಮೂಕನೂ ಆಗಿದ್ದ ಒಬ್ಬನನ್ನು ಕೆಲವರು ಯೇಸುಸ್ವಾಮಿಯ
ಬಳಿಗೆ ಕರೆತಂದರು. ಯೇಸು ಅವನನ್ನು ಗುಣಪಡಿಸಿದರು. ಅವನಿಗೆ ದೃಷ್ಟಿ ಹಾಗೂ ಮಾತು ಎರಡೂ
ಬಂದಿತು. ಅಲ್ಲಿದ್ದ ಜನರೆಲ್ಲರೂ ಬೆರಗಾದರು. 23"ಇವರು ದಾವೀದನ ಕುಲಪುತ್ರರಾಗಿರಬಹುದೇ!"
ಎಂದುಕೊಂಡರು. 24ಆದರೆ ಫರಿಸಾಯರು ಇದನ್ನು ಕೇಳಿದಾಗ, "ಇವನು ದೆವ್ವಗಳನ್ನು ಬಿಡಿಸುತ್ತಿರುವುದು
ದೆವ್ವಗಳ ಒಡೆಯನಾದ ಬೆಲ್ಜೆಬೂಲನ ಶಕ್ತಿಯಿಂದಲೇ," ಎಂದರು. 25ಅವರ ಆಲೋಚನೆಗಳನ್ನು
ಅರಿತುಕೊಂಡ ಯೇಸು ಇಂತೆಂದರು: "ಅಂತಃಕಲಹದಿಂದ ಒಡೆದುಹೋಗಿರುವ ಪ್ರತಿಯೊಂದು ರಾಜ್ಯವೂ
ನಾಶವಾಗುವುದು; ಅದರಂತೆಯೇ ತಮ್ಮ ತಮ್ಮೊಳಗೆ ಕಾದಾಡುವ ಊರುಗಳೂ ಕುಟುಂಬಗಳೂ
ಹಾಳಾಗುವುವು. 26ಸೈತಾನನು ಸೈತಾನನನ್ನು ಹೊಡೆದೋಡಿಸುವುದಾದರೆ ಸೈತಾನನ ಪಕ್ಷದವರೇ ಪರಸ್ಪರ
ವಿರೋಧಿಗಳಾಗುತ್ತಾರೆ. 27ಆಗ ಅವನ ರಾಜ್ಯ ಹೇಗೆ ತಾನೇ ಉಳಿದೀತು? ನಾನು ಬೆಲ್ಜೆಬೂಲನ ಶಕ್ತಿಯಿಂದ
ದೆವ್ವಗಳನ್ನು ಬಿಡಿಸುವುದಾದರೆ ನಿಮ್ಮವರು ಯಾರ ಶಕ್ತಿಯಿಂದ ಬಿಡಿಸುತ್ತಾರೆ? ಆದ್ದರಿಂದ ನೀವು
ಹೇಳುವುದು ತಪ್ಪೆಂದು ನಿಮ್ಮವರೇ ತೀರ್ಪುಕೊಡುವರು. 28ನಾನು ದೇವರ ಆತ್ಮದಿಂದ ದೆವ್ವಗಳನ್ನು
ಬಿಡಿಸುವುದಾದರೆ, ದೇವರ ಸಾಮ್ರಾಜ್ಯ ನಿಮ್ಮಲ್ಲಿಗೆ ಈಗಾಗಲೇ ಬಂದಿದೆ.
29 "ಒಬ್ಬ ಬಲಿಷ್ಠನ ಮನೆಯನ್ನು ನುಗ್ಗಿ ಅವನನ್ನು ಕಟ್ಟಿಹಾಕದೆ ಅವನ ಸೊತ್ತನ್ನು ಸೂರೆ
ಮಾಡಲಾದೀತೇ? ಮೊದಲು ಅವನನ್ನು ಕಟ್ಟಬೇಕು. ಬಳಿಕ ಅವನ ಮನೆಯನ್ನು ಕೊಳ್ಳೆ ಹೊಡೆಯಬೇಕು.
30ನನ್ನ ಪರವಾಗಿ ಇಲ್ಲದವನು ನನಗೆ ವಿರೋಧಿಯೇ ಸರಿ. ನನ್ನೊಡನೆ ಶೇಖರಿಸದವನು ಚದರಿಸುತ್ತಾನೆ.

## ಅಕ್ಷಮ್ಯ ಅಪರಾಧ

31 "ಮಾನವರು ಮಾಡುವ ಪ್ರತಿಯೊಂದು ಪಾಪಕ್ಕೂ ಆಡುವ ದೇವದೂಷಣೆಗೂ ಕ್ಷಮೆ ಉಂಟು.
ಆದರೆ ಪವಿತ್ರಾತ್ಮನ ವಿರುದ್ಧ ಆಡುವ ದೂಷಣೆಗೆ ಕ್ಷಮೆಯೇ ಇಲ್ಲ. 32ಯಾರಾದರೂ ನರಪುತ್ರನ ವಿರುದ್ಧ
ಮಾತಾಡಿದರೆ ಕ್ಷಮೆ ದೊರಕಬಹುದು. ಆದರೆ ಪವಿತ್ರಾತ್ಮನನ್ನು ದೂಷಿಸುವವನಿಗೆ ಇದಹಲ್ಲೇ ಆಗಲಿ,
ಪರದಲ್ಲೇ ಆಗಲಿ ಕ್ಷಮೆ ದೊರಕದು.

## ಹೃದಯದಲ್ಲಿ ತುಂಬಿರುವುದು ಬಾಯಲ್ಲಿ ತುಳುಕುವುದು

(ಲೂಕ 6:43–45)

33 "ಒಳ್ಳೆಯ ಹಣ್ಣು ಬೇಕಾದರೆ ಮರ ಒಳ್ಳೆಯದಿರಬೇಕು. ಹುಳುಕು ಮರವಾದರೆ ಸಿಗುವುದು
ಹುಳುಕು ಹಣ್ಣೇ. ಹಣ್ಣಿನ ರುಚಿಯಿಂದ ಮರವನ್ನು ಗುರುತಿಸಬಹುದು. 34ಎಲೈ ವಿಷಸರ್ಪಗಳ ಪೀಳಿಗೆಯೇ,
ಕೆಟ್ಟವರಾಗಿರುವ ನಿಮ್ಮ ಬಾಯಿಂದ ಒಳ್ಳೆಯ ಮಾತು ಬರಲು ಸಾಧ್ಯವೇ? ಹೃದಯದಲ್ಲಿ
ತುಂಬಿತುಳುಕುವುದನ್ನೇ ನಾಲಿಗೆ ನುಡಿಯುತ್ತದೆ. 35ಒಳ್ಳೆಯವನು ತನ್ನ ಒಳ್ಳೆಯ ಬೊಕ್ಕಸದಿಂದ ಒಳ್ಳೆಯದನ್ನೇ
ಹೊರತರುತ್ತಾನೆ; ಕೆಟ್ಟವನು ತನ್ನ ಕೆಟ್ಟ ಬೊಕ್ಕಸದಿಂದ ಕೆಟ್ಟದ್ದನ್ನೇ ಹೊರತರುತ್ತಾನೆ. 36ಜನರು ತಾವಾಡುವ
ಪ್ರತಿಯೊಂದು ಜೊಳ್ಳು ಮಾತಿಗೂ ತೀರ್ಪಿನ ದಿನ ಲೆಕ್ಕ ಕೊಡಬೇಕಾಗುವುದು ಎಂಬುದು ನಿಮಗೆ ತಿಳಿದಿರಲಿ.
37ನಿನ್ನ ಮಾತುಗಳಿಂದಲೇ ನೀನು ನಿರಪರಾಧಿಯೆಂದು ನಿರ್ಧರಿಸಲಾಗುವುದು; ಅಥವಾ ಅಪರಾಧಿಯೆಂದು
ಆಪಾದಿಸಲಾಗುವುದು," ಎಂದರು.

**ಪವಾಡ ಕೋರಿದ ಫರಿಸಾಯರು**

(ಮಾರ್ಕ 8:11–12; ಲೂಕ 11:29–32)

38 ಬಳಿಕ ಕೆಲವು ಮಂದಿ ಧರ್ಮಶಾಸ್ತ್ರಿಗಳೂ ಫರಿಸಾಯರೂ ಯೇಸುಸ್ವಾಮಿಯನ್ನು ಉದ್ದೇಶಿಸಿ,
"ಬೋಧಕರೇ, ನೀವು ಒಂದು ಸೂಚಕಕಾರ್ಯ ಮಾಡುವುದನ್ನು ನೋಡಬೇಕೆಂದಿದ್ದೇವೆ," ಎಂದರು.
39ಅದಕ್ಕೆ ಪ್ರತ್ಯುತ್ತರವಾಗಿ ಯೇಸು ಇಂತೆಂದರು: "ಈ ಕೆಟ್ಟ ಹಾಗೂ ದೈವಭ್ರಷ್ಟ ಪೀಳಿಗೆ ಸೂಚಕಕಾರ್ಯವನ್ನು
ಸಂಕೇತವಾಗಿ ಕೋರುತ್ತದೆ. ಪ್ರವಾದಿ ಯೋನನ ಸಂಕೇತವೇ ಹೊರತು ಬೇರೆ ಯಾವ ಸಂಕೇತವೂ ಇದಕ್ಕೆ
ದೊರಕದು. 40ಯೋನನು ಮೂರುದಿನ ಹಗಲುರಾತ್ರಿ ದೊಡ್ಡ ಮೀನಿನ ಉದರದಲ್ಲಿದ್ದನು. ಅದರಂತೆಯೇ
ನರಪುತ್ರನು ಮೂರುದಿನ ಹಗಲುರಾತ್ರಿ ಭೂಗರ್ಭದಲ್ಲಿರುವನು. 41ತೀರ್ಪಿನ ದಿನ ನಿನೆವೆ ನಗರದವರು ಈ
ಪೀಳಿಗೆಗೆ ಎದುರಾಗಿ ನಿಂತು ಇದನ್ನು ಅಪರಾಧಿಯೆಂದು ಖಂಡಿಸುವರು. ಏಕೆಂದರೆ, ಪ್ರವಾದಿ ಯೋನನ
ಬೋಧನೆಯನ್ನು ಕೇಳಿ ಅವರು ಪಾಪಕ್ಕೆ ವಿಮುಖರಾದರು. ಆದರೆ ಪ್ರವಾದಿ ಯೋನನಿಗಿಂತಲೂ
ಮೇಲಾದವನು ಇಗೋ, ಇಲ್ಲಿದ್ದಾನೆ. 42ಅದೇ ತೀರ್ಪಿನ ದಿನ ದಕ್ಷಿಣ ದೇಶದ ರಾಣಿ ಈ ಪೀಳಿಗೆಗೆ
ಎದುರಾಗಿ ನಿಂತು ಇದನ್ನು ಅಪರಾಧಿಯೆಂದು ಖಂಡಿಸುವಳು. ಆಕೆ ಸೊಲೊಮೋನನ ಜ್ಞಾನೋಕ್ತಿಗಳನ್ನು
ಕೇಳುವುದಕ್ಕಾಗಿ ದೂರ ದೇಶದಿಂದ ಬಂದಳು. ಆದರೆ ಸೊಲೊಮೋನನಿಗಿಂತಲೂ ಮೇಲಾದವನು ಇಗೋ,
ಇಲ್ಲಿದ್ದಾನೆ.

**ಶೂನ್ಯ ಮನ–ದೆವ್ವದ ತಾಣ**

(ಲೂಕ 11:24–26)

43 "ದೆವ್ವವು ಒಬ್ಬ ಮನುಷ್ಯನನ್ನು ಬಿಟ್ಟು ತೊಲಗಿದ ಮೇಲೆ ನೆಲೆಯನ್ನು ಹುಡುಕುತ್ತಾ ಒಣಗಾಡಿನಲ್ಲಿ
ಅಲೆದಾಡುತ್ತದೆ. ಅದಕ್ಕೆ ನೆಲೆಸಿಗದಾಗ, ಅದು, 'ನಾನು ಬಿಟ್ಟುಬಂದ ಮನೆಗೆ ಹಿಂದಿರುಗುತ್ತೇನೆ' ಎಂದು
ಹೇಳಿಕೊಳ್ಳುತ್ತದೆ. 44ಅದು ಮರಳಿ ಬಂದಾಗ, ಮನೆ ಬರಿದಾಗಿರುವುದನ್ನೂ ಗುಡಿಸಿರುವುದನ್ನೂ ಎಲ್ಲವೂ
ಚೊಕ್ಕಟ ಆಗಿರುವುದನ್ನೂ ಕಾಣುತ್ತದೆ. 45ಪುನಃ ಹೊರಟು ಹೋಗಿ ತನಗಿಂತಲೂ ಕೆಟ್ಟವುಗಳಾದ ಬೇರೆ
ಏಳು ದೆವ್ವಗಳನ್ನು ತನ್ನೊಡನೆ ಕರೆದುಕೊಂಡು ಬರುತ್ತದೆ. ಅವು ಆ ಮನುಷ್ಯನ ಒಳಹೊಕ್ಕು ನೆಲಸುತ್ತವೆ.
ಆಗ ಅವನ ಪರಿಸ್ಥಿತಿ ಪೂರ್ವಸ್ಥಿತಿಗಿಂತಲೂ ಅಧೋಗತಿಗಿಳಿಯುತ್ತದೆ. ಆ ದುಷ್ಟ ಪೀಳಿಗೆಗೆ ಸಂಭವಿಸುವ
ಗತಿಯೂ ಅದೇ," ಎಂದರು.

**ವಿಶ್ವ ಕುಟುಂಬಿ ಯೇಸು**

(ಮಾರ್ಕ 3:31–35; ಲೂಕ 8:19–21)

46 ಯೇಸುಸ್ವಾಮಿ ತಮ್ಮನ್ನು ಸುತ್ತುವರಿದಿದ್ದ ಜನರಿಗೆ ಇನ್ನೂ ಬೋಧನೆ ಮಾಡುತ್ತಿದ್ದರು. ಆಗ
ಅವರ ತಾಯಿ ಮತ್ತು ಸಹೋದರರು ಬಂದು ಅವರೊಡನೆ ಮಾತನಾಡಬಯಸಿ ಹೊರಗೆ ನಿಂತಿದ್ದರು.
47"ನಿಮ್ಮ ತಾಯಿ ಮತ್ತು ಸಹೋದರರು ಹೊರಗೆ ನಿಂತಿದ್ದಾರೆ; ನಿಮ್ಮೊಡನೆ ಮಾತನಾಡಬೇಕೆಂದಿದ್ದಾರೆ,"
ಎಂದು ಒಬ್ಬನು ತಿಳಿಸಿದನು. 48ಅದಕ್ಕೆ ಯೇಸು, "ನನ್ನ ತಾಯಿ ಯಾರು? ನನ್ನ ಸಹೋದರರು ಯಾರು?"
ಎನ್ನುತ್ತಾ, ತಮ್ಮ ಶಿಷ್ಯರ ಕಡೆಗೆ ಕೈ ತೋರಿಸಿ, 49"ಇಗೋ ನೋಡು, ನನ್ನ ತಾಯಿ; ನನ್ನ ಸಹೋದರರು;
50ಸ್ವರ್ಗದಲ್ಲಿರುವ ನನ್ನ ತಂದೆಯ ಚಿತ್ತವನ್ನು ಯಾರು ನೆರವೇರಿಸುತ್ತಾರೋ ಅವರೇ ನನಗೆ ಸಹೋದರ,
ಸಹೋದರಿ ಮತ್ತು ತಾಯಿ," ಎಂದರು.

### ಬಿತ್ತುವವನ ಸಾಮತಿ
(ಮಾರ್ಕ 4:1–9; ಲೂಕ 8:4–8)

**13** ಅದೇ ದಿನ ಯೇಸುಸ್ವಾಮಿ ಮನೆಯಿಂದ ಹೊರಟು ಸರೋವರದ ತೀರದಲ್ಲಿ ಕುಳಿತರು. [2]ಜನರು
ತಂಡೋಪತಂಡವಾಗಿ ಕೂಡಿ ಬಂದುದರಿಂದ ದೋಣಿ ಹತ್ತಿ ಕುಳಿತುಕೊಳ್ಳಬೇಕಾಯಿತು. ಜನರು ದಡದಲ್ಲೇ
ನಿಂತರು. [3]ಆಗ ಯೇಸು ಅವರಿಗೆ ಅನೇಕ ವಿಷಯಗಳನ್ನು ಸಾಮತಿಯ ರೂಪದಲ್ಲಿ ಹೇಳಿದರು:

4 "ಒಬ್ಬ ರೈತ ಬಿತ್ತುವುದಕ್ಕೆ ಹೋದ. ಬಿತ್ತನೆ ಮಾಡುತ್ತಿದ್ದಾಗ ಕೆಲವು ಬೀಜಗಳು ಕಾಲ್ದಾರಿಯಲ್ಲಿ
ಬಿದ್ದವು. ಬಿದ್ದದ್ದೇ ಹಕ್ಕಿಗಳು ಬಂದು ಆ ಬೀಜವನ್ನು ತಿಂದುಬಿಟ್ಟವು. [5]ಬೇರೆ ಕೆಲವು ಬೀಜಗಳು ಹೆಚ್ಚು
ಮಣ್ಣಿಲ್ಲದ ಕಲ್ಲು ನೆಲದ ಮೇಲೆ ಬಿದ್ದವು. ಅಲ್ಲಿ ಮಣ್ಣು ತೆಳ್ಳಗಿದ್ದುದರಿಂದ ಅವು ಬೇಗನೆ ಮೊಳೆತವು. [6]ಆದರೆ
ಬಿಸಿಲೇರಿದಾಗ ಬಾಡಿದವು. ಬೇರು ಬಲವಾಗಿಲ್ಲದ ಕಾರಣ ಒಣಗಿಹೋದವು. [7]ಮತ್ತೆ ಕೆಲವು ಬೀಜಗಳು
ಮುಳ್ಳುಪೊದೆಗಳ ನಡುವೆ ಬಿದ್ದವು. ಆ ಪೊದೆಗಳು ಸಸ್ಯಗಳ ಸಮೇತ ಬೆಳೆದು, ಅವುಗಳನ್ನು ಅಡಗಿಸಿ
ಬಿಟ್ಟವು. [8]ಇನ್ನೂ ಕೆಲವು ಬೀಜಗಳು ಹದವಾದ ಭೂಮಿಯಲ್ಲಿ ಬಿದ್ದವು. ಅವು ಮೊಳೆತು, ಬೆಳೆದು,
ತೆನೆಬಿಟ್ಟವು. ಕೆಲವು ನೂರರಷ್ಟು, ಮತ್ತೆ ಕೆಲವು ಅರವತ್ತರಷ್ಟು, ಇನ್ನು ಕೆಲವು ಮೂವತ್ತರಷ್ಟು ಫಸಲನ್ನು
ಕೊಟ್ಟವು. [9]ಕೇಳಲು ಕಿವಿಯುಳ್ಳವನು ಕೇಳಿಸಿಕೊಳ್ಳಲಿ," ಎಂದು ಒತ್ತಿ ಹೇಳಿದರು.

### ಬೋಧನೆಯಲ್ಲಿ ಸಾಮತಿ ಏಕೆ?
**(ಮಾರ್ಕ 4:10–12; ಲೂಕ 8:9–10)**

10 ತರುವಾಯ ಶಿಷ್ಯರು ಯೇಸುಸ್ವಾಮಿಯ ಬಳಿಗೆ ಬಂದು, "ನೀವು ಜನರೊಡನೆ
ಮಾತನಾಡುವಾಗ ಸಾಮತಿಗಳನ್ನು ಉಪಯೋಗಿಸುತ್ತೀರಿ, ಏಕೆ?" ಎಂದು ಕೇಳಿದರು. [11]ಅದಕ್ಕೆ
ಪ್ರತ್ಯುತ್ತರವಾಗಿ ಯೇಸು, "ಸ್ವರ್ಗಸಾಮ್ರಾಜ್ಯದ ರಹಸ್ಯಗಳನ್ನು ಅರಿತುಕೊಳ್ಳುವ ಸದವಕಾಶ ಲಭಿಸಿರುವುದು
ನಿಮಗೆ, ಅವರಿಗಲ್ಲ. [12]ಉಳ್ಳವನಿಗೆ ಇನ್ನೂ ಹೆಚ್ಚಾಗಿ ಕೊಡಲಾಗುತ್ತದೆ. ಅವನು ಸಮೃದ್ಧನಾಗುತ್ತಾನೆ.
ಇಲ್ಲದವನಿಂದ ಇರುವ ಕಿಂಚಿತ್ತನ್ನೂ ಕಸಿದುಕೊಳ್ಳಲಾಗುತ್ತದೆ. [13]ಅವರೊಡನೆ ಸಾಮತಿ ರೂಪದಲ್ಲಿ
ಮಾತನಾಡುವುದಕ್ಕೆ ಕಾರಣ ಇದು: ಅವರು ಕಣ್ಣಾರೆ ನೋಡಿದರೂ ಕಾಣುವುದಿಲ್ಲ; ಕಿವಿಯಾರೆ ಕೇಳಿದರೂ
ಕಿವಿಗೊಡುವುದಿಲ್ಲ; ಗ್ರಹಿಸುವುದೂ ಇಲ್ಲ. [14]ಪ್ರವಾದಿ ಯೆಶಾಯನ ಈ ಪ್ರವಚನ ಅವರಲ್ಲಿ ಈಡೇರುತ್ತದೆ:

"ಕೇಳಿ ಕೇಳಿಯೂ ಗ್ರಹಿಸರು
ನೋಡಿ ನೋಡಿಯೂ ಕಾಣರು.
15 ಈ ಜನರ ಹೃದಯ ಕಲ್ಲಾಗಿದೆ
ಕಿವಿ ಮಂದವಾಗಿದೆ
ಕಣ್ಣು ಮಬ್ಬಾಗಿದೆ.
ಇಲ್ಲದಿದ್ದರೆ ಇವರ ಕಣ್ಣು ಕಾಣುತ್ತಾ
ಕಿವಿ ಕೇಳುತ್ತಾ
ಹೃದಯ ಗ್ರಹಿಸುತ್ತಾ
ನನ್ನತ್ತ ತಿರುಗುತ್ತಿದ್ದರು;
ದೇವರಾದ ನಾನಿವರನು
ಸ್ವಸ್ಥಪಡಿಸುತ್ತಿದ್ದೆನು."

16 "ನೀವಾದರೋ ಭಾಗ್ಯವಂತರು. ನಿಮ್ಮ ಕಣ್ಣುಗಳು ಕಾಣುತ್ತವೆ, ಕಿವಿಗಳು ಕೇಳುತ್ತವೆ. [17]ಎಷ್ಟೋ
ಪ್ರವಾದಿಗಳು ಹಾಗೂ ಸತ್ಪುರುಷರು ನೀವು ನೋಡುವುದನ್ನು ನೋಡುವುದಕ್ಕೂ, ಕೇಳುವುದನ್ನು
ಕೇಳುವುದಕ್ಕೂ ಅಪೇಕ್ಷಿಸಿದರು. ಆದರೆ ಅವರು ನೋಡಲೂ ಇಲ್ಲ, ಕೇಳಲೂ ಇಲ್ಲ ಎಂಬುದು ನಿಮಗೆ
ತಿಳಿದಿರಲಿ.

## ಬಿತ್ತುವವನ ಸಾಮತಿಯ ಅರ್ಥ
(ಮಾರ್ಕ 4:13-20; ಲೂಕ 8:11-15)

18 "ಈಗ ಬಿತ್ತುವವನ ಸಾಮತಿಯ ಅರ್ಥವನ್ನು ಕೇಳಿ: [19]ಒಬ್ಬನು ಶ್ರೀ ಸಾಮ್ರಾಜ್ಯದ ಸಂದೇಶವನ್ನು ಕೇಳಿ ಅದನ್ನು ಗ್ರಹಿಸದೆ ಹೋದರೆ, ಕೇಡಿಗನು ಬಂದು ಅವನ ಹೃದಯದಲ್ಲಿ ಬಿತ್ತಿದ್ದ ಬೀಜವನ್ನು ತೆಗೆದೆಸೆಯುತ್ತಾನೆ. ಇವನು ಕಾಲ್ದಾರಿಯಲ್ಲಿ ಬಿದ್ದ ಬೀಜವನ್ನು ಹೋಲುತ್ತಾನೆ. [20]ಬೇರೊಬ್ಬನು ಈ ಸಂದೇಶವನ್ನು ಕೇಳಿದಕೂಡಲೇ ಅದನ್ನು ಸಂತೋಷದಿಂದ ಸ್ವೀಕರಿಸುತ್ತಾನೆ. [21]ಆದರೆ ಅದು ತನ್ನಲ್ಲಿ ಬೇರೂರದ ಕಾರಣ ಕೊಂಚಕಾಲ ಮಾತ್ರ ಇದ್ದು, ಸಂದೇಶದ ನಿಮಿತ್ತ ಕಷ್ಟ ಕೋಟಲೆಗಳು ಬಂದೊದಗಿದಾಗ ಕೂಡಲೇ ಎಡವಿ ಬೀಳುತ್ತಾನೆ. ಇವನು ಕಲ್ಲು ನೆಲದ ಮೇಲೆ ಬಿದ್ದ ಬೀಜವನ್ನು ಹೋಲುತ್ತಾನೆ. [22]ಇನ್ನೊಬ್ಬನು ಸಂದೇಶವನ್ನೇನೋ ಕೇಳುತ್ತಾನೆ, ಆದರೆ ಪ್ರಾಪಂಚಿಕ ಚಿಂತನೆಗಳು, ಐಶ್ವರ್ಯದ ವ್ಯಾಮೋಹಗಳು ಆ ಸಂದೇಶವನ್ನು ಫಲಬಿಡದಂತೆ ಅದುಮಿಬಿಡುತ್ತವೆ; ಇವನು ಮುಳ್ಳುಪೊದೆಗಳಲ್ಲಿ ಬಿದ್ದ ಬೀಜವನ್ನು ಹೋಲುತ್ತಾನೆ. [23]ಇನ್ನೊಬ್ಬನು ವಾಕ್ಯವನ್ನು ಕೇಳುತ್ತಾನೆ, ಗ್ರಹಿಸಿಕೊಳ್ಳುತ್ತಾನೆ; ಫಲಪ್ರದನಾಗಿ ನೂರರಷ್ಟು, ಅರವತ್ತರಷ್ಟು, ಮೂವತ್ತರಷ್ಟು ಫಲ ಕೊಡುತ್ತಾನೆ. ಇವನು ಹದವಾದ ಭೂಮಿಯಲ್ಲಿ ಬಿದ್ದ ಬೀಜವನ್ನು ಹೋಲುತ್ತಾನೆ," ಎಂದರು.

## ಕಳೆಗಳ ಸಾಮತಿ

24 ಯೇಸುಸ್ವಾಮಿ ಜನರಿಗೆ ಮತ್ತೊಂದು ಸಾಮತಿಯನ್ನು ಹೇಳಿದರು: "ಸ್ವರ್ಗಸಾಮ್ರಾಜ್ಯವು ತನ್ನ ಹೊಲದಲ್ಲಿ ಒಳ್ಳೆಯ ಗೋದಿಯನ್ನು ಬಿತ್ತಿದ ರೈತನನ್ನು ಹೋಲುತ್ತದೆ. [25]ಒಂದು ರಾತ್ರಿ ಎಲ್ಲರೂ ನಿದ್ರಿಸುತ್ತಿರುವಾಗ, ಅವನ ವೈರಿ ಬಂದು, ಗೋದಿಯ ನಡುವೆ ಕಳೆಗಳನ್ನು ಬಿತ್ತಿ ಹೋದ. [26]ಗೋದಿ ಬೆಳೆದು ತೆನೆಬಿಟ್ಟಾಗ ಕಳೆ ಬೆಳೆದಿರುವುದೂ ಗೋಚರವಾಯಿತು. [27]ಆಗ ಆಳುಗಳು ತಮ್ಮ ಯಜಮಾನನ ಬಳಿಗೆ ಬಂದು, "ಸ್ವಾಮೀ, ನಿಮ್ಮ ಹೊಲದಲ್ಲಿ ಬಿತ್ತಿದ್ದು ಉತ್ತಮವಾದ ಗೋದಿ ಅಲ್ಲವೆ? ಜೊತೆಗೆ ಕಳೆಯೂ ಕಾಣಿಸಿಕೊಂಡಿದೆಯಲ್ಲಾ, ಅದೆಲ್ಲಿಂದ ಬಂತು?" ಎಂದರು. [28]ಯಜಮಾನ, 'ಇದು ನನ್ನ ವೈರಿ ಮಾಡಿರುವ ಕೆಲಸ,' ಎಂದ. 'ಹಾಗಾದರೆ, ಕಳೆಯನ್ನು ಕಿತ್ತು ಹಾಕೋಣವೇ?' ಎಂದರು ಆಳುಗಳು, [29]ಅದಕ್ಕೆ ಯಜಮಾನ 'ಬೇಡ, ಬೇಡ; ಕಳೆಯನ್ನು ಕೀಳುವಾಗ, ಗೋದಿಯನ್ನೂ ಕಿತ್ತು ಬಿಟ್ಟೀರಿ. [30]ಸುಗ್ಗಿಯವರೆಗೆ ಎರಡೂ ಒಟ್ಟಿಗೆ ಬೆಳೆಯಲಿ; ಸುಗ್ಗಿಯ ಕಾಲದಲ್ಲಿ ಮೊದಲು ಕಳೆ ಕಿತ್ತು, ಸುಟ್ಟು ಹಾಕಲು ಕಟ್ಟಿಡಿ; ಬಳಿಕ ಗೋದಿಯನ್ನು ಒಕ್ಕಣೆಮಾಡಿ ನನ್ನ ಕಣಜಕ್ಕೆ ತುಂಬಿರಿ, ಎಂದು ಕೊಯ್ಲುಗಾರರಿಗೆ ಹೇಳುತ್ತೇನೆ,' ಎಂದ".

## ಸಾಸಿವೆ ಕಾಳಿನ ಸಾಮತಿ
(ಮಾರ್ಕ 4:30-32; ಲೂಕ 13:18-19)

31 ಯೇಸುಸ್ವಾಮಿ ಇನ್ನೊಂದು ಸಾಮತಿಯನ್ನು ಹೇಳಿದರು: "ಸ್ವರ್ಗಸಾಮ್ರಾಜ್ಯ ಒಂದು ಸಾಸಿವೆ ಕಾಳನ್ನು ಹೋಲುತ್ತದೆ; ಈ ಕಾಳನ್ನು ತೆಗೆದುಕೊಂಡುಹೋಗಿ ರೈತ ತನ್ನ ಹೊಲದಲ್ಲಿ ಬಿತ್ತಿದ. [32]ಕಾಳುಗಳಲ್ಲಿ ಅತಿ ಸಣ್ಣದಾದ ಇದನ್ನು ಬಿತ್ತಿದಾಗ ಎಲ್ಲ ಸಸ್ಯಗಳಿಗಿಂತಲೂ ದೊಡ್ಡದಾಗಿ ಬೆಳೆದು ಮರವಾಗುತ್ತದೆ. ಆಕಾಶದಲ್ಲಿ ಹಾರಾಡುವ ಹಕ್ಕಿಗಳು ಬಂದು ಇದರ ರೆಂಬೆಗಳಲ್ಲಿ ಗೂಡುಕಟ್ಟಿ ವಾಸಿಸುತ್ತವೆ."

## ಹುಳಿಹಿಟ್ಟಿನ ಸಾಮತಿ
(ಲೂಕ 13:20-21)

33 ಯೇಸುಸ್ವಾಮಿ ಮತ್ತೊಂದು ಸಾಮತಿಯನ್ನು ಜನರಿಗೆ ಹೇಳಿದರು: "ಸ್ವರ್ಗಸಾಮ್ರಾಜ್ಯ ಹುದುಗೆಬ್ಬಿಸುವ ಹುಳಿಯನ್ನು ಹೋಲುತ್ತದೆ. ಅದನ್ನು ಒಬ್ಬಾಕೆ ತೆಗೆದುಕೊಂಡು ಮೂರು ಸೇರು ಹಿಟ್ಟಿನಲ್ಲಿ ಕಲಸಿದಳು. ಆ ಹಿಟ್ಟೆಲ್ಲಾ ಹುಳಿಯಾಯಿತು."

### ಸಾಮತಿಗಳ ಸುರಿಮಳೆಯೇಕೆ?

(ಮಾರ್ಕ 4:33–34)

34 ಇದೆಲ್ಲವನ್ನೂ ಯೇಸುಸ್ವಾಮಿ ಜನರಿಗೆ ಸಾಮತಿಗಳ ರೂಪದಲ್ಲಿ ಹೇಳಿದರು. ಸಾಮತಿಗಳಿಲ್ಲದೆ
ಅವರಿಗೆ ಏನನ್ನೂ ಬೋಧಿಸಲಿಲ್ಲ.
35 “ಸಾಮತಿಗಳಲ್ಲೇ ಬೋಧಿಸುವೆನು;
ಲೋಕಾದಿಯಿಂದ ರಹಸ್ಯವಾದವುಗಳನ್ನು
ಬಯಲುಗೊಳಿಸುವೆನು"
ಎಂದು ದೇವರು ಪ್ರವಾದಿಯ ಮುಖಾಂತರ ತಿಳಿಸಿದ್ದ ಪ್ರವಚನವನ್ನು ಯೇಸು ಹೀಗೆ ನೆರವೇರಿಸಿದರು.

### ಕಳೆಗಳ ಸಾಮತಿಗೆ ಅರ್ಥ

36 ಯೇಸುಸ್ವಾಮಿ ಜನರನ್ನು ಬೀಳ್ಕೊಟ್ಟು ಮನೆಗೆ ಬಂದರು. ಶಿಷ್ಯರು ಅವರ ಬಳಿಗೆ ಬಂದು,
"ಹೊಲದಲ್ಲಿ ಬಿತ್ತಲಾದ ಕಳೆಗಳ ಸಾಮತಿಯನ್ನು ನಮಗೆ ವಿವರಿಸಿರಿ," ಎಂದು ಕೇಳಿಕೊಂಡರು. 37ಅದಕ್ಕೆ
ಯೇಸು, "ಒಳ್ಳೆಯ ಗೋದಿಯನ್ನು ಬಿತ್ತುವವನು ಎಂದರೆ ನರಪುತ್ರನು; 38ಹೊಲವೇ ಈ ಲೋಕ; ಒಳ್ಳೆಯ
ಕಾಳುಗಳೇ ಶ್ರೀಸಾಮ್ರಾಜ್ಯದ ಮಕ್ಕಳು; ಕಳೆಗಳೇ ಕೇಡಿಗನ ಮಕ್ಕಳು. 39ಆ ಕಳೆಗಳನ್ನು ಬಿತ್ತಿದ ವೈರಿಯೇ
ಪಿಶಾಚಿ. ಸುಗ್ಗಿಯೇ ಕಾಲಾಂತ್ಯ, ಕೊಯ್ಲುಗಾರರೇ ದೇವದೂತರು. 40ಕಳೆಗಳನ್ನು ಕಿತ್ತು ಬೆಂಕಿಯಲ್ಲಿ ಸುಟ್ಟು
ಹಾಕಿದಂತೆ ಕಾಲಾಂತ್ಯದಲ್ಲೂ ನಡೆಯುವುದು. 41ನರಪುತ್ರನು ತನ್ನ ದೂತರನ್ನು ಕಳುಹಿಸುವನು. ಅವರು
ಆತನ ರಾಜ್ಯದಿಂದ ಪಾಪಕ್ಕೆ ಕಾರಣವಾದುದೆಲ್ಲವನ್ನೂ 42ಮತ್ತು ದುಷ್ಕರ್ಮಿಗಳೆಲ್ಲರನ್ನೂ ಒಟ್ಟುಗೂಡಿಸಿ
ಅಗ್ನಿಕುಂಡದಲ್ಲಿ ಹಾಕುವರು; ಅಲ್ಲಿ ಅವರು ಕಟಕಟನೆ ಹಲ್ಲು ಕಡಿದುಕೊಂಡು ಗೋಳಾಡುವರು.
43ಸದ್ಧರ್ಮಿಗಳು ತಮ್ಮ ತಂದೆಯ ಸಾಮ್ರಾಜ್ಯದಲ್ಲಿ ಸೂರ್ಯನಂತೆ ಪ್ರಕಾಶಿಸುವರು. ಕಿವಿಯುಳ್ಳವನು
ಕೇಳಿಸಿಕೊಳ್ಳಲಿ!

### ಹೂಳಿಟ್ಟ ನಿಧಿ

44 "ಸ್ವರ್ಗಸಾಮ್ರಾಜ್ಯವನ್ನು ಹೊಲದಲ್ಲಿ ಹೂಳಿಟ್ಟ ನಿಧಿಗೆ ಹೋಲಿಸಬಹುದು. ಇದನ್ನು ಒಬ್ಬನು
ಪತ್ತೆಹಚ್ಚಿ ಅಲ್ಲಿಯೇ ಮುಚ್ಚಿಡುತ್ತಾನೆ. ತನಗಾದ ಸಂತೋಷದಿಂದ ಹೋಗಿ ತನಗೆ ಇದ್ದುಬದ್ದುದೆಲ್ಲವನ್ನೂ
ಮಾರಿ ಈ ಹೊಲವನ್ನೇ ಕೊಂಡು ಕೊಂಡುಬಿಡುತ್ತಾನೆ.

### ಅನರ್ಘ್ಯ ಮುತ್ತುರತ್ನ

45 "ಸ್ವರ್ಗಸಾಮ್ರಾಜ್ಯವನ್ನು ಉತ್ತಮವಾದ ಮುತ್ತುರತ್ನಗಳನ್ನು ಹುಡುಕಿಕೊಂಡು ಹೋಗುವ
ವರ್ತಕನಿಗೂ ಹೋಲಿಸಬಹುದು. 46ಅನರ್ಘ್ಯವಾದ ಒಂದು ಮುತ್ತನ್ನು ಕಂಡ ಕೂಡಲೆ ವರ್ತಕ ತನ್ನ
ಆಸ್ತಿಪಾಸ್ತಿಯನ್ನೆಲ್ಲಾ ಮಾರಿ ಆ ಮುತ್ತನ್ನು ಕೊಂಡುಕೊಳ್ಳುತ್ತಾನೆ.

### ಬೀಸುಬಲೆ

47 "ಸ್ವರ್ಗಸಾಮ್ರಾಜ್ಯವನ್ನು ಒಂದು ಮೀನುಬಲೆಗೆ ಹೋಲಿಸಬಹುದು. ಬೆಸ್ತರು ಬಲೆಯನ್ನು
ಸಮುದ್ರದಲ್ಲಿ ಬೀಸಿ ಎಲ್ಲಾ ಜಾತಿಯ ಮೀನುಗಳನ್ನು ಹಿಡಿಯುತ್ತಾರೆ. 48ಬಲೆ ತುಂಬಿದ ಮೇಲೆ ಅದನ್ನು
ದಡಕ್ಕೆ ಎಳೆದು, ಕಳಿತುಕೊಂಡು, ಒಳ್ಳೆಯ ಮೀನುಗಳನ್ನು ಮಾತ್ರ ಆರಿಸಿಕೊಂಡು ಬುಟ್ಟಿಗೆ ಹಾಕಿಕೊಳ್ಳುತ್ತಾರೆ;
ಕೆಟ್ಟವನ್ನು ಎಸೆದುಬಿಡುತ್ತಾರೆ. 49ಕಾಲಾಂತ್ಯದಲ್ಲಿ ಇದರಂತೆಯೇ ಆಗುವುದು; ದೇವದೂತರು
ಹೊರಟುಬಂದು ದುರ್ಜನರನ್ನು ಸಜ್ಜನರಿಂದ ಬೇರ್ಪಡಿಸುವರು. ದುರ್ಜನರನ್ನು ಅಗ್ನಿಕುಂಡದಲ್ಲಿ
ಹಾಕುವರು. 50ಅಲ್ಲಿ ಅವರು ಕಟಕಟನೆ ಹಲ್ಲು ಕಡಿದುಕೊಂಡು ಗೋಳಾಡುವರು.
51 "ಇದೆಲ್ಲ ನಿಮಗೆ ಅರ್ಥವಾಯಿತೇ?" ಎಂದು ಯೇಸುಸ್ವಾಮಿ ಕೇಳಿದರು. ಶಿಷ್ಯರು
"ಅರ್ಥವಾಯಿತು" ಎಂದರು. 52ಆಗ ಯೇಸು, "ಇಂತಿರಲು, ಸ್ವರ್ಗಸಾಮ್ರಾಜ್ಯದಲ್ಲಿ ಶಿಷ್ಯನಾಗಿರುವ

ಪ್ರತಿಯೊಬ್ಬ ಶಾಸ್ತ್ರಜ್ಞನು ಮನೆಯ ಯಜಮಾನ ಇದ್ದ ಹಾಗೆ. ಅವನು ತನ್ನ ಉಗ್ರಾಣದಿಂದ ಹೊಸ ಹಾಗೂ
ಹಳೆಯ ವಸ್ತುಗಳನ್ನು ಹೊರಗೆ ತರುತ್ತಾ ಇರುತ್ತಾನೆ," ಎಂದರು.

### ಹಿತ್ತಲಗಿಡ ಮದ್ದಲ್ಲ!

(ಮಾರ್ಕ 6:1–6; ಲೂಕ 4:16–30)

53 ಈ ಸಾಮತಿಗಳನ್ನು ಹೇಳಿಯಾದ ಮೇಲೆ ಯೇಸುಸ್ವಾಮಿ ಅಲ್ಲಿಂದ ಹೊರಟು ಹೋದರು.
54ತಮ್ಮ ಸ್ವಂತ ಊರಿಗೆ ಮರಳಿ ಬಂದು ಅಲ್ಲಿಯ ಪ್ರಾರ್ಥನಾಮಂದಿರದಲ್ಲಿ ಬೋಧನೆ ಮಾಡಿದರು. ಅದನ್ನು
ಕೇಳುತ್ತಿದ್ದ ಜನರು ಆಶ್ಚರ್ಯಚಕಿತರಾಗಿ, "ಈ ಪರಿಜ್ಞಾನ ಇವನಿಗೆಲ್ಲಿಂದ ಬಂತು? ಈ ಮಹತ್ಕಾರ್ಯಗಳನ್ನು
ಇವನು ಮಾಡುವುದಾದರೂ ಹೇಗೆ? 55ಇವನು ಆ ಬಡಗಿಯ ಮಗನಲ್ಲವೇ? ಮರಿಯಳು ಇವನ
ತಾಯಲ್ಲವೇ? ಯಕೋಬ, ಜೋಸೆಫ್, ಸಿಮೋನ, ಯೂದ ಇವರು ಇವನ ಸೋದರರಲ್ಲವೇ? 56ಇವನ
ಸೋದರಿಯರೆಲ್ಲಾ ಇಲ್ಲೇ ವಾಸಮಾಡುತ್ತಿಲ್ಲವೇ? ಹಾಗಾದರೆ ಇವನಿಗೆ ಇದೆಲ್ಲಾ ಎಲ್ಲಿಂದ ಬಂತು?" ಎಂದು
ಮಾತಾಡಿಕೊಂಡು ಯೇಸುವನ್ನು ತಿರಸ್ಕರಿಸಿದರು. 57ಅವರಿಗೆ ಯೇಸು, "ಪ್ರವಾದಿಗೆ ಬೇರೆ ಎಲ್ಲಿಯಾದರೂ
ಗೌರವ ದೊರಕೀತು; ಆದರೆ ಸ್ವಗ್ರಾಮದಲ್ಲಿ ಹಾಗೂ ಸ್ವಗೃಹದಲ್ಲಿ ಮಾತ್ರ ಗೌರವ ದೊರಕದು," ಎಂದು
ಹೇಳಿದರು. 58ಅವರ ಅವಿಶ್ವಾಸದ ಕಾರಣ ಯೇಸು ಅದ್ಭುತ ಕಾರ್ಯಗಳನ್ನು ಅಲ್ಲಿ ಹೆಚ್ಚಾಗಿ ಮಾಡಲಿಲ್ಲ.

### ಹೆರೋದನ ಮರುಳಿಗೆ ಯೊವಾನ್ನನ ಕೊರಳು

(ಮಾರ್ಕ 6:14–29; ಲೂಕ 9:7–9)

**14** ಯೇಸುಸ್ವಾಮಿಯ ಸಮಾಚಾರ ಆಗ ಗಲಿಲೇಯ ಪ್ರಾಂತ್ಯಕ್ಕೆ ಸಾಮಂತ ರಾಜನಾಗಿದ್ದ ಹೆರೋದನ
ಕಿವಿಗೆ ಬಿದ್ದಿತು. 2ಅವನು ತನ್ನ ಪರಿಚಾರಕರಿಗೆ, "ಮಡಿದ ಸ್ನಾನಿಕ ಯೊವಾನ್ನನೇ ಮರಳಿ ಜೀವಂತನಾಗಿ
ಬಂದಿದ್ದಾನೆ; ಆದ್ದರಿಂದಲೇ ಮಹತ್ಕಾರ್ಯಗಳನ್ನು ಮಾಡುವ ಶಕ್ತಿ ಇವನಿಗಿದೆ," ಎಂದನು.

3 ಹೆರೋದನು ತನ್ನ ಸಹೋದರ ಫಿಲಿಪ್ಪನ ಧರ್ಮಪತ್ನಿಯಾದ ಹೆರೋದಿಯಳನ್ನು
ಇಟ್ಟುಕೊಂಡಿದ್ದನು. ಅವಳ ಪ್ರಯುಕ್ತ ಯೊವಾನ್ನನನ್ನು ಹಿಡಿದು ಬಂಧಿಸಿ ಸೆರೆಯಲ್ಲಿ ಹಾಕಿದ್ದನು. 4ಏಕೆಂದರೆ
ಆತನು, "ನಿನ್ನ ಸಹೋದರನ ಧರ್ಮಪತ್ನಿಯನ್ನು ನೀನು ಇಟ್ಟುಕೊಂಡಿರುವುದು ಅಕ್ರಮ," ಎಂದು
ಹೆರೋದನಿಗೆ ಹೇಳುತ್ತಿದ್ದನು. 5ಯೊವಾನ್ನನನ್ನು ಕೊಲ್ಲಿಸಬೇಕೆಂದಿದ್ದರೂ ಹೆರೋದನು ಜನರಿಗೆ ಹೆದರಿದ್ದನು.
ಅವರು ಆತನನ್ನು ಪ್ರವಾದಿಯೆಂದು ಭಾವಿಸಿದ್ದರು.

6 ಹೀಗಿರುವಲ್ಲಿ ಹೆರೋದನ ಹುಟ್ಟುಹಬ್ಬ ಬಂದಿತು. ಹೆರೋದಿಯಳ ಮಗಳು ಆಹ್ವಾನಿತರ ಮುಂದೆ
ನರ್ತನಮಾಡಿ ಹೆರೋದನನ್ನು ಮೆಚ್ಚಿಸಿದಳು. 7ಆಗ ಅವಳು ಏನು ಕೇಳಿದರೂ ಕೊಡುವುದಾಗಿ ಅವನು
ಪ್ರಮಾಣಪೂರ್ವಕವಾಗಿ ವಾಗ್ದಾನ ಮಾಡಿದನು. 8ಅವಳು ತನ್ನ ತಾಯಿಯ ಸಲಹೆ ಪಡೆದು, "ನನಗೆ ಸ್ನಾನಿಕ
ಯೊವಾನ್ನನ ತಲೆಯನ್ನು ಒಂದು ತಟ್ಟೆಯಲ್ಲಿ ತರಿಸಿಕೊಡಿ," ಎಂದಳು.

9 ಇದನ್ನು ಕೇಳಿ ರಾಜನಿಗೆ ವ್ಯಥೆಯಾಯಿತು. ಆದರೆ ಅತಿಥಿಗಳ ಮುಂದೆ ಮಾಡಿದ ಪ್ರಮಾಣವನ್ನು
ಮುರಿಯಲಾಗದೆ ಅವಳ ಇಚ್ಛೆಯನ್ನು ಪೂರೈಸುವಂತೆ ಆಜ್ಞೆಮಾಡಿದನು. 10ಅದರಂತೆಯೇ ಆಳುಗಳನ್ನು
ಕಳುಹಿಸಿ, ಸೆರೆಮನೆಯಲ್ಲಿದ್ದ ಯೊವಾನ್ನನ ತಲೆಯನ್ನು ಕಡಿಸಿದನು; 11ಅದನ್ನು ಒಂದು ತಟ್ಟೆಯಲ್ಲಿ ತಂದು
ಆ ಹುಡುಗಿಗೆ ಕೊಡಲಾಯಿತು. ಅವಳು ಅದನ್ನು ತನ್ನ ತಾಯಿಯ ಬಳಿಗೆ ತೆಗೆದುಕೊಂಡು ಹೋದಳು.
12ಯೊವಾನ್ನನ ಶಿಷ್ಯರು ಶವವನ್ನು ತೆಗೆದುಕೊಂಡು ಹೋಗಿ ಸಮಾಧಿಮಾಡಿದರು. ಅನಂತರ ಹೋಗಿ
ಯೇಸುವಿಗೆ ಈ ವಿಷಯವನ್ನು ತಿಳಿಸಿದರು.

## ನಿರ್ಜನ ಪ್ರದೇಶದಲ್ಲಿ ಭರ್ಜರಿ ಭೋಜನ

(ಮಾರ್ಕ 6:30–44; ಲೂಕ 9:10–17; ಯೊವಾ. 6:1–14)

13 ಈ ಸಮಾಚಾರವನ್ನು ಕೇಳಿದ ಯೇಸುಸ್ವಾಮಿ ಆ ಸ್ಥಳವನ್ನು ಬಿಟ್ಟು, ದೋಣಿಹತ್ತಿ ನಿರ್ಜನ ಪ್ರದೇಶಕ್ಕೆ ಒಬ್ಬಂಟಿಗರಾಗಿ ಹೊರಟರು. ಇದನ್ನು ತಿಳಿದುಕೊಂಡ ಜನರು ಊರೂರುಗಳಿಂದ ಹೊರಟು ಗುಂಪುಗುಂಪಾಗಿ ಅವರ ಹಿಂದೆಯೇ ಕಾಲ್ದಾರಿಯಲ್ಲಿ ನಡೆದುಹೋದರು. [14]ಯೇಸು ದೋಣಿಯಿಂದ ಇಳಿದಾಗ, ದೊಡ್ಡ ಜನಸಮೂಹ ಆಗಲೇ ಅಲ್ಲಿ ಸೇರಿತ್ತು. ಆ ಸಮೂಹವನ್ನು ಕಂಡು ಅವರ ಮನ ಕರಗಿತು; ಅವರಲ್ಲಿ ಅಸ್ವಸ್ಥರಾಗಿದ್ದವರನ್ನು ಗುಣಪಡಿಸಿದರು.

15 ಸಂಜೆಯಾದಾಗ, ಶಿಷ್ಯರು ಯೇಸುವಿನ ಬಳಿಗೆ ಬಂದು, "ಇದು ನಿರ್ಜನ ಪ್ರದೇಶ. ಈಗಾಗಲೇ ಹೊತ್ತು ಮೀರಿಹೋಗಿದೆ. ಜನಸಮೂಹವನ್ನು ಕಳುಹಿಸಿಬಿಡಿ, ಹಳ್ಳಿಪಳ್ಳಿಗಳಿಗೆ ಹೋಗಿ ಅವರಿಗೆ ಬೇಕಾದ ತಿಂಡಿತಿನಿಸುಗಳನ್ನು ಕೊಂಡುಕೊಳ್ಳಲಿ." ಎಂದರು. [16]ಅದಕ್ಕೆ ಯೇಸು, "ಅವರು ಹೋಗಬೇಕಾಗಿಲ್ಲ, ನೀವೇ ಅವರಿಗೆ ಊಟಕ್ಕೆ ಏನಾದರೂ ಕೊಡಿ," ಎಂದರು. [17]ಶಿಷ್ಯರು ಪ್ರತ್ಯುತ್ತರವಾಗಿ, "ನಮ್ಮ ಬಳಿ ಐದೇ ಐದು ರೊಟ್ಟಿ ಮತ್ತು ಎರಡು ಮೀನುಗಳು ಮಾತ್ರ ಇವೆ," ಎಂದರು. [18]ಯೇಸು, "ಅವನ್ನು ಇಲ್ಲಿಗೆ ತನ್ನಿ," ಎಂದು ಹೇಳಿ, ಜನರೆಲ್ಲರೂ ಹುಲ್ಲಿನ ಮೇಲೆ ಕುಳಿತುಕೊಳ್ಳುವಂತೆ ಅಪ್ಪಣೆಮಾಡಿದರು. [19]ಬಳಿಕ ಆ ಐದು ರೊಟ್ಟಿಗಳನ್ನೂ ಎರಡು ಮೀನುಗಳನ್ನೂ ತೆಗೆದುಕೊಂಡು, ಸ್ವರ್ಗದತ್ತ ಕಣ್ಣೆತ್ತಿನೋಡಿ, ದೇವರಿಗೆ ಸ್ತೋತ್ರ ಸಲ್ಲಿಸಿದರು. ತರುವಾಯ ರೊಟ್ಟಿಗಳನ್ನು ಮುರಿದು ಶಿಷ್ಯರಿಗೆ ಕೊಟ್ಟರು. ಶಿಷ್ಯರು ಜನರಿಗೆ ಹಂಚಿದರು. [20]ಎಲ್ಲರೂ ಹೊಟ್ಟೆತುಂಬ ತಿಂದು ತೃಪ್ತರಾದರು. ಉಳಿದಿದ್ದ ತುಂಡುಗಳನ್ನು ಒಟ್ಟುಗೂಡಿಸಿದಾಗ ಅವು ಹನ್ನೆರಡು ಬುಟ್ಟಿಗಳ ತುಂಬ ಆದುವು. [21]ಊಟ ಮಾಡಿದವರಲ್ಲಿ ಹೆಂಗಸರು, ಮಕ್ಕಳನ್ನು ಬಿಟ್ಟರೆ, ಗಂಡಸರೇ ಸುಮಾರು ಐದು ಸಾವಿರ ಇದ್ದರು.

## ಕಡಲ ಮೇಲೆ ಕಾಲುನಡೆ

(ಮಾರ್ಕ 6:45–52; ಯೊವಾ. 6:15–21)

22 ಇದಾದಮೇಲೆ ಯೇಸುಸ್ವಾಮಿ ತಾವು ಜನರ ಗುಂಪನ್ನು ಕಳಿಸಿಬಿಡುವಷ್ಟರಲ್ಲಿ, ಶಿಷ್ಯರು ದೋಣಿಹತ್ತಿ ತಮಗಿಂತ ಮುಂದಾಗಿ ಸರೋವರದ ಆಚೆಯ ದಡಕ್ಕೆ ಹೋಗಬೇಕೆಂದು ಆಜ್ಞಾಪಿಸಿದರು. [23]ಜನರನ್ನು ಬೀಳ್ಕೊಟ್ಟ ಬಳಿಕ ಪ್ರಾರ್ಥನೆಮಾಡಲು ಯೇಸು ಒಬ್ಬರೇ ಬೆಟ್ಟಕ್ಕೆ ಹೋದರು. ಕತ್ತಲೆ ಕವಿದಾಗ ಅವರು ಅಲ್ಲಿ ಒಬ್ಬಂಟಿಗರಾಗಿದ್ದರು. [24]ಅಷ್ಟರಲ್ಲಿ ದೋಣಿ ದಡದಿಂದ ಬಹುದೂರ ಸಾಗಿತ್ತು. ಎದುರುಗಾಳಿ ಬೀಸಿ ಅದು ಅಲೆಗಳ ಬಡಿತಕ್ಕೆ ಸಿಕ್ಕಿಕೊಂಡಿತ್ತು. [25]ಆಗ ರಾತ್ರಿಯ ಕಡೇ ಜಾವದ ಸಮಯ. ಯೇಸು ಸರೋವರದ ಮೇಲೆ ನಡೆದುಕೊಂಡೇ ಶಿಷ್ಯರ ಬಳಿಗೆ ಬಂದರು. [26]ಹೀಗೆ ಸರೋವರದ ಮೇಲೆ ನಡೆದುಕೊಂಡು ಬರುತ್ತಿದ್ದ ಯೇಸುವನ್ನು ನೋಡಿದಾಗ ಶಿಷ್ಯರು ಭಯಭ್ರಾಂತರಾದರು. ದಿಗಿಲುಗೊಂಡು, "ಭೂತ, ಭೂತ!" ಎಂದು ಚೀರಿದರು. [27]ತಕ್ಷಣವೇ ಯೇಸು, "ಭಯಪಡಬೇಡಿ, ನಾನೇ. ಬೇರೆ ಯಾರೂ ಅಲ್ಲ, ಧೈರ್ಯದಿಂದಿರಿ," ಎಂದು ಅವರೊಡನೆ ಮಾತನಾಡಿದರು. [28]ಆಗ ಪೇತ್ರನು, "ಸ್ವಾಮೀ, ನೀವೇ ಆದರೆ ನಾನೂ ನೀರಿನ ಮೇಲೆ ನಡೆದು ನಿಮ್ಮ ಬಳಿಗೆ ಬರುವಂತೆ ಆಜ್ಞಾಪಿಸಿ," ಎಂದನು. ಯೇಸು, "ಬಾ" ಎಂದು ಕರೆಯಲು [29]ಪೇತ್ರನು ದೋಣಿಯನ್ನು ಬಿಟ್ಟು ನೀರಿನ ಮೇಲೆ ನಡೆಯುತ್ತಾ ಯೇಸುವಿನತ್ತ ಬಂದನು. [30]ಆದರೆ ಬಲವಾದ ಗಾಳಿ ಬೀಸುತ್ತಿರುವುದನ್ನು ಕಂಡು ಹೆದರಿದನು. ಹಾಗೆಯೇ ಮುಳುಗಿ ಹೋಗಲಾರಂಭಿಸಿದನು. ಆಗ, "ಸ್ವಾಮೀ, ಕಾಪಾಡಿ, ಕಾಪಾಡಿ," ಎಂದು ಕೂಗಿಕೊಂಡನು. [31]ಆ ಕ್ಷಣವೇ ಯೇಸು ಕೈಚಾಚಿ ಅವನನ್ನು ಹಿಡಿದುಕೊಂಡು, "ಅಲ್ಪ ವಿಶ್ವಾಸಿಯೇ ಏಕೆ ಸಂದೇಹಪಟ್ಟೆ?" ಎಂದರು. [32]ಅನಂತರ ಅವರಿಬ್ಬರೂ ದೋಣಿಯನ್ನು ಹತ್ತಿದರು. ಕೂಡಲೇ ಗಾಳಿ ನಿಂತುಹೋಯಿತು. [33]ದೋಣಿಯಲ್ಲಿದ್ದವರು "ನೀವು ನಿಜವಾಗಿಯೂ ದೇವರ ಪುತ್ರ!" ಎಂದು ಹೇಳಿ ಯೇಸುವನ್ನು ಆರಾಧಿಸಿದರು.

## ಅರಿವೆಯಿಂದಲೂ ಹರಿದುಬಂದ ಆರೋಗ್ಯ

(ಮಾರ್ಕ 6:53–56)

34 ಅವರೆಲ್ಲರೂ ಸರೋವರವನ್ನು ದಾಟಿ ಗೆನೆಸರೇತ್ ಊರಿನ ದಡ ಸೇರಿದರು. 35ಈ
ಊರಿನವರು ಯೇಸುಸ್ವಾಮಿಯನ್ನು ಗುರುತು ಹಚ್ಚಿದ್ದೇ ತಡ ಸುತ್ತಮುತ್ತಲಿನ ಊರುಗಳಿಗೆಲ್ಲಾ ಹೇಳಿ
ಕಳುಹಿಸಿದರು. ರೋಗರುಜಿನಗಳಿಂದ ನರಳುತ್ತಿದ್ದವರನ್ನು ಕರೆದುಕೊಂಡು ಬಂದರು. 36ಇವರು, "ನಿಮ್ಮ
ಉಡುಪಿನ ಅಂಚನ್ನಾದರೂ ಮುಟ್ಟಲು ಅಪ್ಪಣೆಯಾದರೆ ಸಾಕು," ಎಂದು ಯೇಸುವನ್ನು ಬೇಡಿಕೊಂಡರು.
ಹಾಗೆ ಮುಟ್ಟಿದವರೆಲ್ಲಾ ಗುಣಹೊಂದಿದರು.

## ಫರಿಸಾಯರ ಸಂಪ್ರದಾಯ

(ಮಾರ್ಕ 7:1–13)

**15** ಬಳಿಕ ಜೆರುಸಲೇಮಿನಿಂದ ಫರಿಸಾಯರೂ ಧರ್ಮಶಾಸ್ತ್ರಿಗಳೂ ಯೇಸುಸ್ವಾಮಿಯ ಬಳಿಗೆ ಬಂದು,
2"ನಿನ್ನ ಶಿಷ್ಯರು ಪೂರ್ವಜರಿಂದ ಬಂದ ಸಂಪ್ರದಾಯಗಳನ್ನು ಮೀರುವುದೇಕೆ? ಅವರು ಊಟಕ್ಕೆ ಮುಂಚೆ
ಶುದ್ಧಾಚಾರಕ್ಕೆ ಅನುಗುಣವಾಗಿ ಕೈತೊಳೆದುಕೊಳ್ಳದೆ ಊಟ ಮಾಡುವುದೇಕೆ?" ಎಂದು ಕೇಳಿದರು. 3ಅದಕ್ಕೆ
ಪ್ರತ್ಯುತ್ತರವಾಗಿ ಯೇಸು ಹೀಗೆಂದರು: "ನಿಮ್ಮ ಸಂಪ್ರದಾಯದ ಸಲುವಾಗಿ ನೀವು ದೇವರ ಆಜ್ಞೆಯನ್ನು
ಮೀರುತ್ತೀರಲ್ಲ, ಅದೇಕೆ? 4'ನಿಮ್ಮ ತಂದೆತಾಯಿಗಳನ್ನು ಗೌರವಿಸಬೇಕು; ತಂದೆಗಾಗಲೀ, ತಾಯಿಗಾಗಲೀ
ಶಾಪಹಾಕುವವನಿಗೆ ಮರಣದಂಡನೆ ಆಗಲೇಬೇಕು' ಎಂದು ದೇವರ ಕಟ್ಟಳೆ ಇದೆ. 5ನೀವೋ, ಯಾರಾದರೂ
ತನ್ನ ತಂದೆಗೆ ಅಥವಾ ತಾಯಿಗೆ, 'ನನ್ನಿಂದ ನಿಮಗೆ ಸಲ್ಲತಕ್ಕದ್ದು ದೇವರಿಗೆ ಮುಡಿಪು' ಎಂದು ಹೇಳಿ ಬಿಟ್ಟರೆ
ಮುಗಿಯಿತು; 6ಇನ್ನು ಅವನು ತನ್ನ ತಂದೆತಾಯಿಗಳನ್ನು ಗೌರವಿಸಬೇಕಾಗಿಲ್ಲ, ಎಂದು ಬೋಧಿಸುತ್ತೀರಿ.
ಹೀಗೆ ನಿಮ್ಮ ಸಂಪ್ರದಾಯದ ಸಲುವಾಗಿ ದೇವರ ವಾಕ್ಯವನ್ನೇ ನಿರರ್ಥಕಮಾಡಿ ಬಿಟ್ಟಿದ್ದೀರಿ. 7ಕಪಟಿಗಳೇ,
ನಿಮ್ಮ ವಿಷಯದಲ್ಲಿ ಯೆಶಾಯನು ಎಷ್ಟೊಂದು ಚೆನ್ನಾಗಿ ಪ್ರವಾದಿಸಿದ್ದಾನೆ! –

8 "ಬರಿಯ ಮಾತಿನ ಮನ್ನಣೆಯನ್ನೀಯುತ
ಹೃದಯವನು ದೂರವಿರಿಸುತ
ನರಕಲ್ಪಿತ ಕಟ್ಟಳೆಗಳನೆ ದೇವವಾಕ್ಯವೆಂದು
ಉಪದೇಶಿಸುತ
9 ಈ ಜನರೆನಗೆ ಮಾಡುವ ಆರಾಧನೆ ವ್ಯರ್ಥ!"
ಎಂದರು.

## ಕರಶುದ್ದಿಯಿಂದ ಮನಃಶುದ್ಧಿಯಾಗದು

(ಮಾರ್ಕ 7:14–23)

10 ಅನಂತರ ಯೇಸುಸ್ವಾಮಿ ಜನರನ್ನು ತಮ್ಮ ಬಳಿಗೆ ಕರೆದು, "ನಾನು ಹೇಳುವುದನ್ನು ಕೇಳಿ
ಚೆನ್ನಾಗಿ ತಿಳಿದುಕೊಳ್ಳಿರಿ: 11ಬಾಯೊಳಕ್ಕೆ ಹೋಗುವಂಥದ್ದು ಮನುಷ್ಯನನ್ನು ಕಲುಷಿತಗೊಳಿಸುವುದಿಲ್ಲ;
ಬಾಯೊಳಗಿನಿಂದ ಹೊರಕ್ಕೆ ಬರುವಂಥದ್ದೇ ಮನುಷ್ಯನನ್ನು ಕಲುಷಿತಗೊಳಿಸುತ್ತದೆ," ಎಂದು ಹೇಳಿದರು.
12ಆಗ ಶಿಷ್ಯರು ಹತ್ತಿರಕ್ಕೆ ಬಂದು, "ನಿಮ್ಮ ಮಾತನ್ನು ಕೇಳಿ ಫರಿಸಾಯರು ಬಹಳ ಬೇಸರಗೊಂಡಿದ್ದಾರೆಂದು
ನಿಮಗೆ ತಿಳಿಯಿತೇ?" ಎಂದರು. 13ಅದಕ್ಕೆ ಯೇಸು, "ನನ್ನ ಪರಮಪಿತನು ನೆಡದ ಗಿಡಗಳನ್ನೆಲ್ಲಾ ಬೇರುಸಹಿತ
ಕಿತ್ತುಹಾಕಲಾಗುವುದು. 14ಅವರನ್ನು ಅವರಷ್ಟಕ್ಕೇ ಬಿಡಿ; ಅವರೊ ಕುರುಡರು, ಮತ್ತೊಬ್ಬರಿಗೆ ದಾರಿ
ತೋರಿಸಲು ಹೋಗುತ್ತಾರೆ. ಕುರುಡನು ಕುರುಡನಿಗೆ ದಾರಿ ತೋರಿಸಿದರೆ ಇಬ್ಬರೂ ಹಳ್ಳದಲ್ಲಿ ಬೀಳುತ್ತಾರಷ್ಟೆ,"
ಎಂದರು. 15ಅದಕ್ಕೆ ಪೇತ್ರನು, "ನಮಗೆ ಈ ಸಾಮತಿಯ ಅರ್ಥವನ್ನು ತಿಳಿಸಿ," ಎಂದು ಕೇಳಿಕೊಂಡನು.
16ಯೇಸು ಇಂತೆಂದರು: "ನೀವು ಕೂಡ ಮಂದಮತಿಗಳೇನು? ಇದರ ಅರ್ಥ ನಿಮಗೂ ಆಗದೇನು?

[17]ಬಾಯೊಳಕ್ಕೆ ಹೋಗುವುದೆಲ್ಲಾ ಹೊಟ್ಟೆಯನ್ನು ಸೇರಿ ಅಲ್ಲಿಂದ ವಿಸರ್ಜಿತವಾಗುತ್ತದೆ. [18]ಆದರೆ ಬಾಯಿಂದ
ಹೊರಡುವಂಥವು ಅವನ ಹೃದಯದಿಂದ ಹೊರಹೊಮ್ಮುತ್ತವೆ; ಇವು ಮನುಷ್ಯನನ್ನು ಕಲುಷಿತಗೊಳಿಸುತ್ತವೆ.
[19]ಹೃದಯದಿಂದ ದುರಾಲೋಚನೆ, ಕೊಲೆ, ವ್ಯಭಿಚಾರ, ಅನೈತಿಕತೆ, ಕಳ್ಳತನ, ಸುಳ್ಳುಸಾಕ್ಷಿ, ಅಪದೂರು, ಇವು
ಹೊರಬರುತ್ತವೆ. [20]ಮನುಷ್ಯನನ್ನು ಕಲುಷಿತಗೊಳಿಸುವಂಥವು ಇವೇ. ಕೈತೊಳೆಯದೆ ಊಟಮಾಡುವುದು
ಮನುಷ್ಯನನ್ನು ಕಲುಷಿತಗೊಳಿಸುವುದಿಲ್ಲ," ಎಂದರು.

## ಅನ್ಯಧರ್ಮಿಯಳ ಅಚಲ ವಿಶ್ವಾಸ

(ಮಾರ್ಕ 7:24–30)

21 ಯೇಸುಸ್ವಾಮಿ ಅಲ್ಲಿಂದ ಹೊರಟು ಟೈರ್ ಹಾಗೂ ಸಿದೋನ್ ಪ್ರಾಂತ್ಯಕ್ಕೆ ಹೋದರು. [22]ಅಲ್ಲಿ
ವಾಸವಾಗಿದ್ದ ಕಾನಾನ್ ನಾಡಿನ ಮಹಿಳೆ ಒಬ್ಬಳು ಅವರ ಬಳಿಗೆ ಬಂದಳು. "ಸ್ವಾಮಿ, ದಾವೀದ
ಕುಲಪುತ್ರರೇ, ನನಗೆ ದಯೆತೋರಿ, ನನ್ನ ಮಗಳಿಗೆ ದೆವ್ವಹಿಡಿದು ಬಹಳ ಸಂಕಟ ಪಡುತ್ತಿದ್ದಾಳೆ," ಎಂದು
ಕೂಗಿಕೊಂಡಳು. [23]ಯೇಸು ಆಕೆಗೆ ಒಂದು ಮಾತನ್ನೂ ಹೇಳಲಿಲ್ಲ. ಶಿಷ್ಯರು ಹತ್ತಿರಕ್ಕೆ ಬಂದು, "ಇವಳನ್ನು
ಕಳಿಸಿಬಿಡಿ, ಒಂದೇ ಸಮನೆ ಗೋಳಿಡುತ್ತಾ, ನಮ್ಮನ್ನು ಬೆಂಬತ್ತಿ ಬರುತ್ತಿದ್ದಾಳೆ," ಎಂದು ಕೇಳಿಕೊಂಡರು.
[24]ಆಗ ಯೇಸು, "ನನ್ನನ್ನು ಕಳಿಸಿರುವುದು ತಪ್ಪಿಹೋದ ಕುರಿಗಳಂತಿರುವ ಇಸ್ರಯೇಲ್ ಜನಾಂಗದವರ
ಬಳಿಗೆ ಮಾತ್ರ," ಎಂದರು. [25]ಆದರೂ ಆಕೆ ಯೇಸುವಿಗೆ ಅಡ್ಡಬಿದ್ದು, "ಸ್ವಾಮಿ, ಸಹಾಯ ಮಾಡಿ," ಎಂದು
ಯಾಚಿಸಿದಳು. [26]ಅದಕ್ಕೆ ಯೇಸು, "ಮಕ್ಕಳ ಆಹಾರವನ್ನು ತೆಗೆದು ನಾಯಿಗಳಿಗೆ ಎಸೆಯುವುದು ಸರಿಯಲ್ಲ,"
ಎಂದರು. [27]ಆಗ ಆಕೆ, "ಅದು ನಿಜ ಸ್ವಾಮಿ, ನಾಯಿಗಳಾದರೂ ತಮ್ಮ ಯಜಮಾನನ ಮೇಜಿನಿಂದ ಕೆಳಕ್ಕೆ
ಬೀಳುವ ಚೂರುಪಾರನ್ನು ತಿನ್ನುತ್ತವೆ, ಅಲ್ಲವೇ?" ಎಂದು ಮರುತ್ತರ ಕೊಟ್ಟಳು. [28]ಆಗ ಯೇಸು, "ತಾಯಿ,
ನಿನ್ನ ವಿಶ್ವಾಸ ಅಚಲವಾದುದು. ನಿನ್ನ ಕೋರಿಕೆ ನೆರವೇರಲಿ," ಎಂದರು. ಅದೇ ಕ್ಷಣದಲ್ಲಿ ಆಕೆಯ ಮಗಳು
ಗುಣಹೊಂದಿದಳು.

## ಅಂಗವಿಕಲರಿಗೆ ಆರೋಗ್ಯದಾತ

29 ಯೇಸುಸ್ವಾಮಿ ಆ ಸ್ಥಳವನ್ನು ಬಿಟ್ಟು, ಗಲಿಲೇಯ ಸರೋವರದ ತೀರದಲ್ಲೇ ನಡೆದು, ಒಂದು
ಗುಡ್ಡವನ್ನು ಹತ್ತಿ ಅಲ್ಲಿ ಕುಳಿತುಕೊಂಡರು. [30]ಜನರು ಗುಂಪುಗುಂಪಾಗಿ ಅಲ್ಲಿಗೆ ಬಂದರು. ಕುಂಟರು,
ಕುರುಡರು, ಮೂಕರು, ಅಂಗವಿಕಲರು ಮುಂತಾದ ಅನೇಕರನ್ನು ತಮ್ಮೊಡನೆ ಕರೆತಂದು ಯೇಸುವಿನ
ಪಾದಸನ್ನಿಧಿಯಲ್ಲಿ ಬಿಟ್ಟರು. ಯೇಸು ಅವರನ್ನು ಗುಣಪಡಿಸಿದರು. [31]ಮೂಕರು ಮಾತನಾಡುವುದನ್ನೂ
ಅಂಗವಿಕಲರು ಸ್ವಸ್ಥರಾಗುವುದನ್ನೂ ಕುಂಟರು ನಡೆಯುವುದನ್ನೂ ಕುರುಡರು ನೋಡುವುದನ್ನೂ ಈ ಜನರು
ಕಂಡು ಆಶ್ಚರ್ಯಚಕಿತರಾಗಿ ಇಸ್ರಯೇಲಿನ ದೇವರನ್ನು ಕೊಂಡಾಡಿದರು.

## ಹಸಿದವರಿಗೆ ಅನ್ನದಾತ

(ಮಾರ್ಕ 8:1–10)

32 ಯೇಸುಸ್ವಾಮಿ ತಮ್ಮ ಶಿಷ್ಯರನ್ನು ಹತ್ತಿರಕ್ಕೆ ಕರೆದು, "ಈ ಜನಸ್ತೋಮ ಕಳೆದ ಮೂರು
ದಿನಗಳಿಂದಲೂ ನನ್ನ ಬಳಿ ಇದೆ. ಊಟಕ್ಕೆ ಇವರಲ್ಲಿ ಏನೂ ಇಲ್ಲ. ಇವರನ್ನು ಕಂಡು ನನ್ನ ಹೃದಯ
ಕರಗುತ್ತದೆ. ಇವರನ್ನು ಹಸಿದ ಹೊಟ್ಟೆಯಲ್ಲಿ ಕಳಿಸಿಬಿಡಲು ನನಗೆ ಇಷ್ಟವಿಲ್ಲ, ದಾರಿಯಲ್ಲಿ ಬಳಲಿ ಬಿದ್ದಾರು,"
ಎಂದರು. [33]ಅದಕ್ಕೆ ಶಿಷ್ಯರು, "ಇಷ್ಟು ದೊಡ್ಡ ಗುಂಪಿಗೆ ಆಗುವಷ್ಟು ರೊಟ್ಟಿಯನ್ನು ಈ ಅಡವಿಯಲ್ಲಿ ನಾವು
ತರುವುದಾದರೂ ಎಲ್ಲಿಂದ?" ಎಂದು ಕೇಳಿದರು. [34]"ನಿಮ್ಮಲ್ಲಿ ಎಷ್ಟು ರೊಟ್ಟಿಗಳಿವೆ?" ಎಂದು ಯೇಸು
ಕೇಳಿದರು. "ಏಳು ರೊಟ್ಟಿಗಳು ಮತ್ತು ಕೆಲವು ಸಣ್ಣ ಮೀನುಗಳಿವೆ," ಎಂದು ಶಿಷ್ಯರು ಉತ್ತರಕೊಟ್ಟರು. [35]ಆಗ
ಜನಸಮೂಹಕ್ಕೆ ನೆಲದ ಮೇಲೆ ಕುಳಿತುಕೊಳ್ಳುವಂತೆ ಯೇಸು ಆಜ್ಞಾಪಿಸಿದರು. [36]ಅನಂತರ ಆ ಏಳು
ರೊಟ್ಟಿಗಳನ್ನೂ ಮೀನುಗಳನ್ನು ತೆಗೆದುಕೊಂಡು, ದೇವರಿಗೆ ಸ್ತೋತ್ರ ಸಲ್ಲಿಸಿ, ಅವುಗಳನ್ನು ಮುರಿದು ತಮ್ಮ
ಶಿಷ್ಯರಿಗೆ ಕೊಟ್ಟರು; ಶಿಷ್ಯರು ಜನರಿಗೆ ಬಡಿಸಿದರು. [37]ಜನರೆಲ್ಲರೂ ಉಂಡು ತೃಪ್ತರಾದರು. ಉಳಿದ

ತುಂಡುಗಳನ್ನು ಶಿಷ್ಯರು ಏಳು ಕುಕ್ಕೆಗಳ ತುಂಬ ತುಂಬಿಸಿಕೊಂಡರು. 38ಊಟ ಮಾಡಿದವರಲ್ಲಿ ಹೆಂಗಸರು,
ಮಕ್ಕಳಲ್ಲದೆ ಗಂಡಸರೇ ನಾಲ್ಕು ಸಾವಿರ ಮಂದಿ ಇದ್ದರು. 39ತರುವಾಯ ಯೇಸು ಜನರ ಗುಂಪನ್ನು
ಕಳುಹಿಸಿಬಿಟ್ಟು, ದೋಣಿಯನ್ನು ಹತ್ತಿ, ಮಗದಾನ್ ಎಂಬ ಪ್ರಾಂತ್ಯಕ್ಕೆ ಹೊರಟುಹೋದರು.

## ಅದ್ಭುತಕೋರಿದ ಅಧರ್ಮಿಗಳು

(ಮಾರ್ಕ 8:11–13; ಲೂಕ 12:54–56)

**16** ತರುವಾಯ ಫರಿಸಾಯರು ಮತ್ತು ಸದ್ದುಕಾಯರು ಯೇಸುಸ್ವಾಮಿಯ ಬಳಿಗೆ ಬಂದರು. ಸ್ವಾಮಿಯನ್ನು
ಪರೀಕ್ಷಿಸುವ ದುರುದ್ದೇಶದಿಂದ, "ನೀನು ದೇವರಿಂದ ಬಂದವನೆಂದು ಸೂಚಿಸಲು ಅದ್ಭುತವೊಂದನ್ನು
ನಮಗೆ ಮಾಡಿತೋರಿಸು," ಎಂದರು. 2ಅದಕ್ಕೆ ಯೇಸು, "ಸಂಜೆಯಾದಾಗ ನೀವು 'ಹವಾಮಾನವು
ಹಿತಕರವಾಗಿರುತ್ತದೆ, ಏಕೆಂದರೆ ಆಕಾಶ ಕೆಂಪಗಿದೆ ಎನ್ನುತ್ತೀರಿ.' ಬೆಳಗ್ಗೆ, 'ಈ ದಿನ ಗಾಳಿಮಳೆ ಇರುತ್ತದೆ.
ಏಕೆಂದರೆ ಕೆಂಪಾದ ಆಕಾಶದಲ್ಲಿ ಮೋಡಮುಚ್ಚಿದೆ' ಎನ್ನುತ್ತೀರಿ. 3ಆಕಾಶದಲ್ಲಿ ಕಾಣುವ ಲಕ್ಷಣಗಳನ್ನು ನೀವು
ಅರ್ಥಮಾಡಿಕೊಳ್ಳಬಲ್ಲಿರಿ; ಆದರೆ ಈಗಿನ ಕಾಲದ ಲಕ್ಷಣಗಳನ್ನು ಅರ್ಥಮಾಡಿಕೊಳ್ಳಲು ನಿಮ್ಮಿಂದಾಗದು.
4ಈ ದುಷ್ಟ ಹಾಗೂ ಅಧರ್ಮ ಪೀಳಿಗೆ ಅದ್ಭುತಗಳನ್ನು ಸಂಕೇತವಾಗಿ ಕೋರುತ್ತದೆ. ಪ್ರವಾದಿ ಯೋನನ
ಸಂಕೇತವಲ್ಲದೆ ಬೇರೆ ಯಾವ ಸಂಕೇತವೂ ಇದಕ್ಕೆ ದೊರಕದು," ಎಂದು ಹೇಳಿ ಅವರನ್ನು ಬಿಟ್ಟು ಹೋದರು.

## ಹುದುಗೆಬ್ಬಿಸುವ ಹುಸಿ ಬೋಧನೆ

(ಮಾರ್ಕ 8:14–21)

5 ಶಿಷ್ಯರು ಬುತ್ತಿಯನ್ನು ಕಟ್ಟಿಕೊಳ್ಳುವುದನ್ನು ಮರೆತು ಸರೋವರದ ಆಚೆ ದಡಕ್ಕೆ ಬಂದರು.
6ಯೇಸುಸ್ವಾಮಿ ಅವರಿಗೆ, "ಎಚ್ಚರಿಕೆ, ಫರಿಸಾಯರ ಹಾಗೂ ಸದ್ದುಕಾಯರ ಹುಳಿಹಿಟ್ಟಿನ ವಿಷಯದಲ್ಲಿ
ಜಾಗರೂಕರಾಗಿರಿ!" ಎಂದರು. 7ತಾವು ರೊಟ್ಟಿ ತಂದಿಲ್ಲವಾದ ಕಾರಣ ಯೇಸು ಹೀಗೆ ಹೇಳುತ್ತಿದ್ದಾರೆಂದು
ಶಿಷ್ಯರು ತಮ್ಮ ತಮ್ಮಲ್ಲೇ ಮಾತನಾಡಿಕೊಳ್ಳಲಾರಂಭಿಸಿದರು. 8ಇದನ್ನು ಗಮನಿಸಿದ ಯೇಸು, "ಅಲ್ಪ
ವಿಶ್ವಾಸಿಗಳೇ, ರೊಟ್ಟಿಯನ್ನು ತಂದಿಲ್ಲವೆಂದು ನಿಮ್ಮ ನಿಮ್ಮಲ್ಲೇ ಚರ್ಚೆ ಏಕೆ? 9ಏನು, ನಿಮಗಿನ್ನೂ ಅರಿವಿಲ್ಲವೆ?
ಐದು ರೊಟ್ಟಿಗಳಿಂದ ನಾನು ಐದುಸಾವಿರ ಜನರನ್ನು ತೃಪ್ತಿಪಡಿಸಿದ್ದು ನಿಮಗೆ ಜ್ಞಾಪಕವಿಲ್ಲವೆ? ಆಗ
ಉಳಿದುದ್ದನ್ನು ಎಷ್ಟು ಬುಟ್ಟಿಗಳಲ್ಲಿ ತುಂಬಿಸಿಕೊಂಡಿರಿ? 10ಅಲ್ಲದೆ ಏಳು ರೊಟ್ಟಿಗಳಿಂದ ನಾಲ್ಕು ಸಾವಿರ
ಜನರನ್ನು ತೃಪ್ತಿಪಡಿಸಿದಾಗ, ಉಳಿದುದನ್ನು ಎಷ್ಟು ಕುಕ್ಕೆಗಳಲ್ಲಿ ತುಂಬಿಸಿಕೊಂಡಿರಿ? 11ಹೀಗಿದ್ದೂ ನಾನು ಈಗ
ರೊಟ್ಟಿಯನ್ನು ಕುರಿತು ಎಚ್ಚರಿಸಲಿಲ್ಲವೆಂದು ನೀವು ತಿಳಿಯದೆ ಹೋದಿರಲ್ಲಾ," ಎಂದರು. 12ರೊಟ್ಟಿಯ
ಹಿಟ್ಟನ್ನು ಹುದುಗೆಬ್ಬಿಸುವ ಹುಳಿಯನ್ನು ಕುರಿತು ಅಲ್ಲ, ಫರಿಸಾಯರ ಮತ್ತು ಸದ್ದುಕಾಯರ ಬೋಧನೆಯ
ವಿಷಯವಾಗಿ ಜಾಗರೂಕರಾಗಿರಬೇಕೆಂದು ಯೇಸು ಎಚ್ಚರಿಸಿದರೆಂದು ಆಗ ಶಿಷ್ಯರು ಅರ್ಥಮಾಡಿಕೊಂಡರು.

## ಪೇತ್ರನ ವಿಶ್ವಾಸ ಪ್ರಕಟಣೆ

(ಮಾರ್ಕ 8:27–30; ಲೂಕ 9:18–21)

13 ಯೇಸುಸ್ವಾಮಿ "ಫಿಲಿಪ್ಪನ ಸೆಜರೇಯ" ಎಂಬ ಪ್ರಾಂತ್ಯಕ್ಕೆ ಬಂದರು. ಅಲ್ಲಿ ತಮ್ಮ ಶಿಷ್ಯರನ್ನು
ಉದ್ದೇಶಿಸಿ, "ನರಪುತ್ರನನ್ನು ಜನರು ಯಾರೆಂದು ಹೇಳುತ್ತಾರೆ?" ಎಂದು ಕೇಳಿದರು. 14ಅದಕ್ಕೆ ಶಿಷ್ಯರು,
"ಸ್ನಾನಿಕ ಯೊವಾನ್ನ", ಎಂದು ಕೆಲವರು ಹೇಳುತ್ತಾರೆ; ಮತ್ತೆ ಕೆಲವರು, "ಎಲೀಯನು" ಎನ್ನುತ್ತಾರೆ;
"ಯೆರೆಮೀಯನು ಅಥವಾ ಪ್ರವಾದಿಗಳಲ್ಲಿ ತಾವೂ ಒಬ್ಬರು," ಎಂಬುದು ಇನ್ನೂ ಕೆಲವರ ಅಭಿಪ್ರಾಯ,
ಎಂದು ಉತ್ತರ ಕೊಟ್ಟರು. 15ಆಗ ಯೇಸು, "ಆದರೆ ನೀವು ನನ್ನನ್ನು ಯಾರೆನ್ನುತ್ತೀರಿ?" ಎಂದು ಪ್ರಶ್ನಿಸಿದರು.
16ಅದಕ್ಕೆ ಪೇತ್ರನು, "ಅಭಿಷಿಕ್ತರಾದ ಲೋಕೋದ್ಧಾರಕ ತಾವೇ, ಜೀವಸ್ವರೂಪರಾದ ದೇವರ ಪುತ್ರ ತಾವೇ,"
ಎಂದನು. 17ಅದಕ್ಕೆ ಪ್ರತ್ಯುತ್ತರವಾಗಿ ಯೇಸು ಹೀಗೆಂದರು: "ಯೋನ್ನನ ಮಗ ಸಿಮೋನನೇ, ನೀನು ಧನ್ಯ!

ಈ ವಿಷಯವನ್ನು ನಿನಗೆ ಶ್ರುತ ಪಡಿಸಿದ್ದು ನರಮಾನವ ಶಕ್ತಿ ಅಲ್ಲ, ಸ್ವರ್ಗದಲ್ಲಿರುವ ನನ್ನ ಪಿತನೇ. [18]ನಾನು
ನಿನಗೆ ಹೇಳುತ್ತೇನೆ, ಕೇಳು: "ನಿನ್ನ ಹೆಸರು ಪೇತ್ರ; ಈ ಬಂಡೆಯ ಮೇಲೆ ನನ್ನ ಧರ್ಮಸಭೆಯನ್ನು ಕಟ್ಟುವೆನು.
ಪಾತಾಳಲೋಕದ ಶಕ್ತಿಯು ಅದನ್ನು ಎಂದಿಗೂ ಜಯಿಸಲಾರದು. [19]ಸ್ವರ್ಗಸಾಮ್ರಾಜ್ಯದ ಬೀಗದ ಕೈಗಳನ್ನು
ನಿನಗೆ ಕೊಡುವೆನು. ಇಹದಲ್ಲಿ ನೀನು ಏನನ್ನು ಬಂಧಿಸುತ್ತೀಯೋ ಅದನ್ನು ಪರದಲ್ಲಿಯೂ
ಬಂಧಿಸಲಾಗುವುದು. ಇಹದಲ್ಲಿ ನೀನು ಏನನ್ನು ಬಿಚ್ಚುತ್ತೀಯೋ ಅದನ್ನು ಪರದಲ್ಲಿಯೂ ಬಿಚ್ಚಲಾಗುವುದು."
[20]ಅನಂತರ ಯೇಸು ತಮ್ಮ ಶಿಷ್ಯರಿಗೆ ತಾವು 'ಅಭಿಷಿಕ್ತರಾದ ಲೋಕೋದ್ಧಾರಕ' ಎಂಬುದನ್ನು ಯಾರಿಗೂ
ಹೇಳಕೂಡದೆಂದು ಕಟ್ಟಪ್ಪಣೆ ಮಾಡಿದರು.

### ಮರಣ-ಪುನರುತ್ಥಾನ ಕುರಿತು ಮೊದಲನೆಯ ಪ್ರಕಟಣೆ

(ಮಾರ್ಕ 8:31-9.1; ಲೂಕ 9:22-27)

21 ಯೇಸುಸ್ವಾಮಿ ತಮ್ಮ ಶಿಷ್ಯರಿಗೆ, "ನಾನು ಜೆರುಸಲೇಮಿಗೆ ಹೋಗಬೇಕಾಗಿದೆ; ಅಲ್ಲಿ ಸಭಾ
ಪ್ರಮುಖರಿಂದಲೂ ಮುಖ್ಯ ಯಾಜಕರಿಂದಲೂ ಧರ್ಮಶಾಸ್ತ್ರಿಗಳಿಂದಲೂ ಕಠಿಣವಾದ ಯಾತನೆಯನ್ನು
ಅನುಭವಿಸಿ, ಮರಣಕ್ಕೆ ತುತ್ತಾಗಿ, ಮೂರನೆಯ ದಿನ ಪುನರುತ್ಥಾನ ಹೊಂದಬೇಕಾಗಿದೆ" ಎಂದು
ಅಂದಿನಿಂದಲೂ ಒತ್ತಿ ಹೇಳಲಾರಂಭಿಸಿದರು. [22]ಇದನ್ನು ಕೇಳಲಾಗದೆ ಪೇತ್ರನು ಯೇಸುವನ್ನು ಪಕ್ಕಕ್ಕೆ ಕರೆದು,
"ಪ್ರಭೂ, ಹಾಗೆನ್ನಲೇಬೇಡಿ, ನಿಮಗೆಂದಿಗೂ ಹಾಗೆ ಸಂಭವಿಸದಿರಲಿ," ಎಂದು ಪ್ರತಿಭಟಿಸಿದನು. [23]ಆದರೆ
ಯೇಸು ಪೇತ್ರನತ್ತ ತಿರುಗಿ, "ಸೈತಾನನೇ, ತೊಲಗಿಲ್ಲಿಂದ; ನೀನು ನನಗೆ ಅಡೆತಡೆ; ನಿನ್ನ ಈ ಆಲೋಚನೆ
ಮನುಷ್ಯರದ್ದೇ ಹೊರತು, ದೇವರದಲ್ಲ," ಎಂದರು. [24]ಅನಂತರ ತಮ್ಮ ಶಿಷ್ಯರಿಗೆ ಹೀಗೆಂದರು:
"ಯಾರಿಗಾದರೂ ನನ್ನನ್ನು ಹಿಂಬಾಲಿಸಲು ಮನಸ್ಸಿದ್ದರೆ, ಅವನು ತನ್ನನ್ನು ತಾನೇ ಪರಿತ್ಯಜಿಸಿ, ತನ್ನ
ಶಿಲುಬೆಯನ್ನು ತಾನೇ ಹೊತ್ತುಕೊಂಡು ನನ್ನನ್ನು ಹಿಂಬಾಲಿಸಲಿ. [25]ತನ್ನ ಪ್ರಾಣವನ್ನು ಉಳಿಸಿಕೊಳ್ಳಲು
ಹಾತೊರೆಯುವವನು ಅದನ್ನು ಕಳೆದುಕೊಳ್ಳುವನು. ಆದರೆ ನನ್ನ ನಿಮಿತ್ತ ತನ್ನ ಪ್ರಾಣವನ್ನು
ಕಳೆದುಕೊಳ್ಳುವವನು ಅದನ್ನು ಕಂಡುಕೊಳ್ಳುವನು. [26]ಪ್ರಪಂಚವನ್ನೆಲ್ಲಾ ಗೆದ್ದುಕೊಂಡರೂ ಒಬ್ಬನು ತನ್ನ
ಪ್ರಾಣವನ್ನೇ ಕಳೆದುಕೊಂಡರೆ ಅದರಿಂದ ಅವನಿಗೆ ದೊರಕುವ ಲಾಭವೇನು? ಅಥವಾ ಮನುಷ್ಯನು ತನ್ನ
ಪ್ರಾಣಕ್ಕೆ ಈಡಾಗಿ ಏನನ್ನು ತಾನೇ ಕೊಡಬಲ್ಲನು? [27]ನರಪುತ್ರನು ತನ್ನ ಪಿತನ ಪ್ರಭಾವದೊಡನೆ ತನ್ನ
ದೂತರ ಸಮೇತ ಬರಲಿದ್ದಾನೆ. ಆಗ ಪ್ರತಿಯೊಬ್ಬ ಮಾನವನಿಗೆ ಅವನವನ ಕೃತ್ಯಕ್ಕೆ ತಕ್ಕ ಪ್ರತಿಫಲ
ಕೊಡುವನು. [28]ಇಲ್ಲಿರುವವರಲ್ಲಿ ಕೆಲವರು ನರಪುತ್ರನು ತನ್ನ ಸಾಮ್ರಾಜ್ಯದಲ್ಲಿ ಪ್ರತ್ಯಕ್ಷನಾಗುವುದನ್ನು
ಕಾಣುವುದಕ್ಕೆ ಮುನ್ನ ಸಾವನ್ನು ಸವಿಯುವುದಿಲ್ಲ ಎಂದು ನಿಮಗೆ ನಿಶ್ಚಯವಾಗಿ ಹೇಳುತ್ತೇನೆ," ಎಂದರು.

### ಯೇಸುವಿನ ಅವ್ಯಕ್ತ ರೂಪದ ಅನಾವರಣ

(ಮಾರ್ಕ (:2-13; ಲೂಕ 9:28-36)

**17** ಆರು ದಿನಗಳ ಬಳಿಕ ಪೇತ್ರ, ಯಕೋಬ ಮತ್ತು ಆತನ ಸಹೋದರ ಯೊವಾನ್ನ ಇವರನ್ನು
ಯೇಸುಸ್ವಾಮಿ ಪ್ರತ್ಯೇಕವಾಗಿ ತಮ್ಮೊಡನೆ ಕರೆದುಕೊಂಡು ಎತ್ತರವಾದ ಒಂದು ಬೆಟ್ಟಕ್ಕೆ ಹೋದರು. [2]ಅಲ್ಲಿ ಆ
ಶಿಷ್ಯರ ಕಣ್ಣೆದುರಿಗೇ ಸ್ವಾಮಿ ರೂಪಾಂತರ ಹೊಂದಿದರು, ಅವರ ಮುಖ ಸೂರ್ಯನಂತೆ ಪ್ರಕಾಶಿಸಿತು.
ಅವರ ಉಡುಪು ಬೆಳಕಿನಂತೆ ಪ್ರಜ್ವಲಿಸಿತು. [3]ಇದ್ದಕ್ಕಿದ್ದ ಹಾಗೆ ಮೋಶೆ ಮತ್ತು ಎಲೀಯ ಪ್ರತ್ಯಕ್ಷರಾಗಿ
ಯೇಸುವಿನೊಡನೆ ಮಾತನಾಡುತ್ತಿದ್ದುದು ಅವರಿಗೆ ಕಾಣಿಸಿತು. [4]ಆಗ ಪೇತ್ರನು ಯೇಸುವಿಗೆ, "ಪ್ರಭೂ, ನಾವು
ಇಲ್ಲೇ ಇರುವುದು ಎಷ್ಟು ಒಳ್ಳೆಯದು! ಅಪ್ಪಣೆಯಾದರೆ ಇಲ್ಲಿ ಮೂರು ಗುಡಾರಗಳನ್ನು ಕಟ್ಟುವೆನು.
ತಮಗೊಂದು, ಮೋಶೆಗೊಂದು, ಎಲೀಯನಿಗೊಂದು," ಎಂದನು. [5]ಪೇತ್ರ ಇನ್ನೂ
ಮಾತನಾಡುತ್ತಿರುವಾಗಲೇ ಪ್ರಕಾಶಮಾನವಾದ ಮೇಘವೊಂದು ಅವರನ್ನು ಆವರಿಸಿತು; ಆ ಮೇಘದಿಂದ
ಒಂದು ವಾಣಿ, 'ಈತನು ನನ್ನ ಪುತ್ರ, ನನಗೆ ಪರಮಪ್ರಿಯನು, ನನ್ನ ಅಪಾರ ಮೆಚ್ಚುಗೆಗೆ ಪಾತ್ರನು. ಈತನ

ಮಾತಿಗೆ ಕಿವಿಗೊಡಿ," ಎಂದಿತು. [6]ಶಿಷ್ಯರು ಈ ವಾಣಿಯನ್ನು ಕೇಳಿ ಭಯಭ್ರಾಂತರಾದರು; ಬೋರಲು
ಬಿದ್ದರು. [7]ಆಗ ಯೇಸು ಅವರ ಹತ್ತಿರಕ್ಕೆ ಬಂದು ಅವರನ್ನು ಮುಟ್ಟಿ, "ಏಳಿ, ಭಯಪಡಬೇಡಿ," ಎಂದರು.
[8]ಅವರು ಕಣ್ಣೆತ್ತಿ ನೋಡಿದಾಗ ಯೇಸುವನ್ನು ಬಿಟ್ಟು ಮತ್ತೆ ಯಾರನ್ನೂ ಕಾಣಲಿಲ್ಲ.
9 ಅವರೆಲ್ಲರು ಬೆಟ್ಟದಿಂದ ಇಳಿದು ಬರುವಾಗ ಯೇಸು, "ನರಪುತ್ರನು ಸತ್ತು ಪುನರುತ್ಥಾನ
ಹೊಂದುವ ತನಕ ನೀವು ಕಂಡ ಈ ದರ್ಶನವನ್ನು ಯಾರಿಗೂ ಹೇಳಬೇಡಿ," ಎಂದು ಆಜ್ಞಾಪಿಸಿದರು.
[10]ಶಿಷ್ಯರು, "ಎಲೀಯನೇ ಮೊದಲು ಬರಬೇಕಾಗಿದೆ ಎಂದು ಶಾಸ್ತ್ರಜ್ಞರು ಹೇಳುತ್ತಾರಲ್ಲಾ, ಅದು ಹೇಗೆ?"
ಎಂದು ಯೇಸುವನ್ನು ಕೇಳಿದರು. [11]ಅದಕ್ಕೆ ಪ್ರತ್ಯುತ್ತರವಾಗಿ ಯೇಸು, "ಎಲೀಯನು ಬಂದು ಎಲ್ಲವನ್ನೂ
ಸಜ್ಜುಗೊಳಿಸುವನು ಎಂಬುದು ನಿಜ. [12]ಆದರೆ ನಾನು ನಿಮಗೆ ಹೇಳುತ್ತೇನೆ; ಎಲೀಯನು ಈಗಾಗಲೇ
ಬಂದಾಗಿದೆ; ಜನರು ಆತನನ್ನು ಗುರುತಿಸದೇ ತಮಗೆ ಇಷ್ಟಬಂದ ಹಾಗೆ ಹಿಂಸಿಸಿದ್ದೂ ಆಗಿದೆ. ಅಂತೆಯೇ
ನರಪುತ್ರನೂ ಅವರ ಕೈಯಿಂದ ಯಾತನೆಯನ್ನು ಅನುಭವಿಸುವನು," ಎಂದರು. [13]ಅವರು ಹೇಳುತ್ತಿರುವುದು
ಸ್ನಾನಿಕ ಯೊವಾನ್ನನನ್ನು ಕುರಿತೇ ಎಂದು ಪ್ರೇಷಿತರು ಆಗ ಅರ್ಥಮಾಡಿಕೊಂಡರು.

### ಉಪವಾಸ ಉಪಾಸನೆಗಳ ಪ್ರಯೋಜನ

(ಮಾರ್ಕ 9:14-29; ಲೂಕ 9:37-43)

14 ಜನರ ಗುಂಪು ಇದ್ದಲ್ಲಿಗೆ ಅವರೆಲ್ಲರು ಮರಳಿಬಂದರು. ಆಗ ಒಬ್ಬನು ಯೇಸುಸ್ವಾಮಿಯ
ಬಳಿಗೆ ಬಂದು, [15]"ಪ್ರಭೂ, ನನ್ನ ಮಗನ ಮೇಲೆ ಕನಿಕರವಿಡಿ, ಅವನು ಮೂರ್ಛಾರೋಗಿ, ಅವನ ಕಷ್ಟ
ಹೇಳತೀರದು, ಆಗಾಗ ಬೆಂಕಿಯಲ್ಲೋ ನೀರಿನಲ್ಲೋ ಬಿದ್ದು ಬಿಡುತ್ತಾನೆ. [16]ಅವನನ್ನು ತಮ್ಮ ಶಿಷ್ಯರ ಬಳಿಗೆ
ಕರೆದುಕೊಂಡು ಬಂದೆ. ಆದರೆ ಅವನನ್ನು ಗುಣಪಡಿಸಲು ಅವರಿಂದಾಗಲಿಲ್ಲ," ಎಂದು ಮೊಣಕಾಲೂರಿ
ಯಾಚಿಸಿದನು. [17]ಅದಕ್ಕೆ ಯೇಸು, "ಅಯ್ಯೋ ವಿಶ್ವಾಸವಿಲ್ಲದ ವಕ್ರ ಪೀಳಿಗೆಯೇ, ಇನ್ನೆಷ್ಟುಕಾಲ ನಾನು
ನಿಮ್ಮೊಂದಿಗಿರಲಿ? ಇನ್ನೆಷ್ಟು ಕಾಲ ನಿಮ್ಮನ್ನು ಸಹಿಸಿಕೊಳ್ಳಲಿ?" ಎಂದು ಹೇಳಿ, "ಆ ಹುಡುಗನನ್ನು ಇಲ್ಲಿ ನನ್ನ
ಬಳಿಗೆ ಕರೆದುಕೊಂಡು ಬನ್ನಿ," ಎಂದರು. [18]ಅನಂತರ ಆ ಹುಡುಗನಲ್ಲಿದ್ದ ದೆವ್ವವನ್ನು ಅವರು
ಗದರಿಸಿದೊಡನೆಯೇ, ಅದು ಅವನನ್ನು ಬಿಟ್ಟು ಹೋಯಿತು. ಅವನು ತಕ್ಷಣವೇ ಸ್ವಸ್ಥನಾದನು.
19 ತರುವಾಯ ಶಿಷ್ಯರು ಪ್ರತ್ಯೇಕವಾಗಿ ಯೇಸುವಿನ ಬಳಿಗೆ ಬಂದು, "ಆ ದೆವ್ವವನ್ನು ಬಿಡಿಸಲು
ನಮ್ಮಿಂದಾಗಲಿಲ್ಲವಲ್ಲ, ಅದೇಕೆ?" ಎಂದು ಕೇಳಿದರು. [20]ಅದಕ್ಕೆ ಪ್ರತ್ಯುತ್ತರವಾಗಿ ಯೇಸು, "ನಿಮ್ಮ
ಅಲ್ಪವಿಶ್ವಾಸವೇ ಅದಕ್ಕೆ ಕಾರಣ. ನಾನು ನಿಶ್ಚಯವಾಗಿ ಹೇಳುತ್ತೇನೆ: ನಿಮಗೆ ಸಾಸಿವೆ ಕಾಳಿನಷ್ಟು
ವಿಶ್ವಾಸವಾದರೂ ಇದ್ದಲ್ಲಿ, ಈ ಬೆಟ್ಟಕ್ಕೆ ಇಲ್ಲಿಂದ ಆ ಸ್ಥಳಕ್ಕೆ ಹೋಗು, ಎಂದು ಹೇಳಿದರೆ ಅದು ಹೋಗುತ್ತದೆ.
[21]ನಿಮ್ಮಿಂದ ಅಸಾಧ್ಯವಾದುದು ಒಂದೂ ಇರದು. (ಈ ಬಗೆಯ ದೆವ್ವಗಳನ್ನು ಹೊರಗಟ್ಟಲು ಪ್ರಾರ್ಥನೆ
ಮತ್ತು ಉಪವಾಸ ಮಾಡುವುದನ್ನು ಬಿಟ್ಟು ಬೇರೆ ಮಾರ್ಗವಿಲ್ಲ)," ಎಂದರು.

### ಮರಣ-ಪುನರುತ್ಥಾನ ಕುರಿತು ಎರಡನೆಯ ಪ್ರಕಟಣೆ

(ಮಾರ್ಕ 9:20-32; ಲೂಕ 9:43-45)

22 ಶಿಷ್ಯರೆಲ್ಲರು ಒಮ್ಮೆ ಗಲಿಲೇಯದಲ್ಲಿ ಒಟ್ಟಿಗೆ ಸೇರಿದ್ದರು. ಆಗ ಯೇಸು ಅವರಿಗೆ,
"ನರಪುತ್ರನನ್ನು ಜನರ ವಶಕ್ಕೆ ಒಪ್ಪಿಸಲಾಗುವುದು; [23]ಅವರು ಆತನನ್ನು ಕೊಲ್ಲುವರು. ಆದರೆ ಮೂರನೆಯ
ದಿನ ಆತನನ್ನು ಪುನರುತ್ಥಾನಗೊಳಿಸಲಾಗುವುದು," ಎಂದರು. ಅದನ್ನು ಕೇಳಿ ಶಿಷ್ಯರು ತುಂಬ
ವ್ಯಥೆಗೊಂಡರು.

### ದೇವಪುತ್ರನಿಂದಲೂ ದೇವಾಲಯಕ್ಕೆ ತೆರಿಗೆ ವಸೂಲಿಯೇ?

24 ಯೇಸು ಮತ್ತು ಶಿಷ್ಯರು ಕಫೆರ್ನವುಮಿಗೆ ಹೋದರು. ದೇವಾಲಯದ ತೆರಿಗೆಯನ್ನು ವಸೂಲಿ
ಮಾಡುತ್ತಿದ್ದವರು ಪೇತ್ರನ ಬಳಿಗೆ ಬಂದು, "ನಿಮ್ಮ ಗುರು ತೆರಿಗೆ ಕಟ್ಟುವುದಿಲ್ಲವೇ?" ಎಂದು ವಿಚಾರಿಸಿದರು.
ಅದಕ್ಕೆ ಪೇತ್ರನು, "ಹೌದು, ಕಟ್ಟುತ್ತಾರೆ," ಎಂದು ಉತ್ತರವಿತ್ತನು. [25]ಬಳಿಕ ಮನೆಗೆ ಬಂದಾಗ, ಅವನು

ಮಾತೆತ್ತುವುದಕ್ಕೆ ಮೊದಲೇ ಯೇಸು "ಸಿಮೋನಾ, ನಿನಗೆ ಏನನ್ನಿಸುತ್ತದೆ? ಇಹಲೋಕದ ರಾಜರು
ಕಂದಾಯವನ್ನಾಗಲಿ, ತೆರಿಗೆಯನ್ನಾಗಲಿ ಯಾರಿಂದ ವಸೂಲಿಮಾಡುತ್ತಾರೆ? ತಮ್ಮ ಪುತ್ರರಿಂದಲೋ ಅಥವಾ
ಪರರಿಂದಲೋ?" ಎಂದು ಕೇಳಿದರು. "ಪರರಿಂದಲೇ," ಎಂದು ಪೇತ್ರನು ಉತ್ತರಕೊಟ್ಟನು. 26ಯೇಸು,
"ಹಾಗಾದರೆ, ಪುತ್ರರು ತೆರಿಗೆ ಕಟ್ಟಬೇಕಾಗಿಲ್ಲ ತಾನೇ? 27ಆದರೂ, ನಾವು ಇವರಿಗೆ ಅಡ್ಡಿಯಾಗಬಾರದು.
ಎಂದೇ ನೀನು ಸರೋವರಕ್ಕೆ ಹೋಗಿ ಗಾಳಹಾಕು. ಮೊದಲು ಸಿಕ್ಕುವ ಮೀನನ್ನು ಎತ್ತಿಕೊಂಡು ಅದರ
ಬಾಯಿ ತೆರೆದು ನೋಡು. ಅದರಲ್ಲಿ ಒಂದು ಬೆಳ್ಳಿ ನಾಣ್ಯ ದೊರಕುವುದು. ಅದನ್ನು ತಂದು ನನ್ನ ಮತ್ತು
ನಿನ್ನ ಪರವಾಗಿ ಅವರಿಗೆ ಕೊಡು," ಎಂದರು.

### ಮಗುವಾಗಬಲ್ಲವನು ಮಹಾತ್ಮನಾಗಬಲ್ಲನು

(ಮಾರ್ಕ 9:33–37; ಲೂಕ 9:46–48)

**18** ಆ ಸಮಯದಲ್ಲಿ ಶಿಷ್ಯರು ಯೇಸುಸ್ವಾಮಿಯ ಬಳಿಗೆ ಬಂದು, "ಸ್ವರ್ಗಸಾಮ್ರಾಜ್ಯದಲ್ಲಿ ಎಲ್ಲರಿಗಿಂತಲೂ
ದೊಡ್ಡವನು ಯಾರು?" ಎಂದು ಕೇಳಿದರು. 2ಯೇಸು ಒಂದು ಚಿಕ್ಕ ಮಗುವನ್ನು ತಮ್ಮ ಹತ್ತಿರಕ್ಕೆ ಕರೆದು,
ಅದನ್ನು ಶಿಷ್ಯರ ನಡುವೆ ನಿಲ್ಲಿಸಿ ಹೀಗೆಂದರು: 3“ನೀವು ಪರಿವರ್ತನೆ ಹೊಂದಿ ಮಕ್ಕಳಂತೆ ಆಗದಿದ್ದರೆ
ಸ್ವರ್ಗಸಾಮ್ರಾಜ್ಯವನ್ನು ಸೇರಲಾರಿರಿ, ಎಂದು ನಿಶ್ಚಯವಾಗಿ ಹೇಳುತ್ತೇನೆ. 4ಈ ಮಗುವಿನಂತೆ
ನಮ್ರಭಾವವುಳ್ಳವನೇ ಸ್ವರ್ಗಸಾಮ್ರಾಜ್ಯದಲ್ಲಿ ಎಲ್ಲರಿಗಿಂತ ದೊಡ್ಡವನು. 5ನನ್ನ ಹೆಸರಿನಲ್ಲಿ ಇಂತಹ
ಮಗುವೊಂದನ್ನು ಸ್ವೀಕರಿಸುವವನು ನನ್ನನ್ನೇ ಸ್ವೀಕರಿಸುತ್ತಾನೆ."

### ಪಾಪ ಪ್ರಚೋದಕರಿಗೆ ಶಾಪ

(ಮಾರ್ಕ 9:42–48; ಲೂಕ 17:1–2)

6 "ನನ್ನಲ್ಲಿ ವಿಶ್ವಾಸವಿಟ್ಟಿರುವ ಈ ಚಿಕ್ಕವರಲ್ಲಿ ಒಬ್ಬನಿಗೆ ಯಾವನಾದರೂ ಪಾಪಕ್ಕೆ ಕಾರಣನಾದರೆ
ಅಂಥವನು ದೊಡ್ಡ ಬೀಸುವ ಕಲ್ಲನ್ನು ಕುತ್ತಿಗೆಗೆ ಬಿಗಿಸಿಕೊಂಡು, ಆಳವಾದ ಸಮುದ್ರದಲ್ಲಿ ದಬ್ಬಿಸಿಕೊಳ್ಳುವುದೇ
ಲೇಸು. 7ಪಾಪಕ್ಕೆ ಪ್ರಚೋದಿಸುವ ಲೋಕಕ್ಕೆ ಧಿಕ್ಕಾರ! 8ನಿನ್ನ ಕೈಯೇ ಆಗಲಿ, ಕಾಲೇ ಆಗಲಿ, ನಿನಗೆ ಪಾಪಕ್ಕೆ
ಕಾರಣವಾದರೆ ಅದನ್ನು ಕತ್ತರಿಸಿ ಬಿಸಾಡಿಬಿಡು. ಎರಡು ಕೈಗಳಿದ್ದೋ ಎರಡು ಕಾಲುಗಳಿದ್ದೋ ನಿರಂತರ
ಅಗ್ನಿಯಲ್ಲಿ ದಬ್ಬಿಸಿಕೊಳ್ಳುವುದಕ್ಕಿಂತ ಅಂಗಹೀನನಾಗಿ, ಕುಂಟನಾಗಿ ಅಮರ ಜೀವವನ್ನು ಪಡೆಯುವುದೇ
ನಿನಗೆ ಲೇಸು. 9ನಿನ್ನ ಕಣ್ಣು ನಿನಗೆ ಪಾಪಕ್ಕೆ ಕಾರಣವಾದರೆ ಅದನ್ನು ಕಿತ್ತು ಬಿಸಾಡಿಬಿಡು. ಎರಡು
ಕಣ್ಣುಳ್ಳವನಾಗಿ ನರಕಾಗ್ನಿಗೆ ದಬ್ಬಿಸಿಕೊಳ್ಳುವುದಕ್ಕಿಂತ ಒಕ್ಕಣ್ಣನಾಗಿ ಅಮರ ಜೀವವನ್ನು ಪಡೆ. ಅದೇ ನಿನಗೆ
ಲೇಸು.

10 "ಎಚ್ಚರಿಕೆ! ಈ ಚಿಕ್ಕವರಲ್ಲಿ ಯಾರನ್ನೂ ತೃಣೀಕರಿಸಬೇಡಿ. 11ಸ್ವರ್ಗದಲ್ಲಿನ ಇವರ ದೂತರು
ಸದಾಕಾಲ ನನ್ನ ಸ್ವರ್ಗೀಯ ಪಿತನ ಸಮ್ಮುಖದಲ್ಲಿ ಇದ್ದಾರೆ; ಇದು ನಿಮಗೆ ತಿಳಿದಿರಲಿ.

### ಕಾಣದೆ ಹೋದ ಕುರಿಮರಿ

(ಲೂಕ 15.3–7)

12 “ನಿಮ್ಮಲ್ಲಿ ಒಬ್ಬನಿಗೆ ನೂರು ಕುರಿಗಳು ಇವೆಯೆನ್ನೋಣ, ಅವುಗಳಲ್ಲಿ ಒಂದು ಕುರಿ
ತಪ್ಪಿಸಿಕೊಂಡು ಹೋಯಿತೆಂದು ಇಟ್ಟುಕೊಳ್ಳಿ. ಆಗ ನಿಮಗೇನು ಅನ್ನಿಸುತ್ತದೆ? ಅವನು ಉಳಿದ
ತೊಂಭತ್ತೊಂಭತ್ತು ಕುರಿಗಳನ್ನು ಗುಡ್ಡದಲ್ಲೇ ಬಿಟ್ಟು, ತಪ್ಪಿಸಿಕೊಂಡು ಹೋದ ಆ ಒಂದು ಕುರಿಯನ್ನು
ಹುಡುಕಿಕೊಂಡು ಹೋಗುವುದಿಲ್ಲವೇ? 13ಅದು ಸಿಕ್ಕಿತು ಅನ್ನಿ; ತಪ್ಪಿಸಿಕೊಳ್ಳದ ಈ ತೊಂಭತ್ತೊಂಭತ್ತು
ಕುರಿಗಳಿಗಿಂತ ಸಿಕ್ಕಿದ ಈ ಒಂದು ಕುರಿಗಾಗಿ ಅವನು ಹೆಚ್ಚು ಆನಂದಪಡುತ್ತಾನೆ ಎಂದು ನಿಮಗೆ ನಿಶ್ಚಯವಾಗಿ

ಹೇಳುತ್ತೇನೆ. [14]ಅಂತೆಯೇ, ಈ ಚಿಕ್ಕವರಲ್ಲಿ ಒಬ್ಬನು ಕೂಡ ಕಳೆದುಹೋಗಬಾರದು; ಇದೇ ಸ್ವರ್ಗದಲ್ಲಿರುವ ನನ್ನ ತಂದೆಯ ಚಿತ್ತ.

## ಸೋದರನ ಸುಧಾರಣೆ

15 "ನಿನ್ನ ಸೋದರನು ನಿನಗೆ ಅಪರಾಧ ಮಾಡಿದರೆ, ನೀನು ಹೋಗಿ ನೀವಿಬ್ಬರೇ ಇರುವಾಗ, ಅವನ ತಪ್ಪನ್ನು ಮನಗಾಣಿಸು. ಅವನು ನಿನಗೆ ಕಿವಿಗೊಟ್ಟರೆ ಅವನ ಸೋದರತ್ವವನ್ನು ನೀನು ಮತ್ತೆ ಗಳಿಸಿಕೊಂಡಂತಾಗುವುದು. [16]ಒಂದು ವೇಳೆ, ಅವನು ನಿನಗೆ ಕಿವಿಗೊಡದೆ ಹೋದರೆ ಒಬ್ಬಿಬ್ಬರನ್ನು ನಿನ್ನ ಸಂಗಡ ಕರೆದುಕೊಂಡು ಹೋಗು; ಹೀಗೆ ಇಬ್ಬರು ಅಥವಾ ಮೂವರು ಸಾಕ್ಷಿಗಳ ಸಮ್ಮುಖದಲ್ಲಿ ಪ್ರತಿಯೊಂದು ಮಾತೂ ಇತ್ಯರ್ಥವಾಗಲಿ. [17]ಅವರಿಗೂ ಅವನು ಕಿವಿಗೊಡದೆ ಹೋದಲ್ಲಿ ಧರ್ಮಸಭೆಗೆ ತಿಳಿಸು. ಧರ್ಮಸಭೆಗೂ ಅವನು ಕಿವಿಗೊಡದೆ ಹೋದರೆ ಅವನನ್ನು ಧರ್ಮಭ್ರಷ್ಟನೆಂದು ಹಾಗೂ ಬಹಿಷ್ಕೃತನೆಂದು ಪರಿಗಣಿಸು.

18 "ನೀವು ಇಹದಲ್ಲಿ ಏನನ್ನು ಬಂಧಿಸುತ್ತೀರೋ ಅದು ಪರದಲ್ಲೂ ಬಂಧಿಸಲಾಗುವುದು; ನೀವು ಇಹದಲ್ಲಿ ಏನನ್ನು ಬಿಚ್ಚುತ್ತೀರೋ ಅದು ಪರದಲ್ಲೂ ಬಿಚ್ಚಲಾಗುವುದು ಎಂದು ನಿಮಗೆ ಖಚಿತವಾಗಿ ಹೇಳುತ್ತೇನೆ.

## ಸಭಾಪ್ರಾರ್ಥನೆಯ ಪ್ರಭಾವ

19 "ಇನ್ನೂ ನಾನು ನಿಮಗೆ ಹೇಳುವುದು ಏನೆಂದರೆ: ನಿಮ್ಮಲ್ಲಿ ಇಬ್ಬರು ತಾವು ಬೇಡಿಕೊಳ್ಳುವ ಯಾವುದಾದರೊಂದು ವಿಷಯವಾಗಿ ಇಹಲೋಕದಲ್ಲಿ ಒಮ್ಮನಸ್ಸುಳ್ಳವರಾಗಿದ್ದರೆ, ಅದು ಸ್ವರ್ಗದಲ್ಲಿರುವ ನನ್ನ ತಂದೆಯಿಂದ ಅವರಿಗೆ ಕೈಗೂಡುತ್ತದೆ. [20]ಎಲ್ಲಿ ಇಬ್ಬರು, ಮೂವರು ನನ್ನ ನಾಮದಲ್ಲಿ ಸೇರಿರುತ್ತಾರೋ, ಅಲ್ಲಿ ನಾನು ಅವರ ಮಧ್ಯೆ ಇರುತ್ತೇನೆ."

## ಕ್ಷಮೆಗೆ ಎಲ್ಲೆ ಇಲ್ಲ

21 ಅನಂತರ ಪೇತ್ರನು ಯೇಸುವಿನ ಬಳಿಗೆ ಬಂದು, "ಸ್ವಾಮಿ, ನನಗೆ ವಿರುದ್ಧ ದ್ರೋಹ ಮಾಡುತ್ತಾ ಇರುವ ನನ್ನ ಸಹೋದರನನ್ನು ಎಷ್ಟು ಸಲ ಕ್ಷಮಿಸಬೇಕು? ಏಳುಸಲವೇ?" ಎಂದು ಕೇಳಿದನು.
[22]"ಏಳುಸಲವಲ್ಲ, ಏಳೆಪ್ಪತ್ತುಸಲ ಕ್ಷಮಿಸಬೇಕು ಎಂದು ನಾನು ನಿನಗೆ ಒತ್ತಿ ಹೇಳುತ್ತೇನೆ" ಎಂದು ಯೇಸು ಉತ್ತರವಿತ್ತರು.

23 ಯೇಸು ತಮ್ಮ ಮಾತನ್ನು ಮುಂದುವರಿಸುತ್ತಾ, "ಸ್ವರ್ಗಸಾಮ್ರಾಜ್ಯಕ್ಕೆ ಈ ಹೋಲಿಕೆ ಅನ್ವಯಿಸುತ್ತದೆ: ಒಬ್ಬ ರಾಜನಿದ್ದ. ಅವನು ತನ್ನ ಸೇವಕರಿಂದ ಲೆಕ್ಕ ಕೇಳಲು ನಿರ್ಧರಿಸಿದ. [24]ಲೆಕ್ಕ ತೆಗೆದುಕೊಳ್ಳಲು ಆರಂಭಿಸಿದಾಗ ಹತ್ತು ಸಾವಿರ 'ಚಿನ್ನದ ನಾಣ್ಯ'ಗಳನ್ನು ಸಾಲವಾಗಿ ತೆರಬೇಕಾಗಿದ್ದ ಒಬ್ಬನನ್ನು ಅವನ ಸಮ್ಮುಖಕ್ಕೆ ಕರೆತರಲಾಯಿತು. [25]ಆದರೆ ಸಾಲ ತೀರಿಸಲು ಅವನ ಕೈಯಲ್ಲಿ ಹಣವಿರಲಿಲ್ಲ. ಆದುದರಿಂದ ಅವನಿಗಿದ್ದುದೆಲ್ಲವನ್ನು ಮಾತ್ರವಲ್ಲ, ಅವನನ್ನೂ ಅವನ ಮಡದಿ ಮಕ್ಕಳನ್ನೂ ಗುಲಾಮಗಿರಿಗೆ ಮಾರಿ, ಸಾಲ ತೀರಿಸುವಂತೆ ರಾಜ ಆಜ್ಞಾಪಿಸಿದ. [26]ಆಗ ಆ ಸೇವಕ ರಾಜನ ಕಾಲಿಗೆ ಬಿದ್ದು ಬೇಡಿಕೊಂಡ: 'ಸ್ವಲ್ಪ ಸೈರಿಸಿಕೊಳ್ಳಿ ಸ್ವಾಮಿ, ನಿಮ್ಮ ಸಾಲವನ್ನೆಲ್ಲಾ ತೀರಿಸಿಬಿಡುತ್ತೇನೆ,' ಎಂದು ಅಂಗಲಾಚಿದ. [27]ರಾಜನಿಗೆ ಕನಿಕರ ಉಂಟಾಯಿತು. ಆ ಸೇವಕನನ್ನು ಬಿಡುಗಡೆಮಾಡಿ ಅವನ ಸಾಲವನ್ನು ಮನ್ನಿಸಿ ಬಿಟ್ಟ.

28 "ಆದರೆ ಅದೇ ಸೇವಕ ಹೊರಗೆ ಬಂದದ್ದೇ ತನಗೆ ಕೇವಲ ನೂರು 'ಬೆಳ್ಳಿಕಾಸು' ಸಾಲ ತೆರಬೇಕಾಗಿದ್ದ ಒಬ್ಬ ಜೊತೆ ಸೇವಕನನ್ನು ಎದುರುಗೊಂಡ. [29]ಅವನನ್ನು ಹಿಡಿದು, 'ನನಗೆ ಕೊಡಬೇಕಾದ ಸಾಲವನ್ನು ಈಗಲೇ ಕೊಟ್ಟು ತೀರಿಸು,' ಎಂದು ಕುತ್ತಿಗೆ ಹಿಸುಕಿದ. ಆಗ ಆ ಜೊತೆಗಾರ, 'ಸ್ವಲ್ಪ ಸೈರಿಸಿಕೊ,

ಕೊಟ್ಟುಬಿಡುತ್ತೇನೆ,' ಎಂದು ಕಾಲಿಗೆ ಬಿದ್ದು ಕೇಳಿಕೊಂಡ. [30]ಆದರೂ ಅವನು ಒಪ್ಪಲಿಲ್ಲ. ಅಷ್ಟುಮಾತ್ರವಲ್ಲ, ಸಾಲ ತೀರಿಸುವ ತನಕ ಆ ಜೊತೆಗಾರನನ್ನು ಸೆರೆಗೆ ಹಾಕಿಸಿದ. [31]ಇದೆಲ್ಲವನ್ನು ಕಂಡ ಇತರ ಸೇವಕರು ಬಹಳವಾಗಿ ನೊಂದುಕೊಂಡರು. ರಾಜನ ಬಳಿಗೆ ಹೋಗಿ ನಡೆದುದೆಲ್ಲವನ್ನೂ ವರದಿಮಾಡಿದರು. [32]ರಾಜನು ಅವನನ್ನು ಕರೆಯಿಸಿ, 'ಎಲೋ ನೀಚ, ನೀನು ಬೇಡಿಕೊಂಡಿದ್ದರಿಂದ ಪೂರ್ತಿ ಸಾಲವನ್ನು ನಾನು ಮನ್ನಾಮಾಡಿದೆ. [33]ನಾನು ನಿನಗೆ ದಯೆ ತೋರಿಸಿದಂತೆ ನೀನೂ ನಿನ್ನ ಜೊತೆಗಾರನಿಗೆ ದಯೆ ತೋರಿಸಬೇಕಿತ್ತು ಅಲ್ಲವೇ?' ಎಂದು ಸಿಟ್ಟುಗೊಂಡ. [34]ಬಳಿಕ ತನಗೆ ಬರಬೇಕಾಗಿದ್ದ ಸಾಲವನ್ನು ತೀರಿಸುವವರೆಗೂ ಅವನನ್ನು ಕಠಿಣ ಶಿಕ್ಷೆಗೆ ಗುರಿಪಡಿಸಿದ.

35 "ನಿಮ್ಮಲ್ಲಿ ಪ್ರತಿಯೊಬ್ಬನೂ ತನ್ನ ಸೋದರನನ್ನು ಮನಃಪೂರ್ವಕವಾಗಿ ಕ್ಷಮಿಸಬೇಕು. ಇಲ್ಲದಿದ್ದರೆ ಸ್ವರ್ಗದಲ್ಲಿರುವ ನನ್ನ ತಂದೆ ನಿಮಗೆ ಇದರಂತೆಯೇ ಮಾಡುವರು," ಎಂದರು.

## ವಿವಾಹ ವಿಚ್ಛೇದನೆ ಕೂಡದು

(ಮಾರ್ಕ 10.1–12)

**19** ಈ ವಿಷಯಗಳನ್ನು ಹೇಳಿಯಾದ ಮೇಲೆ, ಯೇಸುಸ್ವಾಮಿ ಗಲಿಲೇಯವನ್ನು ಬಿಟ್ಟು ಜೋರ್ಡನ್ ನದಿಯ ಆಚೆಕಡೆ ಇದ್ದ ಜುದೇಯ ಪ್ರಾಂತ್ಯಕ್ಕೆ ಬಂದರು. [2]ದೊಡ್ಡ ಜನಸ್ತೋಮ ಅವರನ್ನು ಹಿಂಬಾಲಿಸಿತು. ಅಲ್ಲಿ ಯೇಸು ಅವರಿಗೆ ಆರೋಗ್ಯದಾನ ಮಾಡಿದರು.

3 ಫರಿಸಾಯರಲ್ಲಿ ಕೆಲವರು ಯೇಸುವಿನ ಬಳಿಗೆ ಬಂದು ಅವರನ್ನು ಮಾತಿನಲ್ಲಿ ಸಿಕ್ಕಿಸುವ ಉದ್ದೇಶದಿಂದ, "ಯವುದಾದರೂ ಕಾರಣದಿಂದ ಗಂಡನು ತನ್ನ ಹೆಂಡತಿಯನ್ನು ಬಿಟ್ಟುಬಿಡುವುದು ಧರ್ಮಸಮ್ಮತವೋ?" ಎಂದು ಕೇಳಿದರು. [4]ಅದಕ್ಕೆ ಪ್ರತ್ಯುತ್ತರವಾಗಿ ಯೇಸು, "ಸೃಷ್ಟಿಕರ್ತ ಆದಿಯಿಂದಲೇ ಅವರನ್ನು ಗಂಡುಹೆಣ್ಣಾಗಿ ಉಂಟುಮಾಡಿದರು ಎಂದೂ, [5]'ಈ ಕಾರಣದಿಂದಲೇ ಗಂಡನು ತಂದೆತಾಯಿಗಳನ್ನು ಬಿಟ್ಟು ತನ್ನ ಹೆಂಡತಿಯನ್ನು ಕೂಡಿಕೊಂಡು ಅವರಿಬ್ಬರೂ ಒಂದಾಗಿ ಬಾಳುವರು' ಎಂದೂ ಹೇಳಿದ್ದಾರೆಂಬುದಾಗಿ ನೀವು ಪವಿತ್ರ ಗ್ರಂಥದಲ್ಲಿ ಓದಿಲ್ಲವೇ? [6]ಹೀಗಿರುವಲ್ಲಿ, ಇನ್ನು ಮುಂದೆ ಅವರು ಇಬ್ಬರಲ್ಲ, ಒಂದೇ ಶರೀರವಾಗಿರುವರು. ಈ ನಿಮಿತ್ತ ದೇವರು ಒಂದುಗೂಡಿಸಿದ್ದನ್ನು ಮನುಷ್ಯನು ಬೇರ್ಪಡಿಸದೆ ಇರಲಿ," ಎಂದರು. [7]"ಹಾಗಾದರೆ ವಿವಾಹ ವಿಚ್ಛೇದನ ಪತ್ರವನ್ನು ಕೊಟ್ಟು ಹೆಂಡತಿಯನ್ನು ಬಿಟ್ಟುಬಿಡಬಹುದೆಂದು ಮೋಶೆಯು ನಿಯಮಿಸಿದ್ದು ಏಕೆ?" ಎಂದು ಫರಿಸಾಯರು ಮರುಪ್ರಶ್ನೆ ಹಾಕಿದರು. [8]"ನಿಮ್ಮ ಹೆಂಡತಿಯನ್ನು ನೀವು ಬಿಟ್ಟುಬಿಡಬಹುದೆಂದು ಮೋಶೆ ಅನುಮತಿ ಇತ್ತದ್ದು ನಿಮ್ಮ ಹೃದಯ ಕಾಠಿಣ್ಯದ ನಿಮಿತ್ತದಿಂದಲೇ. ಆದರೆ ಅದು ಆದಿಯಿಂದಲೇ ಹಾಗಿರಲಿಲ್ಲ. [9]ನಾನು ನಿಮಗೆ ಹೇಳುವುದನ್ನು ಕೇಳಿ: ತನ್ನ ಹೆಂಡತಿಯನ್ನು ಅವಳ ದುರ್ನಡತೆಯ ಕಾರಣದಿಂದಲ್ಲದೆ ಬಿಟ್ಟುಬಿಟ್ಟು ಮತ್ತೊಬ್ಬಳನ್ನು ಮದುವೆ ಮಾಡಿಕೊಳ್ಳುವ ಪ್ರತಿಯೊಬ್ಬನೂ ವ್ಯಭಿಚಾರಿಯಾಗುತ್ತಾನೆ."

## ಬ್ರಹ್ಮಚರ್ಯೆಗೆ ಕರೆ

10 ಶಿಷ್ಯರು ಆಗ, "ಸತಿಪತಿಯರ ಸಂಬಂಧ ಈ ರೀತಿ ಇರುವುದಾದರೆ, ಮದುವೆ ಮಾಡಿಕೊಳ್ಳದಿರುವುದೇ ಲೇಸು," ಎಂದರು. [11]ಅದಕ್ಕೆ ಯೇಸು, "ಇದನ್ನು ಅಂಗೀಕರಿಸಲು ಎಲ್ಲರಿಂದಲೂ ಸಾಧ್ಯವಿಲ್ಲ; ಯಾರಿಗೆ ಅನುಗ್ರಹಿಸಲಾಗಿದೆಯೋ ಅವರಿಂದ ಮಾತ್ರ ಸಾಧ್ಯ. [12]ತಾಯಿಯ ಉದರದಿಂದಲೇ ನಪುಂಸಕರಾಗಿ ಹುಟ್ಟಿದವರಿದ್ದಾರೆ. ಜನರಿಂದ ನಪುಂಸಕರಾದವರು ಕೂಡ ಇದ್ದಾರೆ; ಸ್ವರ್ಗಸಾಮ್ರಾಜ್ಯದ ನಿಮಿತ್ತ ಅವಿವಾಹಿತರಾಗಿ ಇರುವವರೂ ಇದ್ದಾರೆ; ಇದನ್ನು ಅಂಗೀಕರಿಸಬಲ್ಲವನು ಅಂಗೀಕರಿಸಲಿ," ಎಂದರು.

## ಪುಟಾಣಿಗಳಿಗೆ ಪುರಸ್ಕಾರ
(ಮಾರ್ಕ 10.13–16; ಲೂಕ 18.15–17)

13 ಅನಂತರ ಕೆಲವರು ಚಿಕ್ಕಮಕ್ಕಳನ್ನು ಯೇಸುಸ್ವಾಮಿಯ ಬಳಿಗೆ ತಂದರು. ಅವುಗಳ ಮೇಲೆ
ಕೈಯಿಟ್ಟು ಪ್ರಾರ್ಥನೆಮಾಡಬೇಕೆಂದು ಕೇಳಿಕೊಂಡರು. ಶಿಷ್ಯರು ಅವರನ್ನು ಗದರಿಸಿದರು. 14ಆಗ ಯೇಸು,
"ಚಿಕ್ಕಮಕ್ಕಳನ್ನು ನನ್ನ ಬಳಿಗೆ ಬರಲು ಬಿಡಿ; ಅವುಗಳನ್ನು ತಡೆಯಬೇಡಿ. ಸ್ವರ್ಗಸಾಮ್ರಾಜ್ಯ ಇಂಥವರದೇ,"
ಎಂದರು. 15ತರುವಾಯ ಆ ಮಕ್ಕಳ ಮೇಲೆ ಕೈಯಿಟ್ಟು ಆಶೀರ್ವದಿಸಿದರು. ಬಳಿಕ ಅಲ್ಲಿಂದ ಹೊರಟು
ಹೋದರು.

## ಧನಿಕ ಯುವಕನ ಸಮಸ್ಯೆ
(ಮಾರ್ಕ 10.17–31; ಲೂಕ 18.18–30)

16 ಒಮ್ಮೆ ಯೇಸುಸ್ವಾಮಿಯ ಬಳಿಗೆ ಒಬ್ಬ ಯುವಕನು ಬಂದು, "ಗುರುದೇವಾ, ಅಮರ ಜೀವವನ್ನು
ಪಡೆಯಲು ನಾನು ಒಳ್ಳೆಯದೇನನ್ನು ಮಾಡಬೇಕು?" ಎಂದು ಕೇಳಿದನು. 17ಅದಕ್ಕೆ ಅವರು, "ಒಳ್ಳೆಯದನ್ನು
ಕುರಿತು ನೀನು ನನ್ನನ್ನು ವಿಚಾರಿಸುವುದು ಏಕೆ? ಒಳ್ಳೆಯವರು ಒಬ್ಬರೇ. ನೀನು ಆ ಜೀವಕ್ಕೆ
ಪ್ರವೇಶಿಸಬೇಕಾದರೆ ದೈವಾಜ್ಞೆಗಳನ್ನು ಅನುಸರಿಸು," ಎಂದರು. 18"ಅವು ಯಾವುವು?" ಎಂದು ಮರುಪ್ರಶ್ನೆ
ಹಾಕಿದ. ಅವನಿಗೆ ಯೇಸು, "ನರಹತ್ಯೆಮಾಡಬಾರದು, ವ್ಯಭಿಚಾರ ಮಾಡಬಾರದು, ಕದಿಯಬಾರದು,
ಸುಳ್ಳುಸಾಕ್ಷಿ ಹೇಳಬಾರದು, ನಿನ್ನ ತಂದೆ ತಾಯಿಗಳನ್ನು ಗೌರವಿಸಬೇಕು ಮತ್ತು 19ನಿನ್ನನ್ನು ನೀನೇ
ಪ್ರೀತಿಸಿಕೊಳ್ಳುವಂತೆ ನಿನ್ನ ನೆರೆಯವನನ್ನೂ ಪ್ರೀತಿಸಬೇಕು," ಎಂದರು. 20ಅದಕ್ಕೆ ಆ ಯುವಕ, "ಇವೆಲ್ಲವನ್ನೂ
ಅನುಸರಿಸಿಕೊಂಡು ಬಂದಿದ್ದೇನೆ. ನನ್ನಲ್ಲಿ ಇನ್ನೇನು ಕೊರತೆ ಇದೆ?" ಎಂದು ಮತ್ತೆ ಕೇಳಿದ. 21ಆಗ ಯೇಸು,
"ನೀನು ಸಂಪೂರ್ಣನಾಗಬೇಕು ಎಂದಿದ್ದರೆ ಹೋಗು, ನಿನ್ನ ಆಸ್ತಿಯನ್ನೆಲ್ಲಾ ಮಾರಿ, ಬಡಬಗ್ಗರಿಗೆ
ದಾನಮಾಡು; ಸ್ವರ್ಗದಲ್ಲಿ ನಿನಗೆ ಸಂಪತ್ತು ಇರುತ್ತದೆ. ನೀನು ಬಂದು ನನ್ನನ್ನು ಹಿಂಬಾಲಿಸು," ಎಂದರು.
22ಇದನ್ನು ಕೇಳಿದ್ದೇ ಆ ಯುವಕ ಖಿನ್ನಮನಸ್ಕನಾಗಿ ಅಲ್ಲಿಂದ ಹೊರಟೇಹೋದ. ಏಕೆಂದರೆ ಅವನಿಗೆ ಅಪಾರ
ಆಸ್ತಿಪಾಸ್ತಿಯಿತ್ತು.
23 ಆಗ ಯೇಸುಸ್ವಾಮಿ ತಮ್ಮ ಶಿಷ್ಯರನ್ನು ಉದ್ದೇಶಿಸಿ, "ಐಶ್ವರ್ಯವಂತನು ಸ್ವರ್ಗಸಾಮ್ರಾಜ್ಯವನ್ನು
ಪ್ರವೇಶಿಸುವುದು ಕಷ್ಟವೆಂದು ನಿಮಗೆ ಒತ್ತಿ ಹೇಳುತ್ತೇನೆ. 24ಐಶ್ವರ್ಯವಂತನು ದೇವರ ಸಾಮ್ರಾಜ್ಯವನ್ನು
ಪ್ರವೇಶಿಸುವುದಕ್ಕಿಂತಲೂ ಒಂಟೆಯು ಸೂಜಿಯ ಕಣ್ಣಿನಲ್ಲಿ ನುಸುಳುವುದು ಸುಲಭ ಎಂಬುದು ನಿಜ,"
ಎಂದರು. 25ಇದನ್ನು ಕೇಳಿದ ಮೇಲಂತೂ ಶಿಷ್ಯರು ಬೆಬ್ಬೆರಗಾದರು. "ಹಾಗಾದರೆ, ಯಾರು ತಾನೆ
ಜೀವೋದ್ಧಾರ ಹೊಂದಲು ಸಾಧ್ಯ?" ಎಂದುಕೊಂಡರು. 26ಯೇಸು ಅವರನ್ನು ನಿಟ್ಟಿಸಿ ನೋಡುತ್ತಾ,
"ಮನುಷ್ಯರಿಗಿದು ಅಸಾಧ್ಯ; ಆದರೆ ದೇವರಿಗೆ ಎಲ್ಲವೂ ಸಾಧ್ಯ," ಎಂದರು.

## ಪರಿತ್ಯಾಗಕ್ಕೆ ನೂರ್ಮಡಿ ಪ್ರತಿಫಲ

27 ಪೇತ್ರನು ಆಗ ಮುಂದೆ ಬಂದು, "ನೋಡಿ, ನಾವು ಎಲ್ಲವನ್ನು ಬಿಟ್ಟುಬಿಟ್ಟು ತಮ್ಮನ್ನು
ಹಿಂಬಾಲಿಸಿದ್ದೇವೆ. ನಮಗೇನು ದೊರಕುತ್ತದೆ?" ಎಂದು ಕೇಳಿದನು. 28ಅದಕ್ಕೆ ಯೇಸು, "ನಿಮಗೆ ಸತ್ಯವಾಗಿ
ಹೇಳುತ್ತೇನೆ: ಹೊಸ ಸೃಷ್ಟಿಯಲ್ಲಿ ನರಪುತ್ರನು ತನ್ನ ಮಹಿಮಾನ್ವಿತ ಸಿಂಹಾಸನದ ಮೇಲೆ ಆಸೀನನಾಗುವಾಗ,
ನನ್ನನ್ನು ಹಿಂಬಾಲಿಸಿರುವ ನೀವು ಕೂಡ, ಇಸ್ರಯೇಲಿನ ಹನ್ನೆರಡು ಗೋತ್ರಗಳಿಗೆ ನ್ಯಾಯಾಧಿಪತಿಗಳಾಗಿ
ಹನ್ನೆರಡು ಸಿಂಹಾಸನಗಳ ಮೇಲೆ ಆಸೀನರಾಗುವಿರಿ. 29ನನ್ನ ನಾಮದ ನಿಮಿತ್ತ ಮನೆಮಠವನ್ನಾಗಲಿ,
ಅಣ್ಣತಮ್ಮಂದಿರನ್ನಾಗಲಿ, ಅಕ್ಕತಂಗಿಯರನ್ನಾಗಲಿ, ತಂದೆ ತಾಯಿಯರನ್ನಾಗಲಿ, ಮಕ್ಕಳುಮರಿಗಳನ್ನಾಗಲಿ,
ಹೊಲಗದ್ದೆಗಳನ್ನಾಗಲಿ ತ್ಯಜಿಸುವ ಪ್ರತಿಯೊಬ್ಬನೂ ನೂರ್ಮಡಿಯಷ್ಟು ಪಡೆಯುವನು; ಮಾತ್ರವಲ್ಲ,

ಅಮರಜೀವಕ್ಕೆ ಬಾಧ್ಯಸ್ಥನಾಗುವನು. [30]ಆದರೆ ಮೊದಲಿನವರಲ್ಲಿ ಅನೇಕರು ಕಡೆಯವರಾಗುವರು;
ಕಡೆಯವರಲ್ಲಿ ಅನೇಕರು ಮೊದಲಿನವರಾಗುವರು.

### ಉದಾರ ಮನದ ಮಾಲೀಕ

**20** "ಸ್ವರ್ಗಸಾಮ್ರಾಜ್ಯವು ಹೀಗಿದೆ: ಒಬ್ಬ ಯಜಮಾನನಿಗೆ ಒಂದು ದ್ರಾಕ್ಷಿ ತೋಟವಿತ್ತು. ಅದರಲ್ಲಿ ಕೆಲಸ
ಮಾಡುವುದಕ್ಕೆ ಕೂಲಿಗಾರರನ್ನು ಗೊತ್ತುಮಾಡಲು ಅವನು ಬೆಳಗಿನ ಜಾವದಲ್ಲೇ ಹೊರಟ. [2]ಆಳಿಗೆ ಒಂದು
ಬೆಳ್ಳಿ ನಾಣ್ಯದಂತೆ ದಿನಕೂಲಿಯನ್ನು ಮಾತಾಡಿ ತೋಟಕ್ಕೆ ಕಳುಹಿಸಿದ. [3]ಸುಮಾರು ಬೆಳಿಗ್ಗೆ ಒಂಭತ್ತು ಗಂಟೆಗೆ
ಅವನು ಪುನಃ ಸಂತೆಬೀದಿಯ ಕಡೆ ಹೋದ. ಕೆಲಸವಿಲ್ಲದೆ ಸುಮ್ಮನೆ ನಿಂತುಕೊಂಡಿದ್ದ ಕೆಲವು
ಕೂಲಿಗಾರರನ್ನು ಅಲ್ಲಿ ಕಂಡ. [4]'ನೀವೂ ನನ್ನ ದ್ರಾಕ್ಷಿತೋಟಕ್ಕೆ ಹೋಗಿರಿ; ನ್ಯಾಯವಾದ ಕೂಲಿಯನ್ನು ನಿಮಗೆ
ಕೊಡುತ್ತೇನೆ,' ಎಂದ. ಅವರೂ ಹೋದರು. [5]ಬಳಿಕ ಸುಮಾರು ಹನ್ನೆರಡು ಗಂಟೆಗೊಮ್ಮೆ ಮತ್ತೆ ಮೂರು
ಗಂಟೆಗೊಮ್ಮೆ ಹೋಗಿ ಇನ್ನೂ ಕೆಲವರನ್ನು ಕೆಲಸಕ್ಕೆ ಕಳುಹಿಸಿದ. [6]ಐದು ಗಂಟೆಗೆ ಹೋದಾಗಲೂ ಬೇರೆ
ಕೆಲವರು ಅಲ್ಲಿ ನಿಂತಿರುವುದನ್ನು ಕಂಡು, 'ದಿನವಿಡೀ ಕೆಲಸ ಮಾಡದೆ ಸುಮ್ಮನೆ ಇಲ್ಲಿ ನಿಂತಿದ್ದೀರಲ್ಲಾ, ಏಕೆ?'
ಎಂದು ಕೇಳಿದ. [7]ಅದಕ್ಕೆ ಅವರು, 'ನಮ್ಮನ್ನು ಯಾರೂ ಕೂಲಿಗೆ ಕರೆಯಲಿಲ್ಲ,' ಎಂದರು. 'ಹಾಗಾದರೆ
ನೀವೂ ಕೂಡ ನನ್ನ ದ್ರಾಕ್ಷಿ ತೋಟಕ್ಕೆ ಹೋಗಿ ಕೆಲಸಮಾಡಿ,' ಎಂದು ಹೇಳಿ ಅವರನ್ನೂ ಕಳುಹಿಸಿದ.
8 "ಸಂಜೆಯಾಯಿತು. ತೋಟದ ಯಜಮಾನ ತನ್ನ ಮೇಸ್ತ್ರಿಗೆ, 'ಕೂಲಿಯಾಳುಗಳನ್ನು ಕರೆದು,
ಕೊನೆಗೆ ಬಂದವರಿಂದ ಆರಂಭಿಸಿ ಮೊದಲು ಬಂದವರ ತನಕ ಕೂಲಿಕೊಡು,' ಎಂದ. [9]ಅದರಂತೆ ಐದು
ಗಂಟೆಗೆ ಗೊತ್ತುಮಾಡಿದವರು ಬಂದಾಗ ಒಬ್ಬೊಬ್ಬನಿಗೆ ಒಂದೊಂದು ಬೆಳ್ಳಿನಾಣ್ಯ ಸಿಕ್ಕಿತು. [10]ಮೊತ್ತಮೊದಲು
ಗೊತ್ತುಮಾಡಿದವರು ತಮ್ಮ ಸರದಿ ಬಂದಾಗ, ತಮಗೆ ಹೆಚ್ಚು ಸಿಗುವುದೆಂದು ಭಾವಿಸಿದರು. ಆದರೆ
ಅವರಿಗೂ ಒಂದೊಂದೇ ಬೆಳ್ಳಿನಾಣ್ಯ ದೊರಕಿತು. [11]ಅದನ್ನು ತೆಗೆದುಕೊಂಡಾಗ ಅವರು ದಣಿಯ ವಿರುದ್ಧ
ಗೊಣಗಲಾರಂಭಿಸಿದರು. [12]'ಕಡೇ ಹೊತ್ತಿನಲ್ಲಿ ಬಂದ ಇವರು ಒಂದೇ ಒಂದು ಗಂಟೆ ಕೆಲಸಮಾಡಿದ್ದಾರೆ;
ಬಿಸಿಲಲ್ಲಿ ಬೆಂದು, ದಿನವೆಲ್ಲಾ ದುಡಿದ ನಮ್ಮನ್ನು ಇವರಿಗೆ ಸರಿಸಮ ಮಾಡಿದ್ದೀರಲ್ಲಾ!' ಎಂದರು. [13]ಅದಕ್ಕೆ
ಯಜಮಾನ ಅವರಲ್ಲಿ ಒಬ್ಬನಿಗೆ, 'ಅಯ್ಯಾ, ನಿನಗೆ ನಾನು ಅನ್ಯಾಯ ಮಾಡಿಲ್ಲ. ದಿನಕ್ಕೊಂದು
ಬೆಳ್ಳಿನಾಣ್ಯದಂತೆ ನೀನು ನನ್ನೊಡನೆ ಒಪ್ಪಂದ ಮಾಡಿಕೊಳ್ಳಲಿಲ್ಲವೆ? [14]ನಿನ್ನ ಕೂಲಿ ಏನೋ ಅದನ್ನು
ತೆಗೆದುಕೊಂಡು ಹೋಗು. ನಿನಗೆ ಕೊಟ್ಟಷ್ಟನ್ನು ಈ ಕಟ್ಟಕಡೆಯವನಿಗೂ ಕೊಡುವುದು ನನ್ನ ಇಷ್ಟ.
[15]ನನ್ನದನ್ನು ನನ್ನಿಷ್ಟಾನುಸಾರ ಕೊಡುವ ಹಕ್ಕು ನನಗಿಲ್ಲವೆ? ನನ್ನ ಔದಾರ್ಯವನ್ನು ಕಂಡು ನಿನಗೇಕೆ
ಹೊಟ್ಟೆಯುರಿ?' ಎಂದ. [16]ಹೀಗೆ, ಕಡೆಯವರು ಮೊದಲಿನವರಾಗುವರು; ಮೊದಲಿನವರು
ಕಡೆಯವರಾಗುವರು," ಎಂದು ಯೇಸು ಬೋಧಿಸಿದರು.

### ಮರಣ-ಪುನರುತ್ಥಾನ ಕುರಿತು ಮೂರನೆಯ ಪ್ರಕಟಣೆ

(ಮಾರ್ಕ 10.32-34; ಲೂಕ 18.31-34)

17 ಯೇಸುಸ್ವಾಮಿ ಜೆರುಸಲೇಮಿನತ್ತ ಹೋಗುವಾಗ ದಾರಿಯಲ್ಲಿ, ತಮ್ಮ ಹನ್ನೆರಡು ಮಂದಿ
ಶಿಷ್ಯರನ್ನು ಪ್ರತ್ಯೇಕವಾಗಿ ಕರೆದು, [18]"ನೋಡಿ, ನಾವು ಜೆರುಸಲೇಮಿಗೆ ಹೋಗುತ್ತಿದ್ದೇವೆ. ಅಲ್ಲಿ ನರಪುತ್ರನನ್ನು
ಮುಖ್ಯಯಾಜಕರ ಮತ್ತು ಧರ್ಮಶಾಸ್ತ್ರಿಗಳ ವಶಕ್ಕೆ ಒಪ್ಪಿಸುವರು. [19]ಆತನು ಮರಣದಂಡನೆಗೆ ಅರ್ಹನೆಂದು
ಅವರು ತೀರ್ಮಾನಿಸಿ ಪರಕೀಯರ ಕೈಗೊಪ್ಪಿಸುವರು. ಇವರು ಆತನನ್ನು ಪರಿಹಾಸ್ಯ ಮಾಡುವರು,
ಕೊರಡೆಗಳಿಂದ ಹೊಡೆಯುವರು, ಮತ್ತು ಶಿಲುಬೆಗೇರಿಸುವರು. ಆತನಾದರೋ ಮೂರನೇ ದಿನ
ಪುನರುತ್ಥಾನ ಹೊಂದುವನು," ಎಂದರು.

## ಆಳಾಗಬಲ್ಲವ ಅರಸಾಗಬಲ್ಲ
(ಮಾರ್ಕ 10.35–35)

20 ಆಗ ಜೆಬೆದಾಯನ ಮಕ್ಕಳ ತಾಯಿ ತನ್ನ ಪುತ್ರರ ಸಮೇತ ಯೇಸುಸ್ವಾಮಿಯ ಬಳಿಗೆ ಬಂದಳು. "ತಮ್ಮಿಂದ ನನಗೊಂದು ಉಪಕಾರ ಆಗಬೇಕು," ಎಂದು ಸ್ವಾಮಿಯ ಪಾದಕ್ಕೆರಗಿದಳು. 21"ನಿನ್ನ ಕೋರಿಕೆ ಏನು?" ಎಂದರು ಯೇಸು. ಅದಕ್ಕೆ ಅವಳು, "ತಮ್ಮ ಸಾಮ್ರಾಜ್ಯದಲ್ಲಿ, ನನ್ನ ಈ ಇಬ್ಬರು ಮಕ್ಕಳಲ್ಲಿ ಒಬ್ಬನು ತಮ್ಮ ಬಲಗಡೆಯಲ್ಲೂ ಇನ್ನೊಬ್ಬನು ತಮ್ಮ ಎಡಗಡೆಯಲ್ಲೂ ಆಸೀನರಾಗುವಂತೆ ಅಪ್ಪಣೆಯಾಗಬೇಕು," ಎಂದು ಕೋರಿದಳು. 22ಅದಕ್ಕೆ ಪ್ರತ್ಯುತ್ತರವಾಗಿ ಯೇಸು, "ನೀವು ಕೋರಿಕೊಂಡದ್ದು ಏನೆಂದು ನಿಮಗೇ ತಿಳಿಯದು. ನಾನು ಕುಡಿಯಬೇಕಾದ ಪಾತ್ರೆಯಿಂದ ಕುಡಿಯಲು ನಿಮ್ಮಿಂದ ಆದೀತೆ?" ಎಂದು ಪ್ರಶ್ನಿಸಿದರು. "ಹೌದು, ಆಗುತ್ತದೆ," ಎಂದು ಅವರು ಮರುನುಡಿದರು. 23ಆಗ ಯೇಸು, "ನನ್ನ ಪಾತ್ರೆಯಿಂದ ನೀವೇನೋ ಕುಡಿಯುವಿರಿ. ಆದರೆ ನನ್ನ ಬಲಗಡೆಯಲ್ಲಾಗಲೀ ಎಡಗಡೆಯಲ್ಲಾಗಲೀ ಆಸೀನರಾಗುವಂತೆ ಅನುಗ್ರಹಿಸುವುದು ನನ್ನದಲ್ಲ. ಅದು ಯಾರಿಗಾಗಿ ನನ್ನ ಪಿತನಿಂದ ಸಿದ್ಧಮಾಡಲಾಗಿದೆಯೋ ಅವರಿಗೇ ಸಿಗುವುದು," ಎಂದು ನುಡಿದರು. 24ಉಳಿದ ಹತ್ತುಮಂದಿ ಶಿಷ್ಯರು ಇದನ್ನು ಕೇಳಿದಾಗ ಆ ಇಬ್ಬರು ಸಹೋದರರ ಮೇಲೆ ಸಿಟ್ಟುಗೊಂಡರು. 25ಯೇಸುವಾದರೋ, ಶಿಷ್ಯರೆಲ್ಲರನ್ನೂ ತಮ್ಮ ಬಳಿಗೆ ಕರೆದು, "ಲೋಕದ ಪ್ರಜಾಧಿಪತಿಗಳು ತಮ್ಮ ಪ್ರಜೆಗಳ ಮೇಲೆ ದರ್ಪದಿಂದ ದೊರೆತನ ಮಾಡುತ್ತಾರೆ; ಜನನಾಯಕರು ಎನ್ನಿಸಿಕೊಳ್ಳುವವರು ಜನರ ಮೇಲೆ ಅಧಿಕಾರ ಪ್ರದರ್ಶನ ಮಾಡುತ್ತಾರೆ. 26ಇದು ನಿಮಗೆ ಗೊತ್ತು. ನೀವು ಹಾಗಿರಬಾರದು. 27ನಿಮ್ಮಲ್ಲಿ ಶ್ರೇಷ್ಠನಾಗಿರಲು ಇಚ್ಛಿಸುವವನು ನಿಮಗೆ ಸೇವಕನಾಗಿರಲಿ. ಪ್ರಥಮನಾಗಿರಲು ಆಶಿಸುವವನು ನಿಮ್ಮ ದಾಸನಾಗಿರಲಿ. 28ಹಾಗೆಯೇ ನರಪುತ್ರನು ಸೇವೆ ಮಾಡಿಸಿಕೊಳ್ಳುವುದಕ್ಕೆ ಅಲ್ಲ, ಇತರರ ಸೇವೆ ಮಾಡುವುದಕ್ಕೂ ಸರ್ವರ ಉದ್ಧಾರಕ್ಕಾಗಿ ತನ್ನ ಪ್ರಾಣವನ್ನು ಈಡಾಗಿ ಕೊಡುವುದಕ್ಕೂ ಬಂದಿದ್ದಾನೆ," ಎಂದು ಹೇಳಿದರು.

## ಕುರುಡರಿಬ್ಬರ ಮೇಲೆ ಕನಿಕರ
(ಮಾರ್ಕ 10.46–52; ಲೂಕ 18.35–43)

29 ಅವರೆಲ್ಲರೂ ಜೆರಿಕೊ ಪಟ್ಟಣವನ್ನು ಬಿಟ್ಟು ಹೊರಟರು. ಜನರ ದೊಡ್ಡ ಗುಂಪು ಯೇಸುಸ್ವಾಮಿಯನ್ನು ಹಿಂಬಾಲಿಸಿತು. 30ದಾರಿಯ ಪಕ್ಕದಲ್ಲಿ ಇಬ್ಬರು ಕುರುಡರು ಕುಳಿತಿದ್ದರು. ಯೇಸು ಈ ಮಾರ್ಗವಾಗಿ ಹೋಗುತ್ತಿದ್ದಾರೆಂದು ಕೇಳಿದೊಡನೆಯೇ, "ಸ್ವಾಮಿ, ದಾವೀದ ಕುಲಪುತ್ರರೇ, ನಮಗೆ ದಯೆತೋರಿ," ಎಂದು ಆ ಕುರುಡರು ಕೂಗಿಕೊಂಡರು. 31ಸುಮ್ಮನಿರಬೇಕೆಂದು ಜನರು ಅವರನ್ನು ಗದರಿಸಿದರು. ಅವರಾದರೋ "ಸ್ವಾಮಿ, ದಾವೀದ ಕುಲಪುತ್ರರೇ, ನಮಗೆ ದಯೆತೋರಿ," ಎಂದು ಇನ್ನೂ ಗಟ್ಟಿಯಾಗಿ ಕೂಗಿಕೊಂಡರು. 32ಯೇಸು ಅಲ್ಲೇ ನಿಂತು, ಅವರನ್ನು ಕರೆದರು. "ನನ್ನಿಂದ ನಿಮಗೇನಾಗಬೇಕು?" ಎಂದು ಕೇಳಿದರು. 33ಅದಕ್ಕೆ ಅವರು, "ಸ್ವಾಮಿ, ನಮಗೆ ಕಣ್ಣು ಕಾಣುವಂತೆ ಮಾಡಿ" ಎಂದು ಪ್ರಾರ್ಥಿಸಿದರು. 34ಯೇಸುವಿಗೆ ಅವರ ಮೇಲೆ ಕನಿಕರವುಂಟಾಯಿತು. ಅವರ ಕಣ್ಣುಗಳನ್ನು ಮುಟ್ಟಿದರು. ಅದೇ ಕ್ಷಣದಲ್ಲಿ ಅವರಿಗೆ ದೃಷ್ಟಿ ಬಂದಿತು. ಅವರೂ ಯೇಸುವನ್ನು ಹಿಂಬಾಲಿಸಿದರು.

## ನಮ್ರ ಅರಸನ ಸಂಭ್ರಮ ಪ್ರವೇಶ

(ಮಾರ್ಕ 11.1–11; ಲೂಕ 19.28–40; ಯೊವಾ. 12.12–19)

**21** ಯೇಸುಸ್ವಾಮಿ ಮತ್ತು ಅವರ ಜೊತೆಯಲ್ಲಿದ್ದವರು ಜೆರುಸಲೇಮನ್ನು ಸಮೀಪಿಸಿದರು. ಓಲಿವ್ ಗುಡ್ಡದ
ಬಳಿಯಿರುವ ಬೆತ್ಫಗೆ ಎಂಬ ಊರನ್ನು ಸೇರಿದರು. 2ಅಲ್ಲಿ ಯೇಸು ಇಬ್ಬರು ಶಿಷ್ಯರನ್ನು ಕರೆದು, "ನಿಮ್ಮೆದುರಿಗೆ
ಇರುವ ಆ ಹಳ್ಳಿಗೆ ಹೋಗಿರಿ. ಅಲ್ಲಿ ಕಟ್ಟಿಹಾಕಿರುವ ಒಂದು ಹೇಸರಗತ್ತೆಯನ್ನೂ ಅದರ ಮರಿಯನ್ನೂ
ಕಾಣುವಿರಿ. ಅವುಗಳನ್ನು ಬಿಚ್ಚಿ ನನ್ನ ಬಳಿಗೆ ತನ್ನಿರಿ. 3ಯಾವನಾದರೂ ನಿಮ್ಮನ್ನು ಏನಾದರೂ ಕೇಳಿದರೆ,
'ಇವು ಪ್ರಭುವಿಗೆ ಬೇಕಾಗಿವೆ' ಎನ್ನಿ. ಅವನು ತಕ್ಷಣ ಕಳುಹಿಸಿಕೊಡುವನು" ಎಂದು ಹೇಳಿಕಳುಹಿಸಿದರು.
4–5 'ಸಿಯೋನ್ ನಗರಿಗೆ ಹೇಳು:

ನಿನ್ನರಸ ಬರುತಿಹನು
ದೀನನವ ಹೇಸರಗತ್ತೆಯೇರಿ ಕುಳಿತಿಹನು
ಮರಿಹೇಸರಗತ್ತೆಯನೇರಿ ಸಾಗಿಬರುತಿಹನು,'

ಎಂದು ಪ್ರವಾದಿಯೊಬ್ಬನ ವಚನ ನೆರವೇರುವಂತೆ ಇದೆಲ್ಲ ನಡೆಯಿತು. 6ಶಿಷ್ಯರು ಹೋಗಿ ಯೇಸು ತಮಗೆ
ಅಪ್ಪಣೆಮಾಡಿದಂತೆಯೇ ಹೇಸರಗತ್ತೆಯನ್ನೂ ಮರಿಯನ್ನೂ ಅಟ್ಟಿಕೊಂಡು ಬಂದರು. 7ತಮ್ಮ
ಮೇಲಂಗಿಗಳನ್ನು ಅವುಗಳ ಮೇಲೆ ಹಾಸಿದರು. ಯೇಸು ಹತ್ತಿ ಕುಳಿತುಕೊಂಡರು. 8ಜನ ಸಮೂಹದಲ್ಲಿ
ಅನೇಕರು ತಮ್ಮ ಹೊದಿಕೆಗಳನ್ನು ದಾರಿಯಲ್ಲಿ ಹಾಸಿದರು. ಇತರರು ಮರದೆಲೆಗಳನ್ನು ಕೊಯ್ದು ದಾರಿಯಲ್ಲಿ
ಹರಡಿದರು. 9ಯೇಸುವಿನ ಹಿಂದೆಯೂ ಮುಂದೆಯೂ ಗುಂಪು ಗುಂಪಾಗಿ ಹೋಗುತ್ತಿದ್ದ ಜನರು:

"ದಾವೀದ ಕುಲಪುತ್ರನಿಗೆ ಜಯವಾಗಲಿ!
ಸರ್ವೇಶ್ವರನ ನಾಮದಲಿ ಬರುವವನಿಗೆ
ಮಂಗಳವಾಗಲಿ!
ಮಹೋನ್ನತದಲ್ಲಿ ದೇವರಿಗೆ ಜಯವಾಗಲಿ!"

ಎಂದು ಹರ್ಷೋದ್ಗಾರ ಮಾಡುತ್ತಿದ್ದರು. 10ಹೀಗೆ ಯೇಸು ಜೆರುಸಲೇಮನ್ನು ಪ್ರವೇಶಿಸಿದಾಗ ನಗರಕ್ಕೆ
ನಗರವೇ ಕಲಕಲಗೊಂಡಿತು. ಜನರು "ಯಾರಿವರು?" ಎಂದು ವಿಚಾರಿಸಲಾರಂಭಿಸಿದರು. 11"ಇವರು
ಗಲಿಲೇಯಕ್ಕೆ ಸೇರಿದ ನಜರೇತಿನ ಪ್ರವಾದಿ–ಯೇಸು," ಎಂದು ಮಾರ್ದನಿಸಿತು ಜನರ ಗುಂಪು.

## ದೇವರ ಮಂದಿರ ಪ್ರಾರ್ಥನೆಗೆ ಆಗರ

(ಮಾರ್ಕ 11.15–19; ಲೂಕ 19.45–48; ಯೊವಾ. 2.13–22)

12 ಯೇಸುಸ್ವಾಮಿ ಮಹಾದೇವಾಲಯಕ್ಕೆ ಹೋದರು. ಅಲ್ಲಿ ಮಾರುತ್ತಿದ್ದವರನ್ನೂ
ಕೊಳ್ಳುತ್ತಿದ್ದವರನ್ನೂ ಹೊರಗಟ್ಟಿದರು. ನಾಣ್ಯ ವಿನಿಮಯ ಮಾಡುತ್ತಿದ್ದ ವ್ಯಾಪಾರಿಗಳ ಮೇಜುಗಳನ್ನು
ಕೆಡವಿದರು. ಪಾರಿವಾಳಗಳನ್ನು ಮಾರುತ್ತಿದ್ದವರ ಮಣೆಗಳನ್ನು ಉರುಳಿಸಿದರು. 13ಅವರನ್ನು ಉದ್ದೇಶಿಸಿ, "
'ಪ್ರಾರ್ಥನಾಲಯವೀ ನನ್ನ ಆಲಯ' ಎಂದು ಪವಿತ್ರ ಗ್ರಂಥದಲ್ಲೇ ಲಿಖಿತವಾಗಿದೆ. ನೀವಾದರೋ ಇದನ್ನು
ಕಳ್ಳಕಾಕರ ಗುಹೆಯನ್ನಾಗಿಸುತ್ತಿದ್ದೀರಿ," ಎಂದು ಎಚ್ಚರಿಸಿದರು.

14 ದೇವಾಲಯದಲ್ಲಿ ತಮ್ಮ ಬಳಿಗೆ ಬಂದ ಕುರುಡರನ್ನೂ ಕುಂಟರನ್ನೂ ಯೇಸು ಸ್ವಸ್ಥಪಡಿಸಿದರು.
15ಅವರು ಮಾಡಿದ ಅತಿಶಯ ಕಾರ್ಯಗಳನ್ನು ಮುಖ್ಯ ಯಾಜಕರು ಹಾಗೂ ಧರ್ಮಶಾಸ್ತ್ರಿಗಳು
ನೋಡಿದರು. ದೇವಾಲಯದಲ್ಲಿ ಮಕ್ಕಳು, 'ದಾವೀದ ಕುಲಪುತ್ರನಿಗೆ ಜಯವಾಗಲಿ' ಎಂದು
ಘೋಷಿಸುವುದನ್ನು ಕೇಳಿದರು. 16"ಮಕ್ಕಳು ಹೇಳುವುದು ನಿನಗೆ ಕೇಳಿಸುತ್ತಿದೆಯೋ?" ಎಂದು
ಕೋಪಾವೇಶದಿಂದ ಯೇಸುವನ್ನು ಪ್ರಶ್ನಿಸಿದರು. "ಹೌದು, ಕೇಳಿಸುತ್ತದೆ;

'ಬಾಲಬಾಲೆಯರ ಬಾಯಿಂದಲೂ

ಮೊಲೆಗೂಸುಗಳ ನಾಲಿಗೆಯಿಂದಲೂ
ನಿಮಗೆ ಸರ್ವಸ್ತುತಿ ಸಲ್ಲುವಂತೆ ಮಾಡಿದ್ದೀರಿ'
ಎಂಬ ವಾಕ್ಯವನ್ನು ನೀವು ಪವಿತ್ರಗ್ರಂಥದಲ್ಲಿ ಎಂದೂ ಓದಿಲ್ಲವೇ?" ಎಂದು ಉತ್ತರಿಸಿದರು. 17ಅನಂತರ
ಅವರನ್ನು ಬಿಟ್ಟು ಪಟ್ಟಣದಿಂದ ಹೊರಟರು. ಬೆಥಾನಿಯಕ್ಕೆ ಬಂದು ರಾತ್ರಿಯನ್ನು ಅಲ್ಲೇ ಕಳೆದರು.

## ಫಲನೀಡದ ಬಾಳಿಗೆ ಶಾಪ
## (ಮಾರ್ಕ 11.12–14, 20–24)

18 ಮಾರನೆಯ ದಿನ ಬೆಳಿಗ್ಗೆ ಯೇಸುಸ್ವಾಮಿ ಪುನಃ ಪಟ್ಟಣಕ್ಕೆ ಬರುತ್ತಿದ್ದಾಗ ಅವರಿಗೆ ಹಸಿವಾಯಿತು.
19ದಾರಿಯ ಪಕ್ಕದಲ್ಲಿ ಒಂದು ಅಂಜೂರದ ಮರ ಕಣ್ಣಿಗೆ ಬಿದ್ದಿತು. ಹತ್ತಿರಕ್ಕೆ ಹೋಗಿ ನೋಡುವಾಗ ಅದರಲ್ಲಿ
ಬರೀ ಎಲೆಗಳೇ ಹೊರತು ಮತ್ತೇನೂ ಕಾಣಲಿಲ್ಲ. ಯೇಸು ಆ ಮರಕ್ಕೆ, "ಇನ್ನು ಮುಂದೆ ನೀನೆಂದಿಗೂ
ಹಣ್ಣು ಬಿಡದಂತಾಗಲಿ", ಎಂದರು. ಅದೇ ಕ್ಷಣದಲ್ಲಿ ಆ ಮರ ಒಣಗಿ ಹೋಯಿತು.
20 ಇದನ್ನು ನೋಡಿ ಶಿಷ್ಯರು ನಿಬ್ಬೆರಗಾದರು. "ಈ ಅಂಜೂರದ ಮರ ಇಷ್ಟು ಬೇಗನೆ ಹೇಗೆ
ಒಣಗಿಹೋಯಿತು?" ಎಂದು ಕೇಳಿದರು. 21ಅದಕ್ಕೆ ಪ್ರತ್ಯುತ್ತರವಾಗಿ ಯೇಸು, "ನಾನು ನಿಮಗೆ ಖಂಡಿತವಾಗಿ
ಹೇಳುತ್ತೇನೆ: ನೀವು ಸಂಶಯಪಡದೆ ವಿಶ್ವಾಸಿಸಿದರೆ ಈ ಅಂಜೂರದ ಮರಕ್ಕೆ ನಾನು ಏನು ಮಾಡಿದೆನೋ
ನೀವೂ ಅಂತೆಯೇ ಮಾಡುವಿರಿ; ಅದು ಮಾತ್ರವಲ್ಲ, ಈ ಬೆಟ್ಟಕ್ಕೆ, 'ನೀನು ಇಲ್ಲಿಂದ ಕಿತ್ತುಕೊಂಡು ಹೋಗಿ
ಸಮುದ್ರದಲ್ಲಿ ಬೀಳು,' ಎಂದು ನೀವು ಹೇಳಿದರೆ, ಅದು ಹಾಗೆಯೇ ಆಗುವುದು. 22ವಿಶ್ವಾಸವಿಟ್ಟು ಏನನ್ನು
ಪ್ರಾರ್ಥನೆಯಲ್ಲಿ ನೀವು ಬೇಡಿಕೊಳ್ಳುವಿರೋ, ಅದನ್ನೆಲ್ಲಾ ಪಡೆಯುವಿರಿ," ಎಂದು ಉತ್ತರಿಸಿದರು.

## ಇಷ್ಟೆಲ್ಲಾ ಅಧಿಕಾರ ಎಲ್ಲಿಂದ?
(ಮಾರ್ಕ 11.27–33, ಲೂಕ 20.1–8)

23 ತರುವಾಯ ಯೇಸುಸ್ವಾಮಿ ಮಹಾ ದೇವಾಲಯದ ಒಳಕ್ಕೆ ಹೋಗಿ ಅಲ್ಲಿ ಬೋಧನೆ
ಮಾಡತೊಡಗಿದರು. ಮುಖ್ಯ ಯಾಜಕರೂ ಪ್ರಜಾಪ್ರಮುಖರೂ ಅವರ ಬಳಿಗೆ ಬಂದು, "ಇದನ್ನೆಲ್ಲಾ ನೀನು
ಯಾವ ಅಧಿಕಾರದಿಂದ ಮಾಡುತ್ತಿರುವೆ? ನಿನಗೆ ಈ ಅಧಿಕಾರವನ್ನು ಕೊಟ್ಟವರಾರು?" ಎಂದು ಪ್ರಶ್ನಿಸಿದರು.
24ಅದಕ್ಕೆ ಯೇಸು, "ನಾನು ನಿಮಗೆ ಒಂದು ಪ್ರಶ್ನೆ ಕೇಳುತ್ತೇನೆ; ಅದಕ್ಕೆ ನೀವು ಉತ್ತರಕೊಟ್ಟರೆ ನಾನು ಯಾವ
ಅಧಿಕಾರದಿಂದ ಇದನ್ನೆಲ್ಲಾ ಮಾಡುತ್ತಿದ್ದೇನೆಂದು ನಿಮಗೆ ತಿಳಿಸುತ್ತೇನೆ. 25'ಸ್ನಾನದೀಕ್ಷೆ ಕೊಡುವ ಅಧಿಕಾರ
ಯೊವಾನ್ನನಿಗೆ ಎಲ್ಲಿಂದ ಬಂದಿತು? ದೇವರಿಂದಲೋ, ಮನುಷ್ಯರಿಂದಲೋ?' " ಎಂದು ಕೇಳಿದರು.
26ಅದಕ್ಕೆ ಅವರು ತಮ್ಮತಮ್ಮೊಳಗೇ ಹೀಗೆಂದು ತರ್ಕ ಮಾಡಲಾರಂಭಿಸಿದರು: "ದೇವರಿಂದ ಬಂತು ಎಂದು
ಉತ್ತರಿಸಿದರೆ, 'ಹಾಗಾದರೆ ನೀವೇಕೆ ಆತನನ್ನು ನಂಬಲಿಲ್ಲ?' ಎಂದು ಕೇಳುವನು. 'ಮನುಷ್ಯರಿಂದ ಬಂತು'
ಎಂದು ಹೇಳಿದೆವಾದರೆ ಜನಸಮೂಹಕ್ಕೆ ನಾವು ಭಯಪಡಬೇಕಾಗಿದೆ. ಏಕೆಂದರೆ ಯೊವಾನ್ನನು ಒಬ್ಬ
ಪ್ರವಾದಿಯೆಂದು ಸರ್ವರೂ ಸನ್ಮಾನಿಸುತ್ತಾರೆ" ಎಂದುಕೊಂಡರು. 27ಬಳಿಕ ಬಂದು, "ನಮಗೆ ಗೊತ್ತಿಲ್ಲ,"
ಎಂದು ಯೇಸುವಿಗೆ ಉತ್ತರಕೊಟ್ಟರು. ಆಗ ಯೇಸು, "ಹಾಗಾದರೆ, ನಾನು ಕೂಡ ಯಾವ ಅಧಿಕಾರದಿಂದ
ಇದನ್ನೆಲ್ಲಾ ಮಾಡುತ್ತೇನೆಂದು ನಿಮಗೆ ಹೇಳುವುದಿಲ್ಲ," ಎಂದರು.

## ಆಡದೆ ಮಾಡುವವನು ಉತ್ತಮ

28 "ಈ ಬಗ್ಗೆ ನಿಮಗೇನು ಅನಿಸುತ್ತದೆ? ಒಬ್ಬಾತನಿಗೆ ಇಬ್ಬರು ಮಕ್ಕಳಿದ್ದರು. ಒಮ್ಮೆ ಆತ
ಮೊದಲನೆಯ ಮಗನ ಹತ್ತಿರ ಬಂದು, 'ಮಗನೇ, ಈ ಹೊತ್ತು ದ್ರಾಕ್ಷಿತೋಟಕ್ಕೆ ಹೋಗಿ ಕೆಲಸ ಮಾಡು'
ಎಂದ. 29ಅದಕ್ಕೆ ಅವನು, 'ನಾನು ಹೋಗುವುದಿಲ್ಲ' ಎಂದು ಉತ್ತರವಿತ್ತ. ಆದರೂ ಅನಂತರ

ಪಶ್ಚಾತ್ತಾಪಪಟ್ಟು ಅವನು ತೋಟಕ್ಕೆ ಹೋದ. [30]ತಂದೆ ಎರಡನೆಯ ಮಗನ ಹತ್ತಿರ ಹೋಗಿ ಅಂತೆಯೇ
ತೋಟಕ್ಕೆ ಹೋಗಲು ಹೇಳಿದ. ಅವನು, 'ಇಗೋ, ಹೋಗುತ್ತೇನಪ್ಪಾ' ಎಂದು ಹೇಳಿದ. ಆದರೆ ಹೋಗಲೇ
ಇಲ್ಲ. [31]ಇವರಿಬ್ಬರಲ್ಲಿ ತಂದೆಯ ಇಷ್ಟದಂತೆ ನಡೆದವನು ಯಾರು?" ಎಂದು ಯೇಸು ಕೇಳಿದರು.
"ಮೊದಲನೆಯ ಮಗನೇ," ಎಂದು ಉತ್ತರಿಸಿದರು ಅವರು.

ಆಗ ಯೇಸುಸ್ವಾಮಿ, "ಸುಂಕದವರೂ ವೇಶ್ಯೆಯರೂ ನಿಮಗಿಂತ ಮೊದಲೇ ದೇವರ
ಸಾಮ್ರಾಜ್ಯವನ್ನು ಪ್ರವೇಶಿಸುವರು ಎಂದು ನಿಮಗೆ ಸ್ಪಷ್ಟವಾಗಿ ಹೇಳುತ್ತೇನೆ. [32]ಸ್ನಾನಿಕ ಯೊವಾನ್ನನು
ಧರ್ಮಮಾರ್ಗವನ್ನು ತೋರಿಸಲು ಬಂದನು. ನೀವು ಆತನನ್ನು ನಂಬಲಿಲ್ಲ. ಆದರೆ ಸುಂಕದವರೂ
ವೇಶ್ಯೆಯರೂ ಆತನನ್ನು ನಂಬಿದರು. ಇದನ್ನು ಕಂಡ ಮೇಲೂ ನೀವು ಪಶ್ಚಾತ್ತಾಪ ಪಡಲಿಲ್ಲ,
ಯೊವಾನ್ನನನ್ನು ನಂಬಲೂ ಇಲ್ಲ.

## ಕ್ರೂರಿಗಳಾದ ಗೇಣಿದಾರರು

(ಮಾರ್ಕ 12.1–2; ಲೂಕ 20.9–19)

33 "ಇನ್ನೊಂದು ಸಾಮತಿಗೆ ಕಿವಿಗೊಡಿ: ಒಬ್ಬ ಯಜಮಾನ ಒಂದು ದ್ರಾಕ್ಷಿತೋಟ ಮಾಡಿಸಿದ.
ಅದರ ಸುತ್ತ ಬೇಲಿಯನ್ನು ಹಾಕಿಸಿದ. ದ್ರಾಕ್ಷಾರಸವನ್ನು ತೆಗೆಯಲು ಅಲೆಯನ್ನು ಹೂಡಿಸಿ, ಕಾವಲಿಗಾಗಿ
ಅಟ್ಟಣೆಯನ್ನು ಕಟ್ಟಿಸಿದ. ಅನಂತರ ಅದನ್ನು ಗೇಣಿದಾರರಿಗೆ ವಹಿಸಿ ಹೊರನಾಡಿಗೆ ಹೊರಟುಹೋದ.
[34]ಫಲಕೊಡುವ ಕಾಲ ಹತ್ತಿರವಾದಾಗ, ತನಗೆ ಬರಬೇಕಾದ ಪಾಲನ್ನು ತರುವುದಕ್ಕಾಗಿ ಆಳುಗಳನ್ನು
ಗೇಣಿದಾರರ ಬಳಿಗೆ ಕಳುಹಿಸಿದ. [35]ಇವರು ಆ ಆಳುಗಳ ಮೇಲೆ ಬಿದ್ದು ಒಬ್ಬನನ್ನು ಬಡಿದರು, ಇನ್ನೊಬ್ಬನನ್ನು
ಕಡಿದರು, ಮತ್ತೊಬ್ಬನ ಮೇಲೆ ಕಲ್ಲು ತೂರಿದರು. [36]ತೋಟದ ಯಜಮಾನ ಮೊದಲಿಗಿಂತಲೂ ಹೆಚ್ಚು
ಆಳುಗಳನ್ನು ಕಳುಹಿಸಿದ. ಅವರಿಗೂ ಅದೇ ಗತಿ ಆಯಿತು. [37]ಕಟ್ಟಕಡೆಗೆ ಯಜಮಾನ, 'ನನ್ನ ಮಗನಿಗೆ
ಇವರು ಮರ್ಯಾದೆ ಕೊಟ್ಟೇಕೊಡುವರು' ಎಂದುಕೊಂಡು ತನ್ನ ಮಗನನ್ನೇ ಕಳುಹಿಸಿದ. [38]ಆದರೆ
ಗೇಣಿದಾರರು ಮಗನನ್ನು ಕಂಡೊಡನೆ, 'ಈ ತೋಟಕ್ಕೆ ಇವನೇ ಉತ್ತರಾಧಿಕಾರಿ; ಬನ್ನಿ, ಇವನನ್ನು
ಮುಗಿಸಿಬಿಡೋಣ. ಇವನಿಗೆ ಬರುವ ಸೊತ್ತನ್ನು ನಮ್ಮದಾಗಿಸಿಕೊಳ್ಳೋಣ,' ಎಂದು ತಮ್ಮತಮ್ಮಲ್ಲೇ
ಒಳಸಂಚು ಮಾಡಿಕೊಂಡರು. [39]ಅಂತೆಯೇ ಅವನನ್ನು ಹಿಡಿದು, ತೋಟದಿಂದ ಹೊರಕ್ಕೆ ದಬ್ಬಿಕೊಂಡು
ಹೋಗಿ, ಕೊಂದುಹಾಕಿದರು.

40 "ಈಗ ನೀವೇ ಹೇಳಿ: ತೋಟದ ಯಜಮಾನ ಬಂದಾಗ ಆ ಗೇಣಿದಾರರರಿಗೆ ಏನು
ಮಾಡುವನು?" ಎಂದು ಯೇಸು ಕೇಳಿದರು. [41]"ಆ ಕೇಡಿಗರನ್ನು ಕ್ರೂರವಾಗಿ ಸಂಹರಿಸುವನು. ತರುವಾಯ
ಕಾಲಕಾಲಕ್ಕೆ ಸರಿಯಾಗಿ ಪಾಲನ್ನು ಸಲ್ಲಿಸುವ ಬೇರೆಯವರಿಗೆ ತೋಟವನ್ನು ಗೇಣಿಗೆ ಕೊಡುವನು," ಎಂದು
ಅಲ್ಲಿದ್ದವರು ಉತ್ತರಕೊಟ್ಟರು.

[42] ಬಳಿಕ ಯೇಸು ಇಂತೆಂದರು:

" 'ಮನೆ ಕಟ್ಟುವವರು
ಬೇಡವೆಂದು ಬಿಸಾಡಿದ ಆ ಕಲ್ಲೇ
ಪ್ರಮುಖ ಮೂಲೆಗಲ್ಲಾಯಿತು!
ಸರ್ವೇಶ್ವರನಿಂದಲೇ ಆದ ಈ ಕಾರ್ಯ
ನಮ್ಮ ಕಣ್ಣಿಗೆ ಅದೆಂಥ ಆಶ್ಚರ್ಯ!'

ಎಂಬ ವಾಕ್ಯವನ್ನು ನೀವು ಪವಿತ್ರ ಗ್ರಂಥದಲ್ಲಿ ಓದಿಲ್ಲವೆ? [43]ಆದುದರಿಂದ ನಾನು ನಿಮಗೆ ಹೇಳುತ್ತೇನೆ,
'ದೇವರ ಸಾಮ್ರಾಜ್ಯವನ್ನು ನಿಮ್ಮಿಂದ ಕಿತ್ತುಕೊಂಡು ತಕ್ಕ ಫಲಕೊಡುವ ಜನತೆಗೆ ನೀಡಲಾಗುವುದು. [44]ಅಷ್ಟೇ
ಅಲ್ಲದೆ, ಆ ಕಲ್ಲಿನ ಮೇಲೆ ಬೀಳುವವನು ಛಿದ್ರಛಿದ್ರನಾಗುವನು. ಯಾವನ ಮೇಲೆ ಆ ಕಲ್ಲು ಬೀಳುವುದೋ
ಅವನು ಜಜ್ಜಿ ಹೋಗುವನು'."

45 ಮುಖ್ಯ ಯಾಜಕರೂ ಫರಿಸಾಯರೂ ಸ್ವಾಮಿ ಹೇಳಿದ ಸಾಮತಿಗಳನ್ನು ಕೇಳಿ, 'ಇವನು
ನಮ್ಮನ್ನು ಕುರಿತೇ ಹೀಗೆ ಮಾತನಾಡುತ್ತಿದ್ದಾನೆ,' ಎಂದು ಅರ್ಥ ಮಾಡಿಕೊಂಡರು. ಯೇಸುವನ್ನು ಹಿಡಿದು
ಬಂಧಿಸಲು ಯತ್ನಿಸಿದರು. 46ಆದರೆ ಜನಸಮೂಹಕ್ಕೆ ಭಯಪಟ್ಟರು. ಏಕೆಂದರೆ, ಜನರು ಯೇಸುವನ್ನು
ಪ್ರವಾದಿ ಎಂದು ಸನ್ಮಾನಿಸುತ್ತಿದ್ದರು.

**ಆಹ್ವಾನಿತರೆಲ್ಲರೂ ಅರ್ಹರಲ್ಲ**
(ಲೂಕ 14.15–24)

**22** ಯೇಸುಸ್ವಾಮಿ ಮತ್ತೆ ಅವರೊಡನೆ ಸಾಮತಿಗಳಲ್ಲೇ ಮಾತನಾಡಿದರು: "ಸ್ವರ್ಗಸಾಮ್ರಾಜ್ಯ ಇಂತಿದೆ;
2ರಾಜನೊಬ್ಬ ತನ್ನ ಕುಮಾರನ ವಿವಾಹ ಮಹೋತ್ಸವವನ್ನು ಏರ್ಪಡಿಸಿದ. 3ಅದಕ್ಕೆ ಆಹ್ವಾನಿತರಾಗಿದ್ದವರನ್ನು
ಕರೆಯಲು ಸೇವಕರನ್ನು ಕಳುಹಿಸಿದ. ಆದರೆ ಅವರು ಬರಲು ಒಪ್ಪಲಿಲ್ಲ. 4ಪುನಃ ಬೇರೆ ಸೇವಕರನ್ನು ಅಟ್ಟಿದ.
'ಔತಣ ಸಿದ್ಧವಾಗಿದೆ. ಕೊಬ್ಬಿನ ಮಾಂಸದ ಅಡಿಗೆಯನ್ನು ಮಾಡಿಸಿದ್ದೇನೆ. ಎಲ್ಲವೂ ಅಣಿಯಾಗಿದೆ. ಉತ್ಸವಕ್ಕೆ
ಬೇಗ ಬನ್ನಿ' ಎಂದು ಆಹ್ವಾನಿತರಿಗೆ ತಿಳಿಸುವಂತೆ ಹೇಳಿ ಕಳುಹಿಸಿದ. 5ಆದರೂ ಆಹ್ವಾನಿತರು ಅಲಕ್ಷ್ಯ
ಮಾಡಿದರು. ಒಬ್ಬ ತೋಟಕ್ಕೆ ಹೊರಟುಬಿಟ್ಟ, ಇನ್ನೊಬ್ಬ ವ್ಯಾಪಾರಕ್ಕೆ ಹೊರಟು ಹೋದ. 6ಉಳಿದವರು,
ಕರೆಯಲು ಬಂದ ಆಳುಗಳನ್ನೇ ನಿಂದಿಸಿ, ಬಡಿದು, ಕೊಂದು ಹಾಕಿದರು. 7ರಾಜನಿಗೆ ಕಡುಗೋಪ ಬಂದಿತು.
ತನ್ನ ಸೈನಿಕರನ್ನು ಕಳುಹಿಸಿ ಆ ಕೊಲೆಗಾರರನ್ನು ಸಂಹರಿಸಿದ. ಅವರ ಊರನ್ನು ಸುಟ್ಟುಹಾಕಿಸಿದ. 8ಅನಂತರ
ತನ್ನ ಸೇವಕರಿಗೆ, 'ವಿವಾಹ ಮಹೋತ್ಸವವೇನೋ ಸಿದ್ಧವಾಗಿದೆ; ಆಹ್ವಾನಿತರೋ ಅಯೋಗ್ಯರು. 9ನೀವು
ಹೆದ್ದಾರಿಗಳಿಗೆ ಹೋಗಿ ಕಂಡ ಕಂಡವರನ್ನೆಲ್ಲಾ ಉತ್ಸವಕ್ಕೆ ಕರೆಯಿರಿ' ಎಂದ. 10ಅಂತೆಯೇ ಅವರು ಹೋಗಿ
ಯೋಗ್ಯರು, ಅಯೋಗ್ಯರೆನ್ನದೆ ಕಂಡವರನ್ನೆಲ್ಲಾ ಒಟ್ಟುಗೂಡಿಸಿ ಕರೆದುತಂದರು. ವಿವಾಹ ಮಂಟಪ
ಅತಿಥಿಗಳಿಂದ ತುಂಬಿಹೋಯಿತು.
11 "ಆಮೇಲೆ ರಾಜನು ಅತಿಥಿಗಳನ್ನು ನೋಡಲು ಬಂದ. ಅಲ್ಲಿ ವಿವಾಹಕ್ಕೆ ತಕ್ಕ ವಸ್ತ್ರವನ್ನು ಧರಿಸದೆ
ಬಂದಿದ್ದ ಒಬ್ಬನನ್ನು ಕಂಡ. 12'ಏನಯ್ಯ, ಸಮಾರಂಭಕ್ಕೆ ತಕ್ಕ ಉಡುಪಿಲ್ಲದೆ ಒಳಗೆ ಹೇಗೆ ಬಂದೆ?' ಎಂದು
ಅವನನ್ನು ಕೇಳಿದ. ಅದಕ್ಕೆ ಅವನು ಮೌನತಳೆದ. 13ಆಗ ರಾಜನು ಪರಿಚಾರಕರಿಗೆ, 'ಇವನ ಕೈಕಾಲುಗಳನ್ನು
ಕಟ್ಟಿ ಹೊರಗಿನ ಕತ್ತಲೆಗೆ ದಬ್ಬಿರಿ; ಅಲ್ಲಿರುವವರೊಡನೆ ಹಲ್ಲುಕಡಿದು ಗೋಳಾಡಲಿ,' ಎಂದು ಹೇಳಿದ.
14 "ಹೀಗೆ, ಆಹ್ವಾನಿತರು ಅನೇಕರಾದರೂ ಆರಿಸಲಾದವರು ಕೆಲವರು ಮಾತ್ರ," ಎಂದರು ಸ್ವಾಮಿ.

**ರಾಜ್ಯಭಕ್ತಿ ದೈವಭಕ್ತಿಗೆ ವಿರುದ್ಧವಲ್ಲ**
(ಮಾರ್ಕ 12.13–17; ಲೂಕ 20.20–26)

15 ಅನಂತರ ಫರಿಸಾಯರು ಒಟ್ಟುಗೂಡಿ ಯೇಸುವನ್ನು ಹೇಗೆ ಮಾತಿನಲ್ಲಿ ಸಿಲುಕಿಸುವುದೆಂದು
ಸಮಾಲೋಚನೆ ಮಾಡಿಕೊಂಡರು. 16ತಮ್ಮ ಶಿಷ್ಯರನ್ನು ಹೆರೋದನ ಪಕ್ಷದ ಕೆಲವರ ಸಮೇತ ಸ್ವಾಮಿಯ
ಬಳಿಗೆ ಕಳುಹಿಸಿದರು. ಇವರು ಬಂದು, "ಬೋಧಕರೇ, ತಾವು ಸತ್ಯವಂತರು, ಸತ್ಯಕ್ಕನುಸಾರ
ದೈವಮಾರ್ಗವನ್ನು ಬೋಧಿಸುವವರು, ಮುಖದಾಕ್ಷಿಣ್ಯಕ್ಕೆ ಎಡೆಕೊಡದವರು; ಎಂದೇ, ಸ್ಥಾನಮಾನಗಳಿಗೆ
ಮಣಿಯದವರು. ಇದೆಲ್ಲಾ ನಮಗೆ ಚೆನ್ನಾಗಿ ಗೊತ್ತಿದೆ. 17ಹೀಗಿರುವಲ್ಲಿ ರೋಮ್ ಚಕ್ರಾಧಿಪತಿಗೆ
ತೆರಿಗೆಕೊಡುವುದು ಧರ್ಮಸಮ್ಮತವೋ ಅಲ್ಲವೋ, ನಿಮ್ಮ ಅಭಿಪ್ರಾಯವನ್ನು ನಮಗೆ ತಿಳಿಸುವಿರಾ?" ಎಂದು
ಕೇಳಿದರು. 18ಯೇಸು ಅವರ ಕುತಂತ್ರವನ್ನು ಅರಿತುಕೊಂಡು, "ಕಪಟಿಗಳೇ, ನನ್ನನ್ನೇಕೆ ಪರೀಕ್ಷಿಸುತ್ತೀರಿ?
19ತೆರಿಗೆಗೆಂದು ಕೊಡಬೇಕಾದ ನಾಣ್ಯವನ್ನು ತೋರಿಸಿ," ಎಂದರು. ಅವರೊಂದು ನಾಣ್ಯವನ್ನು
ತಂದುಕೊಟ್ಟರು. 20ಆಗ ಯೇಸು, "ಇದರಲ್ಲಿರುವುದು ಯಾರ ಮುದ್ರೆ? ಯಾರ ಲಿಪಿ?" ಎಂದು ಕೇಳಿದರು.
21ಅದಕ್ಕೆ ಅವರು, "ರೋಮ್ ಚಕ್ರವರ್ತಿಯವು," ಎಂದರು. "ಹಾಗಾದರೆ, ಚಕ್ರವರ್ತಿಗೆ ಸಲ್ಲತಕ್ಕದ್ದನ್ನು

ಚಕ್ರವರ್ತಿಗೂ ದೇವರಿಗೆ ಸಲ್ಲತಕ್ಕದ್ದನ್ನು ದೇವರಿಗೂ ಸಲ್ಲಿಸಿರಿ," ಎಂದು ಯೇಸು ಉತ್ತರಕೊಟ್ಟರು. [22]ಈ
ಮಾತುಗಳನ್ನು ಕೇಳಿ ಅವರೆಲ್ಲರು ಬೆರಗಾದರು; ಯೇಸುವನ್ನು ಬಿಟ್ಟು ಅಲ್ಲಿಂದ ಹೊರಟೇ ಹೋದರು.

### ಸತ್ತಮೇಲೆ ಸಂಸಾರಸುಖವುಂಟೇ?

(ಮಾರ್ಕ 12.18–27; ಲೂಕ 20.27–40)

23 ಅದೇ ದಿನ 'ಸದ್ದುಕಾಯರು' ಯೇಸುಸ್ವಾಮಿಯ ಬಳಿಗೆ ಬಂದರು. ಸತ್ತಮೇಲೆ ಪುನರುತ್ಥಾನ
ಇಲ್ಲ ಎಂಬುದು ಅವರ ಅಭಿಮತ. [24]ಅವರು ಸ್ವಾಮಿಯನ್ನು ಹೀಗೆಂದು ಪ್ರಶ್ನಿಸಿದರು: "ಬೋಧಕರೇ,
ಮಕ್ಕಳಿಲ್ಲದೆ ಒಬ್ಬನು ಸತ್ತುಹೋದರೆ ಅವನ ಹೆಂಡತಿಯನ್ನು ತಮ್ಮನು ಮದುವೆ ಮಾಡಿಕೊಂಡು ಅಣ್ಣನಿಗೆ
ಸಂತಾನ ಪಡೆಯಬೇಕು," ಎಂದು ಮೋಶೆ ಹೇಳಿದ್ದಾನಷ್ಟೆ. [25]ಒಮ್ಮೆ ನಮ್ಮಲ್ಲಿ ಏಳು ಮಂದಿ ಅಣ್ಣತಮ್ಮಂದಿರು
ಇದ್ದರು. ಅವರಲ್ಲಿ ಮೊದಲನೆಯವನು ಮದುವೆಯಾದ, ಸಂತಾನವಿಲ್ಲದೆ ಸತ್ತುಹೋದ. ಈ ಕಾರಣ ತನ್ನ
ಹೆಂಡತಿಯನ್ನು ತಮ್ಮನಿಗೆ ಬಿಟ್ಟುಹೋದ. [26]ಅದರಂತೆಯೇ ಎರಡನೆಯವ, ಮೂರನೆಯವ, ಹೀಗೆ
ಏಳನೆಯವನವರೆಗೂ ಸಂಭವಿಸಿತು. [27]ಅವರೆಲ್ಲರೂ ತೀರಿಹೋದ ಮೇಲೆ ಆ ಹೆಂಗಸೂ ಸತ್ತುಹೋದಳು.
[28]ಹೀಗಿರುವಲ್ಲಿ, ಪುನರುತ್ಥಾನದ ದಿನ ಆಕೆ ಆ ಏಳು ಮಂದಿ ಅಣ್ಣತಮ್ಮಂದಿರಲ್ಲಿ ಯಾರಿಗೆ
ಮಡದಿಯಾಗುವಳು? ಅವರೆಲ್ಲರೂ ಆಕೆಯನ್ನು ಮದುವೆಯಾಗಿದ್ದರಲ್ಲವೇ?" ಎಂದರು. [29]ಅದಕ್ಕೆ ಯೇಸು
ಪ್ರತ್ಯುತ್ತರವಾಗಿ, "ನಿಮ್ಮ ಅಭಿಪ್ರಾಯ ತಪ್ಪು, ಪವಿತ್ರ ಗ್ರಂಥವನ್ನಾಗಲಿ, ದೇವರ ಶಕ್ತಿಯನ್ನಾಗಲಿ ನೀವು ಅರ್ಥ
ಮಾಡಿಕೊಂಡಿಲ್ಲ. [30]ಪುನರುತ್ಥಾನ ಹೊಂದಿದ ಮೇಲೆ ಜನರು ಮದುವೆ ಮಾಡಿಕೊಳ್ಳುವುದೂ ಇಲ್ಲ,
ಮದುವೆ ಮಾಡಿಕೊಡುವುದೂ ಇಲ್ಲ. ಸ್ವರ್ಗದ ದೇವದೂತರಂತೆ ಅವರು ಇರುತ್ತಾರೆ. [31]ಇದಲ್ಲದೆ, ಸತ್ತವರು
ಪುನರುತ್ಥಾನ ಹೊಂದುವ ವಿಷಯದಲ್ಲಿ ಹೇಳುವುದಾದರೆ, [32]'ನಾನು ಅಬ್ರಹಾಮನಿಗೆ ದೇವರು, ಇಸಾಕನಿಗೆ
ದೇವರು, ಯಕೋಬನಿಗೆ ದೇವರು ಆಗಿದ್ದೇನೆ,' ಎಂದು ದೇವರೇ ನಿಮಗೆ ಹೇಳಿರುವುದನ್ನು ನೀವು
ಓದಿಲ್ಲವೆ? ಹೀಗಿರುವಾಗ ಅವರು ಜೀವಿತರ ದೇವರೇ ಹೊರತು ಮೃತರ ದೇವರಲ್ಲ," ಎಂದರು.
33 ಇದನ್ನು ಕೇಳಿದ ಜನರ ಗುಂಪು ಯೇಸುವಿನ ಬೋಧನೆಯನ್ನು ಕುರಿತು ಅತ್ಯಾಶ್ಚರ್ಯಪಟ್ಟಿತು.

### ಪ್ರಮುಖ ಕಟ್ಟಳೆ

(ಮಾರ್ಕ 12.28–34; ಲೂಕ 10.25–28)

34 ಯೇಸುಸ್ವಾಮಿ 'ಸದ್ದುಕಾಯ'ರನ್ನು ಸದ್ದೆತ್ತದಂತೆ ಮಾಡಿದರೆಂಬ ಸಮಾಚಾರ ಫರಿಸಾಯರಿಗೆ
ಮುಟ್ಟಿತು. ಅವರು ಒಟ್ಟಾಗಿ ಸ್ವಾಮಿಯ ಬಳಿಗೆ ಬಂದರು. [35]ಅವರಲ್ಲಿ ಒಬ್ಬ ಧರ್ಮೋಪದೇಶಕನು
ಯೇಸುವನ್ನು ಪರೀಕ್ಷಿಸುವ ಸಲುವಾಗಿ, ಹೀಗೆಂದು ಪ್ರಶ್ನಿಸಿದನು: [36]"ಬೋಧಕರೇ, ಧರ್ಮಶಾಸ್ತ್ರದಲ್ಲಿ
ಪ್ರಮುಖವಾದ ಆಜ್ಞೆ ಯಾವುದು?" [37]ಅದಕ್ಕೆ ಪ್ರತ್ಯುತ್ತರವಾಗಿ ಯೇಸು, "ನಿನ್ನ ಸರ್ವೇಶ್ವರನಾದ ದೇವರನ್ನು
ನಿನ್ನ ಪೂರ್ಣ ಹೃದಯದಿಂದಲೂ ನಿನ್ನ ಪೂರ್ಣ ಆತ್ಮದಿಂದಲೂ ನಿನ್ನ ಪೂರ್ಣ ಮನಸ್ಸಿನಿಂದಲೂ
ಪ್ರೀತಿಸು.' [38]ಇದೇ ಪ್ರಮುಖ ಹಾಗೂ ಪ್ರಥಮ ಆಜ್ಞೆ, [39]ಇದಕ್ಕೆ ಸರಿಹೊಂದುವ ಎರಡನೇ ಆಜ್ಞೆ
ಯಾವುದೆಂದರೆ, 'ನಿನ್ನನ್ನು ನೀನೇ ಪ್ರೀತಿಸಿಕೊಳ್ಳುವಂತೆ ನಿನ್ನ ನೆರೆಯವನನ್ನೂ ಪ್ರೀತಿಸು.' [40]ಸಮಸ್ತ
ಧರ್ಮಶಾಸ್ತ್ರಕ್ಕೂ ಪ್ರವಾದಿಗಳ ಪ್ರವಚನಕ್ಕೂ ಈ ಎರಡು ಆಜ್ಞೆಗಳೇ ಆಧಾರ," ಎಂದರು.

### ಯೇಸು ದಾವೀದನ ಕುಲಪುತ್ರರಾದರೂ ಆತನಿಗೆ ಪ್ರಭು

(ಮಾರ್ಕ 12.35–37; ಲೂಕ 20.41–44)

41 ಕೂಡಿಬಂದಿದ್ದ ಫರಿಸಾಯರಿಗೆ ಯೇಸು ಈ ಪ್ರಶ್ನೆ ಹಾಕಿದರು: [42]"ಅಭಿಷಿಕ್ತನಾದ
ಲೋಕೋದ್ಧಾರಕನ ಬಗ್ಗೆ ನಿಮ್ಮ ಅಭಿಪ್ರಾಯ ಏನು? ಆತ ಯಾರ ಮಗ?" ಅದಕ್ಕವರು, "ದಾವೀದನ

ಪುತ್ರ" ಎಂದು ಉತ್ತರಿಸಿದರು. [43]ಆಗ ಯೇಸು, "ಹಾಗಾದರೆ, ದಾವೀದನೇ ಪವಿತ್ರಾತ್ಮ ಪ್ರೇರಣೆಯಿಂದ
ಆತನನ್ನು 'ಪ್ರಭು' ಎಂದು ಕರೆದಿದ್ದಾನಲ್ಲಾ, ಅದು ಹೇಗೆ?

[44] "ನಿನ್ನ ಶತ್ರುಗಳನ್ನು ನಾನು
ನಿನ್ನ ಪಾದದಡಿ ಹಾಕುವ ತನಕ
ನನ್ನ ಬಲಗಡೆ ಆಸೀನನಾಗಿರು ಎಂದು
ನನ್ನ 'ಪ್ರಭು'ವಿಗೆ ಸರ್ವೇಶ್ವರ
ಹೇಳಿರುವರು,'

ಎಂದಿದ್ದಾನಲ್ಲವೆ?

45 "ಇಲ್ಲಿ ದಾವೀದನೇ ಆತನನ್ನು 'ನನ್ನ ಪ್ರಭು' ಎಂದು ಕರೆದಿರುವಾಗ ಆತ ದಾವೀದನಿಗೆ
ಪುತ್ರನಾಗಿರುವುದು ಹೇಗೆ?" ಎಂದು ಕೇಳಿದರು. [46]ಇದಕ್ಕೆ ಉತ್ತರವಾಗಿ ಒಂದು ಮಾತು ಹೇಳಲೂ
ಫರಿಸಾಯರಿಂದ ಆಗಲಿಲ್ಲ. ಅದು ಮಾತ್ರವಲ್ಲ, ಅಂದಿನಿಂದ ಯೇಸುವನ್ನು ಪ್ರಶ್ನಿಸಲು ಯಾರೂ
ಧೈರ್ಯಗೊಳ್ಳಲಿಲ್ಲ.

### ಸುಣ್ಣ ಬಳಿದ ಸಮಾಧಿಗಳು

(ಮಾರ್ಕ 12.38–39; ಲೂಕ 11.43, 46; 20.45–46)

**23** ಬಳಿಕ ಜನಸಮೂಹವನ್ನೂ ತಮ್ಮ ಶಿಷ್ಯರನ್ನೂ ಉದ್ದೇಶಿಸಿ ಯೇಸುಸ್ವಾಮಿ ಇಂತೆಂದರು:
[2]"ಧರ್ಮಶಾಸ್ತ್ರಿಗಳೂ ಫರಿಸಾಯರೂ ಮೋಶೆಯ ಸ್ಥಾನದಲ್ಲಿ ಇದ್ದಾರೆ. [3]ಆದುದರಿಂದ ಅವರು ನಿಮಗೆ
ಉಪದೇಶಿಸುವುದನ್ನೆಲ್ಲಾ ಆಲಿಸಿರಿ ಹಾಗೂ ಪಾಲಿಸಿರಿ. ಆದರೆ ಅವರ ನಡತೆಯನ್ನು ಅನುಸರಿಸಬೇಡಿ.
ಏಕೆಂದರೆ ಅವರು ನುಡಿದಂತೆ ನಡೆಯುವುದಿಲ್ಲ. [4]ಭಾರವಾದ ಹಾಗೂ ಹೊರಲಾಗದ ಹೊರೆಗಳನ್ನು ಕಟ್ಟಿ
ಮಾನವರ ಹೆಗಲ ಮೇಲೆ ಹೇರುತ್ತಾರೆ. ತಾವಾದರೋ ಅವನ್ನು ಕಿರುಬೆರಳಿನಿಂದಲೂ ಮುಟ್ಟಲೊಲ್ಲರು.
[5]ತಾವು ಕೈಗೊಳ್ಳುವ ಕಾರ್ಯಗಳನ್ನೆಲ್ಲಾ ಜನರು ನೋಡಲೆಂದೇ ಮಾಡುತ್ತಾರೆ. ತಮ್ಮ ಧಾರ್ಮಿಕ
ಹಣೆಪಟ್ಟಿಗಳನ್ನು ಅಗಲ ಮಾಡಿಕೊಳ್ಳುತ್ತಾರೆ. ಮೇಲಂಗಿಯ ಗೊಂಡೆಗಳನ್ನು ಉದ್ದುದ್ದಮಾಡಿಕೊಳ್ಳುತ್ತಾರೆ.
[6]ಔತಣಕೂಟಗಳಲ್ಲಿ ಶ್ರೇಷ್ಠ ಸ್ಥಾನಮಾನಗಳನ್ನೂ ಪ್ರಾರ್ಥನಾಮಂದಿರಗಳಲ್ಲಿ ಉನ್ನತ ಆಸನಗಳನ್ನೂ
ಪೇಟೆಬೀದಿಗಳಲ್ಲಿ ವಂದನೋಪಚಾರಗಳನ್ನೂ ಅವರು ಅಪೇಕ್ಷಿಸುತ್ತಾರೆ. [7]ಅದು ಮಾತ್ರವಲ್ಲ, 'ಗುರುವೇ'
ಎಂದು ಕರೆಸಿಕೊಳ್ಳಲು ಇಚ್ಛಿಸುತ್ತಾರೆ. [8]ಹಾಗೆ ಕರೆಸಿಕೊಳ್ಳುವುದು ನಿಮಗೆ ಬೇಡ. ನಿಮಗಿರುವ ಗುರುವು
ಒಬ್ಬರೇ ಮತ್ತು ನೀವೆಲ್ಲರೂ ಸಹೋದರರು. [9]ಇಹದಲ್ಲಿ ನೀವು ಯಾರನ್ನೂ 'ಪಿತನೇ' ಎಂದು
ಸಂಬೋಧಿಸಬೇಡಿ. ಏಕೆಂದರೆ ನಿಮ್ಮ ಪಿತ ಒಬ್ಬರೇ. ಅವರು ಸ್ವರ್ಗದಲ್ಲಿದ್ದಾರೆ. [10]ಒಡೆಯ ಎಂದೂ
ಕರೆಯಿಸಿಕೊಳ್ಳಬೇಡಿ; ಏಕೆಂದರೆ ನಿಮಗಿರುವ ಒಡೆಯ ಒಬ್ಬನೇ, 'ಆತನೇ ಕ್ರಿಸ್ತ.' ನಿಮ್ಮಲ್ಲಿ ಶ್ರೇಷ್ಠನು ಯಾರೋ
ಅವನು ನಿಮ್ಮ ಸೇವಕನಾಗಿರಬೇಕು. [11]ತನ್ನನ್ನು ತಾನೇ ಮೇಲಕ್ಕೇರಿಸಿಕೊಳ್ಳುವ ಪ್ರತಿಯೊಬ್ಬನನ್ನೂ ದೇವರು
ಕೆಳಗಿಳಿಸುವರು. [12]ತನ್ನನ್ನು ತಾನೇ ತಗ್ಗಿಸಿಕೊಳ್ಳುವವನನ್ನು ದೇವರು ಮೇಲಕ್ಕೇರಿಸುವರು.

### ಕಪಟಿಗಳಿಗೆ ಶಾಪ

(ಮಾರ್ಕ 12.40; ಲೂಕ 11.39–42, 44, 52; 20.47)

13 "ಕಪಟ ಧರ್ಮಶಾಸ್ತ್ರಿಗಳೇ ಮತ್ತು ಫರಿಸಾಯರೇ, ನಿಮಗೆ ಧಿಕ್ಕಾರ! ಸ್ವರ್ಗ ಸಾಮ್ರಾಜ್ಯದ
ದ್ವಾರಗಳನ್ನು ಮಾನವರಿಗೆ ಮುಚ್ಚಿದ್ದೀರಿ. ನೀವೂ ಪ್ರವೇಶಿಸುವುದಿಲ್ಲ, ಒಳಕ್ಕೆ ಪ್ರವೇಶಿಸಲು ಯತ್ನಿಸುವವರನ್ನೂ
ಬಿಡುವುದಿಲ್ಲ. [14]ಕಪಟ ಧರ್ಮಶಾಸ್ತ್ರಿಗಳೇ, ಫರಿಸಾಯರೇ, ನಿಮಗೆ ಧಿಕ್ಕಾರ! (ವಿಧವೆಯರ

ಮನೆಮಾರುಗಳನ್ನು ನೀವು ನುಂಗಿಬಿಡುತ್ತೀರಿ. ನಟನೆಗಾಗಿ ಉದ್ದುದ್ದ ಜಪತಪಗಳನ್ನು ಮಾಡುತ್ತೀರಿ, ನೀವು ಅತಿ ಕಠಿಣವಾದ ದಂಡನೆಗೆ ಗುರಿಯಾಗುವಿರಿ).
[15]ಕಪಟ ಧರ್ಮಶಾಸ್ತ್ರಿಗಳೇ ಮತ್ತು ಫರಿಸಾಯರೇ, ನಿಮಗೆ ಧಿಕ್ಕಾರ! ಕೇವಲ ಒಬ್ಬ ವ್ಯಕ್ತಿಯನ್ನು ಮತಾಂತರಿಸಿಕೊಳ್ಳುವುದಕ್ಕಾಗಿ ಜಲನೆಲಗಳನ್ನು ಸುತ್ತಿ ಬರುತ್ತೀರಿ. ಮತಾಂತರಗೊಂಡ ಬಳಿಕವಾದರೋ ಅವನು ನಿಮಗಿಂತಲೂ ಇಮ್ಮಡಿ ನರಕಕ್ಕೆ ಗುರಿಯಾಗುವಂತೆ ಮಾಡುತ್ತೀರಿ.

16 "ಕುರುಡ ಮಾರ್ಗದರ್ಶಕರೇ, ನಿಮಗೆ ಧಿಕ್ಕಾರ! ಒಬ್ಬನು ದೇವಾಲಯದ ಮೇಲೆ ಆಣೆಯಿಟ್ಟರೆ ಅವನು ಅದಕ್ಕೇನೂ ಬದ್ಧನಲ್ಲ. ದೇವಾಲಯದ ಚಿನ್ನದ ಮೇಲೆ ಆಣೆಯಿಟ್ಟರೋ, ಅವನು ಅದನ್ನು ನಡೆಸಿಯೇ ತೀರಬೇಕು ಎನ್ನುತ್ತೀರಿ.
[17]ದೃಷ್ಟಿಗೆಟ್ಟ ಮತಿಭ್ರಷ್ಟರೇ, ಯಾವುದು ಶ್ರೇಷ್ಠ? ಚಿನ್ನವೋ, ಚಿನ್ನವನ್ನು ಪಾವನಗೊಳಿಸುವ ದೇವಾಲಯವೋ? ಅಂತೆಯೇ,
[18]ಒಬ್ಬನು ಬಲಿಪೀಠದ ಮೇಲೆ ಆಣೆಯಿಟ್ಟರೆ ಅದಕ್ಕೇನೂ ಬದ್ಧನಲ್ಲ. ಬಲಿಪೀಠದ ಮೇಲಿರುವ ಕಾಣಿಕೆಗಳ ಮೇಲೆ ಆಣೆಯಿಟ್ಟರೋ, ಅದನ್ನು ಅವನು ನಡೆಸಿಯೇ ತೀರಬೇಕು ಎನ್ನುತ್ತೀರಿ.
[19]ದೃಷ್ಟಿಹೀನರೇ! ಯಾವುದು ಶ್ರೇಷ್ಠ? ಕಾಣಿಕೆಯೋ, ಕಾಣಿಕೆಯನ್ನು ಪಾವನಗೊಳಿಸುವ ಬಲಿಪೀಠವೋ?
[20]ಬಲಿಪೀಠದ ಮೇಲೆ ಆಣೆಯಿಡುವವನು ಬಲಿಪೀಠದ ಮೇಲೆ ಮಾತ್ರವಲ್ಲ, ಅದರ ಮೇಲಿರುವ ಪ್ರತಿಯೊಂದು ಕಾಣಿಕೆಯ ಮೇಲೂ ಆಣೆಯಿಡುತ್ತಾನೆ.
[21]ದೇವಾಲಯದ ಮೇಲೆ ಆಣೆಯಿಡುವವನು ಅದರ ಮೇಲೆ ಮಾತ್ರವಲ್ಲ, ಅದರಲ್ಲಿ ನೆಲೆಸುವ ದೇವರ ಮೇಲೂ ಆಣೆಯಿಡುತ್ತಾನೆ.
[22]ಹಾಗೆಯೇ, ಸ್ವರ್ಗದ ಮೇಲೆ ಆಣೆಯಿಡುವವನು ದೇವರ ಸಿಂಹಾಸನದ ಮೇಲೂ ಅದರಲ್ಲಿ ಆಸೀನರಾಗಿರವವರ ಮೇಲೂ ಆಣೆಯಿಡುತ್ತಾನೆ.
[23]ಕಪಟ ಧರ್ಮಶಾಸ್ತ್ರಿಗಳೇ, ಫರಿಸಾಯರೇ, ನಿಮಗೆ ಧಿಕ್ಕಾರ! ನೀವು ಪುದೀನ, ಸದಾಪ, ಜೀರಿಗೆ ಮುಂತಾದವುಗಳ ದಶಾಂಶವನ್ನು ದೇವರಿಗೆ ಸಲ್ಲಿಸುತ್ತೀರಿ. ಆದರೆ ಧರ್ಮಶಾಸ್ತ್ರದಲ್ಲಿ ಪ್ರಮುಖವಾದ ನ್ಯಾಯನೀತಿ, ದಯೆ ದಾಕ್ಷಿಣ್ಯ, ಪ್ರಾಮಾಣಿಕತೆ ಇವುಗಳನ್ನು ಬದಿಗೊತ್ತಿದ್ದೀರಿ. ನೀವು ಅವುಗಳನ್ನು ಅಲಕ್ಷ್ಯ ಮಾಡಬೇಕೆಂದು ಅಲ್ಲ, ಆದರೆ ಇವುಗಳನ್ನೂ ಅನುಷ್ಠಾನಕ್ಕೆ ತರಲೇಬೇಕಿತ್ತು.
[24]ಅಂಧ ನಿರ್ದೇಶಕರೇ, ನೀವು ಸೊಳ್ಳೆಯನ್ನೇನೋ ಸೋಸುತ್ತೀರಿ. ಆದರೆ ಒಂಟೆಯನ್ನೇ ನುಂಗಿಬಿಡುತ್ತೀರಿ.
[25]ಕಪಟ ಧರ್ಮಶಾಸ್ತ್ರಿಗಳೇ ಮತ್ತು ಫರಿಸಾಯರೇ, ನಿಮಗೆ ಧಿಕ್ಕಾರ! ನೀವು ನಿಮ್ಮ ತಟ್ಟೆಲೋಟಗಳ ಹೊರಭಾಗಗಳನ್ನೇನೋ ಶುಚಿ ಮಾಡುತ್ತೀರಿ; ಆದರೆ ಅವುಗಳ ಒಳಭಾಗ ಕೊಳ್ಳೆ ಹಾಗೂ ಲೋಭದ ಗಳಿಕೆಗಳಿಂದ ತುಂಬಿಹೋಗಿದೆ.
[26]ಕುರುಡ ಫರಿಸಾಯನೇ, ಮೊತ್ತಮೊದಲು ತಟ್ಟೆ ಲೋಟಗಳ ಒಳಭಾಗವನ್ನು ತೊಳೆ, ಆಗ ಅವುಗಳ ಹೊರಭಾಗವೂ ಶುಚಿಯಾಗುವುದು.

27 "ಕಪಟ ಧರ್ಮಶಾಸ್ತ್ರಿಗಳೇ ಮತ್ತು ಫರಿಸಾಯರೇ, ನಿಮಗೆ ಧಿಕ್ಕಾರ! ನೀವು ಸುಣ್ಣ ಬಳಿದ ಸಮಾಧಿಗಳು. ಹೊರನೋಟಕ್ಕೇನೋ ಅವು ಥಳಕಾಗಿವೆ. ಒಳಗೋ ಸತ್ತವರ ಮೂಳೆಗಳಿಂದಲೂ ಕೊಳಕಿನಿಂದಲೂ ತುಂಬಿವೆ.
[28]ಬಹಿರಂಗ ನೋಟಕ್ಕೆ ನೀವು ಸತ್ಪುರುಷರು. ಅಂತರಂಗದಲ್ಲಾದರೋ ಕಪಟ, ಕಲ್ಮಷಗಳಿಂದ ತುಂಬಿದವರು.

### ಕಪಟಿಗಳಿಗೆ ಬರಲಿರುವ ಕೇಡು
### (ಲೂಕ 11.47–51)

29 "ಕಪಟ ಧರ್ಮಶಾಸ್ತ್ರಿಗಳೇ ಮತ್ತು ಫರಿಸಾಯರೇ, ನಿಮಗೆ ಧಿಕ್ಕಾರ! ನೀವು ಪ್ರವಾದಿಗಳಿಗೆ ಗೋರಿಗಳನ್ನು ಕಟ್ಟಿಸುತ್ತೀರಿ.
[30]ಸತ್ಪುರುಷರ ಸ್ಮಾರಕಗಳನ್ನು ಶೃಂಗರಿಸುತ್ತೀರಿ. 'ನಮ್ಮ ಪೂರ್ವಜರ ಕಾಲದಲ್ಲಿ ನಾವು ಇದ್ದಿದ್ದರೆ ಪ್ರವಾದಿಗಳ ರಕ್ತಪಾತದಲ್ಲಿ ಭಾಗಿಗಳಾಗುತ್ತಿರಲಿಲ್ಲ' ಎಂದುಕೊಳ್ಳುತ್ತೀರಿ.
[31]ಹೀಗೆ ಪ್ರವಾದಿಗಳನ್ನು ಕೊಲೆಮಾಡಿದವರ ಪೀಳಿಗೆಗೆ ನೀವು ಸೇರಿದವರು ಎಂದು ನೀವೇ ಸಾಕ್ಷಿಕೊಡುತ್ತೀರಿ.
[32]ಒಳ್ಳೆಯದು, ನಿಮ್ಮ ಪೂರ್ವಜರು ಪ್ರಾರಂಭಿಸಿದ್ದನ್ನು ನೀವು ಹೋಗಿ ಪೂರ್ಣಗೊಳಿಸಿರಿ.

33 "ಎಲೈ ಸರ್ಪಗಳೇ, ವಿಷಸರ್ಪಗಳ ಪೀಳಿಗೆಯೇ, ನರಕ ದಂಡನೆಯಿಂದ ನೀವು ಹೇಗೆ ತಾನೆ ಪಾರಾಗುವಿರಿ? ಇಗೋ ಕೇಳಿ: 'ನಾನು ನಿಮ್ಮ ಬಳಿಗೆ ಪ್ರವಾದಿಗಳನ್ನೂ ಪಂಡಿತರನ್ನೂ ಧರ್ಮಶಾಸ್ತ್ರಿಗಳನ್ನೂ ಕಳುಹಿಸುತ್ತೇನೆ.
[34]ಅವರಲ್ಲಿ ಕೆಲವರನ್ನು ಕೊಲೆಮಾಡುವಿರಿ, ಶಿಲುಬೆಗೆ ಏರಿಸುವಿರಿ, ಮತ್ತೆ ಕೆಲವರನ್ನು ನಿಮ್ಮ

ಪ್ರಾರ್ಥನಾ ಮಂದಿರಗಳಲ್ಲಿ ಕೊರಡೆಗಳಿಂದ ಹೊಡೆಯುವಿರಿ. ಊರಿಂದೂರಿಗೆ ಅಟ್ಟಿ ಅವರನ್ನು ಪೀಡಿಸುವಿರಿ.
[35]ಹೀಗೆ, ಪುನೀತ ಹೇಬೆಲನ ರಕ್ತ ಮೊದಲ್ಗೊಂಡು ಬಲಿಪೀಠಕ್ಕೂ ಗರ್ಭಗುಡಿಗೂ ನಡುವೆ ನೀವು
ಕೊಲೆಮಾಡಿದ ಬರಕೀಯನ ಮಗ ಜಕರೀಯನ ರಕ್ತದವರೆಗೆ ಪೃಥ್ವಿಯಲ್ಲಿ ಸುರಿಸಲಾದ ಎಲ್ಲಾ ಸತ್ಪುರುಷರ
ರಕ್ತದ ಹೊಣೆ ನಿಮ್ಮದೇ. [36]ಹೌದು, ಇದೆಲ್ಲವೂ ಈ ಪೀಳಿಗೆಯ ಮೇಲೆ ಬರುವುದೆಂದು ನಿಮಗೆ ಒತ್ತಿ
ಹೇಳುತ್ತೇನೆ.

### ಜೆರುಸಲೇಮಿನ ಮೇಲೆ ಮಮತೆ

(ಲೂಕ 13.34–35)

37 "ಜೆರುಸಲೇಮೇ, ಜೆರುಸಲೇಮೇ, ಪ್ರವಾದಿಗಳ ಕೊಲೆಪಾತಕಿಯೇ, ದೇವರು ನಿನ್ನ ಬಳಿಗೆ
ಕಳುಹಿಸಿದವರನ್ನು ಕಲ್ಲುಗಳಿಂದ ಹೊಡೆಯುವವಳೇ, ಕೋಳಿಯು ತನ್ನ ಮರಿಗಳನ್ನು ರೆಕ್ಕೆಗಳಡಿ
ಸೇರಿಸಿಕೊಳ್ಳುವಂತೆ, ನಾನು ನಿನ್ನ ಮಕ್ಕಳನ್ನು ಒಂದಾಗಿ ಸೇರಿಸಿ ಅಪ್ಪಿಕೊಳ್ಳಲು ಎಷ್ಟೋ ಬಾರಿ ಅಪೇಕ್ಷಿಸಿದೆನು.
ಆದರೆ ನೀವು ಒಪ್ಪಲಿಲ್ಲ. [38]ಇಗೋ, ನಿಮ್ಮ ದೇವಾಲಯ ಬರಿದಾಗುವುದು, ಪಾಳುಬೀಳುವುದು. [39]ಏಕೆಂದರೆ,
'ಸರ್ವೇಶ್ವರನ ನಾಮದಲ್ಲಿ ಬರುವವರು ಧನ್ಯರು!' ಎಂದು ನೀವಾಗಿ ಹೇಳುವ ದಿನದವರೆಗೂ ನೀವು ನನ್ನನ್ನು
ಮತ್ತೆ ಕಾಣಲಾರಿರಿ ಎಂಬುದು ನಿಶ್ಚಯ."

### ನೆಲಸಮವಾಗಲಿರುವ ಮಹಾದೇವಾಲಯ

(ಮಾರ್ಕ 13.1–2; ಲೂಕ 21.5–6)

**24** ಯೇಸುಸ್ವಾಮಿ ಮಹಾದೇವಾಲಯವನ್ನು ಬಿಟ್ಟು ಹೋಗುತ್ತಿದ್ದರು. ಅದರ ಕಟ್ಟಡಗಳತ್ತ ಅವರ ಗಮನ
ಸೆಳೆಯಲು ಶಿಷ್ಯರು ಅವರ ಬಳಿಗೆ ಬಂದರು. [2]ಆಗ ಯೇಸು, "ಇವುಗಳನ್ನೆಲ್ಲಾ ನೀವು ನೋಡುತ್ತಾ
ಇದ್ದೀರಲ್ಲವೆ? ನಾನು ನಿಮಗೆ ಹೇಳುತ್ತೇನೆ ಕೇಳಿ: ಇಲ್ಲಿ ಕಲ್ಲಿನ ಮೇಲೆ ಕಲ್ಲು ಉಳಿಯದು; ಎಲ್ಲವನ್ನೂ
ಕೆಡವಿ ಹಾಕುವರು," ಎಂದರು.

### ಕಾಲಾಂತ್ಯದ ಮುನ್ನ ಕಷ್ಟಸಂಕಟಗಳು

(ಮಾರ್ಕ 13.3–13; ಲೂಕ 21.7–19)

3 ಬಳಿಕ ಯೇಸುಸ್ವಾಮಿ ಓಲಿವ್ ಗುಡ್ಡದ ಮೇಲೆ ಕುಳಿತರು. ಶಿಷ್ಯರು ಅವರ ಬಳಿಗೆ ಬಂದು,
"ಇದೆಲ್ಲಾ ಸಂಭವಿಸುವುದು ಯಾವಾಗ? ನಿಮ್ಮ ಪುನರಾಗಮನದ ಹಾಗೂ ಕಾಲಾಂತ್ಯದ ಪೂರ್ವ ಸೂಚನೆ
ಏನು? ನಮಗೆ ತಿಳಿಸಿ," ಎಂದು ಪ್ರತ್ಯೇಕವಾಗಿ ಕೇಳಿಕೊಂಡರು. [4]ಅದಕ್ಕೆ ಪ್ರತ್ಯುತ್ತರವಾಗಿ ಯೇಸು, "ಯಾರೂ
ನಿಮ್ಮನ್ನು ಮೋಸಗೊಳಿಸದಂತೆ ಜಾಗರೂಕರಾಗಿರಿ. [5]ಅನೇಕರು 'ನಾನೇ ಕ್ರಿಸ್ತ, ನಾನೇ ಕ್ರಿಸ್ತ,' ಎನ್ನುತ್ತಾ ನನ್ನ
ಹೆಸರನ್ನೇ ಹೇಳಿಕೊಂಡು ಬರುವರು. ಮಾತ್ರವಲ್ಲ, ಎಷ್ಟೋ ಜನರನ್ನು ತಪ್ಪುದಾರಿಗೆಳೆಯುವರು. [6]ಇದೂ
ಅಲ್ಲದೆ, ನೀವು ರಣಕಹಳೆಗಳನ್ನೂ ಸಮರಗಳ ಸುದ್ಧಿಯನ್ನೂ ಕೇಳುವಿರಿ. ಆಗ ಕಳವಳಪಡದಂತೆ
ಎಚ್ಚರಿಕೆಯಿಂದಿರಿ. ಇವೆಲ್ಲವು ಸಂಭವಿಸಲೇಬೇಕು. ಆದರೆ ಇದಿನ್ನೂ ಕಾಲಾಂತ್ಯವಲ್ಲ. [7]ಜನಾಂಗಕ್ಕೆ ವಿರುದ್ಧ
ಜನಾಂಗವೂ ರಾಷ್ಟ್ರಕ್ಕೆ ವಿರುದ್ಧ ರಾಷ್ಟ್ರವೂ ಯುದ್ಧಕ್ಕಿಳಿಯುವುವು. ಅಲ್ಲಲ್ಲಿ ಕ್ಷಾಮಡಾಮರಗಳೂ
ಭೂಕಂಪಗಳೂ ಸಂಭವಿಸುವುವು. [8]ಇವೆಲ್ಲವೂ ಪ್ರಸವ ವೇದನೆಯ ಪ್ರಾರಂಭ ಮಾತ್ರ.
9 "ಬಳಿಕ ಜನರು ನಿಮ್ಮನ್ನು ಕಷ್ಟಸಂಕಟಗಳಿಗೆ ಗುರಿಮಾಡಿ ಕೊಲ್ಲುವರು. ನೀವು ನನ್ನವರು,
ಆದುದರಿಂದಲೇ ಜನಾಂಗಗಳೆಲ್ಲ ನಿಮ್ಮನ್ನು ದ್ವೇಷಿಸುವುವು. [10]ಆ ದಿನಗಳಲ್ಲಿ ಬಹುಮಂದಿ
ವಿಶ್ವಾಸಭ್ರಷ್ಟರಾಗುವರು, ಒಬ್ಬರಿಗೊಬ್ಬರು ದ್ರೋಹ ಬಗೆಯುವರು. ಒಬ್ಬರನ್ನೊಬ್ಬರು ದ್ವೇಷಿಸುವರು. [11]ಅನೇಕ

ಸುಳ್ಳುಪ್ರವಾದಿಗಳು ತಲೆಯೆತ್ತಿಕೊಂಡು ಎಷ್ಟೋ ಮಂದಿಯನ್ನು ವಂಚಿಸುವರು. [12]ಭ್ರಷ್ಟಾಚಾರವು ಬೆಳೆದು
ಬಹುಜನರ ಪ್ರೀತಿ ಉಡುಗಿ ಹೋಗುವುದು. [13]ಆದರೆ ಕೊನೆಯವರೆಗೂ ಸ್ಥಿರವಾಗಿರುವವರು
ಜೀವೋದ್ಧಾರವನ್ನು ಹೊಂದುವರು. [14]ಶ್ರೀಸಾಮ್ರಾಜ್ಯದ ಶುಭಸಂದೇಶವನ್ನು ಸರ್ವ ಜನಾಂಗಗಳಿಗೂ
ಸಾಕ್ಷಿಯಾಗಿ ಜಗತ್ತಿನಲ್ಲೆಲ್ಲಾ ಪ್ರಬೋಧಿಸಲಾಗುವುದು. ಅಂತ್ಯವು ಬರುವುದು ಅನಂತರವೇ.

### ಭಯಾನಕ ಭವಿಷ್ಯ

(ಮಾರ್ಕ 13.14–23; ಲೂಕ 21.20–24)

15 "ಪ್ರವಾದಿ ದಾನಿಯೇಲನು ಸೂಚಿಸಿರುವ 'ವಿನಾಶಕರ ವಿಕಟ ಮೂರ್ತಿ' ಪವಿತ್ರಸ್ಥಾನದಲ್ಲಿ
ನಿಂತಿರುವುದನ್ನು ನೀವು ಕಾಣುವಿರಿ. [16](ಇದನ್ನು ಓದುವವನು ಅರ್ಥಮಾಡಿಕೊಳ್ಳಲಿ). ಆಗ
ಜುದೇಯದಲ್ಲಿರುವ ಜನರು ಬೆಟ್ಟಗುಡ್ಡಗಳಿಗೆ ಓಡಿಹೋಗಲಿ. [17]ಮಾಳಿಗೆಯ ಮೇಲಿರುವವನು ಇಳಿದು
ಮನೆಯಿಂದ ಏನನ್ನೂ ತೆಗೆದುಕೊಳ್ಳದೆ ಓಡಿಹೋಗಲಿ. [18]ಹೊಲ ಗದ್ದೆಯಲ್ಲಿರುವವನು ತನ್ನ ಹೊದಿಕೆಯನ್ನು
ತೆಗೆದುಕೊಳ್ಳಲು ಹಿಂದಿರುಗದಿರಲಿ. [19]ಅಯ್ಯೋ, ಆ ದಿನಗಳಲ್ಲಿ ಗರ್ಭಿಣಿಯರ ಹಾಗೂ ಹಾಲೂಡಿಸುವ
ತಾಯಂದಿರ ಗೋಳೇನು! [20]ಈ ನಿಮ್ಮ ಪಲಾಯನ ಚಳಿಗಾಲದಲ್ಲಾಗಲಿ, ಸಬ್ಬತ್ ದಿನದಲ್ಲಾಗಲಿ
ಸಂಭವಿಸದಂತೆ ಪ್ರಾರ್ಥನೆಮಾಡಿರಿ. [21]ಏಕೆಂದರೆ ಆಗ ಬರಲಿರುವ ಸಂಕಷ್ಟಗಳು ಸೃಷ್ಟಿಯ ಆದಿಯಿಂದ
ಇಂದಿನವರೆಗೂ ಇರಲಿಲ್ಲ; ಇನ್ನು ಮುಂದಕ್ಕೂ ಇರುವುದಿಲ್ಲ. [22]ಆ ದಿನಗಳ ಅವಧಿಯನ್ನು ಕಡಿಮೆಮಾಡದೆ
ಇದ್ದಲ್ಲಿ ಯಾವ ಮಾನವನೂ ಉಳಿಯುವಂತಿಲ್ಲ. ಆದರೆ ದೇವರು ಆರಿಸಿಕೊಂಡವರ ಪ್ರಯುಕ್ತ ಆ
ದಿನಗಳನ್ನು ಕಡಿಮೆ ಮಾಡಲಾಗುವುದು.

### ಹುಸಿ ಉದ್ಧಾರಕರು

23 "ಆಗ ಯಾರಾದರೂ ನಿಮಗೆ, 'ಇಗೋ ಕ್ರಿಸ್ತ ಇಲ್ಲಿದ್ದಾನೆ, ಅಗೋ, ಅಲ್ಲಿದ್ದಾನೆ,' ಎಂದು
ಹೇಳಿದರೆ ನಂಬಬೇಡಿ. [24]ಏಕೆಂದರೆ ಕಪಟ ಉದ್ಧಾರಕರೂ ವಂಚಕ ಪ್ರವಾದಿಗಳೂ ತಲೆಯೆತ್ತಿಕೊಳ್ಳುವರು.
ಸಾಧ್ಯವಾದರೆ ದೇವರು ಆರಿಸಿಕೊಂಡವರನ್ನೂ ಮೋಸಗೊಳಿಸುವಂತಹ ಮಹತ್ಕಾರ್ಯಗಳನ್ನೂ
ಪವಾಡಗಳನ್ನೂ ಮಾಡಿ ತೋರಿಸುವರು. [25]ಎಚ್ಚರಿಕೆ! ನಾನು ನಿಮಗೆ ಮುಂಚಿತವಾಗಿಯೇ ಇದನ್ನು
ತಿಳಿಸುತ್ತಾ ಇದ್ದೇನೆ. [26]ಆದ್ದರಿಂದ ಯಾರಾದರು, 'ಅಗೋ, ಕ್ರಿಸ್ತ ಅಡವಿಯಲ್ಲಿದ್ದಾನೆ,' ಎಂದರೆ ಅಲ್ಲಿಗೆ
ಹೋಗಬೇಡಿ. 'ಇಗೋ, ಇಲ್ಲೇ ಒಳಗೆ ಅವಿತುಕೊಂಡಿದ್ದಾನೆ,' ಎಂದರೂ ಅದನ್ನು ನಂಬಬೇಡಿ. [27]ಏಕೆಂದರೆ
ಪೂರ್ವದಿಂದ ಮಿನುಗಿ ಪಶ್ಚಿಮದವರೆಗೂ ಹೊಳೆಯುವ ಮಿಂಚಿನಂತೆ ಇರುವುದು ನರಪುತ್ರನ ಆಗಮನ.
[28]ಹೆಣವಿದ್ದೆಡೆ ರಣಹದ್ದುಗಳು ಬಂದು ಸೇರುತ್ತವೆ.

### ನರಪುತ್ರನ ಪುನರಾಗಮನದ ಕುರುಹು

(ಮಾರ್ಕ 13.24–27; ಲೂಕ 21.25–28)

29 "ಆ ದಿನಗಳ ಸಂಕಷ್ಟಗಳು ಮುಗಿದ ಕೂಡಲೇ ಸೂರ್ಯನು ಅಂಧಕಾರಮಯನಾಗುವನು;
ಚಂದ್ರನು ಕಾಂತಿಹೀನನಾಗುವನು; ಅಂತರಿಕ್ಷದಿಂದ ನಕ್ಷತ್ರಗಳು ಕಳಚಿ ಬೀಳುವುವು; ಗ್ರಹಶಕ್ತಿಗಳು
ಕಂಪಿಸುವುವು. [30]ಆಗ ನರಪುತ್ರನ ಚಿಹ್ನೆ ಆಕಾಶದಲ್ಲಿ ಕಾಣಿಸಿಕೊಳ್ಳುವುದು. ಪೃಥ್ವಿಯ ಪ್ರಜೆಗಳೆಲ್ಲಾ ಅತ್ತು
ಪ್ರಲಾಪಿಸುವರು. ನರಪುತ್ರನು ಶಕ್ತಿ ಸಾಮರ್ಥ್ಯದಿಂದಲೂ ಮಹಾ ಮಹಿಮೆಯಿಂದಲೂ ಮೇಘಾರೂಢನಾಗಿ
ಆಗಮಿಸುವುದನ್ನು ಅವರು ಕಾಣುವರು. [31]ತುತೂರಿಯ ಘೋಷಣೆಯೊಂದಿಗೆ ಆತನು ತನ್ನ ದೂತರನ್ನು
ನಾಲ್ಕು ದಿಕ್ಕುಗಳಿಗೂ ಕಳುಹಿಸುವನು. ಅವರು ಹೋಗಿ ಆತನಿಂದ ಆಯ್ಕೆಯಾದ ಜನರನ್ನು ವಿಶ್ವದ
ಅಷ್ಟದಿಕ್ಕುಗಳಿಂದ ಒಟ್ಟುಗೂಡಿಸುವರು.

## ಅಂಜೂರದ ಮರದಿಂದ ಮುಂಜಾಗರೂಕತೆಯ ಪಾಠ
(ಮಾರ್ಕ 13.28–31; ಲೂಕ 21.29–33)

32 “ಅಂಜೂರದ ಮರದಿಂದ ಒಂದು ಪಾಠ ಕಲಿತುಕೊಳ್ಳಿ. ಅದರ ಎಳೆ ರೆಂಬೆಗಳಲ್ಲಿ ಎಲೆಗಳು
ಚಿಗುರುವಾಗ ವಸಂತಕಾಲ ಸಮೀಪಿಸಿತು ಎಂದು ತಿಳಿದುಕೊಳ್ಳುತ್ತೀರಿ. 33ಅಂತೆಯೇ ಇದೆಲ್ಲವನ್ನು
ನೋಡುವಾಗ ನರಪುತ್ರನು ಸಮೀಪಿಸಿಬಿಟ್ಟಿದ್ದಾನೆ, ಹೊಸ್ತಿಲಲ್ಲೇ ಇದ್ದಾನೆಂದು ತಿಳಿದುಕೊಳ್ಳಿ. 34ಇದೆಲ್ಲವೂ
ಸಂಭವಿಸುವವರೆಗೆ ಈ ಪೀಳಿಗೆ ಗತಿಸಿ ಹೋಗದೆಂದು ನಿಮಗೆ ಒತ್ತಿ ಹೇಳುತ್ತೇನೆ. 35ಭೂಮ್ಯಾಕಾಶಗಳು
ಗತಿಸಿಹೋಗುವುವು; ಆದರೆ ನನ್ನ ಮಾತುಗಳು ಶಾಶ್ವತವಾಗಿ ನಿಲ್ಲುವುವು.

## ಸದಾ ಸನ್ನದ್ಧರಾಗಿರಿ
(ಮಾರ್ಕ 13.32–37; ಲೂಕ 17.26–30, 34–36)

36 “ಆ ದಿನವಾಗಲಿ, ಆ ಗಳಿಗೆಯಾಗಲಿ ಯಾವಾಗ ಬರುವುದೆಂದು ದೇವರೇ ಹೊರತು ಮತ್ತಾರೂ
ಅರಿಯರು. ಸ್ವರ್ಗದ ದೂತರೇ ಆಗಲಿ, ಪುತ್ರನೇ ಆಗಲಿ ಅದನ್ನು ಅರಿಯರು. 37ನೋವನ ಕಾಲದಲ್ಲಿ
ಆದಂತೆಯೇ ನರಪುತ್ರನು ಬರುವಾಗಲೂ ಆಗುವುದು. 38ಜಲಪ್ರಳಯಕ್ಕೆ ಹಿಂದಿನ ದಿನಗಳಲ್ಲಿ ನೋವನು
ನಾವೆಯನ್ನು ಹತ್ತುವ ದಿನದವರೆಗೆ ಜನರು ತಿನ್ನುತ್ತಲೇ ಇದ್ದರು; ಕುಡಿಯುತ್ತಲೇ ಇದ್ದರು; ಮದುವೆ
ಮಾಡಿಕೊಳ್ಳುವುದರಲ್ಲೂ ಮಾಡಿಕೊಡುವುದರಲ್ಲೂ ನಿರತರಾಗಿದ್ದರು. 39ಜಲಪ್ರಳಯ ಬಂದು ಅವರನ್ನು
ಕೊಚ್ಚಿಕೊಂಡು ಹೋಗುವ ತನಕ ಅದರ ಅರಿವೇ ಅವರಿಗಿರಲಿಲ್ಲ. ನರಪುತ್ರನು ಆಗಮಿಸುವಾಗಲೂ
ಹಾಗೆಯೇ ನಡೆಯುವುದು. 40ಆಗ ಹೊಲದಲ್ಲಿದ್ದ ಇಬ್ಬರಲ್ಲಿ ಒಬ್ಬನನ್ನು ತೆಗೆದುಕೊಂಡು ಹೋಗಲಾಗುವುದು.
ಇನ್ನೊಬ್ಬನನ್ನು ಬಿಡಲಾಗುವುದು. 41ಒಂದೇ ಕಲ್ಲಿನಲ್ಲಿ ಬೀಸುತ್ತ ಇರುವ ಇಬ್ಬರು ಮಹಿಳೆಯರಲ್ಲಿ ಒಬ್ಬಳನ್ನು
ತೆಗೆದುಕೊಂಡು ಹೋಗಲಾಗುವುದು, ಇನ್ನೊಬ್ಬಳನ್ನು ಬಿಡಲಾಗುವುದು. 42ನಿಮ್ಮ ಪ್ರಭು ಯಾವ ದಿನ
ಬರುತ್ತಾನೆಂದು ನಿಮಗೆ ತಿಳಿಯದು, ಆದ್ದರಿಂದ ಎಚ್ಚರವಾಗಿರಿ. 43ಕಳ್ಳನು ಬರುವ ಗಳಿಗೆ ಮನೆಯ
ಯಜಮಾನನಿಗೆ ತಿಳಿದಿದ್ದರೆ ಅವನು ಎಚ್ಚರವಾಗಿದ್ದು ತನ್ನ ಮನೆಗೆ ಕನ್ನಹಾಕಲು ಬಿಡನು, ಅಲ್ಲವೆ?
44ಇದನ್ನು ಚೆನ್ನಾಗಿ ತಿಳಿದುಕೊಂಡು ನೀವು ಸಹ ಸಿದ್ಧರಾಗಿರಿ. ಏಕೆಂದರೆ ನರಪುತ್ರನು ನೀವು ನಿರೀಕ್ಷಿಸದ
ಗಳಿಗೆಯಲ್ಲಿ ಬರುವನು.

## ಮೆಚ್ಚತಕ್ಕ ಮೇಸ್ತ್ರಿ
(ಲೂಕ 12.41–48)

45 “ಪ್ರಾಮಾಣಿಕನೂ ವಿವೇಕಿಯೂ ಆದ ಮೇಸ್ತ್ರಿ ಯಾರು? ಕಾಲಕಾಲಕ್ಕೆ ಸರಿಯಾಗಿ ಕೂಲಿ
ಆಳುಗಳಿಗೆ ದವಸಧಾನ್ಯಗಳನ್ನು ಅಳೆದುಕೊಟ್ಟು ತನ್ನ ಮನೆಯ ಮೇಲ್ವಿಚಾರಣೆಯನ್ನು ನೋಡಿಕೊಳ್ಳಲು
ಯಜಮಾನನಿಂದ ನೇಮಕಗೊಂಡವನು. 46ಯಜಮಾನನು ಮನೆಗೆ ಹಿಂದಿರುಗಿ ಬಂದಾಗ ಆ ಮೇಸ್ತ್ರಿ ತನ್ನ
ಕರ್ತವ್ಯವನ್ನು ನಿಷ್ಠೆಯಿಂದ ನೆರವೇರಿಸುತ್ತಿದ್ದರೆ ಅವನು ಧನ್ಯನು. 47ಅಂಥವನನ್ನು ಯಜಮಾನನು ತನ್ನ
ಎಲ್ಲಾ ಆಸ್ತಿಪಾಸ್ತಿಗೆ ಆಡಳಿತಗಾರನನ್ನಾಗಿ ನೇಮಿಸುತ್ತಾನೆಂಬುದು ನಿಶ್ಚಯ. 48ಆದರೆ ಆ ಮೇಸ್ತ್ರಿ ದುಷ್ಟನಾಗಿದ್ದು
‘ನನ್ನ ಯಜಮಾನ ತಡಮಾಡುವನು’ ಎಂದು ನೆನಸಿಕೊಂಡು, 49ತನ್ನ ಜೊತೆಯ ಸೇವಕರನ್ನು
ಹೊಡೆಯತೊಡಗಿದರೆ, ಕುಡುಕರ ಸಂಗಡ ತಿಂದು ಕುಡಿಯಲಾರಂಭಿಸಿದರೆ, 50ಅವನು ನಿರೀಕ್ಷಿಸದ ದಿನದಲ್ಲಿ,
ತಿಳಿಯದ ಗಳಿಗೆಯಲ್ಲಿ, ಯಜಮಾನನು ಬರುವನು. 51ಅವನನ್ನು ಚಿತ್ರಹಿಂಸೆಗೂ ಕಪಟಿಗಳ ದುರ್ಗತಿಗೂ
ಗುರಿಮಾಡುವನು. ಅಲ್ಲಿರುವವರೊಡನೆ ಕಟಕಟನೆ ಹಲ್ಲುಕಡಿದುಕೊಂಡು ಗೋಳಾಡಬೇಕಾಗುವುದು.

## ಹತ್ತು ಮಂದಿ ಕನ್ಯೆಯರ ಸಾಮತಿ
(ಮಾರ್ಕ 13.33–37; ಲೂಕ 12.35–38)

**25** "ಆ ದಿನಗಳಲ್ಲಿ ಸ್ವರ್ಗಸಾಮ್ರಾಜ್ಯ ಹೇಗಿರುವುದು ಎನ್ನುವುದಕ್ಕೆ ಈ ಸಾಮತಿಯನ್ನು ಕೊಡಬಹುದು:
ಹತ್ತು ಮಂದಿ ಕನ್ಯೆಯರು ದೀಪಾರತಿ ಹಿಡಿದು ಮದುವಣಿಗನನ್ನು ಎದುರುಗೊಳ್ಳಲು ಹೋದರು. 2ಅವರಲ್ಲಿ
ಐವರು ವಿವೇಕಿಗಳು, ಐವರು ಅವಿವೇಕಿಗಳು, 3ಅವಿವೇಕಿಗಳು ದೀಪಗಳನ್ನು ತೆಗೆದುಕೊಂಡರೇ ಹೊರತು
ಜೊತೆಗೆ ಎಣ್ಣೆಯನ್ನು ತೆಗೆದುಕೊಳ್ಳಲಿಲ್ಲ. 4ವಿವೇಕಿಗಳಾದರೋ ದೀಪಗಳ ಜೊತೆಗೆ ಬುಡ್ಡಿಗಳಲ್ಲಿ ಎಣ್ಣೆಯನ್ನೂ
ತೆಗೆದುಕೊಂಡರು. 5ಮದುವಣಿಗ ಬರುವುದು ತಡವಾಯಿತು. ಅವರೆಲ್ಲರೂ ತೂಕಡಿಸುತ್ತಾ ಹಾಗೇ
ನಿದ್ರೆಹೋದರು.

6 "ನಡುರಾತ್ರಿಯ ವೇಳೆ. 'ಇಗೋ, ಮದುವಣಿಗ ಬರುತ್ತಿದ್ದಾನೆ; ಬನ್ನಿ, ಆತನನ್ನು ಎದುರುಗೊಳ್ಳಿ,'
ಎಂಬ ಕೂಗು ಕೇಳಿಸಿತು. ಕನ್ಯೆಯರೆಲ್ಲರೂ ಎದ್ದರು. 7ತಮ್ಮ ತಮ್ಮ ದೀಪದ ಬತ್ತಿಯನ್ನು ಸರಿಮಾಡಿದರು.
8ಅವಿವೇಕಿಗಳು, 'ನಮ್ಮ ದೀಪಗಳು ಆರಿಹೋಗುತ್ತಾ ಇವೆ; ನಿಮ್ಮ ಎಣ್ಣೆಯಲ್ಲಿ ನಮಗೂ ಕೊಂಚ ಕೊಡಿ,'
ಎಂದು ವಿವೇಕಿಗಳನ್ನು ಕೇಳಿಕೊಂಡರು. 9ಅದಕ್ಕೆ ಅವರು, 'ನಿಮಗೆ ಕೊಟ್ಟರೆ ನಮಗೂ ನಿಮಗೂ ಸಾಲದೆ
ಹೋದೀತು. ನೀವು ಅಂಗಡಿಗೆ ಹೋಗಿ ಕೊಂಡುಕೊಂಡರೆ ಒಳ್ಳೆಯದು,' ಎಂದರು. 10ಅಂತೆಯೇ ಅವರು
ಎಣ್ಣೆಯನ್ನು ಕೊಂಡುಕೊಳ್ಳಲು ಹೋದಾಗ ಮದುವಣಿಗನು ಬಂದೇಬಿಟ್ಟನು. ಸಿದ್ಧರಾಗಿದ್ದವರು ಅವನ
ಸಂಗಡ ವಿವಾಹ ಮಹೋತ್ಸವಕ್ಕೆ ಹೋದರು. ಕಲ್ಯಾಣಮಂಟಪದ ಬಾಗಿಲುಗಳನ್ನು ಮುಚ್ಚಲಾಯಿತು.
11ಉಳಿದ ಕನ್ಯೆಯರು ಅನಂತರ ಬಂದರು. 'ಸ್ವಾಮಿ, ಸ್ವಾಮಿ, ನಮಗೆ ಬಾಗಿಲು ತೆರೆಯಿರಿ,' ಎಂದು
ಕೂಗಿಕೊಂಡರು. 12ಅದಕ್ಕೆ ಉತ್ತರವಾಗಿ ಆ ಮದುವಣಿಗ, 'ಅದಾಗದು, ನೀವು ಯಾರೋ ನನಗೆ ಗೊತ್ತಿಲ್ಲ,'
ಎಂದುಬಿಟ್ಟ. 13ಆದ್ದರಿಂದ ಜಾಗೃತರಾಗಿರಿ! ಏಕೆಂದರೆ ಆ ದಿನವಾಗಲಿ, ಆ ಗಳಿಗೆ ಆಗಲಿ ಯಾವಾಗ
ಬರುತ್ತದೆಂದು ನಿಮಗೆ ತಿಳಿಯದು.

## ದೇವರು ಕೊಡುವುದು ಬಚ್ಚಿಡುವುದಕ್ಕಲ್ಲ
(ಲೂಕ 19.11–27)

14 "ಅದೂ ಅಲ್ಲದೆ ಆ ದಿನಗಳಲ್ಲಿ ಸ್ವರ್ಗಸಾಮ್ರಾಜ್ಯ ಇಂತಿರುವುದು: ಒಬ್ಬಾತ ಪ್ರವಾಸ ಹೊರಡಲಿದ್ದ.
ತನ್ನ ಸೇವಕರನ್ನು ಕರೆದು ಅವರ ವಶಕ್ಕೆ ತನ್ನ ಆಸ್ತಿಯನ್ನು ಒಪ್ಪಿಸಿದ. 15ಒಬ್ಬನಿಗೆ ಐದು ತಲೆಂತು,
ಇನ್ನೊಬ್ಬನಿಗೆ ಎರಡು, ಮತ್ತೊಬ್ಬನಿಗೆ ಒಂದು – ಹೀಗೆ ಅವರವರ ಸಾಮರ್ಥ್ಯಕ್ಕೆ ತಕ್ಕಂತೆ ವಹಿಸಿಕೊಟ್ಟು
ಹೊರಟುಹೋದ. 16ಐದು ತಲೆಂತು ಪಡೆದ ಸೇವಕ ಒಡನೇ ಹೋಗಿ ಆ ಮೊತ್ತದಿಂದ ವ್ಯಾಪಾರಮಾಡಿ
ಇನ್ನೂ ಐದನ್ನು ಸಂಪಾದಿಸಿದ. 17ಎರಡು ಪಡೆದವನೂ ಹಾಗೆಯೇ ಮಾಡಿ ಇನ್ನೂ ಎರಡನ್ನು ಸಂಪಾದಿಸಿದ.
18ಒಂದು ತಲೆಂತು ಪಡೆದವನು ಮಾತ್ರ, ಅದನ್ನು ತೆಗೆದುಕೊಂಡು ಹೋಗಿ ಭೂಮಿ ಅಗೆದು, ಅದರಲ್ಲಿ ತನ್ನ
ಧಣಿಯ ಆ ಹಣವನ್ನು ಹೂತಿಟ್ಟ. 19ಬಹಳ ಕಾಲವಾದ ಬಳಿಕ ಆ ಧಣಿ ಹಿಂದಿರುಗಿ ಬಂದ. 20ಸೇವಕರಿಂದ
ಲೆಕ್ಕಾಚಾರ ಕೇಳಿದ. ಐದು ತಲೆಂತು ಪಡೆದವನು ಇನ್ನೂ ಐದು ತಲೆಂತುಗಳನ್ನು ಮುಂದೆ ತಂದು,
'ಒಡೆಯಾ, ನೀವು ನನ್ನ ವಶಕ್ಕೆ ಐದು ತಲೆಂತು ಒಪ್ಪಿಸಿದಿರಿ. ಇಗೋ ನೋಡಿ, ಮತ್ತೆ ಐದು ತಲೆಂತು
ಸಂಪಾದಿಸಿದ್ದೇನೆ,' ಎಂದ. 21ಅದಕ್ಕೆ ಆ ಧಣಿ, 'ಭಲಾ, ನೆಚ್ಚಿನ ಸೇವಕ, ನೀನು ಪ್ರಾಮಾಣಿಕ. ಈ ಚಿಕ್ಕ
ಕಾರ್ಯದಲ್ಲಿ ಪ್ರಾಮಾಣಿಕನಾಗಿದ್ದ ನಿನಗೆ ದೊಡ್ಡ ಜವಾಬ್ದಾರಿಯನ್ನೇ ವಹಿಸುತ್ತೇನೆ. ಬಾ, ನಿನ್ನ ಧಣಿಯ
ಸೌಭಾಗ್ಯದಲ್ಲಿ ಭಾಗಿಯಾಗು,' ಎಂದ. 22ಎರಡು ತಲೆಂತು ಪಡೆದಿದ್ದವನೂ ಮುಂದೆ ಬಂದು, 'ಒಡೆಯಾ,
ನೀವು ನನ್ನ ವಶಕ್ಕೆ ಎರಡು ತಲೆಂತುಗಳನ್ನು ಒಪ್ಪಿಸಿದರಿ. ಇಗೋ ನೋಡಿ, ಇನ್ನೂ ಎರಡು ತಲೆಂತುಗಳನ್ನು
ಸಂಪಾದಿಸಿದ್ದೇನೆ,' ಎಂದ. 23ಧಣಿ ಅವನಿಗೂ, 'ಭಲಾ, ನೆಚ್ಚಿನ ಸೇವಕ, ನೀನು ಪ್ರಾಮಾಣಿಕ. ಈ ಚಿಕ್ಕ
ಕಾರ್ಯದಲ್ಲಿ ಪ್ರಾಮಾಣಿಕನಾಗಿದ್ದ ನಿನಗೂ ದೊಡ್ಡ ಜವಾಬ್ದಾರಿಯನ್ನೇ ವಹಿಸುತ್ತೇನೆ. ಬಾ, ನಿನ್ನ ಧಣಿಯ

ಸೌಭಾಗ್ಯದಲ್ಲಿ ನೀನೂ ಭಾಗಿಯಾಗು,' ಎಂದ. [24]ತರುವಾಯ ಒಂದು ತಲೆಂತು ಪಡೆದವನೂ ಮುಂದೆ ಬಂದ; 'ಒಡೆಯಾ, ನಿಮ್ಮ ಮನಸ್ಸು ಕಠಿಣ ಎಂಬುದನ್ನು ನಾನು ಬಲ್ಲೆ. ನೀವು ಬಿತ್ತದ ಎಡೆಯಲ್ಲಿ ಕೊಯ್ಲು ಮಾಡುವವರು; ನೀವು ತೂರದ ಎಡೆಯಲ್ಲಿ ರಾಶಿಮಾಡುವವರು; [25]ಆದ್ದರಿಂದ ನಾನು ಭಯಪಟ್ಟೆ; ಹೋಗಿ ನಿಮ್ಮ ತಲೆಂತನ್ನು ಭೂಮಿಯಲ್ಲಿ ಹೂತಿಟ್ಟೆ. ಇಗೋ, ಸ್ವೀಕರಿಸಿ, ನಿಮ್ಮದು ನಿಮಗೆ ಸಂದಿದೆ,' ಎಂದ.

26 "ಆಗ ಧಣಿ ಅವನಿಗೆ, 'ಎಲವೋ ಮೈಗಳ್ಳನಾದ ದುಷ್ಟ ಸೇವಕ, ನಾನು ಬಿತ್ತದ ಎಡೆಯಲ್ಲಿ ಕೊಯ್ಲು ಮಾಡುವವನು; ನಾನು ತೂರದ ಎಡೆಯಲ್ಲಿ ರಾಶಿ ಮಾಡುವವನು ಎಂದು ನಿನಗೆ ಗೊತ್ತಿತ್ತಲ್ಲವೆ? [27]ಹಾಗಾದರೆ ನನ್ನ ಹಣವನ್ನು ನೀನು ಬಡ್ಡಿ ಅಂಗಡಿಯಲ್ಲಿ ಹಾಕಿಡಬೇಕಿತ್ತು; ನಾನು ಬಂದು ಬಡ್ಡಿಸಮೇತ ನನ್ನ ಅಸಲನ್ನು ಪಡೆಯುತಿದ್ದೆ', ಎಂದ. [28]ಅನಂತರ ಪರಿಚಾರಕರಿಗೆ, 'ಇವನಿಂದ ಆ ತಲೆಂತು ನಾಣ್ಯವನ್ನು ಕಿತ್ತು ಹತ್ತು ತಲೆಂತು ಇರುವವನಿಗೆ ಕೊಡಿ. [29]ಉಳ್ಳ ಪ್ರತಿಯೊಬ್ಬನಿಗೆ ಇನ್ನೂ ಹೆಚ್ಚಾಗಿ ಕೊಡಲಾಗುತ್ತದೆ. ಅವನು ಸಮೃದ್ಧನಾಗುತ್ತಾನೆ. ಇಲ್ಲದವನಿಂದ ಇರುವ ಕಿಂಚಿತ್ತನ್ನೂ ಕಸಿದುಕೊಳ್ಳಲಾಗುತ್ತದೆ. [30]ಅಪ್ರಯೋಜಕನಾದ ಈ ಸೇವಕನನ್ನು ಹೊರಗಿನ ಕಗ್ಗತ್ತಲೆಗೆ ದಬ್ಬಿರಿ. ಅಲ್ಲಿ ಕಟಕಟನೆ ಹಲ್ಲುಕಡಿದುಕೊಂಡು ಗೋಳಾಡಬೇಕಾಗುವುದು,' ಎಂದು ಹೇಳಿದ.

## ಪರರ ಸೇವೆಯೇ ಪರಮಾತ್ಮನ ಸೇವೆ

31 "ನರಪುತ್ರನು ತನ್ನ ಮಹಿಮೆಯಲ್ಲಿ ಸಮಸ್ತ ದೇವದೂತರ ಸಮೇತ ಬರುವಾಗ ತನ್ನ ಮಹಿಮಾನ್ವಿತ ಸಿಂಹಾಸನದಲ್ಲಿ ಆಸೀನನಾಗಿರುವನು. [32]ಸರ್ವಜನಾಂಗಗಳನ್ನು ಆತನ ಸಮ್ಮುಖದಲ್ಲಿ ಒಟ್ಟುಗೂಡಿಸಲಾಗುವುದು. ಕುರುಬನು ಕುರಿಗಳನ್ನು ಆಡುಗಳಿಂದ ಬೇರ್ಪಡಿಸುವಂತೆ ಆತನು ಅವರನ್ನು ಬೇರ್ಪಡಿಸುವನು. [33]ಕುರಿಗಳನ್ನು ತನ್ನ ಬಲಗಡೆಯಲ್ಲೂ ಆಡುಗಳನ್ನು ತನ್ನ ಎಡಗಡೆಯಲ್ಲೂ ಇರಿಸುವನು. [34]ಆಗ ಅರಸನು ತನ್ನ ಬಲಗಡೆಯಿರುವ ಜನರಿಗೆ, 'ನನ್ನ ಪಿತನಿಂದ ಧನ್ಯರೆನಿಸಿಕೊಂಡವರೇ, ಬನ್ನಿ. ಲೋಕಾದಿಯಿಂದ ನಿಮಗಾಗಿ ಸಿದ್ಧಮಾಡಿದ ಸಾಮ್ರಾಜ್ಯವನ್ನು ಸ್ವಾಸ್ತ್ಯವಾಗಿ ಪಡೆಯಿರಿ. [35]ಏಕೆಂದರೆ, ನಾನು ಹಸಿದಿದ್ದೆ, ನನಗೆ ಆಹಾರ ಕೊಟ್ಟಿರಿ; ಬಾಯಾರಿದ್ದೆ, ಕುಡಿಯಲು ಕೊಟ್ಟಿರಿ; ಅಪರಿಚಿತನಾಗಿದ್ದೆ, ನನಗೆ ಆಶ್ರಯ ಕೊಟ್ಟಿರಿ. [36]ಬಟ್ಟೆಬರೆಯಿಲ್ಲದೆ ಇದ್ದೆ, ನನಗೆ ಉಡಲು ಕೊಟ್ಟಿರಿ. ರೋಗದಿಂದಿದ್ದೆ, ನನ್ನನ್ನು ಆರೈಕೆ ಮಾಡಿದಿರಿ. ಬಂಧಿಯಾಗಿದ್ದೆ, ನೀವು ನನ್ನನ್ನು ಸಂಧಿಸಿದಿರಿ,' ಎಂದು ಹೇಳುವನು. [37]ಅದಕ್ಕೆ ಆ ಸಜ್ಜನರು, 'ಸ್ವಾಮಿ, ತಾವು ಯಾವಾಗ ಹಸಿದಿದ್ದನ್ನು ಕಂಡು ನಾವು ಆಹಾರ ಕೊಟ್ಟೆವು? ಬಾಯಾರಿದ್ದನ್ನು ಕಂಡು ಕುಡಿಯಲು ಕೊಟ್ಟೆವು? [38]ಯಾವಾಗ ತಾವು ಅಪರಿಚಿತರಾಗಿದ್ದನ್ನು ಕಂಡು ನಾವು ಆಶ್ರಯ ಕೊಟ್ಟೆವು? ಬಟ್ಟೆಬರೆಯಿಲ್ಲದ್ದನ್ನು ಕಂಡು ಉಡಲು ಕೊಟ್ಟೆವು? [39]ತಾವು ರೋಗಿಯಾಗಿರುವುದನ್ನು ಅಥವಾ ಬಂಧಿಯಾಗಿರುವುದನ್ನು ಕಂಡು ನಾವು ಸಂಧಿಸಲು ಬಂದೆವು?' ಎಂದು ಕೇಳುವರು. [40]ಆಗ ಅರಸನು ಪ್ರತ್ಯುತ್ತರವಾಗಿ, 'ಈ ನನ್ನ ಸೋದರರಲ್ಲಿ ಒಬ್ಬನಿಗೆ, ಅವನೆಷ್ಟೇ ಕನಿಷ್ಠನಾಗಿರಲಿ, ನೀವು ಹೀಗೆ ಮಾಡಿದಾಗಲೆಲ್ಲಾ ಅದನ್ನು ನನಗೇ ಮಾಡಿದಿರಿ, ಎಂದು ನಿಮಗೆ ಸತ್ಯವಾಗಿ ಹೇಳುತ್ತೇನೆ,' ಎನ್ನುವನು.

41 "ಅನಂತರ ಆತನು ತನ್ನ ಎಡಗಡೆ ಇರುವವರನ್ನು ನೋಡಿ, 'ಶಾಪಗ್ರಸ್ತರೇ, ನನ್ನಿಂದ ತೊಲಗಿರಿ. ಪಿಶಾಚಿಗೂ ಅವನ ದೂತರಿಗೂ ಸಿದ್ಧಮಾಡಿರುವ ಆರದ ಬೆಂಕಿಗೆ ಬೀಳಿರಿ. [42]ಏಕೆಂದರೆ ನಾನು ಹಸಿದಿದ್ದೆ, ನೀವು ನನಗೆ ಆಹಾರ ಕೊಡಲಿಲ್ಲ; ಬಾಯಾರಿದ್ದೆ, ಕುಡಿಯಲು ಕೊಡಲಿಲ್ಲ; ಅಪರಿಚಿತನಾಗಿದ್ದೆ, ನನಗೆ ಆಶ್ರಯ ನೀಡಲಿಲ್ಲ. [43]ಬಟ್ಟೆಬರೆಯಿಲ್ಲದೆ ಇದ್ದೆ, ನನಗೆ ಉಡಲು ಕೊಡಲಿಲ್ಲ; ರೋಗಿಯಾಗಿದ್ದೆ, ಬಂಧಿಯಾಗಿದ್ದೆ, ನೀವು ನನ್ನನ್ನು ಸಂಧಿಸಲಿಲ್ಲ,' ಎಂದು ಹೇಳುವನು. [44]ಅದಕ್ಕೆ ಅವರು ಕೂಡ, 'ಸ್ವಾಮಿ, ತಾವು ಯಾವಾಗ ಹಸಿದಿದ್ದಿರಿ, ಬಾಯಾರಿದ್ದಿರಿ, ಅಪರಿಚಿತರಾಗಿದ್ದಿರಿ, ಯಾವಾಗ ಬಟ್ಟೆಬರೆ ಇಲ್ಲದೆ ಇದ್ದಿರಿ, ರೋಗಿಯಾಗಿದ್ದಿರಿ ಮತ್ತು ಬಂಧಿಯಾಗಿದ್ದಿರಿ ಮತ್ತು ನಾವು ಅವನ್ನು ಕಂಡು ನಿಮಗೆ ಉಪಚಾರಮಾಡದೆ ಹೋದೆವು? ಎಂದು ಪ್ರಶ್ನಿಸುವರು. [45]ಅದಕ್ಕೆ ಪ್ರತ್ಯುತ್ತರವಾಗಿ ಅರಸನು, 'ಇವರಲ್ಲಿ ಒಬ್ಬನಿಗೆ, ಅವನೆಷ್ಟೇ ಕನಿಷ್ಠನಾಗಿರಲಿ, ನೀವು ಹಾಗೆ ಮಾಡದೆಹೋದಾಗ ಅದನ್ನು ನನಗೇ ಮಾಡಲಿಲ್ಲ,' ಎನ್ನುವನು.

46 “ಹೀಗೆ ಈ ದುರ್ಜನರು ನಿತ್ಯಶಿಕ್ಷೆಗೂ, ಆ ಸಜ್ಜನರು ನಿತ್ಯಜೀವಕ್ಕೂ ಹೋಗುವರು,” ಎಂದು ಹೇಳಿದರು ಸ್ವಾಮಿ.

## ಯೇಸುವಿನ ಕೊಲೆಗೆ ಒಳಸಂಚು

(ಮಾರ್ಕ 14.1–2; ಲೂಕ 22.1–2; ಯೊವಾ. 11.45–53)

**26** ಇದನ್ನೆಲ್ಲಾ ಬೋಧಿಸಿ ಆದಮೇಲೆ ಯೇಸುಸ್ವಾಮಿ ತಮ್ಮ ಶಿಷ್ಯರನ್ನು ಉದ್ದೇಶಿಸಿ, [2]“ನಿಮಗೆ ಗೊತ್ತಿರುವ ಹಾಗೆ ಪಾಸ್ಕ ಹಬ್ಬಕ್ಕೆ ಇನ್ನು ಎರಡು ದಿನಗಳಿವೆ. ಆಗ ನರಪುತ್ರನನ್ನು ಶಿಲುಬೆಗೇರಿಸಲು ಹಿಡಿದೊಪ್ಪಿಸುವರು,” ಎಂದರು.

3 ಇತ್ತ ಮುಖ್ಯ ಯಾಜಕರು ಮತ್ತು ಪ್ರಜಾ ಪ್ರಮುಖರು ‘ಕಾಯಫ’ ಎಂಬ ಪ್ರಧಾನ ಯಾಜಕನ ಭವನದಲ್ಲಿ ಒಟ್ಟುಗೂಡಿದರು. [4]ಯೇಸುವನ್ನು ಉಪಾಯದಿಂದ ಹಿಡಿದು ಕೊಲ್ಲಿಸುವುದಕ್ಕೆ ಸಮಾಲೋಚಿಸಿಕೊಂಡರು. [5]ಆದರೆ, ‘ಹಬ್ಬದ ಸಂದರ್ಭದಲ್ಲಿ ನಾವು ಈ ಕಾರ್ಯವನ್ನು ಮಾಡಬಾರದು. ಏಕೆಂದರೆ ಜನರು ದಂಗೆಯೆದ್ದಾರು,’ ಎಂದೂ ಮಾತನಾಡಿಕೊಂಡರು.

## ಬೆಥಾನಿಯದಲ್ಲಿ ಅಭ್ಯಂಜನ

(ಮಾರ್ಕ 14.3–9; ಯೊವಾ. 12.1–8)

6 ಅಂದು ಯೇಸು ಬೆಥಾನಿಯದಲ್ಲಿ ಕುಷ್ಠರೋಗಿ ಸಿಮೋನನ ಮನೆಯಲ್ಲಿದ್ದರು. [7]ಆಗ ಮಹಿಳೆಯೊಬ್ಬಳು ಅಮೃತಶಿಲೆಯ ಭರಣಿಯ ತುಂಬ ಅತ್ಯಮೂಲ್ಯವಾದ ಸುಗಂಧತೈಲವನ್ನು ತೆಗೆದುಕೊಂಡು ಅಲ್ಲಿಗೆ ಬಂದಳು. ಊಟಕ್ಕೆ ಕುಳಿತಿದ್ದ ಯೇಸುವಿನ ತಲೆಯ ಮೇಲೆ ಆ ತೈಲವನ್ನು ಸುರಿದಳು. [8]ಇದನ್ನು ಕಂಡ ಶಿಷ್ಯರು ಸಿಟ್ಟಿಗೆದ್ದರು. “ಏಕೆ ಇಷ್ಟೊಂದು ವ್ಯರ್ಥ? [9]ಈ ತೈಲವನ್ನು ಅಧಿಕ ಬೆಲೆಗೆ ಮಾರಿ ಬಂದ ಹಣವನ್ನು ಬಡವರಿಗೆ ಕೊಡಬಹುದಿತ್ತಲ್ಲಾ,” ಎಂದರು. [10]ಇದನ್ನು ಅರಿತುಕೊಂಡ ಯೇಸು ಶಿಷ್ಯರಿಗೆ, “ಈ ಮಹಿಳೆಗೇಕೆ ಕಿರುಕುಳ ಕೊಡುತ್ತೀರಿ? ಈಕೆ ನನಗೊಂದು ಸತ್ಕಾರ್ಯವನ್ನೇ ಮಾಡಿದ್ದಾಳೆ. [11]ಬಡಬಗ್ಗರು ನಿಮ್ಮ ಸಂಗಡ ಯಾವಾಗಲೂ ಇರುತ್ತಾರೆ. ಆದರೆ ನಾನು ನಿಮ್ಮ ಸಂಗಡ ಯಾವಾಗಲೂ ಇರುವುದಿಲ್ಲ. [12]ಈಕೆ ಈ ತೈಲವನ್ನು ನನ್ನ ದೇಹದ ಮೇಲೆ ಸುರಿದು ನನ್ನ ಶವಸಂಸ್ಕಾರಕ್ಕೆ ಸಿದ್ಧಮಾಡಿದ್ದಾಳೆ. [13]ಜಗತ್ತಿನಾದ್ಯಂತ, ಎಲ್ಲೆಲ್ಲಿ ಶುಭಸಂದೇಶ ಪ್ರಕಟವಾಗುವುದೋ ಅಲ್ಲೆಲ್ಲಾ ಈ ಸತ್ಕಾರ್ಯವನ್ನು ಈಕೆಯ ಸವಿನೆನಪಿಗಾಗಿ ಸಾರಲಾಗುವುದು. ಇದು ನಿಶ್ಚಯ,” ಎಂದರು.

## ಯೂದನ ಗುರುದ್ರೋಹ

(ಮಾರ್ಕ 14.10–11; ಲೂಕ 22.3–6)

14 ಇದಾದ ಮೇಲೆ, ಹನ್ನೆರಡು ಮಂದಿ ಶಿಷ್ಯರಲ್ಲಿ ಒಬ್ಬನಾದ ಇಸ್ಕರಿಯೋತಿನ ಯೂದ ಎಂಬಾತ ಮುಖ್ಯ ಯಾಜಕರ ಬಳಿಗೆ ಹೋದನು. [15]“ನಿಮಗೆ ನಾನು ಯೇಸುವನ್ನು ಹಿಡಿದುಕೊಟ್ಟರೆ ನನಗೇನು ಕೊಡುವಿರಿ?” ಎಂದು ಅವರನ್ನು ವಿಚಾರಿಸಿದನು. ಅವರೋ, ಅವನಿಗೆ ಮೂವತ್ತು ಬೆಳ್ಳಿ ನಾಣ್ಯಗಳನ್ನು ನಿಗದಿಮಾಡಿ ಕೊಟ್ಟರು. [16]ಆ ಗಳಿಗೆಯಿಂದ ಯೇಸುವನ್ನು ಹಿಡಿದೊಪ್ಪಿಸಲು ಅವನು ಸಂದರ್ಭ ಕಾಯುತ್ತಾ ಇದ್ದನು.

## ಪಾಸ್ಕ ಮಹೋತ್ಸವಕ್ಕೆ ಸಿದ್ಧತೆ

(ಮಾರ್ಕ 14.12–21; ಲೂಕ 22.7–13, 21–23; ಯೊವಾ. 13.21–30)

17 ಅಂದು ಹುಳಿರಹಿತ ರೊಟ್ಟಿಯ ಹಬ್ಬದ ಮೊದಲನೆಯ ದಿನ. ಶಿಷ್ಯರು ಯೇಸುಸ್ವಾಮಿಯ ಬಳಿಗೆ
ಬಂದು, "ತಮಗೆ ಪಾಸ್ಕ ಭೋಜನವನ್ನು ನಾವು ಎಲ್ಲಿ ಸಿದ್ಧಪಡಿಸಬೇಕೆನ್ನುತ್ತೀರಿ?" ಎಂದು ಕೇಳಿದರು.
18ಅದಕ್ಕೆ ಅವರು, "ಪಟ್ಟಣದಲ್ಲಿ ನಾನು ಸೂಚಿಸುವಂಥವನ ಬಳಿಗೆ ಹೋಗಿರಿ, 'ನನ್ನ ಕಾಲ ಸಮಿೂಪಿಸಿತು,
ಪಾಸ್ಕವನ್ನು ನನ್ನ ಶಿಷ್ಯರ ಸಮೇತ ನಿನ್ನ ಮನೆಯಲ್ಲಿಯೇ ಆಚರಿಸಬೇಕೆಂದಿದ್ದೇನೆ'; ಇದನ್ನು ನಮ್ಮ ಗುರುವೇ
ಹೇಳಿಕಳುಹಿಸಿದ್ದಾರೆ ಎಂದು ಅವನಿಗೆ ತಿಳಿಸಿರಿ," ಎಂದರು. 19ಯೇಸು ಸೂಚಿಸಿದಂತೆಯೇ ಶಿಷ್ಯರು ಹೋಗಿ
ಪಾಸ್ಕ ಭೋಜನವನ್ನು ತಯಾರಿಸಿದರು.

20 ಸಂಜೆಯಾಯಿತು. ಯೇಸುಸ್ವಾಮಿ ಹನ್ನೆರಡು ಮಂದಿ ಶಿಷ್ಯರ ಸಂಗಡ ಊಟಕ್ಕೆ ಕುಳಿತರು.
21ಅವರೆಲ್ಲರೂ ಊಟಮಾಡುತ್ತಿದ್ದಾಗ ಯೇಸು, "ನಿಮ್ಮಲ್ಲೇ ಒಬ್ಬನು ನನಗೆ ದ್ರೋಹ ಬಗೆಯುತ್ತಾನೆ, ಎಂದು
ನಿಮಗೆ ಖಂಡಿತವಾಗಿ ಹೇಳುತ್ತೇನೆ," ಎಂದರು. 22ಶಿಷ್ಯರು ಬಹಳ ಕಳವಳಗೊಂಡರು. ಒಬ್ಬರಾದ
ಮೇಲೊಬ್ಬರು, "ಸ್ವಾಮಿೂ, ನಾನೋ? ನಾನೋ?" ಎಂದು ಕೇಳತೊಡಗಿದರು. 23ಅದಕ್ಕೆ ಪ್ರತ್ಯುತ್ತರವಾಗಿ
ಯೇಸು, "ಊಟದ ಬಟ್ಟಲಲ್ಲಿ ನನ್ನೊಡನೆ ಕೈ ಅದ್ದಿ ಉಣ್ಣುವವನೇ ನನಗೆ ದ್ರೋಹ ಬಗೆಯುತ್ತಾನೆ.
24ನರಪುತ್ರನೇನೋ ಪವಿತ್ರ ಗ್ರಂಥದಲ್ಲಿ ಬರೆದಿರುವ ಪ್ರಕಾರ ಹೊರಟುಹೋಗುತ್ತಾನೆ, ನಿಜ. ಆದರೆ ಅಯ್ಯೋ,
ನರಪುತ್ರನಿಗೆ ದ್ರೋಹ ಬಗೆಯುವವನ ದುರ್ಗತಿಯನ್ನು ಏನೆಂದು ಹೇಳಲಿ! ಅವನು ಹುಟ್ಟದೇ ಇದ್ದಿದ್ದರೆ
ಎಷ್ಟೋ ಚೆನ್ನಾಗಿತ್ತು!" ಎಂದರು. 25ಗುರುದ್ರೋಹಿಯಾದ ಯೂದನು ಆಗ, "ಗುರುವೇ, ಅವನು ನಾನಲ್ಲ
ತಾನೇ?" ಎಂದನು. ಅದಕ್ಕೆ ಯೇಸು, "ಅದು ನಿನ್ನ ಬಾಯಿಂದಲೇ ಬಂದಿದೆ," ಎಂದರು.

## ಪ್ರಭುವಿನ ಪವಿತ್ರ ಭೋಜನ

(ಮಾರ್ಕ 14.22–26; ಲೂಕ 22.14–20; 1 ಕೊರಿಂಥ 11.23–25)

26 ಅವರೆಲ್ಲರೂ ಊಟ ಮಾಡುತ್ತಿರುವಾಗ ಯೇಸುಸ್ವಾಮಿ ರೊಟ್ಟಿಯನ್ನು ತೆಗೆದುಕೊಂಡು
ದೈವಸ್ತುತಿ ಮಾಡಿ, ಅದನ್ನು ಮುರಿದು, ಶಿಷ್ಯರಿಗೆ ಕೊಡುತ್ತಾ, "ಇದನ್ನು ತೆಗೆದುಕೊಂಡು ಭುಜಿಸಿರಿ, ಇದು
ನನ್ನ ಶರೀರ," ಎಂದರು. 27ಬಳಿಕ ಪಾನಪಾತ್ರೆಯನ್ನು ತೆಗೆದುಕೊಂಡು, ದೇವರಿಗೆ ಕೃತಜ್ಞತಾ ಸ್ತೋತ್ರವನ್ನು
ಸಲ್ಲಿಸಿ, ಅದನ್ನು ಅವರಿಗೆ ಕೊಡುತ್ತಾ ಇಂತೆಂದರು: "ಇದರಲ್ಲಿ ಇರುವುದನ್ನು ಎಲ್ಲರೂ ಪಾನಮಾಡಿ; 28ಇದು
ನನ್ನ ರಕ್ತ, ಸಮಸ್ತ ಜನರ ಪಾಪಕ್ಷಮೆಗಾಗಿ ಸುರಿಸಲಾಗುವ ಒಡಂಬಡಿಕೆಯ ರಕ್ತ. 29ನಾನು ನನ್ನ ಪಿತನ
ಸಾಮ್ರಾಜ್ಯದಲ್ಲಿ ದ್ರಾಕ್ಷಾರಸ ನಿಮ್ಮ ಸಂಗಡ ಹೊಸದಾಗಿ ಕುಡಿಯುವ ದಿನದವರೆಗೂ ಅದನ್ನು ಇನ್ನು
ಕುಡಿಯುವುದಿಲ್ಲ ಎಂದು ನಿಮಗೆ ಸತ್ಯವಾಗಿ ಹೇಳುತ್ತೇನೆ," ಎಂದರು.

## ವಿಶ್ವಾಸದ್ರೋಹದ ಮುನ್ಸೂಚನೆ

(ಮಾರ್ಕ 14.27–31; ಲೂಕ 22.31–34; ಯೊವಾ. 13.36–38)

30 ಬಳಿಕ ಅವರೆಲ್ಲರು ಕೀರ್ತನೆ ಹಾಡಿ, ಓಲಿವ್ ಗುಡ್ಡಕ್ಕೆ ಹೊರಟರು. 31ಆಗ ಯೇಸು ತಮ್ಮ
ಶಿಷ್ಯರಿಗೆ,

" ' ಕುರಿಗಾಹಿಯನ್ನು ಕೊಲ್ಲುವೆನು
ಕುರಿಗಳು ಚದರುವುವು,'

ಎಂದು ಪವಿತ್ರ ಗ್ರಂಥದಲ್ಲೇ ಬರೆದಿದೆ. ಅದರಂತೆಯೇ ನೀವೆಲ್ಲರೂ ಇದೇ ರಾತ್ರಿ ನನ್ನಲ್ಲಿ ವಿಶ್ವಾಸ
ಕಳೆದುಕೊಂಡು ಹಿಮ್ಮೆಟ್ಟುವಿರಿ. 32ನಾನಾದರೋ ಪುನರುತ್ಥಾನಹೊಂದಿ ನಿಮಗಿಂತ ಮುಂದಾಗಿ ಗಲಿಲೇಯಕ್ಕೆ
ಹೋಗುವೆನು," ಎಂದರು.

33 ಇದನ್ನು ಕೇಳಿದ ಪೇತ್ರನು, "ಎಲ್ಲರು ತಮ್ಮಲ್ಲಿ ವಿಶ್ವಾಸ ಕಳೆದುಕೊಂಡು ಹಿಮ್ಮೆಟ್ಟಿದರೂ ನಾನು
ಮಾತ್ರ ಎಂದಿಗೂ ಹಾಗೆ ಮಾಡುವುದಿಲ್ಲ" ಎಂದು ಸಾರಿ ಹೇಳಿದನು. 34ಅದಕ್ಕೆ ಯೇಸು, "ಇದೇ ರಾತ್ರಿ
ಕೋಳಿ ಕೂಗುವ ಮೊದಲೇ 'ಆತನನ್ನು ನಾನರಿಯೆ' ಎಂದು ನೀನು ಮೂರು ಬಾರಿ ನನ್ನನ್ನು ನಿರಾಕರಿಸುವೆ;
ಇದು ಖಂಡಿತ," ಎಂದರು. 35ಆದರೆ ಪೇತ್ರನು, "ನಾನು ತಮ್ಮೊಡನೆ ಸಾಯಬೇಕಾಗಿ ಬಂದರೂ ಸರಿಯೆ,
ತಮ್ಮನ್ನು ಮಾತ್ರ ನಿರಾಕರಿಸೆನು," ಎಂದು ನುಡಿದನು. ಅದರಂತೆಯೇ ಉಳಿದ ಶಿಷ್ಯರೂ ದನಿಗೂಡಿಸಿದರು.

## ಗೆತ್ಸೆಮನಿ ತೋಪಿನಲ್ಲಿ ಪ್ರಾರ್ಥನೆ

(ಮಾರ್ಕ 14.32-42; ಲೂಕ 22.39-46)

36 ಅನಂತರ ಯೇಸುಸ್ವಾಮಿ ಅವರೊಡನೆ ಗೆತ್ಸೆಮನೆ ಎಂಬ ತೋಪಿಗೆ ಬಂದರು. ಅಲ್ಲಿ ಶಿಷ್ಯರಿಗೆ,
"ನಾನು ಅತ್ತ ಹೋಗಿ ಪ್ರಾರ್ಥನೆ ಮಾಡಿ ಬರುವವರೆಗೂ ನೀವು ಇಲ್ಲೇ ಕುಳಿತಿರಿ," ಎಂದರು. 37ಬಳಿಕ
ಪೇತ್ರನನ್ನೂ ಜೆಬೆದಾಯನ ಇಬ್ಬರು ಕುಮಾರರನ್ನೂ ತಮ್ಮೊಂದಿಗೆ ಕರೆದುಕೊಂಡು ಮುಂದಕ್ಕೆ ಹೋದರು.
ಅಲ್ಲಿ ಸ್ವಾಮಿ ಚಿಂತಾಕ್ರಾಂತರಾದರು, ದುಃಖಭರಿತರಾದರು. 38"ನನ್ನ ಮನೋವೇದನೆ ಪ್ರಾಣಹಿಂಡುವಷ್ಟು
ತೀವ್ರವಾಗಿದೆ. ನೀವು ಇಲ್ಲೇ ಇದ್ದು ನನ್ನೊಡನೆ ಎಚ್ಚರವಾಗಿರಿ," ಎಂದರು. 39ಅನಂತರ ಅವರು ಅಲ್ಲಿಂದ
ಇನ್ನೂ ಸ್ವಲ್ಪ ಮುಂದಕ್ಕೆ ಹೋಗಿ, ನೆಲದ ಮೇಲೆ ಅಧೋಮುಖವಾಗಿ ಬಿದ್ದು ಪ್ರಾರ್ಥನೆ ಮಾಡಿದರು. "ನನ್ನ
ಪಿತನೇ, ಸಾಧ್ಯವಾದರೆ ಈ ಕಷ್ಟದ ಕೊಡವು ನನ್ನಿಂದ ದೂರವಾಗಲಿ, ಆದರೂ ನನ್ನ ಚಿತ್ತದಂತೆ ಅಲ್ಲ, ನಿಮ್ಮ
ಚಿತ್ತದಂತೆಯೇ ಆಗಲಿ," ಎಂದರು. 40ಅನಂತರ ಆ ಮೂವರು ಶಿಷ್ಯರ ಬಳಿಗೆ ಬಂದು, ಅವರು
ನಿದ್ರಿಸುತ್ತಿರುವುದನ್ನು ಕಂಡರು. ಪೇತ್ರನನ್ನು ಉದ್ದೇಶಿಸಿ, "ಏನಿದು, ಒಂದು ಗಂಟೆಯಾದರೂ ನನ್ನೊಡನೆ
ಎಚ್ಚರವಾಗಿರಲು ನಿಮ್ಮಿಂದ ಆಗದೇ ಹೋಯಿತೇ? 41ಪ್ರಲೋಭನೆಗೆ ಒಳಗಾಗದಂತೆ ಎಚ್ಚರವಾಗಿದ್ದು
ಪ್ರಾರ್ಥನೆ ಮಾಡಿರಿ. ಆತ್ಮಕ್ಕೇನೋ ಆಸಕ್ತಿ ಇದೆ, ಆದರೆ ದೇಹಕ್ಕೆ ಶಕ್ತಿಸಾಲದು," ಎಂದರು. 42ಎರಡನೆಯ
ಬಾರಿ ಹಿಂದಕ್ಕೆ ಹೋಗಿ ಇಂತೆಂದು ಪ್ರಾರ್ಥನೆಮಾಡಿದರು: "ನನ್ನ ಪಿತನೇ, ನಾನು ಸೇವಿಸದ ಹೊರತು ಈ
ಕಷ್ಟದ ಕೊಡ ನನ್ನಿಂದ ತೊಲಗದಾದರೆ ಅದು ನಿಮ್ಮ ಚಿತ್ತದಂತೆಯೇ ಆಗಲಿ." 43ಯೇಸು ಮರಳಿ ಆ ಶಿಷ್ಯರ
ಬಳಿಗೆ ಬಂದಾಗ ಅವರು ಇನ್ನೂ ನಿದ್ರಾವಸ್ಥೆಯಲ್ಲಿದ್ದರು. ಅವರ ಕಣ್ಣುಗಳು ಭಾರವಾಗಿ ಇದ್ದವು. 44ಪುನಃ
ಅವರನ್ನು ಬಿಟ್ಟು ಹಿಂದಿರುಗಿ ಮೂರನೆಯ ಬಾರಿ ಅದೇ ಮಾತುಗಳನ್ನು ಹೇಳಿ ಪ್ರಾರ್ಥಿಸಿದರು. 45ಅದಾದ
ಬಳಿಕ ಶಿಷ್ಯರನ್ನು ಸಮೀಪಿಸಿ, "ನೀವು ಇನ್ನೂ ನಿದ್ರಿಸಿ ವಿಶ್ರಮಿಸುತ್ತಾ ಇರುವಿರೋ? ಸಾಕು, ಸಮಯ
ಸಮೀಪಿಸಿಬಿಟ್ಟಿತು. ನರಪುತ್ರನು ದುರ್ಜನರ ಕೈವಶವಾಗಲಿದ್ದಾನೆ. 46ಎದ್ದೇಳಿ, ಹೋಗೋಣ. ನನಗೆ ದ್ರೋಹ
ಬಗೆಯುವವನು ಹತ್ತಿರವೇ ಇದ್ದಾನೆ, ನೋಡಿ," ಎಂದರು.

## ಮುದ್ದಿಟ್ಟ ಮಹಾದ್ರೋಹಿ

(ಮಾರ್ಕ 14.43-50; ಲೂಕ 22.47-53; ಯೊವಾ. 18.2-12)

47 ಯೇಸುಸ್ವಾಮಿ ಇನ್ನೂ ಮಾತನಾಡುತ್ತಿದ್ದ ಹಾಗೆ, ಹನ್ನೆರಡು ಮಂದಿ ಶಿಷ್ಯರಲ್ಲಿ ಒಬ್ಬನಾದ
ಯೂದನು ಅಲ್ಲಿಗೆ ಬಂದನು. ಖಡ್ಗಗಳನ್ನೂ ಲಾಠಿಗಳನ್ನೂ ಹಿಡಿದಿದ್ದ ಒಂದು ದೊಡ್ಡ ಗುಂಪು
ಅವನೊಂದಿಗೆ ಇತ್ತು. ಮುಖ್ಯ ಯಾಜಕರೂ ಜನರ ಪ್ರಮುಖರೂ ಅವರನ್ನು ಕಳುಹಿಸಿದ್ದರು. 48'ನಾನು
ಯಾರಿಗೆ ಮುದ್ದಿಡುತ್ತೇನೋ ಆತನೇ ಆ ವ್ಯಕ್ತಿ. ಆತನನ್ನು ಹಿಡಿದುಕೊಳ್ಳಿ,' ಎಂದು ಆ ಗುರುದ್ರೋಹಿ ಅವರಿಗೆ
ಮೊದಲೇ ಸೂಚನೆ ಕೊಟ್ಟಿದ್ದನು. 49ಅದರಂತೆಯೇ ಅವನು ಯೇಸುಸ್ವಾಮಿಯ ಸಮೀಪಕ್ಕೆ ನೇರವಾಗಿ
ಬಂದು, "ಗುರುವೇ, ನಮಸ್ಕಾರ," ಎಂದು ಹೇಳುತ್ತಾ ಅವರಿಗೆ ಮುದ್ದಿಟ್ಟನು. 50ಯೇಸು ಅವನಿಗೆ, "ಮಿತ್ರಾ,
ನೀನು ಮಾಡಬಂದ ಕಾರ್ಯವನ್ನು ಮಾಡಿ ಮುಗಿಸು," ಎಂದರು. ಆಗ ಆ ಜನರು ಹತ್ತಿರಕ್ಕೆ ಬಂದು,
ಯೇಸುವನ್ನು ಹಿಡಿದು ಬಂಧಿಸಿದರು. 51ಕೂಡಲೆ ಯೇಸುವಿನ ಸಂಗಡ ಇದ್ದ ಒಬ್ಬನು ತನ್ನ ಖಡ್ಗವನ್ನು
ಹಿರಿದು, ಪ್ರಧಾನ ಯಾಜಕನ ಆಳನ್ನು ಹೊಡೆದು ಅವನ ಕಿವಿಯನ್ನು ಕತ್ತರಿಸಿಬಿಟ್ಟನು. 52ಆಗ ಯೇಸು

ಅವನಿಗೆ, "ನಿನ್ನ ಖಡ್ಗವನ್ನು ಒರೆಗೆ ಹಾಕು. ಖಡ್ಗ ಎತ್ತಿದವರೆಲ್ಲರೂ ಖಡ್ಗದಿಂದಲೇ ಹತರಾಗುವರು. 53ನಾನು ನನ್ನ ಪಿತನನ್ನು ಕೇಳಿಕೊಂಡರೆ ಅವರು ತಕ್ಷಣವೇ ಹನ್ನೆರಡು ದಳಗಳಿಗಿಂತಲೂ ಹೆಚ್ಚು ದೇವದೂತರನ್ನು ಕಳಿಸುವುದಿಲ್ಲವೆಂದು ಕೊಂಡೆಯಾ? 54ಆದರೆ, ಈ ಪ್ರಕಾರವೇ ಆಗಬೇಕು ಎನ್ನುವ ಪವಿತ್ರ ಗ್ರಂಥದ ವಾಕ್ಯ ನೆರವೇರುವುದಾದರೂ ಹೇಗೆ?" ಎಂದರು.

55 ಅದೇ ಸಂದರ್ಭದಲ್ಲಿ ಯೇಸುಸ್ವಾಮಿ ಜನರ ಗುಂಪನ್ನು ಉದ್ದೇಶಿಸಿ, "ದರೋಡೆಗಾರನನ್ನು ಹಿಡಿಯುವುದಕ್ಕೋ ಎಂಬಂತೆ ಖಡ್ಗಗಳನ್ನೂ ಲಾಠಿಗಳನ್ನೂ ಹಿಡಿದುಕೊಂಡು ನನ್ನನ್ನು ಬಂಧಿಸಲು ಬರಬೇಕಾಗಿತ್ತೆ? ನಾನು ಪ್ರತಿದಿನವೂ ಮಹಾದೇವಾಲಯದಲ್ಲಿ ಕುಳಿತು ಬೋಧನೆ ಮಾಡುತ್ತಾ ಇದ್ದೆ. ಆಗ ನೀವು ನನ್ನನ್ನು ಬಂಧಿಸಲಿಲ್ಲ. 56ಆದರೆ ಪವಿತ್ರ ಗ್ರಂಥದ ಪ್ರವಾದನೆಗಳು ಈಡೇರಲೆಂದೇ ಇದೆಲ್ಲಾ ಜರುಗಿದೆ," ಎಂದರು. ಆಗ ಶಿಷ್ಯರೆಲ್ಲರೂ ಯೇಸುವನ್ನು ತೊರೆದು ಪಲಾಯನ ಮಾಡಿದರು.

## ಯೆಹೂದ್ಯ ನ್ಯಾಯಸ್ಥಾನದ ಮುಂದೆ ಯೇಸು

(ಮಾರ್ಕ 14.53–65; ಲೂಕ 22.54–71; ಯೊವಾ. 18.13–24)

57 ಬಳಿಕ ಯೇಸುಸ್ವಾಮಿಯನ್ನು ಬಂಧಿಸಿದ್ದವರು ಅವರನ್ನು ಪ್ರಧಾನಯಾಜಕ ಕಾಯಫನ ಬಳಿಗೆ ಕರೆದೊಯ್ದರು. 58ಅಲ್ಲಿ ಧರ್ಮಶಾಸ್ತ್ರಿಗಳೂ ಪ್ರಮುಖರೂ ಸಭೆ ಸೇರಿದ್ದರು. ಪೇತ್ರನಾದರೋ ದೂರದಿಂದ ಯೇಸುವನ್ನು ಹಿಂಬಾಲಿಸುತ್ತಿದ್ದನು. ಅವನು ಪ್ರಧಾನ ಯಾಜಕನ ಭವನದವರೆಗೂ ಬಂದು, ಹೊರಾಂಗಣವನ್ನು ಹೊಕ್ಕು ಪಹರೆಯವರ ಜೊತೆ ಕುಳಿತುಕೊಂಡನು. ಇದೆಲ್ಲ ಹೇಗೆ ಕೊನೆಗೊಳ್ಳುವುದೆಂದು ನೋಡಬೇಕೆಂಬ ಉದ್ದೇಶ ಅವನದಾಗಿತ್ತು. 59ಇತ್ತ ಮುಖ್ಯ ಯಾಜಕರೂ ಉಚ್ಚನ್ಯಾಯಸಭೆಯ ಸದಸ್ಯರೆಲ್ಲರೂ ಯೇಸುವನ್ನು ಮರಣದಂಡನೆಗೆ ಗುರಿಪಡಿಸುವ ಸಲುವಾಗಿ ಸುಳ್ಳುಸಾಕ್ಷಿಯನ್ನು ಹುಡುಕುತ್ತಿದ್ದರು. 60ಹಲವಾರು ಸುಳ್ಳುಸಾಕ್ಷಿಗಳು ಮುಂದೆ ಬಂದರು. ಆದರೂ ಸರಿಯಾದ ಒಂದು ಸಾಕ್ಷ್ಯವೂ ಅವರಿಗೆ ದೊರಕಲಿಲ್ಲ. ಕಡೆಗೆ ಇಬ್ಬರು ಮುಂದೆ ಬಂದು, 61"ಮಹಾದೇವಾಲಯವನ್ನು ಕೆಡವಿಬಿಟ್ಟು ಅದನ್ನು ಮೂರು ದಿನಗಳಲ್ಲಿ ಮರಳಿ ಕಟ್ಟುವ ಶಕ್ತಿ ನನಗಿದೆ,' ಎಂದು ಇವನು ಹೇಳಿದ್ದಾನೆ," ಎಂದರು. 62ಆಗ ಪ್ರಧಾನಯಾಜಕನು ಎದ್ದುನಿಂತು ಯೇಸುವನ್ನು ನೋಡಿ, "ಈ ಜನರು ನಿನಗೆ ವಿರುದ್ಧ ತಂದಿರುವ ಆರೋಪಣೆಗಳನ್ನು ಕೇಳುತ್ತಿರುವೆಯಾ? ಇವುಗಳಿಗೆ ನಿನ್ನ ಉತ್ತರ ಏನು?" ಎಂದು ಪ್ರಶ್ನಿಸಿದನು. 63ಆದರೆ ಯೇಸು ಮೌನವಾಗಿದ್ದರು. "ಜೀವಂತ ದೇವರ ಮೇಲೆ ಆಣೆಯಿರಿಸಿ ನಾನು ನಿನ್ನನ್ನು ಕೇಳುತ್ತಿದ್ದೇನೆ, 'ನೀನು ದೇವರ ಪುತ್ರ ಹಾಗೂ ಅಭಿಷಿಕ್ತನಾದ ಲೋಕೋದ್ಧಾರಕನೋ?' ನಮಗೆ ಹೇಳು," ಎಂದನು ಆ ಪ್ರಧಾನಯಾಜಕ. 64ಅದಕ್ಕೆ ಯೇಸು, "ಅದು ನಿಮ್ಮ ಬಾಯಿಂದಲೇ ಬಂದಿದೆ; ಮಾತ್ರವಲ್ಲ, ನಾನು ಹೇಳುವುದನ್ನು ಕೇಳಿ: ನರಪುತ್ರನು ಸರ್ವಶಕ್ತ ದೇವರ ಬಲಗಡೆ ಆಸೀನನಾಗಿರುವುದನ್ನೂ ಆಕಾಶದ ಮೇಘಗಳ ಮೇಲೆ ಬರುವುದನ್ನೂ ಇನ್ನು ಮುಂದಕ್ಕೆ ಕಾಣುವಿರಿ," ಎಂದರು. 65ಇದನ್ನು ಕೇಳಿದ್ದೇ ಪ್ರಧಾನಯಾಜಕನು ತನ್ನ ಉಡುಪನ್ನು ಕೋಪದಿಂದ ಹರಿದುಕೊಂಡನು. "ಇವನು ದೇವದೂಷಣೆ ಆಡಿದ್ದಾನೆ. ಇನ್ನು ನಮಗೆ ಸಾಕ್ಷಿಗಳು ಏತಕ್ಕೆ? 66ಇವನಾಡಿದ ದೇವದೂಷಣೆಯನ್ನು ನೀವೇ ಕೇಳಿದ್ದೀರಿ. ಈಗ ನಿಮ್ಮ ತೀರ್ಮಾನ ಏನು?" ಎಂದು ಕೇಳಿದನು. ಅವರು, "ಇವನಿಗೆ ಮರಣ ದಂಡನೆ ಆಗಬೇಕು," ಎಂದು ಉತ್ತರಕೊಟ್ಟರು.

67 ಬಳಿಕ ಅವರು ಯೇಸುಸ್ವಾಮಿಯ ಮುಖದ ಮೇಲೆ ಉಗುಳಿದರು; ಅವರನ್ನು ಗುದ್ದಿದರು. 68ಕೆಲವರು ಅವರ ಕೆನ್ನೆಗೆ ಹೊಡೆದು, "ಎಲೈ ಕ್ರಿಸ್ತಾ, ನಿನ್ನನ್ನು ಹೊಡೆದವರಾರು? ನಮಗೆ ಪ್ರವಾದಿಸಿ ಹೇಳು," ಎಂದರು.

### ಪೇತ್ರನ ವಿಶ್ವಾಸದ ಪತನ ಮತ್ತು ಪಶ್ಚಾತ್ತಾಪ

(ಮಾರ್ಕ 14.66–72; ಲೂಕ 22.56–62; ಯೊವಾ. 18.15–27)

69 ಇತ್ತ ಪೇತ್ರನು ಹೊರಾಂಗಣದಲ್ಲಿ ಕುಳಿತಿದ್ದನು. ದಾಸಿಯೊಬ್ಬಳು ಆತನ ಬಳಿಗೆ ಬಂದು, “ನೀನು
ಸಹ ಗಲಿಲೇಯದ ಯೇಸುವಿನೊಂದಿಗೆ ಇದ್ದವನು,” ಎಂದಳು. 70“ನೀನು ಹೇಳುವುದು ಏನೆಂದು ನನಗೆ
ತಿಳಿಯದು,” ಎಂದು ಪೇತ್ರನು ಎಲ್ಲರ ಮುಂದೆ ನಿರಾಕರಿಸಿದನು. 71ಆತ ಅಲ್ಲಿಂದ ಎದ್ದು ಹೆಬ್ಬಾಗಿಲ ಬಳಿ
ಬಂದಾಗ ಇನ್ನೊಬ್ಬ ದಾಸಿ ಆತನನ್ನು ಕಂಡು, “ಈತ ನಜರೇತಿನ ಯೇಸುವಿನೊಂದಿಗೆ ಇದ್ದವನೇ,” ಎಂದು
ಅಲ್ಲಿದ್ದವರಿಗೆ ತಿಳಿಸಿದಳು. 72ಪೇತ್ರನು, “ಆ ಮನುಷ್ಯ ಯಾರೋ ನಾನರಿಯೆ,” ಎಂದು ಆಣೆಯಿಟ್ಟು
ಇನ್ನೊಮ್ಮೆ ನಿರಾಕರಿಸಿದನು. 73ಸ್ವಲ್ಪ ಹೊತ್ತಾದ ಮೇಲೆ ಅಲ್ಲಿ ನಿಂತಿದ್ದವರು ಪೇತ್ರನ ಹತ್ತಿರಕ್ಕೆ ಬಂದು,
“ಖಂಡಿತವಾಗಿ ನೀನೂ ಅವರಲ್ಲಿ ಒಬ್ಬನು. ನೀನು ಮಾತನಾಡುವ ರೀತಿಯೇ ನಿನ್ನನ್ನು ತೋರಿಸಿಕೊಡುತ್ತದೆ,”
ಎಂದು ಹೇಳಿದರು. 74ಆಗ ಪೇತ್ರನು ತನ್ನನ್ನೇ ಶಪಿಸಿಕೊಳ್ಳಲಾರಂಭಿಸಿ, “ಆ ಮನುಷ್ಯನನ್ನು ನಾನು
ಖಂಡಿತವಾಗಿ ಅರಿಯೆನು,” ಎಂದು ಆಣೆಯಿಟ್ಟು ಹೇಳಿದನು. 75ಆ ಕ್ಷಣವೇ ಕೋಳಿಕೂಗಿತು.
“ಕೋಳಿಕೂಗುವ ಮೊದಲೇ, ‘ಆತನನ್ನು ನಾನರಿಯೆ’ನೆಂದು ನನ್ನನ್ನು ಮೂರು ಬಾರಿ ನಿರಾಕರಿಸುವೆ,” ಎಂದ
ಸ್ವಾಮಿಯ ನುಡಿ ಪೇತ್ರನ ನೆನಪಿಗೆ ಬಂದಿತು. ಆತನು ಅಲ್ಲಿಂದ ಹೊರಗೆ ಹೋಗಿ, ಬಹಳವಾಗಿ ವ್ಯಥೆಪಟ್ಟು
ಅತ್ತನು.

### ರಾಜ್ಯಪಾಲನ ಮುಂದೆ ಯೇಸು

(ಮಾರ್ಕ 15.1; ಲೂಕ 23.1; ಯೊವಾ. 18.28–32)

**27** ಬೆಳಗಾಯಿತು. ಎಲ್ಲ ಮುಖ್ಯ ಯಾಜಕರೂ ಜನರ ಪ್ರಮುಖರೂ ಸೇರಿ ಯೇಸುವನ್ನು ಕೊಲ್ಲಿಸುವುದಕ್ಕೆ
ಸಮಾಲೋಚನೆ ಮಾಡಿದರು. 2ಅಂತೆಯೇ ಯೇಸುವಿಗೆ ಬೇಡಿ ಹಾಕಿಸಿ, ಅವರನ್ನು ರಾಜ್ಯಪಾಲ ಪಿಲಾತನ
ಬಳಿಗೆ ಕರೆದೊಯ್ದು ಅವನ ವಶಕ್ಕೆ ಒಪ್ಪಿಸಿದರು.

### ಯೂದನ ದುರ್ಮರಣ

(ಪ್ರೇ.ಕಾ. 1.18–19)

3 ಯೇಸುಸ್ವಾಮಿ ದಂಡನೆಗೆ ಗುರಿಯಾದರೆಂಬುದನ್ನು ಕಂಡು, ಗುರುದ್ರೋಹಿ ಯೂದನು
ಪರಿತಾಪಗೊಂಡನು. ಆ ಮೂವತ್ತು ಬೆಳ್ಳಿ ನಾಣ್ಯಗಳನ್ನು ಮುಖ್ಯಯಾಜಕರ ಮತ್ತು ಪ್ರಮುಖರ ಬಳಿಗೆ
ಮರಳಿ ತಂದನು. 4“ನಾನು ನಿರ್ದೋಷಿಯನ್ನು ಹಿಡಿದುಕೊಟ್ಟು ಪಾಪಕಟ್ಟಿಕೊಂಡೆ,” ಎಂದು ಹೇಳಿದನು.
ಅದಕ್ಕೆ ಅವರು, ‘ಅದರಿಂದ ನಮಗೇನು? ಅದನ್ನು ನೀನೇ ನೋಡಿಕೋ,’ ಎಂದುಬಿಟ್ಟರು. 5ಆಗ ಅವನು
ಆ ಹಣವನ್ನು ದೇವಾಲಯದಲ್ಲೇ ಎಸೆದು, ಹೊರಟುಹೋಗಿ ನೇಣು ಹಾಕಿಕೊಂಡು ಸತ್ತನು. 6ಮುಖ್ಯ
ಯಾಜಕರು ಆ ಹಣವನ್ನು ತೆಗೆದುಕೊಂಡು, “ಇದು ರಕ್ತದ ಕ್ರಯ. ಇದನ್ನು ಕಾಣಿಕೆ ಕೋಶದಲ್ಲಿ ಹಾಕುವುದು
ಸರಿಯಲ್ಲ,” ಎಂದುಕೊಂಡರು. 7ಕಡೆಗೆ ಒಂದು ನಿರ್ಧಾರಕ್ಕೆ ಬಂದರು. ಪರದೇಶಿಗಳನ್ನು
ಹೂಳುವುದಕ್ಕೋಸ್ಕರ ‘ಕುಂಬಾರನ ಹೊಲ’ವನ್ನು ಆ ಹಣಕೊಟ್ಟು ಕೊಂಡುಕೊಂಡರು. 8ಈ
ಕಾರಣದಿಂದಲೇ ಅದನ್ನು ‘ನೆತ್ತರ ನೆಲ’ ಎಂದು ಇಂದಿಗೂ ಕರೆಯಲಾಗುತ್ತಿದೆ. ಹೀಗೆ,

9–10 “ಮೂವತ್ತು ಬೆಳ್ಳಿ ನಾಣ್ಯಗಳನ್ನೆತ್ತಿ
ಸರ್ವೇಶ್ವರಸ್ವಾಮಿ ನನಗಿತ್ತ ಆದೇಶದಂತೆ
‘ಕುಂಬಾರನ ಹೊಲ’ ಕೊಳ್ಳಲು ಅದನ್ನು
ತೆತ್ತರು.

ಅಮೂಲ್ಯ ವ್ಯಕ್ತಿಗೆ ಕಟ್ಟಿದ ಬೆಲೆಯದು,
ಇಸ್ರಯೇಲ ಜನರು ಒಪ್ಪಿದ ಮೊತ್ತವದು,"
ಎಂದು ವಚನಿಸಿದ ಪ್ರವಾದಿ ಯೆರೆಮೀಯನ ಮಾತುಗಳು ಈಡೇರಿದವು.

### ಪಿಲಾತನಿಂದ ವಿಚಾರಣೆ

(ಮಾರ್ಕ 15.2–5; ಲೂಕ 23.3–5; ಯೊವಾ. 18.33–38)

11 ಯೇಸುಸ್ವಾಮಿಯನ್ನು ರಾಜ್ಯಪಾಲನ ಮುಂದೆ ನಿಲ್ಲಿಸಿದರು. "ನೀನು ಯೆಹೂದ್ಯರ ಅರಸನೋ?" ಎಂದು ರಾಜ್ಯಪಾಲ ಪ್ರಶ್ನಿಸಿದನು. ಅದಕ್ಕೆ ಯೇಸು, "ಅದು ನಿಮ್ಮ ಬಾಯಿಂದಲೇ ಬಂದಿದೆ," ಎಂದು ಮರುನುಡಿದರು. [12]ಆದರೆ ಮುಖ್ಯಯಾಜಕರೂ ಊರಪ್ರಮುಖರೂ ಮಾಡಿದ ಆಪಾದನೆಗಳಿಗೆ ಅವರು ಏನೂ ಉತ್ತರ ಕೊಡಲಿಲ್ಲ. [13]ಆಗ ಪಿಲಾತನು, "ಇವರು ನಿನಗೆ ವಿರುದ್ಧ ಇಷ್ಟೆಲ್ಲಾ ಹೇಳುತ್ತಿರುವುದು ನಿನಗೆ ಕೇಳಿಸುತ್ತಿಲ್ಲವೆ?" ಎಂದನು. [14]ಯೇಸು ಯಾವುದಕ್ಕೂ ಉತ್ತರ ಕೊಡಲಿಲ್ಲ. ಇದರಿಂದ ರಾಜ್ಯಪಾಲನಿಗೆ ಅತ್ಯಾಶ್ಚರ್ಯವಾಯಿತು.

### ಯೇಸು ಕ್ರಿಸ್ತನೋ? ಯೇಸು ಬರಬ್ಬನೋ

(ಮಾರ್ಕ 15.6–15; ಲೂಕ 23.13–25; ಯೊವಾ. 18.39–19.16)

15 ಪ್ರತಿ ಪಾಸ್ಕ ಹಬ್ಬದ ಸಂದರ್ಭದಲ್ಲಿ ಜನರು ಬಯಸುವ ಒಬ್ಬ ಕೈದಿಯನ್ನು ಬಿಡುಗಡೆ ಮಾಡುವುದು ರಾಜ್ಯಪಾಲನ ಪದ್ಧತಿಯಾಗಿತ್ತು. [16]ಆಗ ಬರಬ್ಬನೆಂಬ ಕುಪ್ರಸಿದ್ಧ ಕೈದಿಯೊಬ್ಬನು ಸೆರೆಯಲ್ಲಿದ್ದನು. [17]ಹೀಗಿರಲಾಗಿ, ಪಿಲಾತನು ಅಲ್ಲಿ ಕೂಡಿದ್ದ ಜನರನ್ನು ಉದ್ದೇಶಿಸಿ, "ನಾನು ಯಾರನ್ನು ಬಿಡುಗಡೆ ಮಾಡಬೇಕೆನ್ನುತ್ತೀರಿ? ಬರಬ್ಬನನ್ನೋ ಅಥವಾ 'ಕ್ರಿಸ್ತ' ಎಂದು ಕರೆಯಲಾಗುವ ಯೇಸುವನ್ನೋ?" ಎಂದು ಕೇಳಿದನು. [18]ಆ ಜನರು ಅಸೂಯೆಯಿಂದಲೇ ಯೇಸುವನ್ನು ಹಿಡಿದೊಪ್ಪಿಸಿದ್ದಾರೆಂದು ಅವನಿಗೆ ಅರಿವಾಗಿತ್ತು. [19]ಅದೂ ಅಲ್ಲದೆ, ಪಿಲಾತನು ನ್ಯಾಯಪೀಠದಲ್ಲಿ ಕುಳಿತಿರುವಾಗ, "ನೀವು ಆ ಸತ್ಪುರುಷನ ತಂಟೆಗೆ ಹೋಗಬೇಡಿ; ಆತನ ದೆಸೆಯಿಂದ ಕಳೆದ ರಾತ್ರಿ ಕನಸಿನಲ್ಲಿ ಬಹಳ ಸಂಕಟಪಟ್ಟಿದ್ದೇನೆ," ಎಂದು ಅವನ ಪತ್ನಿ ಹೇಳಿಕಳುಹಿಸಿದಳು.

20 ಇತ್ತ, ಬರಬ್ಬನನ್ನು ಬಿಡುಗಡೆಮಾಡಿ ಯೇಸುವನ್ನು ಕೊಲ್ಲಬೇಕೆಂದು ಕೇಳಿಕೊಳ್ಳುವಂತೆ ಮುಖ್ಯ ಯಾಜಕರು ಮತ್ತು ಪ್ರಮುಖರು ಜನರನ್ನು ಪ್ರಚೋದಿಸಿದರು. [21]ರಾಜ್ಯಪಾಲನು ಪುನಃ ಜನರ ಗುಂಪನ್ನು ನೋಡಿ, "ಈ ಇಬ್ಬರಲ್ಲಿ ಯಾರನ್ನು ನಿಮಗೆ ಬಿಟ್ಟುಕೊಡಲಿ?" ಎಂದು ಕೇಳಿದನು. ಅದಕ್ಕೆ ಅವರು "ಬರಬ್ಬನನ್ನೇ" ಎಂದು ಉತ್ತರಕೊಟ್ಟರು. [22]"ಹಾಗಾದರೆ, 'ಕ್ರಿಸ್ತ' ಎಂದು ಕರೆಯಲಾಗುವ ಯೇಸುವನ್ನು ಏನುಮಾಡಲಿ?" ಎಂದು ಪಿಲಾತನು ಮರುಪ್ರಶ್ನೆ ಹಾಕಿದನು. ಅವರೆಲ್ಲರು, "ಅವನನ್ನು ಶಿಲುಬೆಗೇರಿಸಿ," ಎಂದು ಉತ್ತರಿಸಿದರು. [23]"ಏಕೆ? ಇವನೇನು ಕೇಡು ಮಾಡಿದ್ದಾನೆ?" ಎಂದು ಪಿಲಾತನು ಕೇಳಲು, "ಶಿಲುಬೆಗೇರಿಸಿ, ಶಿಲುಬೆಗೇರಿಸಿ," ಎಂದು ಅವರು ಇನ್ನೂ ಹೆಚ್ಚಾಗಿ ಆರ್ಭಟಿಸಿದರು.

### ಕೈ ತೊಳೆದುಕೊಂಡರೆ ಕರ್ತವ್ಯ ನೀಗೀತೆ?

24 ಪಿಲಾತನು ತನ್ನ ಪ್ರಯತ್ನದಿಂದ ಏನೂ ಫಲಿಸುತ್ತಿಲ್ಲವೆಂದೂ ಅದಕ್ಕೆ ಬದಲಾಗಿ ದಂಗೆ ಏಳುವ ಸೂಚನೆಯಿದೆಯೆಂದೂ ಮನಗಂಡನು. ಆದುದರಿಂದ ನೀರನ್ನು ತರಿಸಿ, "ಈ ನಿರಪರಾಧಿಯ ರಕ್ತಪಾತಕ್ಕೆ ಹೊಣೆ ನಾನಲ್ಲ; ಅದಕ್ಕೆ ನೀವೇ ಹೊಣೆಗಾರರು," ಎಂದು ಹೇಳಿ ಜನರೆದುರಿಗೆ ಕೈ ತೊಳೆದುಕೊಂಡನು. [25]ಅದಕ್ಕೆ ಜನರೆಲ್ಲರೂ, "ಅವನ ರಕ್ತ ನಮ್ಮ ಮೇಲೂ ನಮ್ಮ ಮಕ್ಕಳ ಮೇಲೂ ಇರಲಿ," ಎಂದು

ಕೂಗಿಕೊಂಡರು. 26ಬಳಿಕ ಪಿಲಾತನು ಅವರ ಇಷ್ಟದಂತೆಯೇ ಬರಬ್ಬನನ್ನು ಬಿಟ್ಟುಕೊಟ್ಟನು. ಯೇಸುವನ್ನು
ಕೊರಡೆಗಳಿಂದ ಹೊಡೆಸಿ ಶಿಲುಬೆಗೇರಿಸಲು ಒಪ್ಪಿಸಿಬಿಟ್ಟನು.

## ಸೈನಿಕರ ಕುಚೋದ್ಯ

(ಮಾರ್ಕ 15.16–20; ಯೊವಾ. 19.2–3)

27 ರಾಜ್ಯಪಾಲನ ಸೈನಿಕರು ಯೇಸುಸ್ವಾಮಿಯನ್ನು ರಾಜಭವನದ ಒಳಕ್ಕೆ ಕರೆದೊಯ್ದರು. ಅವರ
ಸೈನ್ಯಪಡೆಯೆಲ್ಲವು ಸ್ವಾಮಿಯನ್ನು ಸುತ್ತುಗಟ್ಟಿತು. 28ಸೈನಿಕರು ಅವರ ಉಡುಪನ್ನು ಸುಲಿದು, ಕಡುಗೆಂಪು
ಮೇಲಂಗಿಯೊಂದನ್ನು ಅವರಿಗೆ ಹೊದಿಸಿದರು. 29ಮುಳ್ಳಿನಿಂದ ಒಂದು ಕಿರೀಟವನ್ನು ಹೆಣೆದು, ಅವರ
ತಲೆಯ ಮೇಲೆ ಇರಿಸಿದರು. ಕೈಗೆ ಒಂದು ಕೋಲನ್ನು ಕೊಟ್ಟರು. ಆ ಮೇಲೆ ಅವರ ಮುಂದೆ
ಮೊಣಕಾಲೂರಿ, "ಯೆಹೂದ್ಯರ ಅರಸನಿಗೆ ಜಯವಾಗಲಿ!" ಎಂದು ಹೇಳಿ ಪರಿಹಾಸ್ಯ ಮಾಡಿದರು. 30ಅವರ
ಮೇಲೆ ಉಗುಳಿದರು. ಆ ಕೋಲನ್ನು ಕಿತ್ತುಕೊಂಡು ತಲೆಯ ಮೇಲೆ ಹೊಡೆದರು. 31ಹೀಗೆ ಪರಿಹಾಸ್ಯ ಮಾಡಿ
ಆದಮೇಲೆ, ಹೊದಿಸಿದ್ದ ಮೇಲಂಗಿಯನ್ನು ತೆಗೆದುಹಾಕಿ, ಅವರ ಉಡುಪನ್ನೇ ಪುನಃ ತೊಡಿಸಿದರು. ಬಳಿಕ
ಅವರನ್ನು ಶಿಲುಬೆಗೇರಿಸಲು ಕರೆದೊಯ್ದರು.

## ಗೊಲ್ಗೊಥಕ್ಕೆ ಯಾತ್ರೆ

(ಮಾರ್ಕ 15.31–32; ಲೂಕ 23.26–43; ಯೊವಾ. 19.17–27)

32 ಸೈನಿಕರು ಯೇಸುಸ್ವಾಮಿಯನ್ನು ಕರೆದುಕೊಂಡು ಊರಹೊರಗೆ ಹೋಗುತ್ತಿದ್ದಾಗ ಸಿರೇನ್
ಪಟ್ಟಣದ ಸಿಮೋನ್ ಎಂಬಾತನನ್ನು ಕಂಡರು. ಯೇಸುವಿನ ಶಿಲುಬೆಯನ್ನು ಹೊತ್ತು ಬರುವಂತೆ ಅವನನ್ನು
ಬಲವಂತಮಾಡಿದರು. 33ಅವರೆಲ್ಲರು ಗೊಲ್ಗೊಥ ಎಂಬ ಸ್ಥಳಕ್ಕೆ ಬಂದು ಸೇರಿದರು. (ಗೊಲ್ಗೊಥ ಎಂದರೆ
'ಕಪಾಲ ಸ್ಥಳ' ಎಂದು ಅರ್ಥ). 34ಅಲ್ಲಿ ಕಹಿಬೆರೆಸಿದ ದ್ರಾಕ್ಷಾರಸವನ್ನು ಯೇಸುವಿಗೆ ಕುಡಿಯಲು ಕೊಟ್ಟರು.
ಅವರು ಅದನ್ನು ರುಚಿನೋಡಿ ಕುಡಿಯಲು ಇಚ್ಛಿಸಲಿಲ್ಲ.
35 ಯೇಸುವನ್ನು ಶಿಲುಬೆಗೇರಿಸಿದ ಬಳಿಕ ಅವರ ಉಡುಪಿಗಾಗಿ ಸೈನಿಕರು ಚೀಟುಹಾಕಿ
ತಮ್ಮತಮ್ಮೊಳಗೇ ಹಂಚಿಕೊಂಡರು. 36ಅನಂತರ ಅಲ್ಲೇ ಕುಳಿತು ಕಾವಲುಕಾಯುತ್ತಾ ಇದ್ದರು. 37"ಈತ
ಯೇಸು, ಯೆಹೂದ್ಯರ ಅರಸ" ಎಂದು ಬರೆದಿದ್ದ ದೋಷಾರೋಪಣೆಯ ಫಲಕವನ್ನು ಅವರ ಶಿರಸ್ಸಿನ
ಮೇಲ್ಭಾಗದಲ್ಲಿ ಇಟ್ಟರು. 38ಯೇಸುವಿನ ಬಲಗಡೆ ಒಬ್ಬನು, ಎಡಗಡೆ ಒಬ್ಬನು, ಹೀಗೆ ಇಬ್ಬರು ಕಳ್ಳರನ್ನು
ಅವರ ಸಂಗಡ ಶಿಲುಬೆಗೇರಿಸಿದರು. 39ಪಕ್ಕದಲ್ಲಿ ಹಾದು ಹೋಗುತ್ತಿದ್ದ ಜನರು ತಲೆಯಾಡಿಸುತ್ತಾ
40"ಮಹಾದೇವಾಲಯವನ್ನು ಕೆಡವಿ ಮೂರು ದಿನಗಳಲ್ಲಿ ಅದನ್ನು ಮತ್ತೆ ಕಟ್ಟಬಲ್ಲವನೇ, ಈಗ ನಿನ್ನನ್ನು
ನೀನೇ ರಕ್ಷಿಸಿಕೋ; ನೀನು ದೇವರ ಪುತ್ರನಾದರೆ ಶಿಲುಬೆಯಿಂದ ಇಳಿದು ಬಾ," ಎಂದು ಮೂದಲಿಸಿದರು.
41ಅಂತೆಯೇ ಮುಖ್ಯ ಯಾಜಕರು, ಧರ್ಮಶಾಸ್ತ್ರಿಗಳು ಮತ್ತು ಪ್ರಮುಖರು, 42"ಇವನು ಇತರರನ್ನು ರಕ್ಷಿಸಿದ;
ಆದರೆ ತನ್ನನ್ನು ತಾನೇ ರಕ್ಷಿಸಿಕೊಳ್ಳಲು ಇವನಿಂದಾಗದು; ಇಸ್ರಯೇಲಿನ ಅರಸನಂತೆ! ಈಗ ಶಿಲುಬೆಯಿಂದ
ಇಳಿದು ಬರಲಿ; ಆಗ ಇವನನ್ನು ನಂಬುತ್ತೇವೆ. 43ದೇವರಲ್ಲಿ ಭರವಸೆಯಿಟ್ಟಿದ್ದ; ತಾನು 'ದೇವರ ಪುತ್ರ'
ಎಂದು ಹೇಳಿಕೊಳ್ಳುತ್ತಿದ್ದ; ದೇವರಿಗೆ ಇಷ್ಟವಾದವನು ಇವನಾಗಿದ್ದರೆ ದೇವರೇ ಬಂದು ಇವನನ್ನು
ಬಿಡುಗಡೆಮಾಡಲಿ," ಎಂದು ಅಪಹಾಸ್ಯ ಮಾಡುತ್ತಿದ್ದರು. 44ಯೇಸುವಿನೊಡನೆ ಶಿಲುಬೆಗೇರಿಸಲಾಗಿದ್ದ ಕಳ್ಳರು
ಕೂಡ ಅದೇ ರೀತಿ ಅಣಕಿಸಿದರು.

### “ನಿಶ್ಚಯವಾಗಿ ಇವರು ದೇವರ ಕುಮಾರ!”

(ಮಾರ್ಕ 15.33–41; ಲೂಕ 23.44–49; ಯೊವಾ. 19.28–30)

45 ಆಗ ನಡುಮಧ್ಯಾಹ್ನ. ಆಗಿನಿಂದ ಮೂರು ಗಂಟೆಯವರೆಗೂ ನಾಡಿನಲ್ಲೆಲ್ಲಾ ಕತ್ತಲೆ ಕವಿಯಿತು.
46ಸುಮಾರು ಮೂರು ಗಂಟೆಯ ಸಮಯದಲ್ಲಿ ಯೇಸುಸ್ವಾಮಿ, “ಏಲೀ, ಏಲೀ, ಲಮಾ ಸಬಕ್ತಾನಿ?”
ಅಂದರೆ, “ನನ್ನ ದೇವರೇ, ನನ್ನ ದೇವರೇ, ನನ್ನನ್ನೇಕೆ ಕೈಬಿಟ್ಟಿರಿ?” ಎಂದು ಗಟ್ಟಿಯಾಗಿ ಕೂಗಿಕೊಂಡರು.
47ಅಲ್ಲಿ ನಿಂತಿದ್ದವರಲ್ಲಿ ಕೆಲವರು ಇದನ್ನು ಕೇಳಿ, “ಇವನು ಎಲೀಯನನ್ನು ಕರೆಯುತ್ತಿದ್ದಾನೆ,” ಎಂದರು.

48 ಕೂಡಲೇ ಅವರಲ್ಲೊಬ್ಬನು ಓಡಿಹೋಗಿ ಸ್ಪಂಜನ್ನು ತೆಗೆದುಕೊಂಡುಬಂದು, ಅದನ್ನು
ಹುಳಿರಸದಲ್ಲಿ ತೋಯಿಸಿ, ಒಂದು ಕೋಲಿನ ತುದಿಗೆ ಸಿಕ್ಕಿಸಿ, ಯೇಸುವಿಗೆ ಕುಡಿಯಲು ಕೊಟ್ಟನು.
49ಮಿಕ್ಕವರು, “ತಾಳು, ಇವನನ್ನು ರಕ್ಷಿಸಲು ಎಲೀಯನು ಬರುವನೋ ನೋಡೋಣ,” ಎಂದರು.
50ಯೇಸುಸ್ವಾಮಿ ಮತ್ತೊಮ್ಮೆ ಗಟ್ಟಿಯಾಗಿ ಕೂಗಿ ಅಸುನೀಗಿದರು.

51 ಆಗ ಇಗೋ, ಮಹಾದೇವಾಲಯದ ತೆರೆಯು ಮೇಲಿಂದ ಕೆಳಗಿನವರೆಗೆ ಇಬ್ಭಾಗವಾಗಿ
ಸೀಳಿಹೋಯಿತು; ಭೂಮಿ ನಡುಗಿತು, 52ಬಂಡೆಗಳು ಸಿಡಿದವು; ಸಮಾಧಿಗಳು ತೆರೆದುಕೊಂಡವು.
ನಿಧನಹೊಂದಿದ್ದ ಅನೇಕ ಭಕ್ತರ ದೇಹಗಳು ಜೀವಂತವಾಗಿ ಎದ್ದವು. 53ಹೀಗೆ ಎದ್ದವರು ಸಮಾಧಿಗಳಿಂದ
ಹೊರಗೆ ಬಂದು, ಯೇಸು ಪುನರುತ್ಥಾನ ಹೊಂದಿದ ಬಳಿಕ ಪವಿತ್ರ ನಗರಕ್ಕೆ ಹೋಗಿ ಅನೇಕರಿಗೆ
ಕಾಣಿಸಿಕೊಂಡರು. 54ಶತಾಧಿಪತಿ ಮತ್ತು ಅವನ ಸಂಗಡ ಯೇಸುವನ್ನು ಕಾಯುತ್ತಿದ್ದವರು ಭೂಕಂಪವನ್ನೂ
ನಡೆದುದೆಲ್ಲವನ್ನೂ ಕಂಡು ಭಯಭ್ರಾಂತರಾದರು. “ಸತ್ಯವಾಗಿಯೂ ಈತ ದೇವರ ಪುತ್ರನೇ ಸರಿ,” ಎಂದರು.

55 ಯೇಸುವನ್ನು ಗಲಿಲೇಯದಿಂದ ಹಿಂಬಾಲಿಸಿ ಬಂದಿದ್ದ ಹಾಗೂ ಅವರ ಸೇವೆ ಮಾಡಿದ
ಮಹಿಳೆಯರೂ ಅಲ್ಲಿದ್ದರು. ಅವರು ಇದೆಲ್ಲವನ್ನು ದೂರದಿಂದ ನೋಡುತ್ತಾ ಇದ್ದರು. 56ಅವರಲ್ಲಿ ಮಗ್ದಲದ
ಮರಿಯಳು, ಯಕೋಬ ಹಾಗೂ ಜೋಸೆಫನ ತಾಯಿ ಮರಿಯಳು ಮತ್ತು ಜೆಬೆದಾಯನ ಮಕ್ಕಳ ತಾಯಿ
ಇದ್ದರು.

### ಸ್ವಾಮಿಯ ಸಮಾಧಿ

(ಮಾರ್ಕ 15.42–47; ಲೂಕ 23.50–56; ಯೊವಾ. 19.38–42)

57 ಸಂಜೆಯಾಯಿತು. ಅರಿಮತಾಯ ಊರಿನ ಜೋಸೆಫ್ ಎಂಬ ಒಬ್ಬ ಧನವಂತನು ಅಲ್ಲಿಗೆ
ಬಂದನು. ಈತನು ಸಹ ಯೇಸುವಿನ ಶಿಷ್ಯನಾಗಿದ್ದನು. 58ಈಗ ಪಿಲಾತನ ಬಳಿಗೆ ಹೋಗಿ ಯೇಸುವಿನ
ಪಾರ್ಥಿವ ಶರೀರವನ್ನು ತನಗೆ ಕೊಡಿಸಬೇಕೆಂದು ಬೇಡಿದನು. ಪಿಲಾತನು ಅದನ್ನು ಕೊಡುವಂತೆ
ಅಪ್ಪಣೆಮಾಡಿದನು. 59ಜೋಸೆಫ್ ಅದನ್ನು ತೆಗೆದುಕೊಂಡು ಶುದ್ಧವಾದ ನಾರುಮಡಿ ವಸ್ತ್ರದಿಂದ ಸುತ್ತಿದನು.
60ತನಗೆಂದು ಬಂಡೆಯಲ್ಲಿ ಕೊರೆಯಲಾಗಿದ್ದ ಹೊಸ ಸಮಾಧಿಯಲ್ಲಿ ಅದನ್ನು ಇರಿಸಿದನು. ಆ ಸಮಾಧಿಯ
ದ್ವಾರಕ್ಕೆ ಒಂದು ದೊಡ್ಡ ಕಲ್ಲನ್ನು ಉರುಳಿಸಿ ಹೊರಟುಹೋದನು. 61ಮಗ್ದಲದ ಮರಿಯಳು ಮತ್ತು ಆ
ಇನ್ನೊಬ್ಬ ಮರಿಯಳು ಅಲ್ಲೇ ಸಮಾಧಿಗೆ ಎದುರಾಗಿ ಕುಳಿತುಕೊಂಡಿದ್ದರು.

### ಸಾವಿಗೆ ಸಮಾಧಿಯ ಸಾಕ್ಷಿ

62 ಮಾರನೆಯ ದಿನ, ಅಂದರೆ, ‘ಸಿದ್ಧತೆಯ ದಿನ’ ಕಳೆದ ಮೇಲೆ, ಮುಖ್ಯ ಯಾಜಕರು ಮತ್ತು
ಫರಿಸಾಯರು ಕೂಡಿ ಪಿಲಾತನ ಬಳಿಗೆ ಬಂದರು. 63“ಸ್ವಾಮೀ, ಆ ಮೋಸಗಾರ ಬದುಕಿದ್ದಾಗ, ‘ಮೂರು
ದಿನಗಳಾದ ಮೇಲೆ ನಾನು ಪುನರ್ಜೀವಂತನಾಗಿ ಏಳುವೆನು,’ ಎಂದು ಹೇಳಿದ್ದು ನಮಗೆ ಜ್ಞಾಪಕದಲ್ಲಿದೆ.
64ಆದ್ದರಿಂದ ಮೂರನೆಯ ದಿನದ ತನಕ ಅವನ ಸಮಾಧಿಗೆ ಭದ್ರವಾದ ಕಾವಲಿರಿಸಲು ಅಪ್ಪಣೆಯಾಗಬೇಕು;
ಇಲ್ಲದಿದ್ದರೆ ಅವನ ಶಿಷ್ಯರು ಅವನನ್ನು ಕದ್ದುಕೊಂಡು ಹೋಗಿ, ಸತ್ತವನು ಬದುಕಿಬಂದಿದ್ದಾನೆ ಎಂದು
ಜನರಿಗೆ ಹೇಳಬಹುದು; ಆಗ ಮೊದಲನೆಯ ಮೋಸಕ್ಕಿಂತ ಕಡೆಯದೇ ಕಡುಮೋಸವಾದೀತು,” ಎಂದು
ಕೇಳಿಕೊಂಡರು. 65ಪಿಲಾತನು ಅವರಿಗೆ, “ಕಾವಲುಗಾರರು ಇದ್ದಾರಲ್ಲವೆ? ಹೋಗಿ ನಿಮಗೆ ಬೇಕಾದಂತೆ

ಭದ್ರಪಡಿಸಿಕೊಳ್ಳಿ" ಎಂದನು. [66]ಅವರು ಹೋಗಿ, ಸಮಾಧಿಯ ಕಲ್ಲಿಗೆ ಮುದ್ರೆ ಹಾಕಿ, ಕಾವಲಿರಿಸಿ, ಸಮಾಧಿಯನ್ನು ಸುಭದ್ರ ಪಡಿಸಿದರು.

### ಪುನರುತ್ಥಾನದ ಪ್ರಥಮ ಸಾಕ್ಷಿಗಳು

(ಮಾರ್ಕ 16.1–10; ಲೂಕ 24.1–12; ಯೊವಾ. 20.1–10)

**28** 'ಸಬ್ಬತ್' ದಿನ ಕಳೆದಿತ್ತು. ಭಾನುವಾರ ಬೆಳಗಾಗುವುದರಲ್ಲಿತ್ತು. ಮಗ್ದಲದ ಮರಿಯಳು ಮತ್ತು ಆ
ಇನ್ನೊಬ್ಬ ಮರಿಯಳು ಸಮಾಧಿಯನ್ನು ನೋಡಲು ಬಂದರು. [2]ಇದ್ದಕ್ಕಿದ್ದಂತೆ ಭೂಮಿ ಗಡಗಡನೆ ನಡುಗಿತು.
ಆಗ ದೇವದೂತನು ಸ್ವರ್ಗದಿಂದ ಇಳಿದುಬಂದನು. ಸಮಾಧಿಯ ಕಲ್ಲನ್ನು ಹಿಂದಕ್ಕೆ ಉರುಳಿಸಿ ಅದರ ಮೇಲೆ
ಕುಳಿತುಕೊಂಡನು. [3]ಆತನ ರೂಪ ಮಿಂಚಿನಂತೆ ಹೊಳೆಯುತ್ತಿತ್ತು; ಉಡುಪು ಹಿಮದಂತೆ ಬೆಳ್ಳಗಿತ್ತು.
[4]ಕಾವಲಿನವರು ಆತನನ್ನು ಕಂಡು ಭಯದಿಂದ ನಡುಗುತ್ತಾ ಸತ್ತಂತಾದರು.
5 ಆಗ ದೂತನು ಆ ಮಹಿಳೆಯರಿಗೆ, "ಹೆದರಬೇಡಿ, ಶಿಲುಬೆಗೇರಿಸಿದ ಯೇಸುವನ್ನು ನೀವು
ಹುಡುಕುತ್ತಿದ್ದೀರೆಂದು ನಾನು ಬಲ್ಲೆ. ಅವರು ಇಲ್ಲಿಲ್ಲ; [6]ಅವರೇ ಹೇಳಿದಂತೆ ಪುನರುತ್ಥಾನ ಹೊಂದಿದ್ದಾರೆ.
ಬನ್ನಿ, ಅವರನ್ನಿಟ್ಟಿದ್ದ ಸ್ಥಳವನ್ನು ನೋಡಿ. [7]ಈಗ ಬೇಗನೆ ಹೋಗಿ, ಅವರ ಶಿಷ್ಯರಿಗೆ, 'ಸತ್ತಿದ್ದವರು
ಪುನರುತ್ಥಾನ ಹೊಂದಿದ್ದಾರೆ; ಅವರು ನಿಮಗಿಂತ ಮುಂಚಿತವಾಗಿ ಗಲಿಲೇಯಕ್ಕೆ ಹೋಗುವರು; ಅಲ್ಲೇ
ಅವರನ್ನು ಕಾಣುವಿರಿ,' ಎಂದು ತಿಳಿಸಿರಿ. ನಾನು ನಿಮಗೆ ತಿಳಿಸಬೇಕಾದ ಸಮಾಚಾರ ಇದೇ, ಮರೆಯದಿರಿ,"
ಎಂದನು.

### ಮಹಿಳೆಯರಿಗೆ ಮೊದಲ ದರ್ಶನ

(ಮಾರ್ಕ 16.9–11; ಲೂಕ 24.10–11; ಯೊವಾ. 20.14–18)

8 ಅದರಂತೆಯೇ ಆ ಮಹಿಳೆಯರು ಭಯಮಿಶ್ರಿತ ಆನಂದದಿಂದ ಸಮಾಧಿಯನ್ನು ಬಿಟ್ಟು ಕೂಡಲೇ
ಹೊರಟರು. ಶಿಷ್ಯರಿಗೆ ಈ ಸಮಾಚಾರವನ್ನು ಮುಟ್ಟಿಸಲು ಧಾವಿಸಿದರು. [9]ತಟ್ಟನೆ, ಯೇಸುವೇ ಅವರನ್ನು
ಎದುರುಗೊಂಡು, "ನಿಮಗೆ ಶುಭವಾಗಲಿ!" ಎಂದರು. ಆ ಮಹಿಳೆಯರು ಹತ್ತಿರಕ್ಕೆ ಬಂದು, ಅವರ
ಪಾದಕ್ಕೆರಗಿ ಪೂಜಿಸಿದರು. [10]ಆಗ ಯೇಸು ಅವರಿಗೆ, "ಭಯಪಡಬೇಡಿ, ನನ್ನ ಸೋದರರ ಬಳಿಗೆ ಹೋಗಿ
ಅವರು ಗಲಿಲೇಯಕ್ಕೆ ಹೋಗಬೇಕೆಂದೂ ಅಲ್ಲಿ ಅವರು ನನ್ನನ್ನು ಕಾಣುವರೆಂದೂ ತಿಳಿಸಿರಿ," ಎಂದು
ಹೇಳಿದರು.

### ಯೆಹೂದ್ಯರ ಅಪಪ್ರಚಾರ

11 ಇತ್ತ ಆ ಮಹಿಳೆಯರು ಹೋಗುತ್ತಿದ್ದಂತೆ, ಅತ್ತ ಕಾವಲುಗಾರರಲ್ಲಿ ಕೆಲವರು ನಗರಕ್ಕೆ ಬಂದು
ನಡೆದ ಸಂಗತಿಯನ್ನೆಲ್ಲಾ ಮುಖ್ಯಯಾಜಕರಿಗೆ ವರದಿ ಮಾಡಿದರು. [12]ಇವರು ಪ್ರಮುಖರೊಂದಿಗೆ ಸಭೆಸೇರಿ
ಒಂದು ಸಂಚುಹೂಡಿದರು. ಸೈನಿಕರಿಗೆ ಭಾರಿ ಲಂಚಕೊಟ್ಟು, [13]"ಅವನ ಶಿಷ್ಯರು ರಾತ್ರಿ ವೇಳೆಯಲ್ಲಿ ಬಂದು,
ನಾವು ನಿದ್ರೆಮಾಡುತ್ತಿದ್ದಾಗ ಅವನನ್ನು ಕದ್ದುಕೊಂಡು ಹೋದರೆಂದು ಜನರಿಗೆ ಹೇಳಿರಿ; [14]ಈ ಸುದ್ದಿ
ರಾಜ್ಯಪಾಲನ ಕಿವಿಗೆ ಬಿದ್ದರೆ, ನಾವು ಅವರನ್ನು ಸಮಾಧಾನ ಪಡಿಸುತ್ತೇವೆ; ನಿಮಗೇನೂ ಆಗದಂತೆ
ನೋಡಿಕೊಳ್ಳುತ್ತೇವೆ," ಎಂದು ಹೇಳಿದರು. [15]ಸೈನಿಕರು ಲಂಚವನ್ನು ತೆಗೆದುಕೊಂಡು ತಮಗೆ
ಹೇಳಿಕೊಟ್ಟಂತೆಯೇ ಮಾಡಿದರು. ಈ ಕಟ್ಟುಕತೆ ಯೆಹೂದ್ಯರಲ್ಲಿ ಹಬ್ಬಿ ಇಂದಿನವರೆಗೂ ಪ್ರಚಲಿತವಾಗಿದೆ.

### ಕೊನೆಯ ದರ್ಶನ ಹಾಗೂ ಆದೇಶ

(ಮಾರ್ಕ 16.14–18; ಲೂಕ 24.36–49; ಯೊವಾ. 20.19–23)

16 ಹನ್ನೊಂದು ಮಂದಿ ಶಿಷ್ಯರು ಗಲಿಲೇಯಕ್ಕೆ ಹೋದರು. ಯೇಸು ಸೂಚಿಸಿದ್ದ ಬೆಟ್ಟಕ್ಕೆ ಬಂದರು.
[17]ಅಲ್ಲಿ ಯೇಸುಸ್ವಾಮಿಯನ್ನು ಕಂಡು ಅವರನ್ನು ಪೂಜಿಸಿದರು. ಆದರೆ ಕೆಲವರು ಸಂದೇಹಪಟ್ಟರು. [18]ಆಗ
ಯೇಸು ಹತ್ತಿರಕ್ಕೆ ಬಂದು ಮಾತಾಡಿದರು: "ಭೂಮಿಯಲ್ಲೂ ಸ್ವರ್ಗದಲ್ಲೂ ಸರ್ವಾಧಿಕಾರವನ್ನು ನನಗೆ
ಕೊಡಲಾಗಿದೆ. [19]ಆದ್ದರಿಂದ ನೀವು ಹೋಗಿ, ಸಕಲ ದೇಶಗಳ ಜನರನ್ನು ನನ್ನ ಶಿಷ್ಯರನ್ನಾಗಿ ಮಾಡಿರಿ; ಪಿತ,
ಸುತ, ಮತ್ತು ಪವಿತ್ರಾತ್ಮ ನಾಮದಲ್ಲಿ ಅವರಿಗೆ ದೀಕ್ಷಾಸ್ನಾನ ಮಾಡಿಸಿರಿ. [20]ನಾನು ನಿಮಗೆ ಆಜ್ಞಾಪಿಸಿದ
ಸಕಲವನ್ನೂ ಅನುಸರಿಸುವಂತೆ ಅವರಿಗೆ ಬೋಧಿಸಿರಿ. ಇಗೋ, ಲೋಕಾಂತ್ಯದವರೆಗೂ ಸದಾ ನಾನು
ನಿಮ್ಮೊಡನೆ ಇರುತ್ತೇನೆ," ಎಂದರು.